/ BG - GPO/ 2515 /WPP-47/ 2009 - 2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೬	ಬೆಂಗಳೂರು, ಗುರುವಾರ, ಜುಲೈ ೧೪, ೨೦೧೧ (ಆಷಾಢ ೨೩, ಶಕ ವರ್ಷ ೧೯೩೩)	ಸಂಚಿಕೆ ೨೮

ವಿಷಯಸೂಚಿ

ವಿಶೇಷ ರಾಜ್ಯಪತ್ರಗಳು

ದಿನಾಂಕ 14-07-2011

ವಿಶೇಷ ರಾಜ್ಯಪತ್ರ ಸಂಖ್ಯೆ	ಪ್ರಕಟಣೆ ದಿನಾಂಕ	ಅಧಿಸೂಚನೆ ಸಂಖ್ಯೆ ಮತ್ತು ದಿನಾಂಕ
587	15-6-2011	ಸಂಖ್ಯೆ: ಸಿಐ 84 ಎಸ್.ಪಿ.ಕ್ಯೂ 2011, ಬೆಂಗಳೂರು, ದಿನಾಂಕ: 14ನೇ ಜೂನ್, 2011
599	25-6-2011	ಸಂ. ಇಎಲ್ಎನ್/ಎಪಿಎಂಸಿ/ಸಿಆರ್ 12/11-12, ದಿನಾಂಕ 25/06/2011
600	25-6-2011	ಸಂಖ್ಯೆ: ಸಇ 34 ಎಂಆರ್ಇ (1)2011, ಬೆಂಗಳೂರು, ದಿನಾಂಕ: 24/06/2011
601	25-6-2011	ಸಂಖ್ಯೆ: ಸಇ 34 ಎಂಆರ್ಇ (2)2011, ಬೆಂಗಳೂರು, ದಿನಾಂಕ: 24/06/2011
602	25-6-2011	ಸಂಖ್ಯೆ: ಸಇ 34 ಎಂಆರ್ಇ (3)2011, ಬೆಂಗಳೂರು, ದಿನಾಂಕ: 24/06/2011
603	25-6-2011	No. FD 39 CSL 2011, Bangalore, Dated: 25-06-2011
604	27-6-2011	ಸಂಖ್ಯೆ : ಎಫ್‌ಡಿ 5 ಎಸ್ಆರ್ಎ 2009, ಬೆಂಗಳೂರು, ದಿನಾಂಕ: 27.06.2011
605	27-6-2011	ಸಂಖ್ಯೆ: ಸಂವ್ಯಶಾಇ 34 ಶಾಸನ 2011, ಬೆಂಗಳೂರು, ದಿನಾಂಕ: 27.06.2011
606	27-6-2011	ಸಂಖ್ಯೆ: ಸಂವ್ಯಶಾಇ 35 ಶಾಸನ 2011, ಬೆಂಗಳೂರು, ದಿನಾಂಕ: 27.06.2011
607	27-6-2011	ಸಂಖ್ಯೆ: ಸಂವ್ಯಶಾಇ 28 ಶಾಸನ 2011, ಬೆಂಗಳೂರು, ದಿನಾಂಕ: 27.06.2011
608	28-6-2011	No. MWD 237 WES 2011, BANGALORE, DATED: 28.06.2011
609	28-6-2011	No: HFW 109 HSH 2011, Bangalore, dated: 28th June 2011
610	29-6-2011	No. UDD 86 KMR 2011, Bangalore, Dated 28th June 2011
611	29-6-2011	ಸಂಖ್ಯೆ: ನಅಇ 237 ಜಿಇಎಲ್ 2011, ಬೆಂಗಳೂರು, ದಿನಾಂಕ: 28.06.2011
612	29-6-2011	No. SARIE 243 SAEPA 2008, BANGALORE, DATED: 28TH JUNE, 2011
613	30-6-2011	No. CVC/05/2008-09/45B/Market value/04/11-12, Tumkuru, Dated : 29th June, 2011

ಕರ್ನಾಟಕ ರಾಜ್ಯಪತ್ರವನ್ನು ಅಂತರಜಾಲದಲ್ಲಿ ವೀಕ್ಷಿಸಬಹುದು.
http//www.Kar.nic.in/gazette.

ಕರ್ನಾಟಕ ರಾಜ್ಯಪತ್ರವನ್ನು ಅಂತರಜಾಲದಲ್ಲಿ ವೀಕ್ಷಿಸಬಹುದು.
http//www.Kar.nic.in/gazette.

೨೦೧೧-೨೦೧೨ನೇ ಇಸವಿಯ ಕರ್ನಾಟಕ ರಾಜ್ಯಪತ್ರದ ಪರಿಷ್ಕೃತ ಚಂದಾ ದರ

ಕ್ರಮ ಸಂಖ್ಯೆ	ರಾಜ್ಯಪತ್ರದ ಭಾಗಗಳು		ಪ್ರತಿ ಒಂದಕ್ಕೆ ರೂ. ಪೈ.	ವಾರ್ಷಿಕ ಚಂದಾ ದರ ರೂ. ಪೈ.
1.	ಭಾಗ – 1	....	21-00	831-00
2.	ಭಾಗ – 2	....	5-00	182-00
3.	ಭಾಗ – 3	....	10-00	411-00
4.	ಭಾಗ – 4	....	3-00	109-00
5.	ಭಾಗ – 4ಎ	....	11-00	435-00
6.	ಭಾಗ – 5	....	22-00	879-00
7.	ಭಾಗ – 6	(ಬೆಂಗಳೂರು)........................	9-00	363-00
8.	ಭಾಗ – 6ಎ	(ಮೈಸೂರು)........................	25-00	964-00
9.	ಭಾಗ – 6ಬಿ	(ಧಾರವಾಡ)	45-00	1763-00
10.	ಭಾಗ – 6ಸಿ	(ಗುಲ್ಬರ್ಗ)	29-00	1162-00
11.	ಸಂಪೂರ್ಣ ಕರ್ನಾಟಕ ರಾಜ್ಯಪತ್ರ ಕ್ರ.ಸ. 1 ರಿಂದ 7 .... (ಭಾಗ–1 ರಿಂದ 6) ವಿಶೇಷ ರಾಜ್ಯಪತ್ರವನ್ನು ಹೊರತುಪಡಿಸಿ		81-00	3210-00
12.	ವಿಶೇಷ ರಾಜ್ಯಪತ್ರಗಳನ್ನು ಸಂಬಂಧಪಟ್ಟ ಇಲಾಖೆಗಳಿಂದ ಪಡೆಯಿರಿ ಮತ್ತು ಸರ್ಕಾರಿ ಪುಸ್ತಕ ಮಳಿಗೆಗಳಲ್ಲಿ ಮಾರಾಟಕ್ಕೆ ಲಭ್ಯವಿರುತ್ತವೆ,			

೨೦೧೧-೨೦೧೨ನೇ ಇಸವಿಯ ಕರ್ನಾಟಕ ರಾಜ್ಯಪತ್ರದ ಪ್ರಕಟಣೆ ದರ

ಕ್ರಮ ಸಂಖ್ಯೆ	ಪ್ರಕಟಣೆ ದರಗಳು		ಮೊತ್ತ ರೂ. ಪೈ.
1.	ಸ್ಥಳೀಯ / ಸ್ಥಾನಿಕ ಸಂಸ್ಥೆ ಮತ್ತು ಸರ್ಕಾರದ ಇಲಾಖೆ ಎ–4 ಅಳತೆಯ ಪ್ರತಿ ಪುಟಕ್ಕೆ	...	500-00
2.	ಪ್ರತಿ ಸಾಲಿನ 43 ಎಮ್ಸ್ ಅಥವಾ 2 ಸಾಲಿನ 21 ಎಮ್ಸ್	...	11-00
3.	ಖಾಸಗಿ ಸಂಸ್ಥೆ ಮತ್ತು ವಾಣಿಜ್ಯಕ್ಕೆ ಸಂಬಂಧಿಸಿದಂತೆ (ಕೆಪಿಟಿಸಿಎಲ್, ಕೆಎಸ್ಆರ್‌ಟಿಸಿ ತರಹ ಇತ್ಯಾದಿ ಪ್ರತಿ ಪುಟಕ್ಕೆ)	...	750-00
4.	ಪ್ರತಿ ಸಾಲಿನ 43 ಎಮ್ಸ್ ಅಥವಾ 2 ಸಾಲಿನ 21 ಎಮ್ಸ್	...	16-50
5.	ಅರ್ಧ ಪುಟಕ್ಕೆ ಅಥವಾ ಕಾಲು ಪುಟಕ್ಕೆ ಬರುವ ವಿಷಯ	...	½ ಅಥವಾ ¼ ಪುಟಕ್ಕೆ ದರ ನಿಗಧಿ
6.	ಕಾಲು ಪುಟಕ್ಕಿಂತ ಕಡಿಮೆ ಇರುವ ವಿಷಯಕ್ಕೆ	...	ಕ್ರಮ ಸಂಖ್ಯೆ 1 ಮತ್ತು 3 ಕ್ರಮ ಸಂಖ್ಯೆ 2 ಮತ್ತು 4ರಲ್ಲಿ ನಮೂದಿಸಿರುವಂತೆ ಪ್ರತಿ ಸಾಲಿಗೆ ದರ ನಿಗದಿಪಡಿಸಿರುವುದು
7.	ಹೆಚ್ಚಾಗಿ ಬೇಕಾಗಿರುವ ಪ್ರತಿ ಹಾಳೆಯ ಬೆಲೆ (ಮುದ್ರಿಸಿರುವ ಹಾಳೆಯ ಅಳತೆಯನ್ನು ನಿರೂಪಿಸಿ)	...	1-00

ಸೂಚನೆ :– 1. ಚಂದಾ ಹಣದ / ಪ್ರಕಟಣಾ ವೆಚ್ಚದ ಮೊತ್ತವನ್ನು **"0058 ಲೇಖನ ಸಾಮಗ್ರಿ ಮತ್ತು ಮುದ್ರಣ (1) ರಾಜ್ಯಪತ್ರ ಮತ್ತು ಇತರ ಪ್ರಕಟಣಾ ವೆಚ್ಚಗಳು"** ಖಜಾನೆಗೆ ಸಲ್ಲಿಸಿ, ಮೂಲ ಚಲನನ್ನು ಮುಂದಿನ ಕ್ರಮಕ್ಕಾಗಿ ಈ ಕಛೇರಿಗೆ ಕಳುಹಿಸಬೇಕು.

2. ಭಾಗ VI–ಎ, VI–ಬಿ, VI–ಸಿ ಗಳನ್ನು ಅನುಕ್ರಮವಾಗಿ ಮೈಸೂರು, ಧಾರವಾಡ ಮತ್ತು ಗುಲ್ಬರ್ಗಾದ ಶಾಖಾ ಮುದ್ರಣಾಲಯಗಳಿಂದ ಪಡೆಯಬಹುದು.

3. ಕರ್ನಾಟಕ ರಾಜ್ಯಪತ್ರಕ್ಕಾಗಿ ಈ ಕೆಳಕಂಡ ವಿಳಾಸದಲ್ಲಿ ಪತ್ರ ವ್ಯವಹರಿಸತಕ್ಕದ್ದು.

ಸಂಕಲನಾಧಿಕಾರಿಗಳು,
ಕರ್ನಾಟಕ ರಾಜ್ಯಪತ್ರ,
ಸರ್ಕಾರಿ ಹೊರವಲಯ ಮುದ್ರಣಾಲಯ,
ಮೈಸೂರು ರಸ್ತೆ, ಬೆಂಗಳೂರು–59

ಮುದ್ರಕರು :–ನಿರ್ದೇಶಕರು, ಮುದ್ರಣ, ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ಇಲಾಖೆ, ಬೆಂಗಳೂರು–59

KA / BG-GPO / 2515 / WPP-47 / 2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೬	ಬೆಂಗಳೂರು, ಗುರುವಾರ, ಜುಲೈ ೧೪, ೨೦೧೧, (ಆಷಾಢ ೨೩, ಶಕ ವರ್ಷ ೧೯೩೩)	ಸಂಚಿಕೆ ೨೮

ಭಾಗ – ೧

ರಾಜ್ಯ ಸರ್ಕಾರದ ಮುಖ್ಯ ಆದೇಶಗಳು ಹಾಗೂ ಸುತ್ತೋಲೆ ಮುಂತಾದ ಎಲ್ಲಾ ಇಲಾಖೆಗಳಿಗೂ ಸಂಬಂಧಿಸಿದ ಆದೇಶಗಳು

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ಎಂ. ಸಿದ್ದೋಜಿರಾವ್, ನಿವೃತ್ತ ಪಿ.ಸಿ–648, 'ಡಿ' ದಳ 8ನೇ ಪಡೆ, ಕೆ.ಎಸ್.ಆರ್.ಪಿ., ಶಿವಮೊಗ್ಗ, ಇವರು ಸರ್ಕಾರಕ್ಕೆ ಸಲ್ಲಿಸಿರುವ ಪರಿಷ್ಕರಣ ಮೇಲ್ಮನವಿಯ ಕುರಿತು ಅಂತಿಮ ಆದೇಶ.

ಓದಲಾಗಿದೆ :

1. ಶಿಸ್ತು ಪ್ರಾಧಿಕಾರಿ ಹಾಗೂ ಕಮಾಂಡೆಂಟ್, ಕೆ.ಎಸ್.ಆರ್.ಪಿ., 8ನೇ ಪಡೆ, ಶಿವಮೊಗ್ಗ, ಇವರ ಆದೇಶ ಸಂಖ್ಯೆ : 05/ಇವಿ(6)/ಸಿಬ್ಬಂದಿ(2)/2009–10, (ಓ.ಬಿ. 23/2010–11) ದಿನಾಂಕ : 13–4–2010.
2. ಮೇಲ್ಮನವಿ ಪ್ರಾಧಿಕಾರಿ ಹಾಗೂ ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಕೆ.ಎಸ್.ಆರ್.ಪಿ., ಬೆಂಗಳೂರು, ಇವರ ಆದೇಶ ಸಂಖ್ಯೆ : ಅಪೀಲು 05/2010–11 ದಿನಾಂಕ : 23–10–2010.
3. ಅರ್ಜಿದಾರರ ಪರಿಷ್ಕರಣ ಮೇಲ್ಮನವಿ ಅರ್ಜಿ ದಿನಾಂಕ : 31–7–2010.
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಬೆಂಗಳೂರು, ಇವರ ಪತ್ರ ಸಂಖ್ಯೆ : ಅಪೀಲು (2)48/2010–11, ದಿನಾಂಕ : 4–1–2011.

ಪ್ರಸ್ತಾವನೆ :

ಶ್ರೀ ಸಿದ್ದೋಜಿರಾವ್, ಇವರು ಕೆ.ಎಸ್.ಆರ್.ಪಿ., 8ನೇ ಪಡೆ, ಶಿವಮೊಗ್ಗದಲ್ಲಿ ಪಿ.ಸಿ. ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ (ಇನ್ನು ಮುಂದೆ ಅರ್ಜಿದಾರರೆಂದು ಕರೆಯಲ್ಪಡುವ) ಅನಧಿಕೃತವಾಗಿ ಗೈರುಹಾಜರಾಗಿ ಕರ್ತವ್ಯ ನಿರ್ಲಕ್ಷ್ಯತನ, ಬೇಜವಾಬ್ದಾರಿತನ ಪ್ರದರ್ಶಿಸಿದ ಕಾರಣದ ಮೇಲೆ ಇವರ ವಿರುದ್ಧ ಕರ್ನಾಟಕ ರಾಜ್ಯ ಪೊಲೀಸ್ (ಶಿಸ್ತು ನಡವಳಿ) ನಿಯಮಗಳು 1965ರ ನಿಯಮ 6ರಡಿ ಇಲಾಖಾ ವಿಚಾರಣೆಗೆ ಆದೇಶಿಸಿ ಈ ಕೆಳಕಂಡಂತೆ ದೋಷಾರೋಪಣೆಯನ್ನು ಹೊರಿಸಲಾಗಿದೆ.

ದೋಷಾರೋಪಣೆ :

1. ಶ್ರೀ ಎಂ. ಸಿದ್ದೋಜಿರಾವ್, ಪಿ.ಸಿ–648, 'ಡಿ' ದಳ 8ನೇ ಪಡೆ, ಕೆ.ಎಸ್.ಆರ್.ಪಿ., ಶಿವಮೊಗ್ಗ ಆದ ನೀವು ದಿನಾಂಕ : 23–1–2009 ರಿಂದ ಇಲ್ಲಿಯವರೆಗೆ ನಿರಂತರವಾಗಿ ಅನಧಿಕೃತವಾಗಿ ಗೈರುಹಾಜರಾಗಿ, ಕರ್ತವ್ಯ ನಿರ್ಲಕ್ಷತೆ ಬೇಜವಾಬ್ದಾರಿ ಮತ್ತು ಅಶಿಸ್ತು ಪ್ರದರ್ಶಿಸಿರುವಿರಿ.
2. ಶ್ರೀ ಎಂ. ಸಿದ್ದೋಜಿರಾವ್, ಪಿ.ಸಿ–648, 'ಡಿ' ದಳ ಆದ ನೀವು ದಿನಾಂಕ : 23–1–2009 ರಿಂದ ನಿರಂತರವಾಗಿ ಗೈರುಹಾಜರಿಯಲ್ಲಿರುವ ನಿಮಗೆ ಕರ್ತವ್ಯಕ್ಕೆ ಮರಳಿ ಹಾಜರಾಗುವಂತೆ ಸೂಚಿಸಿ, ಮಾನ್ಯ ಕಮಾಂಡೆಂಟ್‌ರವರು, 8ನೇ ಪಡೆ, ಕೆ.ಎಸ್.ಆರ್.ಪಿ. ಶಿವಮೊಗ್ಗ ರವರು ಕರ್ತವ್ಯ ಪರಿತ್ಯಾಗ ಎಚ್ಚರಿಕೆ ನೋಟೀಸ್ ಸಂ. ಸಿಬ್ಬಂದಿ(2) : 98 : ಡಿಇ/2008–09 ದಿನಾಂಕ : 20–2–2009 ರಂದು ನೀಡಿದ್ದು, ನಿಮ್ಮ ಪತ್ನಿಯಾದ ಶ್ರೀಮತಿ ವೀಣಾರವರು ದಿನಾಂಕ : 3–3–2009 ರಂದು ಸ್ವೀಕರಿಸಿಕೊಂಡಿದ್ದು ನೀವುಗಳು ಕರ್ತವ್ಯಕ್ಕೆ ಹಾಜರಾಗದಿದ್ದರಿಂದ ಮನಃ ಜ್ಞಾಪನವನ್ನು ದಿನಾಂಕ : 25–3–2009 ರಂದು ನೀಡಿ ಕೂಡಲೇ ಕರ್ತವ್ಯಕ್ಕೆ ಹಾಜರಾಗುವಂತೆ ಸೂಚಿಸಿದ್ದು ಇಲ್ಲಿಯವರೆಗೆ ಕರ್ತವ್ಯಕ್ಕೆ ಹಾಜರಾಗದೇ ಕರ್ತವ್ಯದಲ್ಲಿ ತೀವ್ರ ನಿರ್ಲಕ್ಷತೆ ಬೇಜವಾಬ್ದಾರಿ ಮತ್ತು ಅಶಿಸ್ತು ಪ್ರದರ್ಶಿಸಿರುತ್ತೀರಿ.

3. ಶ್ರೀ ಎಂ. ಸಿದ್ದೋಜಿರಾವ್, ಪಿ.ಸಿ-648, 'ಡಿ' ದಳ ರವರ ಪತ್ನಿಯವರು ತನ್ನ ಪತಿ ಕಾಣೆಯಾದ ಬಗ್ಗೆ ಶಿವಮೊಗ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರನ್ನು ಸಲ್ಲಿಸಿದ್ದು, ಅದನ್ನು ಠಾಣಾಧಿಕಾರಿಯವರು ಪಡೆದುಕೊಂಡು ಠಾಣಾ ಗುನ್ನೆ ನಂ. 90 : 2009 ಕಲಂ ಮನುಷ್ಯ ಕಾಣೆ ಪ್ರಕರಣವನ್ನು ದಾಖಲಿಸಿಕೊಂಡು ಇಲ್ಲಿಯವರೆಗೆ ತನಿಖೆಯನ್ನು ನಡೆಸಿರುತ್ತಾರೆ. ಆದರೂ ಸಹ ನಿಮ್ಮ ಇರುವಿಕೆಯ ಬಗ್ಗೆ ಯಾವುದೇ ಸುಳಿವು ಲಭ್ಯವಾಗಿರುವುದಿಲ್ಲ, ನೀವು ಸರ್ಕಾರಿ ಸೇವೆಯಲ್ಲಿದ್ದುಕೊಂಡು ನಿಮ್ಮ ಇರುವಿಕೆಯ ಬಗ್ಗೆ ಸುಳಿವನ್ನು ನೀಡದೇ ತಪ್ಪಿಸಿಕೊಂಡು ತಮ್ಮ ಕರ್ತವ್ಯ ಲೋಪವೆಸಗಿ ತೀವ್ರ ಕರ್ತವ್ಯ ನಿರ್ಲಕ್ಷತೆ ಬೇಜವಾಬ್ದಾರಿ ಮತ್ತು ಅಶಿಸ್ತು ದುರ್ನಡತೆ ಪ್ರದರ್ಶಿಸಿರುತ್ತೀರಿ."

ಮೇಲ್ಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಿ, ವಿಚಾರಣಾಧಿಕಾರಿಗಳು ಆರೋಪ ಸಾಬೀತಾಗಿದೆ ಎಂದು ಸಲ್ಲಿಸಿದ ವರದಿ ಆಧಾರದ ಮೇಲೆ ಅರ್ಜಿದಾರರ ಸಮಜಾಯಿಷಿ ಪಡೆದು ಅದನ್ನೊಪ್ಪದ ಶಿಸ್ತುಪ್ರಾಧಿಕಾರಿ ಹಾಗೂ ಕಮಾಂಡೆಂಟ್, ಕೆ.ಎಸ್.ಆರ್.ಪಿ., 8ನೇ ಪಡೆ, ಶಿವಮೊಗ್ಗ, ಇವರು ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ : 13-4-2010ರ ಆದೇಶದಲ್ಲಿ ಅರ್ಜಿದಾರರನ್ನು ದಿನಾಂಕ : 14-4-2010 ರಿಂದ ಜಾರಿಗೆ ಬರುವಂತೆ ಕಡ್ಡಾಯ ನಿವೃತ್ತಿಗೊಳಿಸುವ ದಂಡನೆಯನ್ನು ವಿಧಿಸಿ, ದಿನಾಂಕ : 23-1-09 ರಿಂದ 13-4-10ರ ವರೆಗೆ ಒಟ್ಟು 446 ದಿನಗಳನ್ನು ವೇತನ ರಹಿತ ರಜೆಯೆಂದು ಪರಿಗಣಿಸಲಾಗಿದೆ.

ಈ ಆದೇಶದ ವಿರುದ್ಧ ಸಲ್ಲಿಸಿದ ಅರ್ಜಿದಾರರ ಮೇಲ್ಮನವಿಯನ್ನು ಪರಿಶೀಲಿಸಿದ ಮೇಲ್ಮನವಿ ಪ್ರಾಧಿಕಾರಿ ಹಾಗೂ ಡೆಪ್ಯೂಟಿ ಇನ್‌ಸ್ಪೆಕ್ಟರ್ ಜನರಲ್ ಆಫ್ ಪೊಲೀಸ್ ಕೆ.ಎಸ್.ಆರ್.ಪಿ., ಬೆಂಗಳೂರು, ಇವರು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ : 23-10-2010ರ ಆದೇಶದಲ್ಲಿ ಮೇಲ್ಮನವಿಯನ್ನು ತಿರಸ್ಕರಿಸಿರುತ್ತಾರೆ.

ಈ ಎರಡೂ ಆದೇಶಗಳ ವಿರುದ್ಧ ಅರ್ಜಿದಾರರು ಸರ್ಕಾರಕ್ಕೆ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಪರಿಷ್ಕರಣ ಮೇಲ್ಮನವಿ ಅರ್ಜಿಯಲ್ಲಿನ ವಾದಾಂಶಗಳನ್ನು ಇಲಾಖಾ ವಿಚಾರಣೆ ದಾಖಲೆಗಳೊಂದಿಗೆ ಪರಿಶೀಲಿಸಲಾಗಿದೆ. ಪರಿಷ್ಕರಣ ಮೇಲ್ಮನವಿಯಲ್ಲಿ ಯಾವುದೇ ಸಮರ್ಥನೀಯ ಅಂಶಗಳು ಇರುವುದಿಲ್ಲ. ಅರ್ಜಿದಾರರು ಶಿಸ್ತಿನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಅನಧಿಕೃತವಾಗಿ ಗೈರುಹಾಜರಾಗಿ ಅತೀವ ನಿರ್ಲಕ್ಷತೆ ಹಾಗೂ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ಶಿಸ್ತು ಪ್ರಾಧಿಕಾರಿಯು ವಿಧಿಸಿರುವ ದಂಡನೆ ಆದೇಶದಲ್ಲಿ ಹಸ್ತಕ್ಷೇಪ ಮಾಡುವ ಅಗತ್ಯತೆ ಕಂಡು ಬರುತ್ತಿಲ್ಲವಾದ್ದರಿಂದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಒಇ 133 ಪೊಸಿಅ 2010, ಬೆಂಗಳೂರು, ದಿನಾಂಕ : 5-4-2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪೊಲೀಸ್ ಅಧಿನಿಯಮ 1963ರ ಸೆಕ್ಷನ್ 25ರಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಶ್ರೀ ಎಂ. ಸಿದ್ದೋಜಿರಾವ್, ನಿವೃತ್ತ, ಪಿ.ಸಿ-648, 'ಡಿ' ದಳ 8ನೇ ಪಡೆ, ಕೆ.ಎಸ್.ಆರ್.ಪಿ., ಶಿವಮೊಗ್ಗ, ಇವರು ಸರ್ಕಾರಕ್ಕೆ ಸಲ್ಲಿಸಿದ್ದ ಪರಿಷ್ಕರಣ ಮೇಲ್ಮನವಿ ಅರ್ಜಿಯನ್ನು ತಿರಸ್ಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಟಿ.ಎಸ್. ರವಿಪ್ರಕಾಶ್
ಸರ್ಕಾರದ ಅಧೀನ ಕಾರ್ಯದರ್ಶಿ
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು).

ಪಿ.ಆರ್. 1042

ಜಲಸಂಪನ್ಮೂಲ ಸಚಿವಾಲಯ

ವಿಷಯ : ಗುಲ್ಬರ್ಗಾ ಜಿಲ್ಲೆ, ಚಿಂಚೋಳಿ ತಾಲ್ಲೂಕು ತಮಕುಂಟಾ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ: 14-12-2010ರ ಪತ್ರ ಸಂಖ್ಯೆ: ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/2010-11/6578.

ಪ್ರಸ್ತಾವನೆ:

ಗುಲ್ಬರ್ಗಾ ಜಿಲ್ಲೆ, ಚಿಂಚೋಳಿ ತಾಲ್ಲೂಕು ತಮಕುಂಟಾ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ತಮಕುಂಟಾ ಗ್ರಾಮದ ಜಮೀನುಗಳಿಗೆ ಎಲ್.ಎ.ಸಿ. ಪ್ರಕರಣಗಳಲ್ಲಿ ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ಅನುದಾನ ಬಿಡುಗಡೆ ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್ ಪತ್ರದಲ್ಲಿ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ:

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ: 05-04-2007.
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ: 02-11-2008.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಮಾಲೀಕರು ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಭೂಸ್ವಾಧೀನಾಧಿಕಾರಿಗಳ ಐತೀರ್ಪಿನಂತೆ ಪರಿಹಾರ ಧನ ಪಡೆದು ಇನ್ನೂ ಹೆಚ್ಚಿನ ಪರಿಹಾರಕ್ಕಾಗಿ ಚಿಂಚೋಳಿ ಸಿವಿಲ್ (ಹಿರಿಯ ವಿಭಾಗ) ನ್ಯಾಯಾಲಯದಲ್ಲಿ ಎಲ್.ಎ.ಸಿ. ಪ್ರಕರಣವನ್ನು ದಾಖಲಿಸಿದ್ದು, ನ್ಯಾಯಾಲಯವು ಪ್ರತಿ ಎಕರೆ ರೂ. 1,57,000/-ಗಳನ್ನು ನಿಗಡಿಪಡಿಸಿ ಇತರೆ ಸವಲತ್ತುಗಳೊಂದಿಗೆ ಪಾವತಿಸಲು ಆದೇಶಿಸಿದೆ. ಈ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸದಿರಲು ಕಂದಾಯ ಇಲಾಖೆಯ ಪತ್ರ ಸಂಖ್ಯೆ: ಆರ್‌ಡಿ 426 ಎಲ್‌ಸಿಜಿ 2010 ದಿನಾಂಕ: 03-09-2010, ಆರ್‌ಡಿ 405 ಎಲ್‌ಸಿಜಿ 2010, ದಿನಾಂಕ: 09-06-2010, ಆರ್‌ಡಿ 408 ಎಲ್‌ಸಿಜಿ 2010, ದಿನಾಂಕ: 09-06-2010 ಆರ್‌ಡಿ 413 ಎಲ್‌ಸಿಜಿ 2010, ದಿನಾಂಕ: 09-06-2010, ಆರ್‌ಡಿ 407 ಎಲ್‌ಸಿಜಿ 2010, ದಿನಾಂಕ: 09-06-2010, ಆರ್‌ಡಿ 409 ಎಲ್‌ಸಿಜಿ 2010, ದಿನಾಂಕ: 09-06-2010, ಆರ್‌ಡಿ 410 ಎಲ್‌ಸಿಜಿ 2010, ದಿನಾಂಕ: 09-06-2010, ಆರ್‌ಡಿ 411 ಎಲ್‌ಸಿಜಿ 2010, ದಿನಾಂಕ: 09-06-2010, ಆರ್‌ಡಿ 406 ಎಲ್‌ಸಿಜಿ 2010, ದಿನಾಂಕ 09-06-2010, ಆರ್‌ಡಿ 410 ಎಲ್‌ಸಿಜಿ 2010, ದಿನಾಂಕ: 09-06-2010 ಮತ್ತು ಆರ್‌ಡಿ 412 ಎಲ್‌ಸಿಜಿ

2010, ದಿನಾಂಕ: 09-06-2010ರಲ್ಲಿ ಅಭಿಪ್ರಾಯ ನೀಡಿದೆ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿರುವ ಪ್ರಕರಣಗಳ ವಿವರ ಕೆಳಕಂಡಂತಿದೆ:

ಕ್ರಮ ಸಂಖ್ಯೆ	ಎಲ್ಎಸಿ ಸಂಖ್ಯೆ	ತಮಕುಂಟಾ ಗ್ರಾಮದ ಸ.ನಂ.	ವಿಸ್ತೀರ್ಣ ಎ-ಗುಂ	ಪರಿಹಾರ ಮೊತ್ತ (ರೂ.ಗಳಲ್ಲಿ)
1	36/09	39/4	0-12	66051
2	39/09	53/2	0-20	109886
3	40/09	56/1	0-03	16738
4	41/09	63/3	0-04	22217
5	42/09	36/2A	11-01	2416657
6	46/09	66/3	0-22	120843
7	47/09	63/1	0-11	60572
8	50/09	49/2	0-27	148240
9	69/09	81/C	0-04	22217
10	71/09	48/2	1-06	252346
	ಒಟ್ಟು			3235767

- ಪರಿಹಾರ ಧನದ ಮೊತ್ತದಲ್ಲಿ ನ್ಯಾಯಾಲಯದ ವೆಚ್ಚ ಸಹ ಸೇರಿದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಸನೀಇ 08 ಭೂಸ್ವಾಪ್ರ 2011, ಬೆಂಗಳೂರು, ದಿನಾಂಕ: 24ನೇ ಮಾರ್ಚ್-2011

ಗುಲ್ಬರ್ಗಾ ಜಿಲ್ಲೆ, ಚಿಂಚೋಳಿ ತಾಲ್ಲೂಕು ತಮಕುಂಟಾ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ತಮಕುಂಟಾ ಗ್ರಾಮಕ್ಕೆ ಸೇರಿದ ಮೇಲ್ಕಂಡ ಸರ್ವೆ ನಂಬರ್‌ಗಳ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣಗಳಲ್ಲಿ ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿಯ ಸೂಚನೆಗಳಂತೆ ಲೆಕ್ಕಾಹಾಕಿದ ಪರಿಹಾರ ಧನ ಮೊತ್ತ ರೂ. 32,35,767-00 ಗಳನ್ನು (ಮೂವತ್ತೆರಡು ಲಕ್ಷದ ಮೂವತ್ತೈದು ಸಾವಿರದ ಏಳುನೂರ ಅರವತ್ತೇಳು ರೂ.ಗಳು ಮಾತ್ರ) ಪಾವತಿಸಲು ಸರ್ಕಾರವು ಈ ಕೆಳಕಂಡ ಷರತ್ತುಗಳುಗೊಳಪಟ್ಟು ಅನುಮೋದನೆ ನೀಡಿದೆ.

1. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.
2. ಹೆಚ್ಚುವರಿ ಪರಿಹಾರಧನದ ಪಾವತಿಗೆ ಮೊದಲು ಜಮೀನಿನ ಹಕ್ಕುದಾರಿಕೆ ಬಗ್ಗೆ ಖಚಿತಪಡಿಸಿಕೊಂಡು ಪಾವತಿಸತಕ್ಕದ್ದು.
3. ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ವರ್ಗಾವಣೆ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳತಕ್ಕದ್ದು.

ಈ ವೆಚ್ಚವನ್ನು 2010-11ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ "4702-00-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಮುಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು" ಅಡಿಯಲ್ಲಿ ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ: ಆಇ 01 ಬಿಎಸ್‌ಜಿ 2011, ದಿನಾಂಕ 19-03-2011 ರಲ್ಲಿ ಒದಗಿಸಿರುವ ಪೂರಕ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2010, ದಿನಾಂಕ 20-10-2010ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಗೋಪಾಲ್

ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಪಿಆರ್.ನಂ. 901

ಜಲಸಂಪನ್ಮೂಲ ಸಚಿವಾಲಯ

ವಿಷಯ : ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕು ಟೆಂಗುಂಟೆ ಇಂಗು ಕೆರೆ ನಿರ್ಮಾಣ ಕಾಮಗಾರಿಗಾಗಿ ಸ್ವಾಧೀನಪಡಿಸಿಕೊಂಡ ಜಮೀನುಗಳಿಗೆ ನ್ಯಾಯಾಲಯದ ಆದೇಶನುಸಾರ ಹೆಚ್ಚುವರಿ ಪರಿಹಾರ ಪಾವತಿಸುವ ಬಗ್ಗೆ.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ಉತ್ತರ) ವಲಯ, ಬಿಜಾಪುರ ಅವರ ಪತ್ರ ಸಂಖ್ಯೆ: ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/2010-11/4317, ದಿನಾಂಕ 28-07-2010.

ಪ್ರಸ್ತಾವನೆ:

ಕೊಪ್ಪಳ ಜಿಲ್ಲೆ ಕುಷ್ಟಗಿ ತಾಲ್ಲೂಕು, ಟೆಂಗುಂಟೆ ಇಂಗು ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಂಡ ಟೆಂಗುಂಟೆ ಗ್ರಾಮದ ಜಮೀನುಗಳಿಗೆ ನ್ಯಾಯಾಲಯವು ನೀಡಿರುವ ತೀರ್ಪಿನನುಸಾರ ಹೆಚ್ಚುವರಿ ಪರಿಹಾರ ಪಾವತಿಸಲು ಅನುದಾನ ಬಿಡುಗಡೆ ಮಾಡುವಂತೆ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ಉತ್ತರ ವಲಯ ಬಿಜಾಪುರ ಇವರು ಮೇಲೆ ಓದಲಾದ ದಿನಾಂಕ: 28-07-2010ರ ಪತ್ರದಲ್ಲಿ ಕೋರಿರುತ್ತಾರೆ.

ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆಯನ್ನು ದಿನಾಂಕ: 03-04-2003 ರಂದು ಹೊರಡಿಸಿದೆ.

ಭೂಸ್ವಾಧೀನಾಧಿಕಾರಿಗಳು ದಿನಾಂಕ: 05-01-2005 ರಂದು ಐತೀರ್ಪು ರಚಿಸಿದ್ದಾರೆ.

ಭೂಸ್ವಾಧೀನಕೊಳಪಟ್ಟ ಟೆಂಗುಂಟೆ ಗ್ರಾಮದ ಜಮೀನುಗಳ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳು ರಚಿಸಿದ ಪರಿಹಾರ ಐತೀರ್ಪಿನಂತೆ ಹಣ ಪಡೆದು. ಇನ್ನೂ ಹೆಚ್ಚಿನ ಪರಿಹಾರ ನೀಡುವಂತೆ ಸಿವಿಲ್ ನ್ಯಾಯಾಲಯ (ಹಿರಿಯ ಶ್ರೇಣಿ) ಕುಷ್ಟಗಿ ಇಲ್ಲಿ ಕೆಳಕಂಡ ಪ್ರಕರಣಗಳನ್ನು ಸಲ್ಲಿಸಿದ್ದು. ನ್ಯಾಯಾಲಯವು ದಿನಾಂಕ: 31-07-2008 ರಂದು ತೀರ್ಪು ಆದೇಶದಲ್ಲಿ ಹೆಚ್ಚಿನ ಪರಿಹಾರ ನಿಗಧಿಪಡಿಸಿದೆ. ಸಿವಿಲ್ ನ್ಯಾಯಾಲಯದ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸುವ ಅಗತ್ಯವಿಲ್ಲವೆಂದು ಕಂದಾಯ ಇಲಾಖೆಯು ಪತ್ರ ಸಂಖ್ಯೆ: ಆರ್‌ಡಿ 423 ಎಲ್‌ಸಿಜಿ 2009, ದಿನಾಂಕ: 23-05-2009 ರಂದು ಅಭಿಪ್ರಾಯ ನೀಡಿರುತ್ತದೆ.

(ರೂ.ಗಳಲ್ಲಿ)

ಕ್ರಮ ಸಂಖ್ಯೆ	ಎಲ್‌ಎಸಿ ಸಂಖ್ಯೆ	ಟೆಂಗುಂಟೆ ಗ್ರಾಮದ ಸ.ನಂ.	ವಿಸ್ತೀರ್ಣ ಎ-ಗುಂ	ಪರಿಹಾರ ಧನದ ಮೊತ್ತ
1	75/07	25/ಉ	0-05	41314
2	76/07	25/1ಇ	0-03	24989
3	77/07	25/1ಈ	1-00	327003
4	78/07	26/.	0-14	114775
5	79/07	25/1[illegible]	1-00	327003
6	80/07	25/ಆ	0-12	98450
7	81/07	26/1	1-00	327003
8	82/07	25/ಊ	0-10	82125

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಸನೀಇ 111 ಭೂಸ್ವಾಪ್ರ 2010, ಬೆಂಗಳೂರು, ದಿನಾಂಕ: 24-03-2011

ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕು ಟೆಂಗುಂಟೆ ಇಂಗು ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಂಡ ಟೆಂಗುಂಟೆ ಗ್ರಾಮಕ್ಕೆ ಸೇರಿದ ಮೇಲ್ಕಂಡ ಸರ್ವೆ ನಂಬರ್‌ನ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣಗಳಲ್ಲಿ ನೀಡಿದ ತೀರ್ಪಿನಂತೆ ಪರಿಹಾರ ರೂ. 12,95,181-00ಗಳನ್ನು (ಹನ್ನೆರಡು ಲಕ್ಷದ ತೊಂಭತ್ತೈದು ಸಾವಿರದ ನೂರ ಎಂಭತ್ತೊಂದು ರೂಪಾಯಿಗಳು ಮಾತ್ರ) ಗಳನ್ನು ಪಾವತಿಸಲು ಸರ್ಕಾರವು ಈ ಕೆಳಕಂಡ ಷರತ್ತುಗೊಳಪಟ್ಟು ಅನುಮೋದನೆ ನೀಡಿದೆ.

1. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು. ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.
2. ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ. ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ವೆಚ್ಚವನ್ನು 2010-11ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ "4702-0-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಮುಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು" ಅಡಿಯಲ್ಲಿ ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ: ಆಇ 01 ಬಿಎಸ್‌ಜಿ 2011, ದಿನಾಂಕ 19-03-2011 ರಲ್ಲಿ ಒದಗಿಸಿರುವ ಪೂರಕ ಅನುದಾನ-III ರಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 01 ಟಿಎಫ್‌ಪಿ 2010, ದಿನಾಂಕ 20-10-2010ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಗೋಪಾಲ್

ಪಿಆರ್.ನಂ. 902

ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಜಲಸಂಪನ್ಮೂಲ ಸಚಿವಾಲಯ

ವಿಷಯ : ಗುಲ್ಬರ್ಗಾ ಜಿಲ್ಲೆ, ಚಿಂಚೋಳಿ ತಾಲ್ಲೂಕು ಹಸರಗುಂಡಗಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ಪತ್ರ ಸಂಖ್ಯೆ: ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/2010-11/726, ದಿನಾಂಕ 14-12-2010.

ಪ್ರಸ್ತಾವನೆ:

ಗುಲ್ಬರ್ಗಾ ಜಿಲ್ಲೆ, ಚಿಂಚೋಳಿ ತಾಲ್ಲೂಕು ಹಸರಗುಂಡಗಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಹಸರಗುಂಡಗಿ ಗ್ರಾಮದ ಜಮೀನುಗಳಿಗೆ ಎಲ್.ಎ.ಸಿ. ಪ್ರಕರಣಗಳಲ್ಲಿ ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರ ಪಾವತಿಸಲು ಅನುದಾನ ಬಿಡುಗಡೆ ಮಾಡಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ, ಉತ್ತರ ವಲಯ ಇವರು ಮೇಲೆ ಓದಲಾದ ಪತ್ರದಲ್ಲಿ ಕೋರಿದ್ದಾರೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ:

ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ: 10-12-81

ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ 22-05-1984.

ಭೂಸ್ವಾಧೀನಕೊಳಪಟ್ಟ ಜಮೀನುಗಳ ಭೂಮಾಲೀಕರು ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಭೂಸ್ವಾಧೀನಾಧಿಕಾರಿಗಳ ಐತೀರ್ಪಿನಂತೆ ಪರಿಹಾರ ಪಡೆದು ಇನ್ನೂ ಹೆಚ್ಚಿನ ಪರಿಹಾರಕ್ಕಾಗಿ ಚಿಂಚೋಳಿ ಸಿವಿಲ್ (ಹಿರಿಯ ವಿಭಾಗ) ನ್ಯಾಯಾಲಯದಲ್ಲಿ ಎಲ್.ಎ.ಸಿ. ಪ್ರಕರಣವನ್ನು ದಾಖಲಿಸಿದ್ದು, ನ್ಯಾಯಾಲಯವು ಪ್ರತಿ ಎಕರೆಗೆ ರೂ. 21,000/-ಗಳನ್ನು ನಿಗದಿಪಡಿಸಿದೆ. ಈ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸದಿರಲು ಕಂದಾಯ ಇಲಾಖೆಯು ಪತ್ರ ಸಂಖ್ಯೆ: ಆರ್‌ಡಿ 849 ಎಲ್‌ಸಿಜಿ 2009, ದಿನಾಂಕ 15-09-2010ರಲ್ಲಿ ಅಭಿಪ್ರಾಯ ನೀಡಿದೆ. ನ್ಯಾಯಾಲಯವು ಹೆಚ್ಚಿನ ಪರಿಹಾರಕ್ಕೆ ತೀರ್ಪು ನೀಡಿರುವ ಪ್ರಕರಣಗಳ ವಿವರ ಕೆಳಕಂಡಂತಿದೆ:

ಕ್ರಮ ಸಂಖ್ಯೆ	ಎಲ್‌ಎಸಿ	ಹಸರಗುಂಡಗಿ ಗ್ರಾಮದ ಸ.ನಂ.	ವಿಸ್ತೀರ್ಣ ಎ-ಗುಂ	ಪರಿಹಾರ ಮೊತ್ತ (ರೂ.ಗಳಲ್ಲಿ)
1	161/09	5/0, 23	4-09	364325
2	162/09	8/1	4-32	413570
3	163/09	5/0, 22	2-21	217854
4	164/09	8/2	4-14	375100
5	165/09	8/3	3-36	336324
6	166/09	6, 15/4	0-17	36923
7	167/09	13, 17, 11/2	7-09	622806
8	168/09	184, 53	2-26	228623
9	169/09	46/1	2-30	237241
10	170/09	46/2	2-02	176927
11	171/09	47	4-02	349251
12	172/09	54	0-15	32610
13	173/09	15/3	0-08	17531
14	174/09	12/0	1-19	127384
15	175/09	9	0-30	64923
16	176/09	7	4-05	355707
	ಒಟ್ಟು			**3957099**

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಸನೀಇ 30 ಭೂಸ್ವಾಪ್ರ 2011, ಬೆಂಗಳೂರು, ದಿನಾಂಕ: 24-03-2011

ಗುಲ್ಬರ್ಗಾ ಜಿಲ್ಲೆ, ಚಿಂಚೋಳಿ ತಾಲ್ಲೂಕು ಹಸರಗುಂಡಗಿ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಹಸರಗುಂಡಗಿ ಗ್ರಾಮಕ್ಕೆ ಸೇರಿದ ಮೇಲ್ಕಂಡ ಸರ್ವೆ ನಂಬರ್‌ಗಳ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್.ಎ.ಸಿ. ಪ್ರಕರಣಗಳಲ್ಲಿ ನೀಡಿರುವ ತೀರ್ಪಿನಂತೆ ಪರಿಹಾರ ಮೊತ್ತ ರೂ. 39,57,099-00 ಗಳನ್ನು (ಮೂವತ್ತೊಂಭತ್ತು ಲಕ್ಷದ ಐವತ್ತೇಳು ಸಾವಿರದ ತೊಂಭತ್ತೊಂಭತ್ತು ರೂಪಾಯಿಗಳು ಮಾತ್ರ) ಪಾವತಿಸಲು ಈ ಕೆಳಕಂಡ ಷರತ್ತುಗೊಳಪಟ್ಟು ಅನುಮೋದನೆ ನೀಡಿದೆ.

1. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು. ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.
2. ಹೆಚ್ಚುವರಿ ಪರಿಹಾರಧನದ ಪಾವತಿಗೆ ಮೊದಲು ಜಮೀನಿನ ಹಕ್ಕುದಾರಿಕೆ ಬಗ್ಗೆ ಖಚಿತಪಡಿಸಿಕೊಂಡು ಪಾವತಿಸತಕ್ಕದ್ದು.
3. ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ವರ್ಗಾವಣೆ ಬಗ್ಗೆ ಕೂಡಲೆ ಕ್ರಮ ಕೈಗೊಳ್ಳತಕ್ಕದ್ದು.

ಈ ವೆಚ್ಚವನ್ನು 2010-11ನೇ ಸಾಲಿನ ಆಯವ್ಯಯದ **ಲೆಕ್ಕಶೀರ್ಷಿಕೆ "4702-0-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು"** ಅಡಿಯಲ್ಲಿ ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ: ಆಇ 01 ಬಿಎಸ್‌ಜಿ 2011, ದಿನಾಂಕ 19-03-2011 ರಲ್ಲಿ ಒದಗಿಸಿರುವ ಪೂರಕ ಅನುದಾನ-III ರಿಂದ ಭರಸಿಕೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 01 ಟಿಎಫ್‌ಪಿ 2010, ದಿನಾಂಕ 20-10-2010ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಗೋಪಾಲ್

ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಪಿಆರ್.ನಂ. 903

ಜಲಸಂಪನ್ಮೂಲ ಸಚಿವಾಲಯ

ವಿಷಯ : ಬಿಜಾಪುರ ಜಿಲ್ಲೆ, ಸಿಂಧಗಿ ತಾಲ್ಲೂಕು ಪುರದಾಳ ಗ್ರಾಮದ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ಪತ್ರ ಸಂಖ್ಯೆ: ಮುಇಂ/ಸನೀ(ಉ)ವ/ಬಿಜಾ/ಭೂಸ್ವಾ/2010-11/3782, ದಿನಾಂಕ 01-07-2010.

ಪ್ರಸ್ತಾವನೆ:

ಬಿಜಾಪುರ ಜಿಲ್ಲೆ, ಸಿಂಧಗಿ ತಾಲ್ಲೂಕು ಪುರದಾಳ ಗ್ರಾಮದ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಕೋರವಾರ ಗ್ರಾಮದ ಜಮೀನುಗಳಿಗೆ ಬಿಜಾಪುರದ 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಲಯ (ಹಿರಿಯ ಶ್ರೇಣಿ) ಎಲ್.ಎ.ಸಿ. ಪ್ರಕರಣಗಳಲ್ಲಿ ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರ ಧನ ಪಾವತಿಸಲು ಅನುದಾನ ಬಿಡುಗಡೆ ಮಾಡಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ, ಉತ್ತರ ವಲಯ ಬಿಜಾಪುರ ಇವರು ಮೇಲೆ ಓದಲಾದ ಪತ್ರದಲ್ಲಿ ಕೋರಿದ್ದಾರೆ.

ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ: 27-04-2000ರ ಪ್ರಕಾರ ಭೂಸ್ವಾಧೀನಕ್ಕೊಳಪಟ್ಟ ಭೂ ಮಾಲೀಕರು ದಿನಾಂಕ: 21-05-2002 ರಂದು ರಚಿಸಿದ ಐತೀರ್ಪಿನ ಪ್ರಕಾರ ಹಣ ಪಡೆದು, ಹೆಚ್ಚಿನ ಪರಿಹಾರಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಲಯ (ಹಿರಿಯ ಶ್ರೇಣಿ) ಬಿಜಾಪುರ ಇಲ್ಲಿ ಸಲ್ಲಿಸಿದ ಎಲ್‌ಎಸಿ 121/03, 126/03, 131/03, 192/03 ಮತ್ತು 197/03 ಪ್ರಕರಣಗಳಲ್ಲಿ ದಿನಾಂಕ 24-06-2006 ರಂದು ನೀಡಿರುವ ಆದೇಶದಲ್ಲಿ ಪರಿಹಾರವನ್ನು ರೂ. 35,250/-ಕ್ಕೆ ಹೆಚ್ಚಿಸಿದೆ. ಈ ಪ್ರಕರಣಗಳಲ್ಲಿ ಮೇಲ್ಮನವಿ ಸಲ್ಲಿಸುವ ಅಗತ್ಯವಿಲ್ಲವೆಂದು ಕಾನೂನು ಕೋಶದ ಮುಖ್ಯಸ್ಥರು ಅಭಿಪ್ರಾಯ ನೀಡಿರುತ್ತಾರೆ.

ಪ್ರಸ್ತಾವವನ್ನು ಕೂಲಕಂಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಸನೀಇ 103 ಭೂಸ್ವಾಪ್ರ 2010, ಬೆಂಗಳೂರು, ದಿನಾಂಕ: 24ನೇ ಮಾರ್ಚ್ 2011

ಬಿಜಾಪುರ ಜಿಲ್ಲೆ, ಸಿಂಧಗಿ ತಾಲ್ಲೂಕು ಪುರದಾಳ ಗ್ರಾಮದ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಂಡ ಕೋರವಾರ ಗ್ರಾಮಕ್ಕೆ ಸೇರಿದ ಸರ್ವೆ ನಂಬರ್‌ಗಳ ಜಮೀನುಗಳಿಗೆ ಎಲ್.ಎ.ಸಿ. ಪ್ರಕರಣಗಳಲ್ಲಿ ನೀಡಿರುವ ತೀರ್ಪಿನಂತೆ ಪರಿಹಾರ ಧನ ಮೊತ್ತ ರೂ. 13,96,866-00 ಗಳನ್ನು (ಹದಿಮೂರು ಲಕ್ಷದ ತೊಂಭತ್ತಾರು ಸಾವಿರದ ಎಂಟು ನೂರ ಅರವತ್ತಾರು ರೂ.ಗಳು ಮಾತ್ರ) ಪಾವತಿಸಲು ಸರ್ಕಾರವು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನೀಡಲು ಸರ್ಕಾರದ ಅನುಮೋದನೆ ನೀಡಿದೆ.

1. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು. ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.
2. ಹೆಚ್ಚುವರಿ ಪರಿಹಾರಧನದ ಪಾವತಿಗೆ ಮೊದಲು ಜಮೀನಿನ ಹಕ್ಕುದಾರಿಕೆ ಬಗ್ಗೆ ಖಚಿತಪಡಿಸಿಕೊಂಡು ಪಾವತಿಸತಕ್ಕದ್ದು.
3. ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ವರ್ಗಾವಣೆ ಬಗ್ಗೆ ಕೂಡಲೆ ಕೈಗೊಳ್ಳತಕ್ಕದ್ದು.

ಈ ವೆಚ್ಚವನ್ನು 2010-11ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ **"4702-00-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು"** ಅಡಿಯಲ್ಲಿ ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ: ಆಇ 01 ಬಿಎಸ್‌ಜಿ 2011, ದಿನಾಂಕ 19-03-2011 ರಲ್ಲಿ ಒದಗಿಸಿರುವ ಪೂರಕ ಅನುದಾನ-III ರಿಂದ ಭರಸಿಕೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 01 ಟಿಎಫ್‌ಪಿ 2010, ದಿನಾಂಕ 20-10-2010ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಗೋಪಾಲ್

ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಪಿಆರ್.ನಂ. 904

ಜಲಸಂಪನ್ಮೂಲ ಸಚಿವಾಲಯ

ವಿಷಯ : ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕು ನಿಡಶೇಷಿ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಬೆಂಚಮಟ್ಟಿ ಗ್ರಾಮದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರ ಪಾವತಿಸುವ ಬಗ್ಗೆ.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಅವರ ಪತ್ರ ಸಂಖ್ಯೆ: ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/2010-11/4118, ದಿನಾಂಕ 19-07-2010.

ಪ್ರಸ್ತಾವನೆ:

ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕು ನಿಡಶೇಷಿ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಬೆಂಚಮಟ್ಟಿ ಗ್ರಾಮದ ಸರ್ವೆ ನಂಬರ್‌ಗಳ ಜಮೀನುಗಳಿಗೆ ಕೊಪ್ಪಳ ಸಿವಿಲ್ ನ್ಯಾಯಾಲಯ (ಹಿರಿಯ ವಿಭಾಗ) ಎಲ್.ಎ.ಸಿ. ಪ್ರಕರಣಗಳಲ್ಲಿ ನೀಡಿರುವ ಆದೇಶದಂತೆ ಹೆಚ್ಚುವರಿ ಪರಿಹಾರ ಮೊತ್ತ ಬಿಡುಗಡೆ ಮಾಡಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ, ಉತ್ತರ ವಲಯ ಬಿಜಾಪುರ ಇವರು ಮೇಲೆ ಓದಲಾದ ದಿನಾಂಕ: 19-07-2010ರ ಪತ್ರದಲ್ಲಿ ಕೋರಿದ್ದಾರೆ.

ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರ ಅಧಿಸೂಚನೆ ದಿನಾಂಕ: 03-10-1996ರ ಪ್ರಕಾರ ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಮಾಲೀಕರು ದಿನಾಂಕ: 18-07-1999 ರಂದು ರಚಿಸಿದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಕೊಪ್ಪಳ ಸಿವಿಲ್ ನ್ಯಾಯಾಲಯ (ಹಿರಿಯ ವಿಭಾಗ)ದಲ್ಲಿ ದಾಖಲಿಸಿದ್ದ ಪ್ರಕರಣಗಳಲ್ಲಿ ದಿನಾಂಕ: 20-11-2008 ರಂದು ನೀಡಿರುವ ಸಾಮಾನ್ಯ ಆದೇಶದಲ್ಲಿ ಹೆಚ್ಚಿನ ಪರಿಹಾರ ಧನ ನಿಗದಿಪಡಿಸಿದೆ. ಈ ತೀರ್ಪಿನಲ್ಲಿ ಸೇರಿದ್ದ ಕೆಳಕಂಡ ಎಲ್.ಎ.ಸಿ. ಪ್ರಕರಣಗಳ ವಿರುದ್ಧ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿಯನ್ನು ವಜಾ ಮಾಡಿದೆ. ಆದ್ದರಿಂದ ಸಿವಿಲ್ ನ್ಯಾಯಾಲಯದ ತೀರ್ಪಿನಂತೆ ಪಾವತಿಸಬೇಕಾದ ಪರಿಹಾರ ಮೊತ್ತದ ವಿವರ ಕೆಳಕಂಡಂತಿದೆ.

ಕ್ರಮ ಸಂಖ್ಯೆ	ಎಲ್‌ಎಸಿ ಸಂಖ್ಯೆ	ಎಂಎಫ್‌ಎ ಸಂಖ್ಯೆ	ಬೆಂಚಮಟ್ಟಿ ಗ್ರಾಮದ ಸ.ನಂ.	ವಿಸ್ತೀರ್ಣ ಎ-ಗುಂ	ಪರಿಹಾರ ಮೊತ್ತ (ರೂ.ಗಳಲ್ಲಿ)
1	410/2000	3926/05	12/3A	3-00	813785
2	412/2000	3932/05	12/4	3-01	820562
3	416/2000	3936/05	12/5A	2-00	542689
	ಒಟ್ಟು				**2177036**

ಉಚ್ಚ ನ್ಯಾಯಾಲಯದ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಲು ಇದು ಅರ್ಹವಲ್ಲವೆಂದು ಕಾನೂನು ಇಲಾಖೆಯ ಪತ್ರ ಸಂಖ್ಯೆ: ಲಾ 536 ಎಲ್‌ಎಸ್‌ಪಿ 2009, ದಿನಾಂಕ: 04-06-2009, ಲಾ 471 ಎಲ್‌ಎಸ್‌ಪಿ 2009, ದಿನಾಂಕ: 15-05-2009 ಮತ್ತು ಲಾ 1974 ಎಲ್‌ಎಸ್‌ಪಿ 2006, ದಿನಾಂಕ: 29-11-2006ರಲ್ಲಿ ಅಭಿಪ್ರಾಯಪಟ್ಟಿರುತ್ತಾರೆ.

ಮೇಲ್ಕಂಡ ಎಲ್ಲಾ ಅಂಶಗಳನ್ನು ಪರಿಶೀಲಿಸಿ, ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಸನೀಇ 108 ಭೂಸ್ವಾಪ್ರ 2010, ಬೆಂಗಳೂರು, ದಿನಾಂಕ: 24ನೇ ಮಾರ್ಚ್ 2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕು ನಿಡಶೇಷಿ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಬೆಂಚಮಟ್ಟಿ ಗ್ರಾಮದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯ ಎಲ್.ಎ.ಸಿ. ಸಂಖ್ಯೆ: 410, 412, 416/2000 ರಲ್ಲಿ ನೀಡಿರುವ ಆದೇಶದಂತೆ ಪರಿಹಾರ ಪಾವತಿಸಲು ರೂ. 21,77,036-00ಗಳನ್ನು (ಇಪ್ಪತ್ತೊಂದು ಲಕ್ಷದ ಎಪ್ಪತ್ತೇಳು ಸಾವಿರದ ಮೂವತ್ತಾರು ರೂ.ಗಳು ಮಾತ್ರ) ಈ ಕೆಳಕಂಡ ಷರತ್ತುಗೊಳಪಟ್ಟು ನೀಡಲು ಅನುಮೋದನೆ ನೀಡಿದೆ.

1. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು. ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.
2. ಹೆಚ್ಚುವರಿ ಪರಿಹಾರಧನದ ಪಾವತಿಗೆ ಮೊದಲು ಜಮೀನಿನ ಹಕ್ಕುದಾರಿಕೆ ಬಗ್ಗೆ ಖಚಿತಪಡಿಸಿಕೊಂಡು ಪಾವತಿಸತಕ್ಕದ್ದು.
3. ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ವರ್ಗಾವಣೆ ಬಗ್ಗೆ ಕೂಡಲೆ ಕ್ರಮ ಕೈಗೊಳ್ಳತಕ್ಕದ್ದು.

ಈ ವೆಚ್ಚವನ್ನು 2010-11ನೇ ಸಾಲಿನ ಆಯವ್ಯಯದ **ಲೆಕ್ಕಶೀರ್ಷಿಕೆ "4702-00-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಮುಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು"** ಅಡಿಯಲ್ಲಿ ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ: ಆಇ 01 ಬಿಎಸ್‌ಜಿ 2011, ದಿನಾಂಕ 19-03-2011 ರಲ್ಲಿ ಒದಗಿಸಿರುವ ಪೂರಕ ಅನುದಾನ-III ರಿಂದ ಭರಿಸಿಕೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2010, ದಿನಾಂಕ 20-10-2010ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಗೋಪಾಲ್

ಪಿಆರ್.ನಂ. 905

ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಜಲಸಂಪನ್ಮೂಲ ಸಚಿವಾಲಯ

ವಿಷಯ : ಗುಲ್ಬರ್ಗಾ ಜಿಲ್ಲೆ ಚಿಂಚೋಳಿ ತಾಲ್ಲೂಕು ಸಾಲೇಬೀರನಹಳ್ಳಿ ಸಣ್ಣ ನೀರಾವರಿ ಕೆರೆ ಕಾಲುವೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಂಡ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶಾನುಸಾರ ಪರಿಹಾರ ಪಾವತಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಅವರ ಪತ್ರ ಸಂಖ್ಯೆ: ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/2010-11/47, ದಿನಾಂಕ 04-01-2011.

ಪ್ರಸ್ತಾವನೆ:

ಗುಲ್ಬರ್ಗಾ ಜಿಲ್ಲೆ, ಚಿಂಚೋಳಿ ತಾಲ್ಲೂಕು ಸಾಲೇಬೀರನಹಳ್ಳಿ ಸಣ್ಣ ನೀರಾವರಿ ಕೆರೆ ಕಾಲುವೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಂಡ ಹಸರಗುಂಡಗಿ ಮತ್ತು ಸಾಲೇಬೀರನಹಳ್ಳಿ ಗ್ರಾಮದ ಜಮೀನುಗಳಿಗೆ ಚಿಂಚೋಳಿ (ಹಿರಿಯ ಶ್ರೇಣಿ) ಸಿವಿಲ್ ನ್ಯಾಯಾಲಯವು ನೀಡಿರುವ ತೀರ್ಪಿನನುಸಾರ ಹೆಚ್ಚುವರಿ ಪರಿಹಾರ ಪಾವತಿಸಲು ರೂ. 8,32,799/-ಗಳ ಅನುದಾನ ಬಿಡುಗಡೆ ಮಾಡುವಂತೆ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ಉತ್ತರ) ವಲಯ, ಬಿಜಾಪುರ, ಇವರು ಮೇಲೆ ಓದಲಾದ ದಿನಾಂಕ: 08-12-2010ರ ಪತ್ರದಲ್ಲಿ ಕೋರಿರುತ್ತಾರೆ.

ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ದಿನಾಂಕ: 05-04-2007 ರಂದು ಹೊರಡಿಸಿದೆ.

ಭೂಸ್ವಾಧೀನಾಧಿಕಾರಿಗಳು ಐತೀರ್ಪು ಹೊರಡಿಸಿದ ದಿನಾಂಕ: 12-11-2008.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂ ಮಾಲೀಕರು ಐತೀರ್ಪಿನಂತೆ ಹಣ ಪಡೆದ ಇನ್ನೂ ಹೆಚ್ಚಿನ ಪರಿಹಾರ ನೀಡುವಂತೆ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಸಿವಿಲ್ ನ್ಯಾಯಾಲಯ (ಹಿರಿಯ ಶ್ರೇಣಿ) ಚಿಂಚೋಳಿ ಇಲ್ಲಿ ದಾಖಲಿಸಿದ್ದ ಎಲ್.ಎ.ಸಿ. ಪ್ರಕರಣಗಳಲ್ಲಿ ನ್ಯಾಯಾಲಯವು ಪ್ರತಿ ಎಕರೆಗೆ ರೂ. 1,57,000/-ಗಳಿಗೆ ಹೆಚ್ಚಿಸಿದೆ. ಈ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸುವ ಅಗತ್ಯವಿಲ್ಲವೆಂದು ಕಂದಾಯ ಇಲಾಖೆಯು ಪತ್ರ ಸಂಖ್ಯೆ: ಆರ್‌ಡಿ 459 ಎಲ್‌ಸಿಜಿ 10, ಆರ್‌ಡಿ 460 ಎಲ್‌ಸಿಜಿ 10 ಆರ್‌ಡಿ 414 ಎಲ್‌ಸಿಜಿ 10 ಆರ್‌ಡಿ. 425 ಎಲ್‌ಸಿಜಿ 10, ಆರ್‌ಡಿ 458 ಎಲ್‌ಸಿಜಿ 10, ದಿನಾಂಕ: 09-06-2010ರ ಪತ್ರಗಳಲ್ಲಿ ಅಭಿಪ್ರಾಯ ನೀಡಿದೆ.

ಪಾವತಿಸಬೇಕಾದ ಪರಿಹಾರ ಮೊತ್ತದ ವಿವರ ಕೆಳಕಂಡಂತಿದೆ:

ಕ್ರಮ ಸಂಖ್ಯೆ	ಎಲ್‌ಎಸಿ ಸಂಖ್ಯೆ	ಸ.ನಂ	ಗ್ರಾಮ	ವಿಸ್ತೀರ್ಣ ಎ-ಗುಂ	ಪರಿಹಾರ ಮೊತ್ತ (ರೂ.ಗಳಲ್ಲಿ)
1	58/09	67	ಹಸರಗುಂಡಗಿ	0-20	114177
2	59/09	67	ಹಸರಗುಂಡಗಿ	0-35	199584
3	60/09	67	ಹಸರಗುಂಡಗಿ	0-35	199584
4	62/09	23/1	ಸಾಲೇಬೀರನಹಳ್ಳಿ	0-14	80013
5	65/09	101/2/4 102/2/4,	ಸಾಲೇಬೀರನಹಳ್ಳಿ	1-02	239441
			ಒಟ್ಟು		**832799**

ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ನ್ಯಾಯಾಲಯದ ಆದೇಶದಂತೆ ಪರಿಹಾರ ನೀಡಲು ನಿರ್ಧರಿಸಿ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಸನೀಇ 18 ಭೂಸ್ವಾಪ್ರ 2011, ಬೆಂಗಳೂರು, ದಿನಾಂಕ: 24-03-2011

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದ ಗುಲ್ಬರ್ಗಾ ಜಿಲ್ಲೆ, ಚಿಂಚೋಳಿ ತಾಲ್ಲೂಕು ಸಾಲೇಬೀರನಹಳ್ಳಿ ಸಣ್ಣ ನೀರಾವರಿ ಕೆರೆಯ ಬಲದಂಡೆ ಕಾಲುವೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಂಡ ಹಸರಗುಂಡಗಿ ಮತ್ತು ಸಾಲೇಬೀರನಹಳ್ಳಿ ಗ್ರಾಮಕ್ಕೆ ಸೇರಿದ ವಿವಿಧ ಸರ್ವೆ ನಂಬರ್‌ಗಳ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣಗಳಲ್ಲಿ ನೀಡಿದ ತೀರ್ಪಿನಂತೆ ರೂ. 8,28,983-00 (ಎಂಟು ಲಕ್ಷದ ಇಪ್ಪತ್ತೆಂಟು ಸಾವಿರದ ಒಂಭೈನೂರ ಎಂಭತ್ತೂರು ರೂಪಾಯಿಗಳು ಮಾತ್ರ)ಗಳ ಪರಿಹಾರ ಪಾವತಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಅನುಮೋದನೆ ನೀಡಿದೆ.

1. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು. ಹಾಗೂ ಎರಡನೇ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.
2. ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ. ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ವೆಚ್ಚವನ್ನು 2010-11ನೇ ಸಾಲಿನ ಆಯವ್ಯಯದ **ಲೆಕ್ಕಶೀರ್ಷಿಕೆ "4702-00-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಮುಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು"** ಅಡಿಯಲ್ಲಿ ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ: ಆಇ 01 ಬಿಎಸ್‌ಜಿ 2011, ದಿನಾಂಕ 19-03-2011 ರಲ್ಲಿ ಒದಗಿಸಿರುವ ಪೂರಕ ಅನುದಾನ-III ರಿಂದ ಭರಿಸಿಕೊಳ್ಳತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2010, ದಿನಾಂಕ 20-10-2010ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ನೀಡಿರುವ ಅಧಿಕಾರ ಪ್ರತ್ಯಾಯೋಜನೆ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಗೋಪಾಲ್

ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಪಿಆರ್.ನಂ. 906

ಜಲಸಂಪನ್ಮೂಲ ಸಚಿವಾಲಯ

ವಿಷಯ : ಗುಲ್ಬರ್ಗಾ ಜಿಲ್ಲೆ, ಚಿಂಚೋಳಿ ತಾಲ್ಲೂಕು ಕೊಡ್ಲಿ ಅಲ್ಲಾಪುರ ಗ್ರಾಮದ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರ ಪಾವತಿಸುವ ಬಗ್ಗೆ.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ಪತ್ರ ಸಂಖ್ಯೆ: ಮುಇಂ/ಸನೀ(ಉ)ವ/ಬಿಜೆಪಿ/ಭೂಸ್ವಾಪ್ರ/2010-11/915, ದಿನಾಂಕ 22-02-2011.

ಪ್ರಸ್ತಾವನೆ:

ಗುಲ್ಬರ್ಗಾ ಜಿಲ್ಲೆ, ಚಿಂಚೋಳಿ ತಾಲ್ಲೂಕು ಕೊಡ್ಲಿ ಅಲ್ಲಾಪುರ ಗ್ರಾಮದ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಚಿಂಚೋಳಿ ಸಿವಿಲ್ ನ್ಯಾಯಾಲಯದ ಆದೇಶದಂತೆ ಪರಿಹಾರ ಪಾವತಿಸಲು ರೂ. 31,47,649-00ಗಳನ್ನು ಬಿಡುಗಡೆ ಮಾಡುವಂತೆ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ, (ಉತ್ತರ) ವಲಯ ಬಿಜಾಪುರ ಇವರು ಮೇಲೆ ಓದಲಾದ ದಿನಾಂಕ: 22-02-2011ರ ಪತ್ರದಲ್ಲಿ ಕೋರಿದ್ದಾರೆ. ತೀರ್ಪು ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ:

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ 04-04-1995
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ: 02-12-1997.

ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಸೇಡಂ ಸಿವಿಲ್ ನ್ಯಾಯಾಲಯ (ಹಿರಿಯ ವಿಭಾಗ)ದಲ್ಲಿ ಎಲ್.ಎ.ಸಿ. ಪ್ರಕರಣಗಳನ್ನು ದಾಖಲಿಸಿದ್ದು, ಸಿವಿಲ್ ನ್ಯಾಯಾಲಯ ಪ್ರತಿ ಎಕರೆಗೆ ರೂ. 34,650/-ಗಳ ಬೆಲೆಯನ್ನು ನಿಗದಿಪಡಿಸಿ, ಈ ಮೊತ್ತದ ಮೇಲೆ ಶಾಸನಬದ್ಧ ಇತರೆ ಸವಲತ್ತುಗಳೊಂದಿಗೆ ಪಾವತಿಸಲು ಆದೇಶಿಸಿದೆ.

ಸಿವಿಲ್ ನ್ಯಾಯಾಲಯದ ತೀರ್ಪಿಗೆ ತೃಪ್ತರಾಗದ ಭೂಮಾಲೀಕರು ಇನ್ನೂ ಹೆಚ್ಚಿನ ಪರಿಹಾರ ಧನಕ್ಕಾಗಿ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿ (ಎಂಎಫ್ಎ) ದಾಖಲಿಸಿದ್ದು ಮಾನ್ಯ ನ್ಯಾಯಾಲಯವು ಮೇಲ್ಮನವಿಯ ಅಡ್ಡ ತಕರಾರು ಅರ್ಜಿಗಳಲ್ಲಿ ಸಿವಿಲ್ ನ್ಯಾಯಾಲಯವು ಪ್ರತಿ ಎಕರೆಗೆ ನಿಗದಿಪಡಿಸಿದ್ದ ರೂ. 30,900/-ಗಳಿಂದ ರೂ. 47,880-00ಗಳಿಗೆ ಹೆಚ್ಚಿಸಿ ಹಾಗೂ ಭೂಸ್ವಾಧೀನ ಕಾಯ್ದೆಯಡಿಯ ಇತರೆ ಸವಲತ್ತುಗಳನ್ನು ನೀಡಲು ತೀರ್ಪು ನೀಡಿದೆ. ಎಂ.ಎಫ್.ಎ. ಪ್ರಕರಣಗಳ ವಿರುದ್ಧ ಮೇಲ್ಮನವಿ ಸಲ್ಲಿಸದಿರಲು ಕಾನೂನು ಇಲಾಖೆಯ ಪತ್ರ ಸಂಖ್ಯೆ: ಲಾ 681 ಎಲ್ಎಸ್‌ಪಿ 2008, ದಿನಾಂಕ 05-05-2008ರಲ್ಲಿ ಅಭಿಪ್ರಾಯ ನೀಡಿದೆ. ಪಾವತಿಸಬೇಕಾದ ಪರಿಹಾರ ಧನದ ವಿವರ ಕೆಳಕಂಡಂತಿದೆ:

ಕ್ರಮ ಸಂಖ್ಯೆ	ಎಲ್ಎಸಿ ಸಂಖ್ಯೆ	ಎಂಎಫ್ಎ ಸಂಖ್ಯೆ	ಕೊಡ್ಲಿ ಅಲ್ಲಾಪುರ ಗ್ರಾಮದ ಸ.ನಂ.	ವಿಸ್ತೀರ್ಣ ಎ-ಗುಂ	ಮೊತ್ತ (ರೂ.ಗಳಲ್ಲಿ)
1	412/02	7349/06	37	3-20	210537
2	413/02	7350/06	41	7-30	466185
3	414/02	7351/06	42	5-00	300764
4	415/02	7352/06	37	3-20	210534
5	417/02	7353/06	39	2-32	769959
6	418/02	7354/06	42	5-00	300764
7	419/02	7355/06	36/B	3-33	230087
	ಒಟ್ಟು				**2488830**

***ಪರಿಹಾರ ಧನದ ಮೊತ್ತದಲ್ಲಿ ನ್ಯಾಯಾಲಯದಲ್ಲಿ ವೆಚ್ಚ ಸಹ ಸೇರಿದೆ.**

ವಿಷಯವನ್ನು ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಸನೀಇ 33 ಭೂಸ್ವಾಪ್ರ 2011, ಬೆಂಗಳೂರು, ದಿನಾಂಕ: 24ನೇ ಮಾರ್ಚ್ 2011

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಗುಲ್ಬರ್ಗಾ ಜಿಲ್ಲೆ ಚಿಂಚೋಳಿ ತಾಲ್ಲೂಕು ಕೊಡ್ಲಿ ಅಲ್ಲಾಪುರ ಗ್ರಾಮದ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಂಡ ಕೊಡ್ಲಿ ಅಲ್ಲಾಪುರ ಗ್ರಾಮಕ್ಕೆ ಸೇರಿದ ಪ್ರಸ್ತಾವನೆಯಲ್ಲಿ ನಮೂದಿಸಿರುವ ಸರ್ವೆ ನಂಬರ್‌ಗಳ ಜಮೀನುಗಳಿಗೆ ನ್ಯಾಯಾಲಯದ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿಯ ಸೂಚನೆಗಳಂತೆ ಲೆಕ್ಕಾಹಾಕಿದ ಪರಿಹಾರ ಧನ ಮೊತ್ತ ರೂ. 24,88,830-00 ಗಳನ್ನು (ಇಪ್ಪತ್ನಾಲ್ಕು ಲಕ್ಷದ ಎಂಬತ್ತೆಂಟು ಸಾವಿರದ ಎಂಟುನೂರ ಮೂವತ್ತು ರೂ.ಗಳು ಮಾತ್ರ) ಪಾವತಿಸಲು ಈ ಕೆಳಕಂಡ ಷರತ್ತುಗಳಗೊಳಪಟ್ಟು ಸರ್ಕಾರವು ಅನುಮೋದನೆ ನೀಡಿದೆ.

1. ಹಣ ಪಾವತಿಗೆ ಮೊದಲು ಲೆಕ್ಕಾಚಾರ ತಃಖ್ತೆಯನ್ನು ಮತ್ತೊಮ್ಮೆ ದೃಢೀಕರಿಸಿಕೊಂಡು ಪಾವತಿಸತಕ್ಕದ್ದು. ಹಾಗೂ ಎರಡನೇ ಬಾರಿ ಹೆಚ್ಚಿನ ಮೊತ್ತ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.
2. ಹೆಚ್ಚುವರಿ ಪರಿಹಾರ ಪಾವತಿಗೆ ಮೊದಲು ಜಮೀನಿನ ಹಕ್ಕುದಾರಿಕೆ ಬಗ್ಗೆ ಮತ್ತೊಮ್ಮೆ ಖಚಿತಪಡಿಸಿಕೊಂಡು ಪಾವತಿಸತಕ್ಕದ್ದು.
3. ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ. ಕೂಡಲೇ ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ವರ್ಗಾವಣೆ ಬಗ್ಗೆ ಕೂಡಲೆ ಕ್ರಮ ಕೈಗೊಳ್ಳತಕ್ಕದ್ದು.

ಈ ವೆಚ್ಚವನ್ನು 2010-11ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ "4702-00-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಮುಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು" ಅಡಿಯಲ್ಲಿ ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ: ಆಇ 01 ಬಿಎಸ್‌ಜಿ 2011, ದಿನಾಂಕ 19-03-2011 ರಲ್ಲಿ ಒದಗಿಸಿರುವ ಪೂರಕ ಅನುದಾನ-III ರಿಂದ ಭರಿಸಿಕೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2010, ದಿನಾಂಕ 20-10-2010ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಗೋಪಾಲ್

ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಪಿಆರ್.ನಂ. 907

ಜಲಸಂಪನ್ಮೂಲ ಸಚಿವಾಲಯ

ವಿಷಯ : ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು ರಾವುತನಹಳ್ಳ ಕೆರೆ ನೀರಾವರಿ ಯೋಜನೆಗಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಭೂಸ್ವಾಧೀನ ಕಾಯ್ದೆ ಕಲಂ 28(ಎ)ರ ಐತೀರ್ಪಿನಂತೆ ಹೆಚ್ಚಿನ ಪರಿಹಾರ ಪಾವತಿಸುವ ಬಗ್ಗೆ.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಮುಸದ/ಲೆಶಾಚಿ/ಲೆಸ-1-3/ಭೂಸ್ವಾಧೀನ/2010-11/1846, ದಿನಾಂಕ 18-08-2010.

ಪ್ರಸ್ತಾವನೆ:

ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು ರಾವುತನಹಳ್ಳ ಕೆರೆ ನೀರಾವರಿ ಯೋಜನೆಗಾಗಿ ಸ್ವಾಧೀನಪಡಿಸಿಕೊಳ್ಳಲಾದ ಕಲ್ಲನಕುಪ್ಪೆ ಗ್ರಾಮಕ್ಕೆ ಸೇರಿದ ಸ.ನಂ. 26 ಮತ್ತು 27ರ 4-22 ಎಕರೆ ಜಮೀನಿಗೆ ವಿಶೇಷ ಭೂಸ್ವಾಧೀನಾಧಿಕಾರಿ, ರಾಮನಗರ ಜಿಲ್ಲೆ, ರಾಮನಗರ ಇವರು ಭೂಸ್ವಾಧೀನ ಕಾಯ್ದೆ ಕಲಂ 28(ಎ)ರಡಿ ಹೊರಡಿಸಿದ ಐತೀರ್ಪಿನಂತೆ ಪರಿಹಾರ ಧನ ಪಾವತಿಸಲು ರೂ. 12,41,454-00ಗಳನ್ನು ಬಿಡುಗಡೆ ಮಾಡುವಂತೆ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ, ಇವರು ಮೇಲೆ ಓದಲಾದ ದಿನಾಂಕ 18-08-2010ರ ಪತ್ರದಲ್ಲಿ ಕೋರಿರುತ್ತಾರೆ.

ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕಿನ ರಾವುತನಹಳ್ಳ ಕೆರೆ ನೀರಾವರಿ ಯೋಜನೆಗಾಗಿ ಅಗತ್ಯವಿದ್ದ ಜಮೀನುಗಳ ಸ್ವಾದೀನಕ್ಕಾಗಿ 4(1)ರ ಅಧಿಸೂಚನೆಯನ್ನು ದಿನಾಂಕ 07-03-85ರಂದು ಹೊರಡಿಸಿದೆ. ಭೂಸ್ವಾಧೀನಪಡಿಸಿಕೊಂಡ ಜಮೀನಿಗೆ ಐತೀರ್ಪನ್ನು ದಿನಾಂಕ 24-08-87ರಂದು ಹೊರಡಿಸಿದ್ದು, ಪ್ರತಿ ಎಕರೆ ಖುಷ್ಕಿ ಜಮೀನಿಗೆ ರೂ. 10,000-00 ನಿಗದಿ ಮಾಡಲಾಗಿದೆ.

ಐತೀರ್ಪಿನಂತೆ ಪರಿಹಾರ ಪಡೆದ ಕಲ್ಲನಕುಪ್ಪೆ ಗ್ರಾಮದ ಸ.ನಂ. 36ರ 2-00 ಎಕರೆ ಜಮೀನಿನ ಭೂಮಾಲೀಕರು ಇನ್ನೂ ಹೆಚ್ಚಿನ ಪರಿಹಾರಕ್ಕಾಗಿ ಹೆಚ್ಚುವರಿ ಸಿವಿಲ್ ನ್ಯಾಯಾಲಯ (ಹಿರಿಯ ವಿಭಾಗ) ರಾಮನಗರ ಇಲ್ಲಿ ಎಲ್.ಎ.ಸಿ. ಸಂಖ್ಯೆ:29/88ನ್ನು ಸಲ್ಲಿಸಿದ್ದು, ನ್ಯಾಯಾಲಯವು ಜಮೀನುಗಳ ಮಾರುಕಟ್ಟೆ ಬೆಲೆಯನ್ನು ಪ್ರತಿ ಎಕರೆಗೆ ರೂ. 50,000/-ಗಳಿಗೆ ಹೆಚ್ಚಿಸಿ ಭೂಸ್ವಾಧೀನ ಕಾಯ್ದೆಯ ಇತರೆ ಸವಲತ್ತುಗಳೊಂದಿಗೆ ಪರಿಹಾರ ನೀಡುವಂತೆ ದಿನಾಂಕ: 19-09-09ರಂದು ಆದೇಶಿಸಿದೆ. ಈ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಲು ಇದು ಅರ್ಹ ಪ್ರಕರಣವಲ್ಲವೆಂದು ಕಂದಾಯ ಇಲಾಖೆ ಪತ್ರ ಸಂಖ್ಯೆ: ಆರ್‌ಡಿ 261 ಎಲ್‌ಸಿಎ 2009, ದಿನಾಂಕ 24-12-2009ರಂದು ಅಭಿಪ್ರಾಯ ಪಟ್ಟಿರುತ್ತಾರೆ.

ಈ ಆದೇಶ ಉಲ್ಲೇಖಿತ ಭೂಸ್ವಾಧೀನಕ್ಕೊಳಪಟ್ಟ ಕಲ್ಲಕುಪ್ಪೆ ಗ್ರಾಮದ ಸ.ನಂ.26ರ 0-25 ಎಕರೆ ಹಾಗೂ ಸರ್ವೆ ನಂ.27ರ 3-37ರ ಜಮೀನಿನ ಭೂಮಾಲೀಕರು ಹೆಚ್ಚಿನ ಪರಿಹಾರಕ್ಕೆ ಸಲ್ಲಿಸಿದ್ದ ಅರ್ಜಿಯನ್ನು ಪರಿಶೀಲಿಸಿ ವಿಶೇಷ ಭೂಸ್ವಾಧೀನಾಧಿಕಾರಿಗಳು ರಾಮನಗರ ಜಿಲ್ಲೆ, ರಾಮನಗರ ಇವರು ಭೂಸ್ವಾಧೀನ ಕಾಯ್ದೆ ಕಲಂ 28(ಎ)ರಡಿ ದಿನಾಂಕ 06-07-2010ರಂದು ಐತೀರ್ಪನ್ನು ಹೊರಡಿಸಿರುತ್ತಾರೆ. ಐತೀರ್ಪಿನಂತೆ ಪಾವತಿಸಬೇಕಾದ ಸ.ನಂ.ವಾರು ಮೊತ್ತದ ವಿವರ ಕೆಳಕಂಡಂತಿದೆ:

ಕ್ರಮ ಸಂಖ್ಯೆ	ಸ.ನಂ.	ವಿಸ್ತೀರ್ಣ ಎ-ಗುಂ.	ಗ್ರಾಮ	ಪರಿಹಾರ ಮೊತ್ತ (ರೂ.ಗಳಲ್ಲಿ)
1	26	0-25	ಕಲ್ಲಕುಪ್ಪೆ	12,41,454
2	27	3-37	ಕಲ್ಲಕುಪ್ಪೆ	
	ಒಟ್ಟು			12,41,454

ಮೇಲ್ಕಂಡ ಎಲ್ಲಾ ಅಂಶಗಳನ್ನು ಪರಿಶೀಲಿಸಿ, ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಸನೀಇ 127 ಭೂಸ್ವಾಪ್ರ 2010, ಬೆಂಗಳೂರು, ದಿನಾಂಕ: 24ನೇ ಮಾರ್ಚ್ 2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು ರಾವುತನಹಳ್ಳ ಕೆರೆ ನೀರಾವರಿ ಯೋಜನೆಗಾಗಿ ಸ್ವಾಧೀನಪಡಿಸಿಕೊಳ್ಳಲಾದ ಕಲ್ಲನಕುಪ್ಪೆ ಗ್ರಾಮದ ಪ್ರಸ್ತಾವನೆಯಲ್ಲಿ ತಿಳಿಸಿರುವ ಸರ್ವೆ ನಂಬರ್‌ಗಳ ಜಮೀನುಗಳಿಗೆ ವಿಶೇಷ ಭೂಸ್ವಾಧೀನಾಧಿಕಾರಿ, ರಾಮನಗರ ಜಿಲ್ಲೆ, ರಾಮನಗರ ಇವರು ಭೂಸ್ವಾಧೀನ ಕಾಯ್ದೆ ಕಲಂ 28(ಎ)ರಡಿ ಹೊರಡಿಸಿದ ಐತೀರ್ಪಿನಂತೆ ರೂ. 12,41,454-00ಗಳ (ಹನ್ನೆರಡುಲಕ್ಷದ ನಲವತ್ತೊಂದು ಸಾವಿರದ ನಾನೂರ ಐವತ್ನಾಲ್ಕು ರೂ.ಗಳು ಮಾತ್ರ) ಪರಿಹಾರ ಪಾವತಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡಿದೆ.

1. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು. ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.
2. ಹೆಚ್ಚುವರಿ ಪರಿಹಾರ ಪಾವತಿಗೆ ಮೊದಲು ಜಮೀನಿನ ಹಕ್ಕುದಾರಿಕೆ ಬಗ್ಗೆ ಮತ್ತೊಮ್ಮೆ ಖಚಿತಪಡಿಸಿಕೊಂಡು ಪಾವತಿಸತಕ್ಕದ್ದು.
3. ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ಕೂಡಲೆ ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ವೆಚ್ಚವನ್ನು 2010-11ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ "4702-00-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಮುಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು" ಅಡಿಯಲ್ಲಿ ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ: ಆಇ 01 ಬಿಎಸ್‌ಜಿ 2011, ದಿನಾಂಕ 19-03-2011 ರಲ್ಲಿ ಒದಗಿಸಿರುವ ಪೂರಕ ಅನುದಾನ-III ರಿಂದ ಭರಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2010, ದಿನಾಂಕ 20-10-2010ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಗೋಪಾಲ್

ಪಿಆರ್.ನಂ. 908

ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಜಲಸಂಪನ್ಮೂಲ ಸಚಿವಾಲಯ

ವಿಷಯ : ಯಾದಗೀರ್ ಜಿಲ್ಲೆ, ಸುರಪೂರ ತಾಲ್ಲೂಕು, ಭೈರಮಡ್ಡಿ ಸಣ್ಣ ನೀರಾವರಿ ಯೋಜನೆಗಾಗಿ ಸ್ವಾಧೀನಪಡಿಸಿಕೊಂಡ ಜಮೀನುಗಳಿಗೆ ನ್ಯಾಯಾಲಯದ ಆದೇಶಾನುಸಾರ ಹೆಚ್ಚುವರಿ ಪರಿಹಾರ ಪಾವತಿಸುವ ಬಗ್ಗೆ.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ಉತ್ತರ) ವಲಯ, ಬಿಜಾಪುರ ಇವರ ಪತ್ರ ಸಂಖ್ಯೆ: ಮುಇಂ/ಸನೀ/(ಉ)ವ/ಬಿಜಾ/ಭೂಸ್ವಾಪ್ರ/2010-11/6438, ದಿನಾಂಕ 08-12-2010.

ಪ್ರಸ್ತಾವನೆ:

ಯಾದಗೀರ ಜಿಲ್ಲೆ, ಸುರಪೂರ ತಾಲ್ಲೂಕು, ಭೈರಮಡ್ಡಿ ಸಣ್ಣ ನೀರಾವರಿ ಯೋಜನೆಗಾಗಿ ಸ್ವಾಧೀನಪಡಿಸಿಕೊಂಡ ಜಮೀನುಗಳಿಗೆ ನ್ಯಾಯಾಲಯವು ನೀಡಿರುವ ತೀರ್ಪಿನನುಸಾರ ಹೆಚ್ಚುವರಿ ಪರಿಹಾರ ಪಾವತಿಸಲು ಅನುದಾನ ಬಿಡುಗಡೆ ಮಾಡುವಂತೆ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ಉತ್ತರ) ವಲಯ, ಬಿಜಾಪುರ ಇವರು ಮೇಲೆ ಓದಲಾದ ದಿನಾಂಕ 08-12-2010ರ ಪತ್ರದಲ್ಲಿ ಕೋರಿರುತ್ತಾರೆ.

- ಈ ಪ್ರಕರಣದಲ್ಲಿ ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆಯನ್ನು ದಿನಾಂಕ 11-01-2007 ರಂದು ಹೊರಡಿಸಿದೆ.
- ಭೂಸ್ವಾಧೀನಾಧಿಕಾರಿಗಳು ದಿನಾಂಕ 12-10-2007ರಂದು ರಚಿಸಿದ ಐತೀರ್ಪಿನಲ್ಲಿ ಈ ಜಮೀನಿಗೆ ಪ್ರತಿ ಎಕರೆಗೆ ರೂ. 45,000/- ಮಾರುಕಟ್ಟೆ ಬೆಲೆ ನಿಗದಿ ಮಾಡಿದ್ದಾರೆ.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಮಾಲೀಕರು ಐತೀರ್ಪಿನಂತೆ ಪರಿಹಾರ ಪಡೆದು ಇನ್ನೂ ಹೆಚ್ಚಿನ ಪರಿಹಾರಕ್ಕಾಗಿ ಭೂಸ್ವಾಧೀನ ಕಾಯ್ದೆ 1894ರ ಕಲಂ 18(1)ರಡಿ ಸುರಪೂರ (ಹಿರಿಯ ಶ್ರೇಣಿ) ನ್ಯಾಯಾಲಯದಲ್ಲಿ ಎಲ್ಎಸಿ ನಂ 32/2008ನ್ನು ಸಲ್ಲಿಸಿದ್ದು. ನ್ಯಾಯಾಲಯ ದಿನಾಂಕ 11-03-2009ರಂದು ನೀಡಿದ ಆದೇಶದಲ್ಲಿ ಈ ಜಮೀನಿನ ಮಾರುಕಟ್ಟೆ ಬೆಲೆಯನ್ನು ರೂ. 67,060/-ಗಳಿಗೆ ನಿಗದಿಪಡಿಸಿದೆ. ಈ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸುವ ಅಗತ್ಯವಿಲ್ಲವೆಂದು ಕಂದಾಯ ಇಲಾಖೆಯು ಪತ್ರ ಸಂಖ್ಯೆ: ಆರ್‌ಡಿ 421 ಎಲ್ಸಿಜಿ 2009, ದಿನಾಂಕ: 07-08-2010 ರಂದು ಅಭಿಪ್ರಾಯ ನೀಡಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 160 ಭೂಸ್ವಾಪ್ರ 2010, ಬೆಂಗಳೂರು, ದಿನಾಂಕ: 24ನೇ ಮಾರ್ಚ್ 2011

ಗುಲ್ಬರ್ಗಾ ಜಿಲ್ಲೆ ಸುರಪೂರ ತಾಲ್ಲೂಕು, ಭೈರಮಡ್ಡಿ ಸಣ್ಣ ನೀರಾವರಿ ಯೋಜನೆಗಾಗಿ ಸ್ವಾಧೀನಪಡಿಸಿಕೊಂಡ ಪ್ರಸ್ತಾವನೆಯಲ್ಲಿ ವಿವರಿಸಿರುವ ಸರ್ವೆ ನಂಬರ್ ಜಮೀನಿಗೆ ಸಿವಿಲ್ ನ್ಯಾಯಾಲಯದ ತೀರ್ಪಿನಂತೆ ಪರಿಹಾರ ರೂ. 3,48,603-00 (ಮೂರು ಲಕ್ಷದ ನಲವತ್ತೆಂಟು ಸಾವಿರದ ಆರುನೂರ ಮೂರು ರೂಪಾಯಿಗಳು ಮಾತ್ರ)ಗಳನ್ನು ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ.

ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯಲ್ಲಿ ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2010-11ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ "4702-00-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಮುಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು" ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಈ ವೆಚ್ಚವನ್ನು 2010-11ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ "4702-00-800-1-00-ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಮುಗಳು-ಇತ್ಯರ್ಥ 132 ಬಂಡವಾಳ ವೆಚ್ಚಗಳು" ಅಡಿಯಲ್ಲಿ ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ: ಆಇ 01 ಬಿಎಸ್‌ಜಿ 2011, ದಿನಾಂಕ 19-03-2011 ರಲ್ಲಿ ಒದಗಿಸಿರುವ ಪೂರಕ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2010, ದಿನಾಂಕ 20-10-2010ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಗೋಪಾಲ್

ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಪಿಆರ್.ನಂ. 909

ಜಲಸಂಪನ್ಮೂಲ ಸಚಿವಾಲಯ

ವಿಷಯ : ಚಿತ್ರದುರ್ಗ ಜಿಲ್ಲೆ, ಮೊಳಕಾಲ್ಮೂರು ತಾಲ್ಲೂಕು ರಂಗಯ್ಯನದುರ್ಗ ಜಲಾಶಯದ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರ ಪಾವತಿಸುವ ಬಗ್ಗೆ.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಮುಸದ/ಲೆಶಾ/ಲೆಸ-1/ಭೂಸ್ವಾಧೀನ/2010-11/1792, ದಿನಾಂಕ 07-08-2010.

ಪ್ರಸ್ತಾವನೆ:

ಚಿತ್ರದುರ್ಗ ಜಿಲ್ಲೆ, ಮೊಳಕಾಲ್ಮೂರು ತಾಲ್ಲೂಕು ರಂಗಯ್ಯನದುರ್ಗ ಜಲಾಶಯದ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಭಟ್ರಳ್ಳಿ ಗ್ರಾಮದ ಸರ್ವೆ ನಂಬರ್‌ಗಳ ಜಮೀನುಗಳಿಗೆ ಚಳ್ಳಕೆರೆ ಸಿವಿಲ್ ನ್ಯಾಯಾಲಯವು (ಹಿರಿಯ ವಿಭಾಗ) ಎಲ್.ಎ.ಸಿ. ಪ್ರಕರಣ ಸಂಖ್ಯೆ: 07/06ರಲ್ಲಿ ದಿನಾಂಕ 18-10-2008ರಂದು ನೀಡಿರುವ ಆದೇಶದಂತೆ ಹೆಚ್ಚುವರಿ ಪರಿಹಾರ ಮೊತ್ತ ರೂ. 1,30,855-00ಗಳನ್ನು ಬಿಡುಗಡೆ ಮಾಡಲು ಮುಖ್ಯ ಇಂಜಿನಿಯರ್ ಸಣ್ಣ ನೀರಾವರಿ ದಕ್ಷಿಣ ವಲಯ, ಬೆಂಗಳೂರು ಇವರು ಮೇಲೆ ಓದಲಾದ ದಿನಾಂಕ 07-08-2010ರ ಪತ್ರದಲ್ಲಿ ಕೋರಿದ್ದಾರೆ.

ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರ ಅಧಿಸೂಚನೆ ದಿನಾಂಕ: 17–05–2001ರ ಪ್ರಕಾರ ಭೂಸ್ವಾಧೀನಕ್ಕೊಳಪಟ್ಟ ಭಟ್ರಳ್ಳಿ ಗ್ರಾಮದ ಸ.ನಂ. 15/1ಪಿ 1–21 ಎಕರೆ ಜಮೀನಿನ ಭೂಮಾಲೀಕರು ದಿನಾಂಕ: 28–01–2004ರಂದು ರಚಿಸಿದ ಐತೀರ್ಪಿನಂತೆ ಹಣ ಪಡೆದು, ಇನ್ನೂ ಹೆಚ್ಚಿನ ಪರಿಹಾರಕ್ಕಾಗಿ ಚಳ್ಳಕೆರೆ ಸಿವಿಲ್ ನ್ಯಾಯಾಲಯ (ಹಿರಿಯ ವಿಭಾಗ)ದಲ್ಲಿ ಎಲ್.ಎ.ಸಿ. ಸಂಖ್ಯೆ: 07/06ನ್ನು ಸಲ್ಲಿಸಿದ್ದು ನ್ಯಾಯಾಲಯವು ಜಮೀನಿನ ಭೂಮೌಲ್ಯವನ್ನು ಪ್ರತಿ ಎಕರೆಗೆ ರೂ. 37,200/–ಗಳಿಗೆ ಹೆಚ್ಚಿಸಿ ಆದೇಶಿಸಿದೆ. ನ್ಯಾಯಾಲಯದ ಆದೇಶದಂತೆ ಪಾವತಿಸಬೇಕಾದ ಮೊತ್ತದ ವಿವರ ಕೆಳಕಂಡಂತಿದೆ:

ಕ್ರಮ ಸಂಖ್ಯೆ	ಎಲ್.ಎ.ಸಿ. ಸಂಖ್ಯೆ	ಭಟ್ರಳ್ಳಿ ಗ್ರಾಮದ ಸ.ನಂ.	ವಿಸ್ತೀರ್ಣ ಎ–ಗುಂ	ಪರಿಹಾರ ಮೊತ್ತ (ರೂ.ಗಳಲ್ಲಿ)
1	07/06	15/1P	1–21	1,25,296–00
	ಒಟ್ಟು			**1,25,296–00**

ಈ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಲು ಇದು ಅರ್ಹವಲ್ಲವೆಂದು ಕಂದಾಯ ಇಲಾಖೆಯ ಕಾನೂನು ಕೋಶವು ಪತ್ರ ಸಂಖ್ಯೆ: ಆರ್‌ಡಿ 558 ಎಲ್‌ಸಿಎ 2008, ದಿನಾಂಕ 06–02–2010ರಲ್ಲಿ ಅಭಿಪ್ರಾಯ ನೀಡಿದೆ.

ಮೇಲ್ಕಂಡ ಎಲ್ಲಾ ಅಂಶಗಳನ್ನು ಮತ್ತು ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಸನೀಇ 122 ಭೂಸ್ವಾಪ್ರ 2010, ಬೆಂಗಳೂರು, ದಿನಾಂಕ: 24ನೇ ಮಾರ್ಚ್ 2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಚಿತ್ರದುರ್ಗ ಜಿಲ್ಲೆ, ಮೊಳಕಾಲ್ಮೂರು ತಾಲ್ಲೂಕು ರಂಗಯ್ಯನದುರ್ಗ ಜಲಾಶಯದ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಭಟ್ರಳ್ಳಿ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಸಂಖ್ಯೆ: 07/06ರಲ್ಲಿ ನೀಡಿರುವ ಆದೇಶದಂತೆ ಪರಿಹಾರ ರೂ. 1,25,296–00ಗಳನ್ನು (ಒಂದು ಲಕ್ಷದ ಇಪ್ಪತ್ತೈದು ಸಾವಿರದ ಇನ್ನೂರ ತೊಂಭತ್ತಾರು ರೂ.ಗಳು ಮಾತ್ರ) ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನೀಡಲು ಸರ್ಕಾರದ ಅನುಮೋದನೆ ನೀಡಿದೆ.

1. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತಃಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.
2. ಹೆಚ್ಚುವರಿ ಪರಿಹಾರಧನದ ಪಾವತಿಗೆ ಮೊದಲು ಜಮೀನಿನ ಹಕ್ಕುದಾರಿಕೆ ಬಗ್ಗೆ ಖಚಿತಪಡಿಸಿಕೊಂಡು ಪಾವತಿಸತಕ್ಕದ್ದು.
3. ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ವರ್ಗಾವಣೆ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳತಕ್ಕದ್ದು.

ಈ ವೆಚ್ಚವನ್ನು 2010–11ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ "4702–00–800–1–00–ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಮುಗಳು–ಇತ್ಯರ್ಥ 132 ಬಂಡವಾಳ ವೆಚ್ಚಗಳು" ಅಡಿಯಲ್ಲಿ ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ: ಆಇ 01 ಬಿಎಸ್‌ಜಿ 2011, ದಿನಾಂಕ: 19–03–2011ರಲ್ಲಿ ಒದಗಿಸಿರುವ ಪೂರಕ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2010, ದಿನಾಂಕ 20–10–2010ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಗೋಪಾಲ್

ಪಿಆರ್.ನಂ. 910

ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವಾಲಯ

ವಿಷಯ : 2010–11ನೇ ಸಾಲಿಗೆ ಡಿಆರ್‌ಡಿಎ ಆಡಳಿತ ಯೋಜನೆಯ ರಾಜ್ಯದ ಪಾಲಿನ ಎರಡನೇ ಕಂತಿನ ಅನುದಾನವನ್ನು ಬಾಗಲಕೋಟೆ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :

1. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ : ಆರ್–18014/01/2010–11 ಡಿಆರ್‌ಡಿಎ (ಎಸ್‌ಎಲ್‌ನಂ. 10) ದಿನಾಂಕ 17–5–2010.
2. ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 6 ಎಸ್‌ಜಿವೈ (ಡಿಆರ್‌ಡಿಎ) 2010, ಬೆಂಗಳೂರು, ದಿನಾಂಕ: 3–8–2010 ಮತ್ತು ದಿನಾಂಕ : 17–8–2010.
3. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ : ಆರ್–17014/10/2010–11 ಡಿಆರ್‌ಡಿಎ (ಎಸ್‌ಎಲ್‌ನಂ. 34) ದಿನಾಂಕ : 15–7–2010.
4. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ : ಆರ್–17014/10/2010–11 ಡಿಆರ್‌ಡಿಎ (ವಾಲ್ಯೂಂ. III) (ಎಸ್‌ಎಲ್‌ನಂ. 101) ದಿನಾಂಕ : 2–2–2011.
5. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ : ಆರ್–17014/10/2010–11 ಡಿಆರ್‌ಡಿಎ (ವಾಲ್ಯೂಂ. I) (ಎಸ್‌ಎಲ್‌ನಂ. 106) ದಿನಾಂಕ : 3–2–2011.
6. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ : ಆರ್–17014/10/2010–11 ಡಿಆರ್‌ಡಿಎ (ವಾಲ್ಯೂಂ. II) (ಎಸ್‌ಎಲ್‌ನಂ. 107) ದಿನಾಂಕ : 4–2–2011.
7. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ : ಆರ್–17014/10/2010–11 ಡಿಆರ್‌ಡಿಎ (ವಾಲ್ಯೂಂ. I) (ಎಸ್‌ಎಲ್‌ನಂ. 139) ದಿನಾಂಕ : 28–2–2011.

8. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ : ಆರ್-17014/10/2010-11 ಡಿಆರ್‌ಡಿಎ (ವಾಲ್ಯೂಂ. III) (ಎಸ್‌ಎಲ್‌ನಂ. 141) ದಿನಾಂಕ : 3-3-2011.
9. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ : ಆರ್-17014/10/2010-11 ಡಿಆರ್‌ಡಿಎ (ವಾಲ್ಯೂಂ. II) (ಎಸ್‌ಎಲ್‌ನಂ. 147) ದಿನಾಂಕ : 3-3-2011.
10. ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 6 ಎಸ್‌ಜಿವೈ (ಡಿಆರ್‌ಡಿಎ) 2010, ಬೆಂಗಳೂರು, ದಿನಾಂಕ : 14-3-2011 ಮತ್ತು ತಿದ್ದುಪಡಿ ದಿನಾಂಕ : 18-3-2011.
11. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ : ಆರ್-17014/10/2010-11 ಡಿಆರ್‌ಡಿಎ (ಎಸ್‌ಎಲ್‌ನಂ. 158) ಸಂದಾಯ ದಿನಾಂಕ : 15-3-2011.

ಪ್ರಸ್ತಾವನೆ :

ಡಿಆರ್‌ಡಿಎ ಆಡಳಿತ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು 75:25 ರ ಅನುಪಾತದಲ್ಲಿ ಭರಿಸುತ್ತದೆ. 2010-11ನೇ ಸಾಲಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ರಾಜ್ಯದ ಎಲ್ಲಾ 30 ಜಿಲ್ಲಾ ಪಂಚಾಯತಿಗಳಿಗೆ ಡಿಆರ್‌ಡಿಎ ಆಡಳಿತ ಯೋಜನೆಯ ಒಂದನೇ ಕಂತಿನ ಅನುದಾನ ರೂ. 9,15,02,000 ಮತ್ತು ರೂ. 3,05,00,000 ಗಳನ್ನು ಅನುಕ್ರಮವಾಗಿ ಓದಲಾಗಿದೆ 1 ರಿಂದ 3 ರವರೆಗೆ ಬಿಡುಗಡೆ ಮಾಡಿವೆ.

ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು ಓದಲಾಗಿದೆ (4) ರಿಂದ (9) ರ ಪತ್ರಗಳಲ್ಲಿ ರಾಜ್ಯದ 25 ಜಿಲ್ಲಾ ಪಂಚಾಯಿತಿಗಳಿಗೆ (ಬಾಗಲಕೋಟೆ, ಚಿಕ್ಕಮಗಳೂರು, ಗುಲ್ಬರ್ಗಾ, ಕೋಲಾರ ಮತ್ತು ಯಾದಗಿರಿ ಹೊರತುಪಡಿಸಿ) ಎರಡನೇ ಕಂತಿನ ಅನುದಾನ ರೂ. 3,16,39,000 ಗಳನ್ನು ಬಿಡುಗಡೆ ಮಾಡಿದೆ. ಇದಕ್ಕನುಗುಣವಾಗಿ ರಾಜ್ಯ ಸರ್ಕಾರ ತನ್ನ ಪಾಲಿನ ಎರಡನೇ ಕಂತಿನ ಅನುದಾನ ರೂ. 1,05,48,000 ಗಳನ್ನು ಬಿಡುಗಡೆ ಮಾಡಬೇಕಾಗಿತ್ತು. ಆದರೆ, ಹಾಸನ ಮತ್ತು ಮಂಡ್ಯ ಜಿಲ್ಲಾ ಪಂಚಾಯತಿಗಳಿಗೆ 2010-11ನೇ ಸಾಲಿನ ರಾಜ್ಯದ ಆಯವ್ಯಯದಲ್ಲಿ ಕಾಯ್ದಿರಿಸಿದ ಅನುದಾನಕ್ಕೆ ಸೀಮಿತಗೊಳಿಸಿ, ಒಟ್ಟಾರೆಯಾಗಿ ರೂ. 98,80,000 ಗಳನ್ನು ರಾಜ್ಯದ ಪಾಲಿನ ಅನುದಾನವಾಗಿ 25 ಜಿಲ್ಲಾ ಪಂಚಾಯತಿಗಳಿಗೆ ಓದಲಾಗಿದೆ (10)ರ ಆದೇಶಗಳಲ್ಲಿ ಬಿಡುಗಡೆ ಮಾಡಿದೆ.

ಓದಲಾಗಿದೆ (11) ರಂತೆ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು ಬಾಗಲಕೋಟೆ ಜಿಲ್ಲಾ ಪಂಚಾಯತಿಗೆ ಎರಡನೇ ಕಂತಿನ ಅನುದಾನವಾಗಿ ರೂ. 14,55,000 ಗಳನ್ನು ಸಂದಾಯ ಮಾಡಿದ್ದು, ಇದಕ್ಕನುಗುಣವಾಗಿ ರಾಜ್ಯ ಸರ್ಕಾರವು ತನ್ನ ಪಾಲಿನ ಎರಡನೇ ಕಂತಿನ ಅನುದಾನ ರೂ. 4,85,000 ಗಳನ್ನು ಬಿಡುಗಡೆ ಮಾಡಬೇಕಾಗಿದೆ ಆದುದರಿಂದ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 6 ಎಸ್‌ಜಿವೈ (ಡಿಆರ್‌ಡಿಎ) 2010, ಬೆಂಗಳೂರು, ದಿನಾಂಕ : 25-3-2011

ರಾಜ್ಯ ಸರ್ಕಾರವು, ಡಿಆರ್‌ಡಿಎ ಆಡಳಿತ ಯೋಜನೆಯಡಿ ಎರಡನೇ ಕಂತಿನ ಅನುದಾನ ರೂ. 4,85,000 ಗಳನ್ನು (ರೂ. ನಾಲ್ಕು ಲಕ್ಷದ ಎಂಬತ್ತೈದು ಸಾವಿರ ಮಾತ್ರ) ಬಾಗಲಕೋಟೆ ಜಿಲ್ಲಾ ಪಂಚಾಯತಿಗೆ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

ಕ್ರ.ಸಂ.	ಜಿಲ್ಲಾ ಪಂಚಾಯತಿಯ ಹೆಸರು	ಜಿ.ಪಂ. ಕೋಡ್	ಡಿ.ಡಿ.ಓ. ಕೋಡ್	ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಎರಡನೇ ಕಂತಿನ ಅನುದಾನ	ರಾಜ್ಯ ಸರ್ಕಾರವು ಬಿಡುಗಡೆ ಮಾಡುತ್ತಿರುವ ಎರಡನೇ ಕಂತಿನ ಅನುದಾನ
1	ಬಾಗಲಕೋಟೆ	461	2900ಜಜ0001	14,55,000	4,85,000

ಷರತ್ತುಗಳು :

ಡಿಆರ್‌ಡಿಎ ಆಡಳಿತ ಯೋಜನೆಯ ಕೈಪಿಡಿಯ ಮಾರ್ಗಸೂಚಿಯಂತೆ ಈ ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನವನ್ನು ಜಿಲ್ಲಾ ಪಂಚಾಯತ್ ಸಿಬ್ಬಂದಿಗಳ ವೇತನ ಹಾಗೂ ಸಾದಿಲ್ವಾರು ವೆಚ್ಚಗಳಿಗೆ ಮಾತ್ರ ಉಪಯೋಗಿಸಲು ಅವಕಾಶವಿದೆ. ಕೇಂದ್ರ ಹಾಗೂ ರಾಜ್ಯದ ಪಾಲಿನ ಅನುದಾನವು ಸೇರಿ ವೆಚ್ಚವನ್ನು ಭರಿಸಬೇಕಾಗಿರುವುದರಿಂದ ರಾಜ್ಯದ ಪಾಲಿನ ಅನುದಾನವನ್ನು ವೇತನ ಮತ್ತು ವೇತನೇತರವೆಂದು ವಿಂಗಡಿಸದೆ ಒಟ್ಟಾರೆ ರಾಜ್ಯದ ಪಾಲಿನ ಅನುದಾನವನ್ನು ಖಜಾನೆಯಿಂದ ಡ್ರಾ ಮಾಡಲು ಖಜಾನಾಧಿಕಾರಿಗಳು ಅನುಮತಿ ನೀಡತಕ್ಕದ್ದು.

ಯೋಜನೆಯ ವೆಚ್ಚವನ್ನು ಲೆಕ್ಕಶೀರ್ಷಿಕೆ : "2515 ಇತರೆ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳು 00-196-ಜಿಲ್ಲಾ ಪಂಚಾಯತ್‌ಗಳಿಗೆ ಸಹಾಯ-6-ಜಿಲ್ಲಾ ಪಂಚಾಯತ್-06-ಡಿಆರ್‌ಡಿಎ ಆಡಳಿತಾತ್ಮಕ ವೆಚ್ಚ-(ಕೇಂದ್ರ ಪುರಸ್ಕೃತ ಯೋಜನೆ) 2010-2011 (2515-00-196-6-06)" (ಲಿಂಕ್ ಕೋಡ್ 2515-00-101-0-19) ರಡಿ ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ : ಎಫ್‌ಡಿ 1 ಜಡ್‌ಪಿಎ 2007 (ಪಿ2) ದಿನಾಂಕ : 26-4-2007 ರನ್ವಯ ಜಿಲ್ಲಾ ಪಂಚಾಯತ್ ನಿಧಿ-1 ಕ್ಕೆ ಜಮೆ ಮಾಡಿಕೊಂಡು ಪೇಯಿಸ್ ರಸೀದಿಯ ಮೂಲಕ ಜಿಲ್ಲಾ ಪಂಚಾಯತಿ ನಿಧಿಯಿಂದ ಅನುದಾನವನ್ನು ಖಜಾನೆಯಿಂದ ಪಡೆದುಕೊಂಡು ಕಾರ್ಯಕ್ರಮದ ಅನುಷ್ಠಾನಕ್ಕಾಗಿ ತೆರೆದಿರುವ ಬ್ಯಾಂಕ್ ಖಾತೆಗೆ ಜಮೆ ಮಾಡಿಕೊಂಡು ವೆಚ್ಚವನ್ನು ಭರಿಸತಕ್ಕದ್ದು.

ಈ ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನದ ಆಂತರಿಕ ಲೆಕ್ಕ ಪರಿಶೋಧನೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮಾಡುವುದು.

ಮುಖ್ಯ ಲೆಕ್ಕಾಧಿಕಾರಿಗಳು, ಬಾಗಲಕೋಟೆ ಜಿಲ್ಲಾ ಪಂಚಾಯತಿ ಇವರು ಆಯಾ ತಿಂಗಳ ಪ್ರಗತಿ ವರದಿ ಹಾಗೂ ಹುದ್ದೆವಾರು ವಿವರಗಳನ್ನು ಮುಂದಿನ ತಿಂಗಳ 5 ನೇ ತಾರೀಖಿನೊಳಗೆ ನಿರ್ದೇಶಕರು (ಸ್ವಉಕಾ) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ತಪ್ಪದೇ ಕಳುಹಿಸುವುದು.

ಮುಖ್ಯ ಲೆಕ್ಕಾಧಿಕಾರಿಗಳು, ಬಾಗಲಕೋಟೆ ಜಿಲ್ಲಾ ಪಂಚಾಯತಿ ಇವರು ಹಣ ಉಪಯೋಗ ಪ್ರಮಾಣ ಪತ್ರ ಹಾಗೂ ಲೆಕ್ಕ ಪರಿಶೋಧನಾ ವರದಿಗಳನ್ನು ನಿರ್ದೇಶಕರು (ಸ್ವಉಕಾ) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ತಪ್ಪದೇ ಕಳುಹಿಸುವುದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ ಇವರ ಸಹಮತಿ ಸಂಖ್ಯೆ : ಗ್ರಾಅಪ 39 ಪಿಬಿಎಸ್ 2011, ದಿನಾಂಕ : 23-3-2011 ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಪಿ.ಎ. ಮೇಘಣ್ಣವರ
ನಿರ್ದೇಶಕರು (ಸ್ವಉಕಾ), ಹಾಗೂ ಪ.ನಿ. ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪಿ.ಆರ್. 994

HORTICULTURE SECRETARIAT

Sub: "Scheme for Integrated Farming in Coconut for Productivity/ Improvement with Coconut Development Board Assistance (100% CDB)"-Release of funds for the component of Establishment of Neera demonstration unit at Horticulture Farm, Tumbe, Dakshina Kannada district-reg.

Read :
1. GO No. ತೋಇ 74 ತೋಯೋಕಾ 2010, dated : 12-5-2010
2. Letter of Director of Horticulture No. . ತೋಇ/ತೋಬೆ/ಸತೋಅ/2 /8/2010-11, dated : 16-3-2011.

PREAMBLE :

Sanction has been accorded to the Director of Horticulture to implement a new component during 2010-11 namely, "Establishment of Neera demonstration unit at Horticulture Farm, Tumbe, Dakshina Kannada district" under the "Scheme for Integrated Farming in Coconut for Productivity/Improvement in the State" under the Head of Account 2401-00-108-2-35-100 (Financial Assistance/Relief), as per Government Order read at (1) above. The total cost of the project will be Rs. 77.35 lakhs out of which Rs. 15.04 lakhs has been Coconut Development Board share and Rs. 62.31 lakhs has been the State share.

2. The Director of Horticulture vide in his letter read at (2) above has requested the Government to release an amount Rs. 62.31 lakhs towards the State share for the project.

3. This has been examined and hence this Order :

GOVERNMENT ORDER NO. HCD 51 HPP 2010, BANGALORE, DATED : 28-3-2011

Government is pleased to release an amount of Rs. 62.00 lakhs (Rupees Sixty Two Lakhs only) as State share to the Director of Horticulture under the "Scheme for Integrated Farming in Coconut for Productivity/Improvement in the State" under the Head of Account 2401-00-108-2-35-100 (Financial Assistant/Relief) for the purpose of "Establishment of Neera demonstration unit at Horticulture Farm, Tumbe, Dakshina Kannada district".

2. The Director of Horticulture is permitted to deposit the said amount by Grant-in-Aid bill to Karnataka State Horticulture Development Agency for utilization along with Coconut Development Board share as and when released.

3. The expenditure should be incurred in accordance with the scheme as approved technically in consultation with CFTRI.

4. The Director of Horticulture must actively pursue with Government of India to get 50% of the actual project cost from Government of India.

5. This order is issused with the concurrence of Finance Department vide Note No. FD 34 Exp.4 2011, dated : 26-3-2011.

By Order and in the name of the Governor of Karnataka
B.C. Prakash
Under Secretary to Government,
Horticulture Department.

P.R. 995

INFRASTRUCTURE DEVELOPMENT SECRETARIAT

Sub: Development Tadadi Sea Port-release of funds regarding.

Read : 1. Letter No. DGM (IPD)/TP/2796/2010-11, dated 21-2-2011 from The Deputy General Manager, KSIIDC, Bangalore.

PREAMBLE :

In the above read letter, The Deputy General Manager, KSIIDC, has sent a proposal for release of funds for the following expenditure incurred/committed towards consultancy services engaged by the corporation with regard to development of Sea Port at Tadadi.

Sl.No.	Details	Amount (Rs. In Lakhs)
1	Technical Consultants	292.63
2	Consultants for Environment Impact Study	82.73
3	Amount payable to Secretarial Consultant	0.50

Expenditure incurred/to be incurred for the current year 2010-11 towards Administrative & Establishment expenses is :

Sl.No.	Details	Amount (Rs. In Lakhs)
1	Advertisement	20.00
2	Formation of SPV	5.50
3	Establishment Expenses	155.19
4	Administrative Expenses	23.40
	Total	204.09

The proposal has been examined and hence the following order.

GOVERNMENT ORDER NO. IDD 30 DIA 2011, BANGALORE, DATED : 25-3-2011

After careful consideration of the above proposal, sanction of the Government is hereby accorded for the release of Rs. 1.00 crore (Rupees One crore only) to KSIIDC under the Head of Account 5465-01-190-1-15-Karnataka Infrastructure Project Development Fund (KIPDF)-132 Capital Expenses (Plan) towards the Tadri Port related expenditure incurred by KSIIDC.

The Managing Director, KSIIDC is authorized draw the above amount on a payee's receipt duly countersigned by the Under Secretary to Government, Infrastructure Development Department.

This Order is issued in accordance with FDs Endorsement vide Note No. : FD 333 Exp-1/11 dated : 23-3-2011.

By Order and in the name of the Governor of Karnataka

K.S. VENU GOPAL

Under Secretary to Government, (I/c)

Infrastructure Development Department.

P.R. 996

INFRASTRUCTURE DEVELOPMENT SECRETARIAT

Sub: Release of funds to the High Speed Rail Link Project (HSRL).

Read :
1. G.O. No. IDD 40 DIA 2002, dated 26-12-2007.
2. G.O. No. IDD 157 DIA 2007, dated 16-1-2008.
3. G.O. No. IDD 40 DIA 2002, dated 28-2-2009.
4. G.O. No. IDD 154 DIA 2007, dated 4-3-2009.
5. G.O. No. IDD 36 DIA 2009, dated 29-8-2010.
6. G.O. No. IDD 154 DIA 2007, dated 24-7-2010.
7. G.O. No. IDD 36 DIA 2009, dated 4-3-2011.
8. G.O. No. FD 420 BRS 2010, dated 23-3-2011.

PREAMBLE :

In the G.O. dated 26-12-2007 read at Sl.No. (1) above, sanction of the Government accorded for the implementation of HSRL to Bangalore International Airport on Public Private Partnership (PPP) basis and appointing KSIIDC as Nodal Agency for the project and also authorizing KSIIDC to engage the services of Delhi Metro Rail Corporation (DMRC) as project consultant to assist the Special Purpose Vehicle (SPV) for implementation of the project KSIIDC has floated an SPV in the name of "Bangalore Airport Rail Link Limited" (BARL) for implementing the project.

2. In G.O. read at Sl.No. (2) above, sanction was accorded for release of an amount of Rs. 2.50 crores to KSIIDC towards payment of consultancy fee to assist SPV and also for SPV imcorporation and document charges etc.

3. In G.O. dated 28-2-2009 read at Sl.No. (3) above sanction of the Government was accorded to pursue with the project of High Speed Rail Link with alignment from M.G. Road (Parade Ground-CAT) to Bangalore International Airport, with a revised cost and extending the BBMP area to cover BIA area.

4. In G.O. read at Sl. No. (4) & (5) above, sanction was accorded for release of Rs. 2.00 crores to KSIIDC for making payments to different agencies towards expenditure incurred for HSRL project and amount of Rs. 570 lakhs was released to BARL towards HSRL project as equity during 2009-10.

6. In. G.O. read at Sl.No. (6) above, the fair structure to be adopted at the time of commencing the operations of the airport rail link has been determined.

7. In G.O. read at Sl.No. (7) above, an amount of Rs. 570.00 lakhs was released to BARL towards land acquisition for HSRL project during 2010-11.

8. Director (Projects) BARL in his proposal had requested for release of Rs. 50.00 crores towards land acquisition and other expenditure. Since the amount of Rs. 570.00 lakhs provided under the Head of Account **"5465-01-190-3-06-211(P) Rail Link to New Airport"** towards land acquisition for HSRL project during 2010-11 having been exhausted. Finance Department has accorded sanction for re-appropriation of a sum of Rs. 1000.00 lakhs vide G.O. read at Sl.No. (8) above.

9. The proposal has been examined by the Government and hence the following order.

GOVERNMENT ORDER NO. IDD 36 DIA 2009, BANGALORE, DATED : 25-3-2011

After careful consideration of the above proposal Government hereby accords sanction for release of Rs. 1000.00 lakhs (Rupees One Thousand Lakhs) only to BARL under the Head of Account "5465-01-190-3-06-211(P) Rail Link to New Airport" towards land acquisition and other expenditure for HSRL project during 2010-11.

2) The Director (projects), BARL is authorized to draw the above amount on a payees receipt duly countersigned by the Under Secretary to Government, Infrastructure Development Department.

3) This order issues with the concurrence of FD, vide endorsement No. FD 467 Exp-1/2011 dated 23-3-2011 and G.O. No. FD 420 BRS 2010 dated 23-3-2011.

By Order and in the name of the Governor of Karnataka

K.S. Venugopal

P.R. 997

Under Secretary to Government, (I/c)

Infrastructure Development Department.

INFRASTRUCTURE DEVELOPMENT SECRETARIAT

Sub: Fees to iDeCK for Project Management Services for the construction of Shimoga Airport.

Read : 1. Government letter No. IDD 72 DIA 2008, dated 9-7-2009.

2. Letter No. iDeCK/2009-10/733, dated 5-8-09.

3. G.O. No. IDD 86 DIA 08, dated 12-8-2009.

4. Letter No. iDeCK/IDD/2010-11/231B, dated 14-3-2011.

PREAMBLE :

In Government letter read at Sl.No. (1) above iDeCK has been appointed as consultant to oversee the project implementation including verification of the physical/financial progress of the Shimoga Airport Development Project on a monthly basis and generate periodical reports and submit to the Infrastruture Development Department for monitoring the progress.

2. Accordingly iDeCK has sent a proposal for carrying out project management services for the Shimoga Airport Development project, vide their letter dated 5-8-09 read at Sl.No. (2) above. In the above said proposal iDeCK has offered the scope of services and the terms of payment for the fees and a fee of Rs. 3,00,000/- per month was claimed by iDeCK for the assignment exclusive of applicable service taxes.

3. In G.O. dated 12-8-2009 read at (3) above, approval for scope of services and sanction for payment of fees to iDeCK for project management services for Shimoga Airport Development project at the rate not exceeding of Rs. 3,00,000/- exclusive of applicable service taxes per month for the project period of twelve months has given.

4. iDeCK in their letter read at (4) above, has sent Invoice for Rs. 7,72,100/- towards project management fees of Quality control Engineer and Project Manager for the month of August 2010, Septmber 2010, January 2011 and February 2011.

5. Government have considered the above proposal and hence this order.

GOVERNMENT ORDER NO. IDD 86 DIA 2008, BANGALORE, DATED : 21-3-2011

After careful examination of the proposal, Government hereby accords approval for the project management fees to Quality control Engineer and Project Manager for the captioned project and sanction for payment of fees to iDeCK for project management services for Shimoga Airport Development Project at the rate not exceeding of Rs. 7,72,100/-.

2. This amount shall be released under the Head of A/c 3451-00-090-1-06-059-Infrastructure Preliminary studies Other Expenditure out of the provision of 797.00 lakhs during 2010-11.

3. The Chief Financial Officer, iDeCK is authorized to draw the above amount on a payees receipt duly countersigned by the Under Secretary to Government, Infrastructure Development Department, Bangalore.

4. This order issues in accordance with the financial powers delegated to Principal Secretaries/Secretaries vide G.O. No. FD 1 TFP 2008, dated 16-5-2008.

By Order and in the name of the Governor of Karnataka

C.A. Baburavindranath Patel

P.R. 998

Under Secretary to Government,

Infrastructure Development Department.

ಇಂಧನ ಸಚಿವಾಲಯ

ವಿಷಯ : ಹುಕ್ಕೇರಿ ತಾಲ್ಲೂಕಿನಲ್ಲಿ "ನಿರಂತರ ಜ್ಯೋತಿ" ಯೋಜನೆಯ ಅನುಷ್ಠಾನಕ್ಕೆ ಕರ್ನಾಟಕ ಸರ್ಕಾರದಿಂದ ಧನ ಸಹಾಯ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಇಎನ್ 166 ಇಎಂಸಿ 2010, ಬೆಂಗಳೂರು, ದಿನಾಂಕ : 20-10-2010.
2. ಮಾನ್ಯ ಮುಖ್ಯ ಮಂತ್ರಿಯವರ ಟಿಪ್ಪಣಿ ಸಂಖ್ಯೆ : PSCM/853/2010, ದಿನಾಂಕ : 18-3-2010
3. ವ್ಯವಸ್ಥಾಪಕ ನಿರ್ದೇಶಕರು, ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘ ನಿಯಮಿತ, ಇವರ ಪತ್ರ ಸಂಖ್ಯೆ : ಸ್ಥಾ/ಅ/2010-11.
4. ಆರ್ಥಿಕ ಇಲಾಖೆಯವರ ಟಿಪ್ಪಣಿ ಸಂಖ್ಯೆ : FD 253 Exp-1/2011, ದಿನಾಂಕ : 15-3-2011.

ಪ್ರಸ್ತಾವನೆ :

ಕರ್ನಾಟಕ ಸರ್ಕಾರ 2010-11ನೇ ವರ್ಷದ ಆಯವ್ಯಯ ಭಾಷಣದಲ್ಲಿ "ನಿರಂತರ ಜ್ಯೋತಿ" ಯೋಜನೆಯನ್ನು ಒಟ್ಟು 126 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸುವುದೆಂದು ತಿಳಿಸಿದೆ. "ನಿರಂತರ ಜ್ಯೋತಿ" ಯೋಜನೆಯನ್ನು ಎರಡು ಹಂತಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು ಮೊದಲನೇ ಹಂತದಲ್ಲಿ 70 ತಾಲ್ಲೂಕಿಗಳು ಒಳಗೊಂಡಿದ್ದು, ಎರಡನೇ ಹಂತದಲ್ಲಿ 56 ತಾಲ್ಲೂಕುಗಳು ಒಳಗೊಂಡಿರುತ್ತದೆ.

ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ (ಬೆವಿಕಂ), ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ (ಚಾವಿಸನಿನಿ), ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ (ಗುವಿಕಂ) ಮತ್ತು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ (ಹುವಿಕಂ) ವ್ಯಾಪ್ತಿ ಪ್ರದೇಶಗಳಲ್ಲಿ ಮೊದಲನೇ ಹಂತದಲ್ಲಿ ರೂ. 1203 ಕೋಟಿಗಳಷ್ಟು ಮತ್ತು 2ನೇ ಹಂತದಲ್ಲಿ ರೂ. 920 ಕೋಟಿಗಳಷ್ಟು, ಒಟ್ಟು ರೂ. 2123 ಕೋಟಿ ಕಾಮಗಾರಿ ಅಂದಾಜು ವೆಚ್ಚದಷ್ಟು ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸಲು, ಯೋಜನೆಯ ಶೇಕಡಾ 40 ರಷ್ಟು ವೆಚ್ಚವನ್ನು ಸರ್ಕಾರದಿಂದ ಈ ನಾಲ್ಕು ವಿದ್ಯುತ್ ಸರಬರಾಜು ಕಂಪನಿಗಳಿಗೆ ಇಕ್ವಿಟಿ ಹಣ ಒದಗಿಸುವುದಕ್ಕೆ ಮೇಲೆ ಓದಲಾದ-1 ರ ಸರ್ಕಾರಿ ಆದೇಶದಲ್ಲಿ ತಿಳಿಸಿರುವ ನಿಬಂಧನೆಗಳಿಗೆ ಒಳಪಟ್ಟು, ಅನುಮೋದನೆ ನೀಡಲಾಗಿರುತ್ತದೆ. ಯೋಜನೆಯ ಉಳಿದ ಶೇಕಡ 60 ರಷ್ಟು ವೆಚ್ಚವನ್ನು ವಿದ್ಯುತ್ ಸರಬರಾಜು ಕಂಪನಿಗಳು ತಮ್ಮ ಸಂಪನ್ಮೂಲ/ಸಾಲ ಪಡೆದು ಭರಿಸುವುದು.

ಮೇಲೆ ಓದಲಾದ-2 ರ ಟಿಪ್ಪಣಿಯಲ್ಲಿ ಮಾನ್ಯ ಮುಖ್ಯಮಂತ್ರಿಗಳು ನಿರಂತರ ಜ್ಯೋತಿ ಯೋಜನೆಯಡಿಯಲ್ಲಿ ಹುಕ್ಕೇರಿ ತಾಲ್ಲೂಕನ್ನು ಸೇರಿಸಿ ಕಾಮಗಾರಿ ಪ್ರಾರಂಭಿಸಲು ಸೂಚಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘ, ನಿಯಮಿತ ಇವರು ಮೇಲೆ ಓದಲಾದ-3ರ ಪತ್ರದ ಮೂಲಕ ಹುಕ್ಕೇರಿ ತಾಲ್ಲೂಕಿನಲ್ಲಿ ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸಲು ರೂ. 17.95 ಕೋಟಿ ವೆಚ್ಚದ ವಿಸ್ತೃತ ಪರಿಯೋಜನೆ ವರದಿಯನ್ನು ಸಲ್ಲಿಸಿದ್ದು, ಗ್ರಾಮೀಣ ವಿದ್ಯುತ್ ನಿರ್ವಹಣೆ ವ್ಯವಸ್ಥೆಯ ತೊಂದರೆ, ಗ್ರಾಹಕರಿಗೆ ದೊರಕುತ್ತಿರುವ ಕಡಿಮೆ ವೋಲ್ಟೇಜ್ ಮತ್ತು ಸಾರ್ವಜನಿಕ ಹಿತದೃಷ್ಟಿಯನ್ನು ಕಾಪಾಡುವ ಗುರಿಯನ್ನು ಹೊಂದಿದ್ದು ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸುವ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶವನ್ನು ನೀಡಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ : ಇಎನ್ 166(ಪಿ) ಇಎಂಸಿ 2010, ಬೆಂಗಳೂರು, ದಿನಾಂಕ : 29-3-2011

(ಅ) ನಿರಂತರ ಜ್ಯೋತಿ ಯೋಜನೆಯನ್ನು ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘ ನಿಯಮಿತದಲ್ಲಿ ರು. 17.95 ಕೋಟಿ ವೆಚ್ಚದಲ್ಲಿ ಅನುಷ್ಠಾನಗೊಳಿಸಲು.

(ಆ) ಯೋಜನೆಯ ಶೇ. 40 ರಷ್ಟು ವೆಚ್ಚವನ್ನು ಸರ್ಕಾರ ಇಕ್ವಿಟಿಯಾಗಿ (Equity) ಒದಗಿಸುವುದು ಮತ್ತು ಉಳಿದ ಶೇಕಡ 60 ರಷ್ಟು ಯೋಜನೆಯ ವೆಚ್ಚವನ್ನು ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘ ನಿಯಮಿತವು ತಮ್ಮ ಸಂಪನ್ಮೂಲ/ಸಾಲದ ರೂಪದಲ್ಲಿ ಭರಿಸಲು ಸರ್ಕಾರದ ಅನುಮೋದನೆಯನ್ನು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಂತೆ ನೀಡಲಾಗಿದೆ.

1. ಈ ಯೋಜನೆಯಿಂದ ಬರುವ ಲಾಭಗಳು ಅಳೆಯುವಂತಹದಾಗಿರಬೇಕು.
2. ಈ ಯೋಜನೆ ಅನುಷ್ಠಾನದಿಂದ ಸಾಧಿಸಬೇಕಾದ ಮುಖ್ಯ ಗುರಿಗಳು ವಿದ್ಯುತ್ ಲೆಕ್ಕಾಚಾರದಲ್ಲಿ ಅಭಿವೃದ್ಧಿ, ವ್ಯವಸಾಯೇತರ ವಿದ್ಯುತ್ ಸರಬರಾಜಿನಲ್ಲಿ ಅಭಿವೃದ್ಧಿ ಮತ್ತು ವಿತರಣಾ ವ್ಯವಸ್ಥೆಯಲ್ಲಿ ನಷ್ಟಗಳ ಇಳಿಕೆ.
3. ಯೋಜನೆಯ ವೆಚ್ಚ ಮತ್ತು ಕಾಲಮಿತಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : FD 1442 EXP-1/2010, ದಿನಾಂಕ : 14-9-2010. ಹಾಗೂ FD 253 Exp-1/2011, ದಿನಾಂಕ 15-3-2011ರ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಸುರೇಶ್. ಬಿ. ಕೃಷ್ಣಪ್ಪನವರ್

ಸರ್ಕಾರದ ಅಧೀನ ಕಾರ್ಯದರ್ಶಿ,

ಇಂಧನ ಇಲಾಖೆ.

ಪಿ.ಆರ್. 999

ಇಂಧನ ಸಚಿವಾಲಯ

ವಿಷಯ : 2010-11ನೇ ಸಾಲಿನಲ್ಲಿ ನಿರಂತರ ಜ್ಯೋತಿ ಕಾಮಗಾರಿಗಳ ಸಲುವಾಗಿ ವಿಸಕಂಗಳಿಗೆ Equity ಹಣ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ : 1. ಸರ್ಕಾರಿ ಆದೇಶ ಸಂಖ್ಯೆ : ಇಎನ್ 166 ಇಎಂಸಿ 2010, ದಿನಾಂಕ : 20-10-2010.

2. ಬೆವಿಕಂ ಪತ್ರ ಸಂಖ್ಯೆ : ಮುಪ್ರವ್ಯ (ಪಿ)/ಪ್ರಾಜೆಕ್ಟ್/ಪ್ರವ್ಯ (ನಿ.ಜ್ಯೋತಿ)/ಉಪ್ರವ್ಯ-2/ಸಪ್ರವ್ಯ-1/10-11/4594-95, ದಿನಾಂಕ : 4-11-2010.

3. ಸರ್ಕಾರಿ ಆದೇಶ ಸಂಖ್ಯೆ : EN13 PSR 2010, dated : 22-12-2010

ಪ್ರಸ್ತಾವನೆ :

1. 2010-11ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-37 ರಲ್ಲಿ ರಾಜ್ಯದ 126 ತಾಲ್ಲೂಕುಗಳಲ್ಲಿ ನಿರಂತರ ಜ್ಯೋತಿ ಯೋಜನೆಯನ್ನು ಎರಡು ವರ್ಷಗಳ ಅವಧಿಯಲ್ಲಿ ಜಾರಿ ಮಾಡಲಾಗುವುದು. 2010-11 ರಲ್ಲಿ 70 ತಾಲ್ಲೂಕುಗಳಲ್ಲಿ ಈ ಯೋಜನೆಯನ್ನು ರೂ. 1200 ಕೋಟಿ ವೆಚ್ಚದಲ್ಲಿ ಜಾರಿ ಮಾಡಲು ವಿದ್ಯುತ್ ವಿತರಣ ಕಂಪನಿಗಳಿಗೆ ಅಗತ್ಯವಿರುವ ಬಂಡವಾಳದ ನೆರವನ್ನು ನೀಡಲಾಗುವುದೆಂದು ನಮೂದಿಸಲಾಗಿರುತ್ತದೆ.

2. ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ (ಬೆವಿಕಂ), ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತಿ (ಚಾವಿಸನಿನಿ), ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ (ಗುವಿಕಂ) ಮತ್ತು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ (ಹುವಿಕಂ) ವ್ಯಾಪ್ತಿ ಪ್ರದೇಶಗಳಲ್ಲಿ ಮೊದಲನೇ ಹಂತದಲ್ಲಿ ರೂ. 1203 ಕೋಟಿಗಳಷ್ಟು ಮತ್ತು 2ನೇ ಹಂತದಲ್ಲಿ ರೂ. 920 ಕೋಟಿಗಳಷ್ಟು, ಒಟ್ಟು ರೂ. 2123 ಕೋಟಿ ಕಾಮಗಾರಿ ಅಂದಾಜು ವೆಚ್ಚದಷ್ಟು ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸಲು, ಯೋಜನೆಯ ಶೇಕಡ 40 ರಷ್ಟು ವೆಚ್ಚವನ್ನು ಸರ್ಕಾರದಿಂದ ಈ ನಾಲ್ಕು ವಿದ್ಯುತ್ ಸರಬರಾಜು ಕಂಪನಿಗಳಿಗೆ ಈಕ್ವಿಟಿ ಹಣ ಒದಗಿಸುವುದಕ್ಕೆ ಮೇಲೆ ಕ್ರಮಾಂಕ-1 ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ತಿಳಿಸಿರುವ ನಿಬಂಧನೆಗಳಿಗೆ ಒಳಪಟ್ಟು, ಅನುಮೋದನೆ ನೀಡಲಾಗಿರುತ್ತದೆ. ಯೋಜನೆಯ ಉಳಿದ ಶೇಕಡ 60 ರಷ್ಟು ವೆಚ್ಚವನ್ನು ವಿದ್ಯುತ್ ಸರಬರಾಜು ಕಂಪನಿಗಳು ತಮ್ಮ ಸಂಪನ್ಮೂಲ/ಸಾಲ ಪಡೆದು ಭರಿಸುವುದು.

3. ಮೇಲೆ ಕ್ರಮಾಂಕ-2 ರಲ್ಲಿ ಓದಲಾದ ಪತ್ರದಲ್ಲಿ, ಬೆವಿಕಂ ಈ ಕೆಳಕಂಡ ವಿವರಗಳನ್ನು ನೀಡಿ ನಿರಂತರ ಜ್ಯೋತಿ ಯೋಜನೆಯ ಮೊದಲನೆ ಹಂತದ ಕಾಮಗಾರಿಗಳಿಗೆ Equity ಹಣ 376.20 ಕೋಟಿ ರೂ. ಬಿಡುಗಡೆ ಮಾಡಲು ಕೋರಿರುವ ಪ್ರಸ್ತಾವನೆ ಬಗ್ಗೆ, ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ : PD 4 SCA 2010, ದಿನಾಂಕ : 1-12-2010 ರಲ್ಲಿ ನಿರಂತರ ಜ್ಯೋತಿ ಮೊದಲನೇ ಹಂತದ ಕಾಮಗಾರಿಗಳಿಗೆ ಶೇಕಡಾ 40 ರಷ್ಟು ಈಕ್ವಿಟಿ ಹಣವಾದ 376.20 ಕೋಟಿ ರೂ. ಗಳನ್ನು 2010-11 ರ ಎರಡನೇ ಪೂರಕ ಅಂದಾಜುಗಳಲ್ಲಿ ಆರ್ಥಿಕ ಇಲಾಖೆಯು ಬಿಡುಗಡೆ ಮಾಡಲು ಸಹಮತ ನೀಡಿರುತ್ತದೆ.

(ಮೊಬಲಗು ಕೋಟಿ. ರೂ.ಗಳಲ್ಲಿ)

ಕ್ರಮ ಸಂಖ್ಯೆ	ಕಂಪನಿಯ ಹೆಸರು	ತಾಲ್ಲೂಕುಗಳು ಸಂಖ್ಯೆ	ಫೀಡರ್‌ಗಳ ಸಂಖ್ಯೆ	ತಗಲುವ ವೆಚ್ಚ	ಈಕ್ವಿಟಿ (ಶೇ. 40)	2009-10ನೇ ಸಾಲಿನಲ್ಲಿ ಈಕ್ವಿಟಿ ಹಣ ಬಿಡುಗಡೆ ಮಾಡಿರುವುದು.
1	2	3	4	5	6	7
1	ಬೆವಿಕಂ	20	292	382.0	152.80	32
2	ಹುವಿಕಂ	20	247	288.0	115.20	35
3	ಗುವಿಕಂ	20	227	287.0	114.80	30
4	ಚಾವಿಸನಿನಿ	10	161	246.0	98.40	8
	ಒಟ್ಟು	70	927	1203.0	481.20	105

4. 2010-11ರ ಆಯವ್ಯಯ ಅಂದಾಜುಗಳಲ್ಲಿ "4801-01-190-0-09-211 Investment in Power Utilities (ಯೋಜನೆ)" ಲೆಕ್ಕ ಶೀರ್ಷಿಕೆಯಡಿ 500 ಕೋಟಿ ರೂ.ಗಳ ಅವಕಾಶ ಒದಗಿಸಲಾಗಿರುತ್ತದೆ. ಸದರಿ ಲೆಕ್ಕಶೀರ್ಷಿಕೆಯಡಿ 2010-11ನೇ ಸಾಲಿಗೆ ಪೂರಕ ಅಂದಾಜು-2 ರಲ್ಲಿ 500 ಕೋಟಿ ರೂ. ಮತ್ತು ಪೂರಕ ಅಂದಾಜು-3 ರಲ್ಲಿ 500 ಕೋಟಿ ರೂ. ಒದಗಿಸಲಾಗಿರುತ್ತದೆ.

5. ಮೇಲೆ ಕ್ರಮಾಂಕ-3 ರಲ್ಲಿ ಸರ್ಕಾರಿ ಆದೇಶ ಸಂಖ್ಯೆಯಲ್ಲಿ 100 ಕೋಟಿ ರೂ. (25 ಕೋಟಿ ಪ್ರತಿ ಎಸ್ಕಾಂ) ಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ.

6. ವಿದ್ಯುತ್ ಸರಬರಾಜು ಕಂಪನಿಯ ಮೇಲ್ಕಂಡ ಕೋರಿಕೆಯನ್ನು ಸರ್ಕಾರವು ಪರಿಶೀಲಿಸಿ, ನಿರಂತರ ಜ್ಯೋತಿ ಯೋಜನಾ ಕಾಮಗಾರಿಗಳಿಗೆ Equity ಹಣ ಬಿಡುಗಡೆ ಮಾಡಲು ಪ್ರಸ್ತುತ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಇಎನ್ 13 ಪಿಎಸ್‌ಆರ್ 2010, ಬೆಂಗಳೂರು, ದಿನಾಂಕ : 30-3-2011

1. ಸರ್ಕಾರವು, ಮೇಲೆ ವಿವರಿಸಲಾದ ಸನ್ನಿವೇಶಗಳಲ್ಲಿ, ವಿದ್ಯುತ್ ಸರಬರಾಜು ಕಂಪನಿಗಳು 2010-11ನೇ ಸಾಲಿನಲ್ಲಿ ಕೈಗೊಳ್ಳುವ ನಿರಂತರ ಜ್ಯೋತಿ ಯೋಜನೆಯ ಮೊದಲನೇ ಹಂತದ ಕಾಮಗಾರಿಗಳ ಯೋಜನೆ ವೆಚ್ಚದ ಶೇ 40 ರಷ್ಟು ಮೊಬಲಗು ಭಾಗದ ಸಲುವಾಗಿ "4801-01-190-0-09-211 Investment in Power Utilities (ಯೋಜನೆ)" ಲೆಕ್ಕ ಶೀರ್ಷಿಕೆಯಡಿ 174.32 ಕೋಟಿ ರೂ. ಗಳನ್ನು (ಒಂದು ನೂರ ಎಪ್ಪತ್ತಾನಾಲ್ಕು ಕೋಟಿ ಮೂವತ್ತೆರಡು ಲಕ್ಷ ರೂ. ಗಳು ಮಾತ್ರ) ಕವಿಪ್ರನಿನಿಗೆ ಬಿಡುಗಡೆ ಮಾಡಿದೆ.

2. ಕವಿಪ್ರನಿನಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ ರವರ ಮೇಲು ರುಜುವನ್ನು payee's receipt ನಲ್ಲಿ ಪಡೆದು ಹಣವನ್ನು ಪಡೆಯತಕ್ಕದ್ದು.

3. ಸದರಿ ಹಣವನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ವಿದ್ಯುತ್ ಸರಬರಾಜು ಕಂಪನಿಗಳಿಗೆ ಈ ಕೆಳಗೆ ನಮೂದಿಸಿರುವ ಪ್ರಕಾರ ನಗದು ಸಂಪೂರ್ಣವಾಗಿ ಹಣ ಪಡೆದ 2 ದಿನದೊಳಗೆ ಪಾವತಿಸತಕ್ಕದ್ದು ಹಾಗೂ ಸರ್ಕಾರಕ್ಕೆ ವರದಿ ಸಲ್ಲಿಸತಕ್ಕದ್ದು.

ಕ್ರಮ ಸಂಖ್ಯೆ	ಕಂಪನಿಗಳ ಹೆಸರು	Equity ರೂಪದಲ್ಲಿ ಬಿಡುಗಡೆ ಮಾಡಿದ ಹಣ (ಕೋಟಿ ರೂ. ಗಳಲ್ಲಿ)
1	2	3
1	ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ	63.45
2	ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ	30.81
3	ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ	35.49
4	ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ	44.57
	ಮೊತ್ತ	174.32

4. ಬಿಡುಗಡೆ ಮಾಡಿದ Equity ಹಣ 174.32 ಕೋಟಿ ರೂ. ಈ ಕೆಳಕಂಡ ಷರತ್ತಿಗೊಳಪಟ್ಟಿರುತ್ತದೆ.

(ಅ) ವಿಸಕಂಗಳು ಸರ್ಕಾರಿ ಆದೇಶ ಸಂಖ್ಯೆ : ಇಎನ್ 166 ಇಎಮ್‌ಸಿ 2010, ದಿನಾಂಕ : 20-10-2010 ರಲ್ಲಿ ನಿಗದಿಪಡಿಸಿರುವ ಎಲ್ಲಾ ನಿಬಂಧನೆಗಳನ್ನು ಪಾಲಿಸತಕ್ಕದ್ದು.

(ಆ) ESCOMs to ensure that the funds released for Niranthara Jyothi are earmarked only for the works undertaken for Niranthara Jyothi programme and should put this money in a Separate Bank Account which should be escrowed only for the works under the Niranthara Jyothi scheme.

(ಇ) ESCOMs shall prepare segmental accounts to ensure that the investments done by Government and the works undertaken for Niranthara Jyothi scheme are clearly segregated and can be easily identified and reported.

5. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : FD 487 Exp-1/2010, ದಿನಾಂಕ : 29-3-2011 ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಸುರೇಶ್. ಬಿ. ಕೃಷ್ಣಪ್ಪನವರ್

ಸರ್ಕಾರದ ಅಧೀನ ಕಾರ್ಯದರ್ಶಿ,

ಇಂಧನ ಇಲಾಖೆ.

ಪಿ.ಆರ್. 1000

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಶ್ರೀ ಬಿ.ಟಿ. ರಾಜಣ್ಣ, ಕೆ.ಎ.ಎಸ್. (ಕಿರಿಯ ಶ್ರೇಣಿ) ಅಧಿಕಾರಿ ಹಿಂದಿನ ವಿಶೇಷ ಭೂ ಸ್ವಾಧೀನಾಧಿಕಾರಿ, ತುಂಗಾ ಮೇಲ್ದಂಡೆ ಯೋಜನೆ, ಶಿವಮೊಗ್ಗ ಇವರ ವಿರುದ್ಧ ಇಲಾಖಾ ವಿಚಾರಣೆ - ಅಂತಿಮ ಆದೇಶ.

ಓದಲಾಗಿದೆ :

1. ದಿನಾಂಕ 29-08-07 ರ ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 018 ಎಸ್‌ಇಎನ್ 03.
2. ದಿನಾಂಕ 03-01-08 ರ ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 034 ಕೆಇವಿ 07.
3. ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಹಾಗೂ ವಿಚಾರಣಾಧಿಕಾರಿಗಳು ಇವರ ವಿಚಾರಣಾ ವರದಿ ಸಂಖ್ಯೆ : ಸಿಸಿಎ/ಮಿಸ್/70/07-08, ದಿನಾಂಕ 21-10-09.
4. ದಿನಾಂಕ : 29-12-09ರ 2ನೇ ಕಾರಣ ಕೇಳುವ ನೋಟೀಸು ಸಂಖ್ಯೆ ಸಿಆಸುಇ 034 ಕೆಇವಿ 07.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಆದೇಶದಲ್ಲಿ ಶ್ರೀ ಬಿ.ಟಿ. ರಾಜಣ್ಣ, ಕೆ.ಎ.ಎಸ್. (ಕಿರಿಯ ಶ್ರೇಣಿ) ಅಧಿಕಾರಿ ಇವರು ಈ ಹಿಂದೆ ವಿಶೇಷ ಭೂ ಸ್ವಾಧೀನಾಧಿಕಾರಿ, ತುಂಗಾ ಮೇಲ್ದಂಡೆ ಯೋಜನೆ, ಶಿವಮೊಗ್ಗ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ತುಂಗಾ ಮೇಲ್ದಂಡೆ ಯೋಜನೆಯಡಿ ಮುಖ್ಯ ನಾಲಾ ನಿರ್ಮಿಸಲು ಭೂ ಸ್ವಾಧೀನಪಡಿಸಿಕೊಳ್ಳಲಾದ ಜಮೀನಿನ ಪೈಕಿ ಶಿವಮೊಗ್ಗ ತಾಲ್ಲೂಕು ಬೆಳಲಕಟ್ಟೆ ಗ್ರಾಮದ ಸರ್ವೆ ನಂ. 78 ರಲ್ಲಿನ 0.20 ಎಕರೆ ಜಮೀನು ವಾಸ್ತವವಾಗಿ ಬಳಕೆಯಾಗಿದ್ದರೂ ಸಹ ಅನಾವಶ್ಯಕವಾಗಿ 0.23 ಎಕರೆ ಜಮೀನನ್ನು ಹೆಚ್ಚುವರಿಯಾಗಿ ಸ್ವಾಧೀನವಾಗಲು ಕಾರಣಕರ್ತರಾಗಿರುತ್ತಾರೆ. ಈ ಸರ್ವೆ ನಂಬರಿನ ಒಟ್ಟು 01-03 ಎಕರೆ ಜಮೀನು ಕರ್ನಾಟಕ ಭೂ ಸ್ವಾಧೀನ ಕಾಯ್ದೆ ಕಲಂ 4(1) ಮತ್ತು ಕಲಂ 6(1) ರ ಅಧಿಸೂಚನೆಯಲ್ಲಿ ಸೇರಿದ್ದು, ಇವರು ದಿನಾಂಕ 16-05-02 ರಂದು ಸ್ಥಳ ತನಿಖೆ ನಡೆಸಿ, ನಾಲಾ ಪಂಕ್ತೀಕರಣಕ್ಕಾಗಿ ಉಪಯೋಗವಾಗಿರುವ ಜಮೀನನ್ನು ಅಳತೆ ಮಾಡಿ ವರದಿ ಸಲ್ಲಿಸುವಂತೆ ಸಂಬಂಧಿಸಿದ ಭೂ ಮಾಪಕರಿಗೆ ಸೂಚಿಸಿರುತ್ತಾರೆ. ಒಟ್ಟು ಜಮೀನಿನ ವಿಸ್ತೀರ್ಣ 01-03 ಎಕರೆ ಪೈಕಿ ವಾಸ್ತವವಾಗಿ 0.20 ಎಕರೆ ಮಾತ್ರ ನಾಲಾ ಪಂಕ್ತೀಕರಣಕ್ಕೆ ಉಪಯೋಗವಾಗಿದ್ದು, ಉಳಿಕೆ 0.23 ಎಕರೆ ಜಮೀನು ನಾಲಾ ಪಂಕ್ತೀಕರಣಕ್ಕೆ ಉಪಯೋಗಿಸಲ್ಪಟ್ಟಿರುವುದಿಲ್ಲವೆಂದು ಭೂ ಮಾಪಕರು ದಿನಾಂಕ 23-06-02 ರಂದು ವರದಿ ನೀಡಿರುತ್ತಾರೆ. ಅದರಂತೆ, 0-20 ಎಕರೆ ಜಮೀನಿಗೆ ಮಾತ್ರ ಭೂ ಸ್ವಾಧೀನ ಪ್ರಕ್ರಿಯೆಯಂತೆ ಸಕ್ರಮಗೊಳಿಸುವ ಕ್ರಮ ಜರುಗಿಸುವ ಬದಲು ಸದರಿ ಜಮೀನಿನ ಖಾತೆದಾರರಾದ

ಶ್ರೀ ಈ. ಷಣ್ಮುಖಪ್ಪ ಬಿನ್ ಈಶ್ವರಪ್ಪ ರವರೊಂದಿಗೆ ಷಾಮೀಲಾಗಿ ನಾಲಾ ಪಂಕ್ತೀಕರಣದಲ್ಲಿ ಉಪಯೋಗಗೊಳ್ಳದಿದ್ದ 0–23 ಎಕರೆ ಜಮೀನಿನ ಸ್ವಾಧೀನ ಪ್ರಕ್ರಿಯೆಯ ಬಗ್ಗೆ ಸಾಕಷ್ಟು ಮುಂಚಿತವಾಗಿ ತಿಳಿದಿದ್ದರೂ ಸಹ ಇದನ್ನು ಮೇಲಧಿಕಾರಿಗಳ ಗಮನಕ್ಕೆ ತಾರದೆ, ಶ್ರೀ ರಾಜಣ್ಣ ರವರು ನಾಲಾ ಪಂಕ್ತೀಕರಣಕ್ಕೆ ಉಪಯೋಗಕ್ಕೆ ಒಳಪಡದಿದ್ದ 0.23 ಎಕರೆ ಜಮೀನು ಹಾಗೂ ಅದರಲ್ಲಿನ 6 ಮಾವಿನ ಮರ ಮತ್ತು 1 ಬೇವಿನ ಮರಗಳಿಗೆ ಭೂ ಸ್ವಾಧೀನ ಪರಿಹಾರ ಹಣ ಪಾವತಿಸಿ ಸರ್ಕಾರಕ್ಕೆ ಹಾಗೂ ಕರ್ನಾಟಕ ನೀರಾವರಿ ನಿಗಮ ನಿಯಮಿತದ ಬೊಕ್ಕಸಕ್ಕೆ ಆರ್ಥಿಕ ನಷ್ಟವುಂಟು ಮಾಡಿರುವ ಆರೋಪದ ಸಂಬಂಧ ಸದರಿ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆ ಮುಂದುವರಿಸಿ, ಅಧಿಕಾರಿಯ ವಿರುದ್ಧ ಹೊರಿಸಲಾದ ಆರೋಪಗಳಲ್ಲಿನ ಸತ್ಯಾಸತ್ಯತೆಗಳನ್ನು ವಿಚಾರಣೆ ಮೂಲಕ ತಿಳಿಯುವ ಸಲುವಾಗಿ ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ರವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕಾರ್ಯಪಾಲಕ ಅಭಿಯಂತರರು, ತುಂಗಾ ಮೇಲ್ದಂಡೆ ಯೋಜನೆ, ಶಿವಮೊಗ್ಗ ರವರನ್ನು ಮಂಡನಾಧಿಕಾರಿಯನ್ನಾಗಿ ಸರ್ಕಾರವು ನೇಮಿಸಿತ್ತು.

ನಂತರ, ಮೇಲೆ ಓದಲಾದ ಕ್ರಮಸಂಖ್ಯೆ (2) ರಲ್ಲಿ ಕಾರ್ಯಪಾಲಕ ಅಭಿಯಂತರ, ತುಂಗಾ ಮೇಲ್ದಂಡೆ ಯೋಜನೆ, ಶಿವಮೊಗ್ಗ ಇವರ ಬದಲಿಗೆ ಕೇಂದ್ರ ಸ್ಥಾನಿಕ ಸಹಾಯಕರು ಜಿಲ್ಲಾಧಿಕಾರಿಗಳ ಕಛೇರಿ, ಶಿವಮೊಗ್ಗ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (3) ರಲ್ಲಿ ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಹಾಗೂ ವಿಚಾರಣಾಧಿಕಾರಿಗಳು ವಿಚಾರಣಾ ವರದಿಯನ್ನು ಸಲ್ಲಿಸುತ್ತಾ, ಸದರಿ ಸರ್ವೆ ನಂಬರಿನ ಒಟ್ಟು ವಿಸ್ತೀರ್ಣ 01–23 ಎಕರೆ ಜಮೀನು ಕರ್ನಾಟಕ ಭೂ ಸ್ವಾಧೀನ ಕಾಯ್ದೆ ಕಲಂ 4(1) ಮತ್ತು 6(1) ರ ಅಧಿಸೂಚನೆಯಲ್ಲಿ ಸೇರಿದ್ದರೂ ಸಹ, ಐತೀರ್ಪು ರಚಿಸುವ ಪೂರ್ವದಲ್ಲಿ ಆಪಾದಿತ ಅಧಿಕಾರಿಯು ಸ್ಥಳ ತನಿಖೆ ಕೈಗೊಂಡು, ಸಂಬಂಧಿಸಿದ ಭೂ ಮಾಪಕರ ವರದಿಯಂತೆ 0–23 ಎಕರೆ ಜಮೀನು ನಾಲಾ ಪಂಕ್ತೀಕರಣಕ್ಕೆ ಒಳಪಟ್ಟಿರುವುದಿಲ್ಲ ಎಂಬುದು ದೃಢಪಟ್ಟಿದ್ದರೂ ಸಹ, ಹಾಗೂ ಹೆಚ್ಚುವರಿ ಜಮೀನು ಸ್ವಾಧೀನತೆಯ ಅವಶ್ಯಕತೆಯ ಬಗ್ಗೆ ಭೂ ಕೋರಿಕೆ ಸಂಸ್ಥೆಗೆ ಪತ್ರ ಬರೆದಿರುವುದು ಮತ್ತು ಅವರಿಂದ ಯಾವುದೇ ಪ್ರತ್ಯುತ್ತರ ಬಾರದಿರುವುದು, ಇತ್ಯಾದಿಗಳನ್ನು ಹೆಚ್ಚುವರಿ ಅನವಶ್ಯಕ 0–23 ಎಕರೆ ಜಮೀನನ್ನು ಭೂ ಸ್ವಾಧೀನ ಪ್ರಕ್ರಿಯೆಯಿಂದ ಕೈಬಿಡುವ ಕುರಿತು ಕರಡು ಐತೀರ್ಪು ಪ್ರಸ್ತಾವನೆಯೊಂದಿಗೆ ಜಿಲ್ಲಾಧಿಕಾರಿಗಳ ಗಮನಕ್ಕೆ ಸಲ್ಲಿಸುವುದಾಗಲೀ, ಅವರಿಂದ ಸಲಹೆ ಪಡೆಯುವುದಾಗಲೀ ಅಥವಾ ಕರ್ನಾಟಕ ಭೂ ಸ್ವಾಧೀನ ಕಾಯ್ದೆ ಕಲಂ 48 ರಡಿ ಪ್ರತ್ಯೇಕ ಪ್ರಸ್ತಾವನೆಯನ್ನಾಗಲೀ ಮಾಡಿರುವುದಿಲ್ಲ. ಅಲ್ಲದೆ, ಭೂ ಸ್ವಾಧೀನ ಪ್ರಕ್ರಿಯೆಯು ಅನೂರ್ಜಿತಗೊಳ್ಳಲು (vitiate) ಸಾಕಷ್ಟು ಕಾಲಾವಕಾಶ ಇರುವುದು, ಇತ್ಯಾದಿ ಎಲ್ಲ ಅಂಶಗಳು ಆಪಾದಿತ ಅಧಿಕಾರಿಗೆ ಸಾಕಷ್ಟು ಮುಂಚಿತವಾಗಿ ಗೊತ್ತಿದ್ದರೂ ಸಹ, ಇದ್ಯಾವುದನ್ನೂ, ಐತೀರ್ಪು ಪ್ರಸ್ತಾವನೆಯಲ್ಲಿ ಉಲ್ಲೇಖಿಸದಿರುವುದು, ಜಿಲ್ಲಾಧಿಕಾರಿಗಳ ಸಲಹೆ ಪಡೆಯದಿರುವುದು ಇತ್ಯಾದಿ ಅಂಶಗಳ ಹಿನ್ನೆಲೆಯಲ್ಲಿ ಆರೋಪಿತ ಅಧಿಕಾರಿಯ ವಿರುದ್ಧದ ಆರೋಪವು ಸಾಬೀತಾಗಿದೆ ಎಂದು ವಿಚಾರಣಾಧಿಕಾರಿಗಳು ವರದಿ ನೀಡಿರುತ್ತಾರೆ.

ಸರ್ಕಾರವು ವಿಚಾರಣಾ ವರದಿಯ ಪ್ರತಿಯನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಆಪಾದಿತರಿಗೆ 2ನೇ ಕಾರಣ ಕೇಳುವ ನೋಟೀಸಿನ ಮೂಲಕ ಒದಗಿಸಿದ್ದು ಅದಕ್ಕೆ ಆಪಾದಿತ ಅಧಿಕಾರಿ ಶ್ರೀ ಬಿ.ಟಿ. ರಾಜಣ್ಣ ರವರು ಸಲ್ಲಿಸಿದ ಲಿಖಿತ ಅಹವಾಲು ಯಾವುದೇ ಸಮರ್ಥನೆಯಿಂದ ಕೂಡಿರುವುದಿಲ್ಲವೆಂದು ಸರ್ಕಾರವು ಪರಿಗಣಿಸುತ್ತಾ ಕೆಳಕಂಡಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 034 ಕೆಇವಿ 2007, ಬೆಂಗಳೂರು, ದಿನಾಂಕ 01ನೇ ಏಪ್ರಿಲ್ 2011

ಪ್ರಸ್ತಾವನೆಯಲ್ಲಿ ವಿವರಿಸಲ್ಪಟ್ಟ ಕಾರಣಗಳಿಂದಾಗಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ, 1957ರ ನಿಯಮ 8(iii) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸರ್ಕಾರವು, ಶ್ರೀ ಬಿ.ಟಿ. ರಾಜಣ್ಣ, ಕೆ.ಎ.ಎಸ್. (ಕಿರಿಯ ಶ್ರೇಣಿ) ಹಿಂದಿನ ವಿಶೇಷ ಭೂ ಸ್ವಾಧೀನಾಧಿಕಾರಿ, ತುಂಗಾ ಮೇಲ್ದಂಡೆ ಯೋಜನೆ, ಶಿವಮೊಗ್ಗ ಇವರು ಮುಂದಿನ ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ಇಲ್ಲದಂತೆ (without cumulative effect) ತಡೆಹಿಡಿಯುವ ದಂಡನೆ ವಿಧಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವಾಸುದೇವಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ.
(ಸೇವೆಗಳು–2)

ಪಿ.ಆರ್. 1049

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಶ್ರೀ ಜಿ. ನರಹರಿ, ಜಿಲ್ಲಾ ನ್ಯಾಯಾಧೀಶರು, ಇವರ ವಿರುದ್ಧ ಇಲಾಖಾ ವಿಚಾರಣೆ – ದಂಡನೆ ವಿಧಿಸಿ ಅಂತಿಮ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ :
1. ರಿಜಿಸ್ಟ್ರಾರ್ ಜನರಲ್, ಉಚ್ಚ ನ್ಯಾಯಾಲಯ, ಶ್ರೀ ಜಿ. ನರಹರಿ, ಜಿಲ್ಲಾ ನ್ಯಾಯಾಧೀಶರಿಗೆ ನೀಡಿರುವ ನೋಟೀಸ್ ಸಂಖ್ಯೆ : 1/2005, 8/2005 ಮತ್ತು 12/2005.
2. ಶ್ರೀ ಜಿ. ನರಹರಿ, ಜಿಲ್ಲಾ ನ್ಯಾಯಾಧೀಶರ ಉತ್ತರ, ದಿನಾಂಕ 24–03–2005.
3. ವಿಚಾರಣಾ ವರದಿ ದಿನಾಂಕ 16–10–2008 ನ್ಯಾಯಮೂರ್ತಿ ಶ್ರೀ ಎಸ್.ಆರ್. ಬನ್ನೂರಮಠ, ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ವಿಚಾರಣಾಧಿಕಾರಿಗಳಿಂದ.
4. 2ನೇ ನೋಟೀಸ್ ಸಂಖ್ಯೆ : ಡಿ.ಐ./1/2005,8/2005 ಮತ್ತು 12/2005 ದಿನಾಂಕ 11.03.2009, ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ ಅವರಿಂದ.
5. 2ನೇ ನೋಟೀಸಿಗೆ ಶ್ರೀ ಜಿ. ನರಹರಿ, ಜಿಲ್ಲಾ ನ್ಯಾಯಾಧೀಶರ ಉತ್ತರ, ದಿನಾಂಕ 28.03.2009.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಇವರು ಸರ್ಕಾರಕ್ಕೆ ಬರೆದಿರುವ ಪತ್ರ ಸಂಖ್ಯೆ : ಡಿಐ 1, 8, 12/2005, ದಿನಾಂಕ 21–10–2010.
7. ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆಯ ಟಿಪ್ಪಣಿ ಸಂಖ್ಯೆ : ಲಾ/ಎಲ್‌ಎಸ್/15373/comp/2010, ದಿನಾಂಕ 27–10–2010.

ಪ್ರಸ್ತಾವನೆ :

ಶ್ರೀ ಜಿ. ನರಹರಿ, ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ವಿರುದ್ಧ ಕರ್ನಾಟಕ ಉಚ್ಚ ನ್ಯಾಯಾಲಯವು, ಮೇಲೆ(1) ರಲ್ಲಿ ಓದಲಾದ ದಿನಾಂಕ 10-03-2005ರ ದೋಷಾರೋಪಣೆ ಮಾಡುವ ಮೂಲಕ ಈ ಕೆಳಕಂಡ ಆರೋಪಗಳನ್ನು ಕುರಿತು ವಿವರವಾದ ವಿಚಾರಣೆ ನಡೆಸಿತು.

ಇಲಾಖಾ ವಿಚಾರಣಾ ಸಂಖ್ಯೆ : 1/2005

ಆರೋಪ-1 : ಶ್ರೀ ಜಿ. ನರಹರಿ, ಜಿಲ್ಲಾ ನ್ಯಾಯಾಧೀಶರು ಇವರು ಬೆಳಗಾಂನ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾಗಿ ಕಾರ್ಯನಿರ್ವಹಿಸುತ್ತಿದ್ದಾಗ ಕೋಲಾರ ಜಿಲ್ಲಾ ನ್ಯಾಯಾಲಯದ ಬೆರಳಚ್ಚುಗಾರ್ತಿಯಾದ ಶ್ರೀಮತಿ ಪದ್ಮ, ಇವರೊಂದಿಗೆ ಯಾವುದೇ ನ್ಯಾಯಯುತ ಮತ್ತು ಅಧಿಕೃತ ಕಾರಣಗಳು ಹಾಗೂ ಉದ್ದೇಶವಿಲ್ಲದೇ ಅತಿ ಹೆಚ್ಚಿನ ಸಂಖ್ಯೆಯಲ್ಲಿ ದೂರವಾಣಿ ಮೂಲಕ ಸಂವಾದಿಸಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) (iii) ನ್ನು ಉಲ್ಲಂಘಿಸಿದ್ದಾರೆ.

ಆರೋಪ-2 : ಶ್ರೀಮತಿ ಪದ್ಮ ಇವರ ಕೋಲಾರದ ಜಿಲ್ಲಾ ನ್ಯಾಯಾಲಯದ ಕಚೇರಿ ದೂರವಾಣಿಗೆ, ಇವರ ಮನೆ ದೂರವಾಣಿಗೆ ಬೆಳಗಾಂನ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ಕಚೇರಿಯ ದೂರವಾಣಿ (ದೂರವಾಣಿ ಸಂಖ್ಯೆ : 420500) ಮತ್ತು ಮನೆ ದೂರವಾಣಿ (ದೂರವಾಣಿ ಸಂಖ್ಯೆ : 420851) ಮೂಲಕ ಯಾವುದೇ ನ್ಯಾಯಯುತ ಮತ್ತು ಅಧಿಕೃತ ಕಾರಣಗಳು ಹಾಗೂ ಉದ್ದೇಶವಿಲ್ಲದೇ ಸಂವಾದ ನಡೆಸಿ ದೂರವಾಣಿಗಳನ್ನು ದುರುಪಯೋಗಪಡಿಸಿಕೊಳ್ಳುವುದರೊಂದಿಗೆ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) (iii) ನ್ನು ಉಲ್ಲಂಘಿಸಿದ್ದಾರೆ.

ಆರೋಪ-3 : ದಿನಾಂಕ 27-05-2002 ರಿಂದ ದಿನಾಂಕ 31-12-2002ರ ಅವಧಿಯಲ್ಲಿ ಬೆಳಗಾಂನ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾಗಿ ಕಾರ್ಯನಿರ್ವಹಿಸುತ್ತಿದ್ದಾಗ ತಮ್ಮ ಕಚೇರಿಯ ದೂರವಾಣಿ ಮೂಲಕ ಶ್ರೀಮತಿ ಪದ್ಮರವರೊಂದಿಗೆ 727 ಬಾರಿ ಸಂವಾದ ನಡೆಸಿರುವುದು, ಕರೆ ಮಾಡಿದ ವೇಳೆ, ಕರೆಗಳ ಅವಧಿ ಇತ್ಯಾದಿಗಳನ್ನು ಗಮನಿಸಿದಾಗ ಆರೋಪಿತರು ಕಛೇರಿ ದೂರವಾಣಿಯನ್ನು ದುರುಪಯೋಗ ಪಡಿಸಿಕೊಂಡಿರುವುದರೊಂದಿಗೆ ಆರೋಪಿತ ನ್ಯಾಯಾಂಗಾಧಿಕಾರಿಯವರು ನ್ಯಾಯಾಲಯದ ಕೆಲಸವನ್ನು ನಿರ್ಲಕ್ಷಿಸಿ ಕಚೇರಿ ಸಮಯವನ್ನು ದುರುಪಯೋಗಪಡಿಸಿಕೊಂಡು ತಮ್ಮ ಕರ್ತವ್ಯಕ್ಕೆ ಚ್ಯುತಿಯನ್ನುಂಟು ಮಾಡುವ ಮೂಲಕ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) (iii) ನ್ನು ಉಲ್ಲಂಘಿಸಿದ್ದಾರೆ.

ಆರೋಪ-4 : ಕಛೇರಿ ದೂರವಾಣಿಯನ್ನು ಅನಧಿಕೃತ ಉದ್ದೇಶಗಳಿಗಾಗಿ ಬಳಸಕೂಡದೆಂಬುದು ಗೊತ್ತಿದ್ದಾಗ್ಯೂ ಸಹ ಶ್ರೀಮತಿ ಪದ್ಮರವರೊಂದಿಗೆ ನಡೆಸಿದ್ದಲ್ಲದೇ, ದೂರವಾಣಿ ಸಂವಾದವನ್ನು ಮರೆಮಾಚಲು ಸಂವಾದಿತ ಕರೆಗಳನ್ನು ತಮ್ಮ ಖಾಸಗಿ ಕರೆಗಳೆಂದು ಪ್ರಮಾಣೀಕರಿಸದೇ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) (i) ನ್ನು ಉಲ್ಲಂಘಿಸಿದ್ದಾರೆ.

ಶ್ರೀ ಜಿ. ನರಹರಿ, ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಮೇಲೆ ಓದಲಾದ (2)ರ ದಿನಾಂಕ 24-03-2005 ರಲ್ಲಿ ನೀಡಿದ ಉತ್ತರಗಳನ್ನು ವಿಚಾರಣಾಧಿಕಾರಿಗಳು ಪರಿಶೀಲಿಸಿ ಮೇಲೆ ಓದಲಾದ (3)ರ ದಿನಾಂಕ 12-10-2008ರ ತಮ್ಮ ವಿಚಾರಣಾ ವರದಿಯಲ್ಲಿ ಈ ಕೆಳಕಂಡ ನಿರ್ಣಯಗಳನ್ನು ಕೈಗೊಂಡಿರುತ್ತಾರೆ.

ಶ್ರೀ ಜಿ. ನರಹರಿ, ಆರೋಪಿತ ಜಿಲ್ಲಾ ನ್ಯಾಯಾಧೀಶರು, ಇವರು ದಿನಾಂಕ 24-05-1999 ಮತ್ತು ದಿನಾಂಕ 26.05.2000ರ ಮಧ್ಯೆ ಕೋಲಾರದ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾಗಿ ಕಾರ್ಯನಿರ್ವಹಿಸುತ್ತಿದ್ದುದು ಅಥವಾ ಇದೇ ಅವಧಿಯಲ್ಲಿ ಶ್ರೀಮತಿ ಪದ್ಮ ಇವರು ಬೆರಳಚ್ಚುಗಾರ್ತಿಯಾಗಿ ಕಾರ್ಯನಿರ್ವಹಿಸುತ್ತಿದ್ದುದು ವಿವಾದಾತೀತವಾಗಿದೆ. ಅದರಂತೆಯೇ, ಆರೋಪಿತ ಜಿಲ್ಲಾ ನ್ಯಾಯಾಧೀಶರು 27-05-2002 ಮತ್ತು 31-12-2002ರ ಮಧ್ಯೆ ಬೆಳಗಾಂನ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾಗಿ ಕಾರ್ಯನಿರ್ವಹಿಸುತ್ತಿದ್ದುದು ವಿವಾದಾತೀತವಾಗಿದೆ. ಇದೇ ಅವಧಿಯಲ್ಲಿ ತಮ್ಮ ಕಚೇರಿ ದೂರವಾಣಿ ಸಂಖ್ಯೆ : 420500 ರಿಂದ ಶ್ರೀಮತಿ ಪದ್ಮರವರ ಕೋಲಾರ ಜಿಲ್ಲಾ ನ್ಯಾಯಾಲಯದ ಕಚೇರಿ (ದೂರವಾಣಿ ಸಂಖ್ಯೆ : 26981) ಹಾಗೂ ಮನೆಗೆ ದೂರವಾಣಿ (ದೂರವಾಣಿ ಸಂಖ್ಯೆ : 48264) 666 ಬಾರಿ ವಿವಿಧ ದಿನಗಳಂದು ಕರೆ ಮಾಡಿರುವುದು ಹಾಗೂ ಸದರಿಯವರ ಅಣ್ಣನ ಮನೆಗೆ (ದೂರವಾಣಿ ಸಂಖ್ಯೆ : 48010) 57 ಬಾರಿ ವಿವಿಧ ದಿನಗಳಂದು ಕರೆ ಮಾಡಿರುವುದು ದೂರಸಂಪರ್ಕ ಇಲಾಖೆಯು ಹೊರಡಿಸಿದ ಕರೆಗಳ ಪಟ್ಟಿಯಿಂದ ಕಂಡುಬಂದಿದೆ.

ಆರೋಪಿತ ಜಿಲ್ಲಾ ನ್ಯಾಯಾಧೀಶರು ನೀಡಿರುವ ತಮ್ಮ ಲಿಖಿತ ಹೇಳಿಕೆಯಲ್ಲಿ ಸದರಿಯವರು ಶ್ರೀಮತಿ ಪದ್ಮ ಹಾಗೂ ಅವರ ಕುಟುಂಬದ ಸದಸ್ಯರಿಗೆ ದೂರವಾಣಿ ಕರೆ ಮಾಡಿರುವುದನ್ನು ಒಪ್ಪಿಕೊಂಡಿದ್ದು ಕಂಡುಬಂದಿದೆ. ಆದರೆ ಆರೋಪಿತರು ಶ್ರೀಮತಿ ಪದ್ಮರವರೊಂದಿಗೆ ತಾವಲ್ಲದೇ ತಮ್ಮ ಪತ್ನಿ ಮತ್ತು ಕುಟುಂಬದ ಇತರ ಸದಸ್ಯರೂ ಮಾತನಾಡುತ್ತಿದ್ದರೆಂದು ಹಾಗೂ ಕೋಲಾರ ಜಿಲ್ಲಾ ನ್ಯಾಯಾಲಯಕ್ಕೆ ಕರೆ ಮಾಡಿದಾಗ ಕೇವಲ ಶ್ರೀಮತಿ ಪದ್ಮರವರೊಂದಿಗಲ್ಲದೇ ನ್ಯಾಯಾಲಯದ ಇತರ ಸಿಬ್ಬಂದಿ ವರ್ಗದೊಂದಿಗೆ ಮಾತನಾಡಿದ್ದರು ಎಂದು ವಾದಿಸಿದ್ದಾರೆ. ಆದರೆ ಸಿಬ್ಬಂದಿ ವರ್ಗದ ಸಾಕ್ಷಿಗಳನ್ನು ವಿಚಾರಿಸಿದಾಗ ಇವರುಗಳು ಆರೋಪಿತರೊಂದಿಗೆ ದೂರವಾಣಿಯಲ್ಲಿ ಮಾತನಾಡಿರುವುದನ್ನು ಅಲ್ಲಗಳೆದಿರುತ್ತಾರೆ. ಅಲ್ಲದೇ ಶ್ರೀಮತಿ ಪದ್ಮರವರು 21-10-2002 ರಿಂದ ಹೆರಿಗೆ ರಜೆಯ ಮೇಲೆ ತೆರಳಿದಾಗ ಆರೋಪಿತ ಜಿಲ್ಲಾ ನ್ಯಾಯಾಧೀಶರು ತಮ್ಮ ಕಚೇರಿಯ ದೂರವಾಣಿಯಿಂದ ಶ್ರೀಮತಿ ಪದ್ಮರವರ ಮನೆಗೆ ಹಾಗೂ ಇವರ ಅಣ್ಣ ಶ್ರೀ ವೆಂಕಟಸ್ವಾಮಿರವರ ಮನೆಗೆ ಮಾತ್ರ ಕರೆ ಮಾಡಿದ್ದು ಶ್ರೀಮತಿ ಪದ್ಮರವರ ಕಚೇರಿಗೆ ಒಂದು ಬಾರಿಯೂ ಕರೆ ಮಾಡದಿರುವುದು ದೂರಸಂಪರ್ಕ ಇಲಾಖೆಯು ಕರೆಗಳ ಪಟ್ಟಿಯಿಂದ ಕಂಡುಬಂದಿದೆ. ಈ ಮೂಲಕ ಆರೋಪಿತರು ಕೇವಲ ಶ್ರೀಮತಿ ಪದ್ಮರವರೊಂದಿಗೆ ಮಾತ್ರ ದೂರವಾಣಿ ಸಂವಾದ ನಡೆಸುತ್ತಿದ್ದರು ಎಂಬುದನ್ನು ಮನಗಾಣಲಾಗಿದೆ.

ಶ್ರೀ ಜಿ. ನರಹರಿ, ಇವರು ಬೆಳಗಾಂನ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾಗಿ ಕಾರ್ಯನಿರ್ವಹಿಸುತ್ತಿದ್ದಾಗ ತಮ್ಮ ಕಚೇರಿಯ ದೂರವಾಣಿ ಮೂಲಕ ಶ್ರೀಮತಿ ಪದ್ಮರವರ ಮನೆಗೆ, ಕಚೇರಿಗೆ ಹಾಗೂ ಇವರ ಅಣ್ಣ ಶ್ರೀ ವೆಂಕಟಸ್ವಾಮಿರವರ ಮನೆಗೆ ಅನೇಕ ಬಾರಿ ಕಚೇರಿ ಸಮಯದಲ್ಲಿಯೇ ಮಾತನಾಡಿರುವುದು ದೂರಸಂಪರ್ಕ ಇಲಾಖೆಯ ದಾಖಲೆಗಳಿಂದ ಕಂಡುಬಂದಿದೆ. ಈ ಮೂಲಕ ಆರೋಪಿತರು ನ್ಯಾಯಾಲಯದ ಅಮೂಲ್ಯ ಸಮಯವನ್ನು ಹಾಳು ಮಾಡಿರುತ್ತಾರೆ. ಆದರೆ ಇದಕ್ಕೆ ಪ್ರತಿಯಾಗಿ ಆರೋಪಿತ ಜಿಲ್ಲಾ ನ್ಯಾಯಾಂಗಾಧಿಕಾರಿಗಳು ವಕೀಲರು ನಡೆಸಿದ ಸತ್ಯಾಗ್ರಹ, ಅಭಿಯೋಜಕರ ಗೈರುಹಾಜರಾತಿಯಲ್ಲಿ ಮಾತ್ರ ಶ್ರೀಮತಿ ಪದ್ಮರವರೊಂದಿಗೆ ಮಾತನಾಡಿರುವುದಾಗಿ ವಾದಿಸಿರುತ್ತಾರೆ. ಆದರೆ ಬೆಳಗಾಂನ ನ್ಯಾಯಾಲಯಗಳಲ್ಲಿ ಹೆಚ್ಚಿನ ಸಂಖ್ಯೆಯ ಪ್ರಕರಣಗಳಿದ್ದು ಈ ನ್ಯಾಯಾಲಯಗಳು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿವೆ. ಕಚೇರಿ

ವೇಳೆಯಲ್ಲಿ ನ್ಯಾಯಾಲಯದ ಕಲಾಪಗಳು ನಡೆಯದಿದ್ದರೆ ಅದೊಂದು ಅಪವಾದವಾಗಿದ್ದು ನಿತ್ಯವೂ ಕಲಾಪಗಳು ನಡೆದಿರುವುದಿಲ್ಲ ಎಂದು ಹೇಳಲಾಗುವುದಿಲ್ಲ ಎಂಬ ವಿಚಾರಣಾಧಿಕಾರಿಗಳ ನಿರ್ಣಯವನ್ನು ಒಪ್ಪಬಹುದಾಗಿದೆ. ಆದ್ದರಿಂದ ಈ ಮೇಲಿನ ಎಲ್ಲ ನಾಲ್ಕು ಆರೋಪಗಳು ಸಾಬೀತಾಗಿರುತ್ತವೆ.

ಇಲಾಖಾ ವಿಚಾರಣಾ ಸಂಖ್ಯೆ : 8/2005

ಆರೋಪ–1 : ಶ್ರೀ ಜಿ. ನರಹರಿ, ಜಿಲ್ಲಾ ನ್ಯಾಯಾಧೀಶರು, ಇವರು ಬೆಳಗಾಂನ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾಗಿ ಕಾರ್ಯನಿರ್ವಹಿಸುತ್ತಿದ್ದಾಗ ಕೋಲಾರ ಜಿಲ್ಲಾ ನ್ಯಾಯಾಲಯದಲ್ಲಿ ಶ್ರೀಮತಿ ಪದ್ಮ, ಇವರು ಬೆರಳಚ್ಚುಗಾರ್ತಿಯಾಗಿ ಕಾರ್ಯನಿರ್ವಹಿಸುತ್ತಿದ್ದರು. ಅದೇ ನ್ಯಾಯಾಲಯದ ಸೆಷನ್ಸ್ ಪ್ರಕರಣ ಸಂಖ್ಯೆ : 16/1991 ರಲ್ಲಿ ಶ್ರೀಮತಿ ಪದ್ಮ ಇವರ ಪತಿ ಶ್ರೀ ಶಂಕರಪ್ಪ ಹಾಗೂ ಅವರ ಮಾವ ಶ್ರೀ ವೆಂಕಟಸ್ವಾಮಿ ಮತ್ತು ಅವರ ಭಾವ ಶ್ರೀ ನಾರಾಯಣಮೂರ್ತಿ ಇವರೆಲ್ಲರೂ ಆರೋಪಿಗಳಾಗಿದ್ದು, ಈ ಆರೋಪಿಗಳು ಶ್ರೀಮತಿ ಪದ್ಮರವರ ಹತ್ತಿರದ ಸಂಬಂಧಿಗಳೆಂಬುದು ಸದರೀ ಆರೋಪಿತ ಜಿಲ್ಲಾ ನ್ಯಾಯಾಧೀಶರಿಗೆ ಗೊತ್ತಿದ್ದರೂ ಸಹ ವಿಚಾರಣೆಯ ಸಂದರ್ಭದಲ್ಲಿ ಆರೋಪಿಗಳ ಹೇಳಿಕೆಗಳನ್ನು ಶ್ರೀಮತಿ ಪದ್ಮರವರ ಕೈಬರಹದಲ್ಲಿ ದಾಖಲಿಸಲು ಅವಕಾಶ ನೀಡಿರುತ್ತಾರೆ ಮತ್ತು ಪ್ರಕರಣದ ವಿಚಾರಣೆ ನಡೆಸಿ ಎಲ್ಲ ಆರೋಪಿಗಳನ್ನು ದೋಷಮುಕ್ತರೆಂದು ತೀರ್ಪು ನೀಡಿ ಕರ್ತವ್ಯ ನಿಷ್ಠೆ ತೋರದೇ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) (i), (ii) ಮತ್ತು (iii) ನ್ನು ಉಲ್ಲಂಘಿಸಿದ್ದಾರೆ.

ಆರೋಪ–2 : ಶ್ರೀ ಜಿ. ನರಹರಿ, ಜಿಲ್ಲಾ ನ್ಯಾಯಾಧೀಶರು, ಇವರು ಕೋಲಾರದ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾಗಿ ಕಾರ್ಯನಿರ್ವಹಿಸುತ್ತಿದ್ದಾಗ, ಇವರ ವಿರುದ್ಧ ವಿಚಾರಣೆ ಸಂಖ್ಯೆ 1/2005 ನ್ನು ಪ್ರಾರಂಭಿಸಿದ ನಂತರವೂ ಈ ವಿಚಾರಣೆಯಲ್ಲಿ ಸಾಕ್ಷಿಯಾದ ಶ್ರೀಮತಿ ಪದ್ಮರವರೊಂದಿಗೆ ತಮ್ಮ ಕಚೇರಿ ದೂರವಾಣಿ ಮೂಲಕ ಅವರ ಕಚೇರಿ ಹಾಗೂ ಮನೆಗೆ ದಿನಾಂಕ 1–1–2005 ರಿಂದ ದಿನಾಂಕ 15–5–2005ರ ಮಧ್ಯೆ 266 ಬಾರಿ ಮತ್ತು ದಿನಾಂಕ 18–5–2005 ರಿಂದ ದಿನಾಂಕ 03–7–2005ರ ಮಧ್ಯೆ 71 ಬಾರಿ ಹಾಗೂ ತಮ್ಮ ಮೊಬೈಲ್ ಸಂಖ್ಯೆ : 9448585276 ರ ಮೂಲಕ ಶ್ರೀಮತಿ ಪದ್ಮರವರ ಮೇಲೆ ವಿಚಾರಣೆ ವೇಳೆ ತಮ್ಮ ಪರವಾಗಿ ಹೇಳಿಕೆ ನೀಡುವಂತೆ ಪುಸಲಾಯಿಸುವ ದುರುದ್ದೇಶದಿಂದ ಸಂವಾದ ನಡೆಸಿ ಒಬ್ಬ ನ್ಯಾಯಾಧೀಶರಿಗೆ ಸಲ್ಲದ ರೀತಿಯಲ್ಲಿ ವರ್ತಿಸಿ ಹಾಗೂ ಪ್ರಾಮಾಣಿಕತೆ ಮೆರೆಯುವಲ್ಲಿ ವಿಫಲರಾಗುವ ಮೂಲಕ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) (i), (ii) ಮತ್ತು (iii) ನ್ನು ಉಲ್ಲಂಘಿಸಿದ್ದಾರೆ.

ಆರೋಪ–3 : ಶ್ರೀಮತಿ ಪದ್ಮ ಇವರ ಪತಿಯಾದ ಶ್ರೀ ಶಂಕರಪ್ಪ ಇವರು ಶ್ರೀ ಜಿ. ನರಹರಿ ಇವರ ಮುಂದೆ ವಿಚಾರಣೆಯಲ್ಲಿದ್ದ ಸೆಷನ್ಸ್ ಪ್ರಕರಣ ಸಂಖ್ಯೆ : 16/1991 ರಲ್ಲಿ ಆರೋಪಿಗಳಾಗಿರುವುದು ತಮ್ಮ ಗಮನದಲ್ಲಿದ್ದರೂ ಸಹ ಈ ಸೆಷನ್ಸ್ ಪ್ರಕರಣದ ಆರೋಪಿಗಳನ್ನು ಹಾಗೂ ಶ್ರೀಮತಿ ಪದ್ಮರವರನ್ನು ತಮ್ಮ ಮನೆಯ ಧಾರ್ಮಿಕ ಕಾರ್ಯಗಳಿಗೆ ಆಹ್ವಾನಿಸಿ ಒಬ್ಬ ನ್ಯಾಯಾಧೀಶರಿಗೆ ಸಲ್ಲದ ರೀತಿಯಲ್ಲಿ ವರ್ತಿಸುವ ಮೂಲಕ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) (i), (ii) ಮತ್ತು (iii) ನ್ನು ಉಲ್ಲಂಘಿಸಿದ್ದಾರೆ.

ಆರೋಪ–4 : ಅಕ್ಟೋಬರ್ 2004 ರಲ್ಲಿ ರೂ. 2000/– ಕ್ಕಿಂತ ಹೆಚ್ಚಿನ ಬೆಲೆಯ 2 ಮೊಬೈಲ್ ದೂರವಾಣಿಗಳನ್ನು ಖರೀದಿಸಿದ್ದು, ಖರೀದಿಸುವ ಪೂರ್ವದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದಿಂದ ಅನುಮತಿ ಪಡೆಯದೇ ಹಾಗು ಖರೀದಿಸಿದ ನಂತರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳ ನಿಯಮ 23(3) ರಂತೆ ಮಾನ್ಯ ಉಚ್ಚ ನ್ಯಾಯಾಲಯಕ್ಕೆ ವರದಿ ಮಾಡದೇ ದುರ್ನಡತೆ ಎಸಗಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) (i), (ii) ಮತ್ತು (iii) ನ್ನು ಉಲ್ಲಂಘಿಸಿದ್ದಾರೆ.

ಆರೋಪ–5 : ಶ್ರೀಮತಿ ಪದ್ಮ ಇವರು ದಿನಾಂಕ 11–01–2002 ರಂದು ಕಾಲೇಜೊಂದರಲ್ಲಿ ವ್ಯಾಸಂಗ ಮಾಡಲು ಅನುಮತಿ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಕಾಲೇಜಿನ ಹೆಸರು ಮತ್ತು ಸ್ಥಳವನ್ನು ಖಚಿತಪಡಿಸಿಕೊಳ್ಳದೇ ಅನುಮತಿ ನೀಡುವುದರ ಮೂಲಕ ಹಾಗೂ ನ್ಯಾಯಾಲಯದ ಕಚೇರಿ ಸಮಯದಲ್ಲೇ ತರಗತಿಗಳು ನಡೆಯುವ ಕೋಲಾರದಿಂದ 35 ಕಿ.ಮೀ. ದೂರವಿರುವ ಕೆ.ಜಿ.ಎಫ್.ನ ಕಾಲೇಜೊಂದರಲ್ಲಿ ವ್ಯಾಸಂಗ ಮಾಡಲು ಅವಕಾಶ ನೀಡಿ ಕರ್ತವ್ಯ ನಿಷ್ಠೆ ತೋರದೆ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) (i), (ii) ಮತ್ತು (iii) ನ್ನು ಉಲ್ಲಂಘಿಸಿದ್ದಾರೆ.

ಶ್ರೀ ಜಿ. ನರಹರಿ, ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಮೇಲೆ ಓದಲಾದ (2)ರ ದಿನಾಂಕ 24–03–2005 ರಲ್ಲಿ ನೀಡಿದ ಉತ್ತರಗಳನ್ನು ವಿಚಾರಣಾಧಿಕಾರಿಗಳು ಪರಿಶೀಲಿಸಿ ಮೇಲೆ ಓದಲಾದ (3)ರ ದಿನಾಂಕ 12–10–2008ರ ತಮ್ಮ ವಿಚಾರಣಾ ವರದಿಯಲ್ಲಿ ಈ ಕೆಳಕಂಡ ನಿರ್ಣಯಗಳನ್ನು ಕೈಗೊಂಡಿರುತ್ತಾರೆ.

ಶ್ರೀ ಜಿ. ನರಹರಿ, ಜಿಲ್ಲಾ ನ್ಯಾಯಾಧೀಶರು, ಇವರು ಕೋಲಾರದ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾಗಿ ಕಾರ್ಯನಿರ್ವಹಿಸುತ್ತಿದ್ದಾಗ ಕೋಲಾರ ಜಿಲ್ಲಾ ನ್ಯಾಯಾಲಯದಲ್ಲಿ ಶ್ರೀಮತಿ ಪದ್ಮ ಅವರು ಬೆರಳಚ್ಚುಗಾರ್ತಿಯಾಗಿ ಕಾರ್ಯನಿರ್ವಹಿಸುತ್ತಿದ್ದರು. ಅದೇ ನ್ಯಾಯಾಲಯದ ಸೆಷನ್ಸ್ ಪ್ರಕರಣ ಸಂಖ್ಯೆ : 16/1991 ರಲ್ಲಿ ಶ್ರೀಮತಿ ಪದ್ಮ ಅವರ ಪತಿ ಶ್ರೀ ಶಂಕರಪ್ಪ ಹಾಗೂ ಅವರ ಮಾವ ಶ್ರೀ ವೆಂಕಟಸ್ವಾಮಿ ಮತ್ತು ಅವರ ಭಾವ ಶ್ರೀ ನಾರಾಯಣಮೂರ್ತಿ ಇವರೆಲ್ಲರೂ ಆರೋಪಿಗಳಾಗಿದ್ದು, ಈ ಆರೋಪಿಗಳು ಶ್ರೀಮತಿ ಪದ್ಮರವರ ಹತ್ತಿರದ ಸಂಬಂಧಿಗಳೆಂಬುದು ಸದರೀ ಆರೋಪಿತ ಜಿಲ್ಲಾ ನ್ಯಾಯಾಧೀಶರಿಗೆ ಗೊತ್ತಿದ್ದರೂ ಸಹ ವಿಚಾರಣೆಯ ಸಂದರ್ಭದಲ್ಲಿ ಆರೋಪಿಗಳ ಹೇಳಿಕೆಗಳನ್ನು ಶ್ರೀಮತಿ ಪದ್ಮರವರ ಕೈಬರಹದಲ್ಲಿ ದಾಖಲಿಸಲು ಅವಕಾಶ ನೀಡಿರುತ್ತಾರೆ ಮತ್ತು ಪ್ರಕರಣದ ವಿಚಾರಣೆ ನಡೆಸಿ ಎಲ್ಲ ಆರೋಪಿಗಳನ್ನು ದೋಷಮುಕ್ತರೆಂದು ತೀರ್ಪು ನೀಡಿ ಕರ್ತವ್ಯ ನಿಷ್ಠೆ ತೋರುವಲ್ಲಿ ವಿಫಲರಾಗಿರುವ ಆರೋಪ ಕುರಿತಂತೆ ಮೇಲ್ಕಾಣಿಸಿದ ಕೋಲಾರ ಜಿಲ್ಲಾ ನ್ಯಾಯಾಲಯದ ಸೆಷನ್ಸ್ ಪ್ರಕರಣದ ವಿಚಾರಣೆಯನ್ನು ತಾವೇ ಮಾಡಿದ್ದಲ್ಲದೇ ಈ ಇಲಾಖಾ ವಿಚಾರಣೆಯ ಸಾಕ್ಷಿಯಾಗಿರುವ ಶ್ರೀಮತಿ ಪದ್ಮರವರಿಗೆ ಆರೋಪಿಗಳ ಹೇಳಿಕೆಗಳನ್ನು ಅವರ ಕೈಬರಹದಲ್ಲಿ ದಾಖಲಿಸಲು ಅವಕಾಶ ನೀಡಿರುವುದನ್ನು ಒಪ್ಪಿಕೊಂಡಿರುತ್ತಾರೆ. ಆದರೆ ಸೆಷನ್ಸ್ ಪ್ರಕರಣದ ವಿಚಾರಣೆಯನ್ನು ಕೈಗೆತ್ತಿಕೊಂಡಾಗ ಆರೋಪಿಗಳಲ್ಲಿ ಕೆಲವರು ಶ್ರೀಮತಿ ಪದ್ಮರವರ ಹತ್ತಿರದ ಸಂಬಂಧಿಗಳೆಂಬುದು ಆರೋಪಿತ ಜಿಲ್ಲಾ ನ್ಯಾಯಾಧೀಶರಿಗೆ ತಿಳಿದಿರಲಿಲ್ಲವೆಂದು ವಾದಿಸಿರುತ್ತಾರೆ.

ಆರೋಪಿತ ಜಿಲ್ಲಾ ನ್ಯಾಯಾಧೀಶರನ್ನು ವಿಚಾರಣೆಗೊಳಪಡಿಸಿದ ಸಂದರ್ಭದಲ್ಲಿ ತಮ್ಮ ಲಿಖಿತ ಹೇಳಿಕೆಯ ಮೂಲಕ ಆರೋಪಿತರು ಶ್ರೀಮತಿ ಪದ್ಮ ಹಾಗೂ ಅವರ ಕುಟುಂಬ ವರ್ಗದವರೊಂದಿಗೆ ಹತ್ತಿರದ ಸಂಬಂಧ ಹೊಂದಿರುವುದು ತಿಳಿದು ಬಂದಿದೆ ಹಾಗೂ ವಿಚಾರಣೆ ವೇಳೆ ಶ್ರೀಮತಿ ಪದ್ಮರವರು ಆರೋಪಿತ ನ್ಯಾಯಾಧೀಶರನ್ನು ತಮ್ಮ ಪತಿಯವರಿಗೆ ಬೆಳಗಾಂವಿಗೆ ವರ್ಗಾವಣೆಯಾಗುವ 2 ತಿಂಗಳುಗಳ ಮೊದಲಷ್ಟೆ

ಪರಿಚಯಿಸಿದ್ದಾಗಿ ಸಾಕ್ಷಿ ಹೇಳಿದ್ದರೂ ಸಹ ಶ್ರೀ ಜಿ. ನರಹರಿ, ಆರೋಪಿತ ಜಿಲ್ಲಾ ನ್ಯಾಯಾಧೀಶರು ಇವರಿಗೆ ಕೋಲಾರ ಜಿಲ್ಲಾ ನ್ಯಾಯಾಲಯದ ಸೆಷನ್ಸ್ ಪ್ರಕರಣ ಸಂಖ್ಯೆ : 16/1991 ರಲ್ಲಿ ತನ್ನ ಪತಿ, ಭಾವ ಹಾಗೂ ಮಾವನವರೂ ಆಪಾದಿತಾರಾಗಿರುವ ಪ್ರಕರಣದ ವಿಚಾರಣೆ ಹಾಗೂ ತೀರ್ಪು ನೀಡುವ ವೇಳೆಯಲ್ಲಿ ಮಾಹಿತಿ ಇತ್ತು ಎಂದು ಒಪ್ಪಿಕೊಂಡಿರುತ್ತಾರೆ. ಆದ್ದರಿಂದ ಆರೋಪಿತರ ವಾದದಲ್ಲಿ ಸತ್ಯಾಂಶವಿರುವುದಿಲ್ಲ. ಈ ಮೂಲಕ ಮೇಲ್ಕಂಡ ಆರೋಪ (1) ಮತ್ತು (2) ಸಾಬೀತಾಗಿರುತ್ತವೆ ಎಂಬ ವಿಚಾರಣಾಧಿಕಾರಿಗಳ ನಿರ್ಣಯವನ್ನು ಅಂಗೀಕರಿಸಬಹುದು.

ಶ್ರೀಮತಿ ಪದ್ಮ ಇವರ ಪತಿಯಾದ ಶ್ರೀ ಶಂಕರಪ್ಪ ಇವರು ಶ್ರೀ ಜಿ. ನರಹರಿ ಇವರ ಮುಂದೆ ವಿಚಾರಣೆಯಲ್ಲಿದ್ದ ಸೆಷನ್ಸ್ ಪ್ರಕರಣ ಸಂಖ್ಯೆ : 16/1991 ರಲ್ಲಿ ಆರೋಪಿಗಳಾಗಿರುವುದು ತಮ್ಮ ಗಮನದಲ್ಲಿದ್ದರೂ ಸಹ ಈ ಸೆಷನ್ಸ್ ಪ್ರಕರಣದ ಆರೋಪಿಗಳನ್ನು ಹಾಗೂ ಶ್ರೀಮತಿ ಪದ್ಮರವರನ್ನು ತಮ್ಮ ಮನೆಯ ಧಾರ್ಮಿಕ ಕಾರ್ಯಗಳಿಗೆ ಆಹ್ವಾನಿಸಿ ಒಬ್ಬ ನ್ಯಾಯಾಧೀಶರಿಗೆ ಸಲ್ಲದರೀತಿಯಲ್ಲಿ ವರ್ತಿಸಿದ್ದಾರೆ ಎಂಬ ಆರೋಪವನ್ನು ಆರೋಪಿತರು ಅಲ್ಲಗಳೆದಿರುವುದಿಲ್ಲ. ಈ ವಿಷಯವು ಸಂಬಂಧಿತ ಘಟನೆ ಮತ್ತು ಸಾಕ್ಷ್ಯಾಧಾರಗಳ ಮೂಲಕ ಈಗಾಗಲೇ ಬಿಂಬಿತವಾಗಿರುವುದರಿಂದ ಈ ಆರೋಪ ಸಾಬೀತಾಗಿರುತ್ತವೆ ಎಂಬ ವಿಚಾರಣಾಧಿಕಾರಿಗಳ ನಿರ್ಣಯವನ್ನು ಒಪ್ಪಬಹುದಾಗಿದೆ.

ಅಕ್ಟೋಬರ್ 2004 ರಲ್ಲಿ ರೂ. 2000/- ಕ್ಕಿಂತ ಹೆಚ್ಚಿನ ಬೆಲೆಯ 2 ಮೊಬೈಲ್ ದೂರವಾಣಿಗಳನ್ನು ಖರೀದಿಸಿದ್ದು, ಖರೀದಿಸುವ ಪೂರ್ವದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದಿಂದ ಅನುಮತಿ ಪಡೆಯದೇ ಹಾಗು ಖರೀದಿಸಿದ ನಂತರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳ ನಿಯಮ 23(3) ರಂತೆ ಮಾನ್ಯ ಉಚ್ಚ ನ್ಯಾಯಾಲಯಕ್ಕೆ ವರದಿ ಮಾಡದೇ ದುರ್ನಡತೆ ಎಸಗಿದ ಆರೋಪಕ್ಕೆ ಪ್ರತಿಯಾಗಿ ಮೊಬೈಲ್ ದೂರವಾಣಿಗಳ ಖರೀದಿಯ ಚಿಕ್ಕ ವಿಷಯವಾಗಿದ್ದು ದುರ್ನಡತೆ ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು ವಾದಿಸಿರುತ್ತಾರೆ ಮತ್ತು ಹಲವಾರು ನ್ಯಾಯಾಂಗಾಧಿಕಾರಿಗಳು ಇದೇ ರೀತಿಯಾಗಿ ಮೊಬೈಲ್‌ಗಳನ್ನು ಖರೀದಿಸಿದ್ದಾರೆಂದು ತಿಳಿಸಿದ್ದಾರೆ. ಆದರೆ ಅಂತಹ ನಿದರ್ಶನಗಳನ್ನು ನೀಡಿರುವುದಿಲ್ಲ. ಅಲ್ಲದೆ ನ್ಯಾಯಾಂಗಾಧಿಕಾರಿಗಳು ದುಬಾರಿ ವಸ್ತುಗಳನ್ನು ಖರೀದಿಸುವ ಪೂರ್ವದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದಿಂದ ಅನುಮತಿ ಪಡೆಯಬೇಕು ಇಲ್ಲವಾದರೆ ಖರೀದಿಸಿದ ನಂತರ ವರದಿ ಮಾಡಬೇಕೆಂಬ ನಿಯಮವಿದ್ದು, ಈ ಪ್ರಕ್ರಿಯೆಯನ್ನು ಅನುಸರಿಸುವಲ್ಲಿ ಆರೋಪಿತರು ವಿಫಲವಾಗಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳ ನಿಯಮ 23(3)ನ್ನು ಉಲ್ಲಂಘಿಸಿದ ಆರೋಪ ಸಾಬೀತಾಗಿದೆ ಎಂಬ ವಿಚಾರಣಾಧಿಕಾರಿಗಳ ನಿರ್ಣಯ ಅಂಗೀಕಾರ್ಹವಾಗಿದೆ.

ಶ್ರೀಮತಿ ಪದ್ಮ ಅವರು ದಿನಾಂಕ 11-01-2002 ರಂದು ಕಾಲೇಜೊಂದರಲ್ಲಿ ವ್ಯಾಸಂಗ ಮಾಡಲು ಅನುಮತಿ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಕಾಲೇಜಿನ ಹೆಸರು ಮತ್ತು ಸ್ಥಳವನ್ನು ಖಚಿತಪಡಿಸಿಕೊಳ್ಳದೇ ಅನುಮತಿ ನೀಡುವುದರ ಮೂಲಕ ಹಾಗೂ ನ್ಯಾಯಾಲಯದ ಕಚೇರಿ ಸಮಯದಲ್ಲೇ ತರಗತಿಗಳು ನಡೆಯುವ ಕೋಲಾರದಿಂದ 35 ಕಿ.ಮೀ. ದೂರವಿರುವ ಕೆ.ಜಿ.ಎಫ್.ನ ಕಾಲೇಜೊಂದರಲ್ಲಿ ವ್ಯಾಸಂಗ ಮಾಡಲು ಅವಕಾಶ ನೀಡಿ ಕರ್ತವ್ಯ ನಿಷ್ಠೆ ತೋರಿಲ್ಲವೆಂಬ ಆರೋಪ ಕುರಿತಂತೆ ಆರೋಪಿತ ಜಿಲ್ಲಾ ನ್ಯಾಯಾಧೀಶರು ಇಂತಹ ಅನುಮತಿಗಳನ್ನು ನೀಡುವುದು ಸಾಮಾನ್ಯ ಮತ್ತು ಮಾಮೂಲಿಯಾಗಿರುವುದರಿಂದ ತಾವು ಯಾವುದೇ ರೀತಿ ದುರ್ನಡತೆ ಎಸಗಿರುವುದಿಲ್ಲವೆಂದು ಸಮರ್ಥಿಸಿಕೊಂಡಿರುತ್ತಾರೆ. ಆದರೆ ಆರೋಪಿತರು ಕಾಲೇಜಿನ ಸ್ಥಳ, ತರಗತಿಗಳು ನಡೆಯುವ ಸಮಯಗಳ ಬಗ್ಗೆ ವಿಚಾರಣೆ ನಡೆಸಿದ್ದರೆ ನ್ಯಾಯಾಲಯದ ಕಚೇರಿ ಸಮಯದಲ್ಲೇ ವ್ಯಾಸಂಗ ಮಾಡಲು ಅನುಮತಿ ನೀಡುತ್ತಿರಲಿಲ್ಲ. ಆದರೆ ಆರೋಪಿತರ ಮತ್ತು ಶ್ರೀಮತಿ ಪದ್ಮರವರ ನಡುವೆ ಅನುಮಾನಾಸ್ಪದ ಸಂಬಂಧವಿರುದರಿಂದಲೇ ವ್ಯಾಸಂಗಕ್ಕಾಗಿ ಅನುಮತಿ ಕೋರಿ ಸಲ್ಲಿಸಿದ ಅರ್ಜಿಯನ್ನು ಅಂದೇ ವಿಲೆಗೊಳಿಸುವ ಮೂಲಕ ಎಲ್ಲ ನಿಯಮಗಳನ್ನು ಕಡೆಗಣಿಸಿರುತ್ತಾರೆ. ಈ ಮೂಲಕ 5ನೇ ಆರೋಪವು ಸಾಬೀತಾಗಿರುತ್ತದೆ ಎಂಬ ವಿಚಾರಣಾಧಿಕಾರಿಗಳ ನಿರ್ಣಯವನ್ನು ಒಪ್ಪಬಹುದಾಗಿದೆ.

ಇಲಾಖಾ ವಿಚಾರಣಾ ಸಂಖ್ಯೆ : 12/2005

<u>ಆರೋಪ-1 :</u> ಇಲಾಖಾ ವಿಚಾರಣೆ ಸಂಖ್ಯೆ : 8/2005 ರಲ್ಲಿ ಜಾರಿಗೊಳಿಸಲಾದ ಆರೋಪಗಳಿಗೆ ನೀಡಿದ ಉತ್ತರದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ವಿರುದ್ಧ ಅವಹೇಳನಾಕಾರಿ ಹಾಗೂ ಬೇಜವಾಬ್ದಾರಿಯುತ ಆರೋಪಗಳನ್ನು ಮಾಡುತ್ತಾ ಅತೀವ ಅವಿಧೇಯತೆಯನ್ನು ಪ್ರದರ್ಶಿಸಿ ಒಬ್ಬ ನ್ಯಾಯಾಧೀಶರಿಗೆ ಸಲ್ಲದ ರೀತಿಯಲ್ಲಿ ವರ್ತಿಸಿ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) (iii) ನ್ನು ಉಲ್ಲಂಘಿಸಿದ್ದಾರೆ.

<u>ಆರೋಪ-2 :</u> ಶ್ರೀ ಜಿ. ನರಹರಿ, ಜಿಲ್ಲಾ ನ್ಯಾಯಾಧೀಶರು, ಇವರು ಕೋಲಾರದ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾಗಿ ಕಾರ್ಯನಿರ್ವಹಿಸುತ್ತಿದ್ದಾಗ, ಸೆಷನ್ಸ್ ಪ್ರಕರಣ ಸಂಖ್ಯೆ : 16/1991 ರಲ್ಲಿನ ಆರೋಪಿಗಳ ಹೇಳಿಕೆಯನ್ನು ದಾಖಲಿಸಲು ಅನುಸರಿಸಿದ ಪ್ರಕ್ರಿಯೆಯು ಸಿ.ಆರ್.ಪಿ.ಸಿ. ಯ ಪರಿಚ್ಛೇದ 313 ರಂತೆ ಇರದೇ ಕಾನೂನಿಗೆ ವಿರುದ್ಧವಾಗಿದೆ. ಈ ಪ್ರಕ್ರಿಯೆಯನ್ನು ಕೇವಲ ಒಂದು ಔಪಚಾರಿಕವೆಂಬಂತೆ ತಳೆದ ನಿಲುವನ್ನು ಪ್ರಶ್ನಿಸಿದಕ್ಕಾಗಿ ನೀಡಿದ ಉತ್ತರಗಳು ಮಾನ್ಯ ಉಚ್ಚ ನ್ಯಾಯಾಲಯಕ್ಕೆ ನಿಷ್ಠೆ ತೋರದಿರುವ ಹಾಗೂ ಕರ್ತವ್ಯ ಪ್ರಜ್ಞೆಯನ್ನು ಮರೆಯುವಲ್ಲಿ ವಿಫಲರಾಗಿರುತ್ತಾರೆ. ಈ ಮೂಲಕ ಒಬ್ಬ ನ್ಯಾಯಾಧೀಶರಿಗೆ ಸಲ್ಲದ ರೀತಿಯಲ್ಲಿ ವರ್ತಿಸುವ ಮೂಲಕ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) (i), (ii) ಮತ್ತು (iii) ನ್ನು ಉಲ್ಲಂಘಿಸಿದ್ದು.

ಶ್ರೀ ಜಿ. ನರಹರಿ, ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಮೇಲೆ ಓದಲಾದ (2)ರ ದಿನಾಂಕ 24-03-2005 ರಲ್ಲಿ ನೀಡಿದ ಉತ್ತರಗಳನ್ನು ವಿಚಾರಣಾಧಿಕಾರಿಗಳು ಪರಿಶೀಲಿಸಿ ಮೇಲೆ ಓದಲಾದ (3)ರ ದಿನಾಂಕ 12-10-2008ರ ತಮ್ಮ ವಿಚಾರಣಾ ವರದಿಯಲ್ಲಿ ಈ ಕೆಳಕಂಡ ನಿರ್ಣಯಗಳನ್ನು ಕೈಗೊಂಡಿರುತ್ತಾರೆ.

೧ ಇಲಾಖಾ ವಿಚಾರಣೆ ಸಂಖ್ಯೆ : 8/2005 ರಲ್ಲಿ ಜಾರಿಗೊಳಿಸಲಾದ ಆರೋಪಗಳಿಗೆ ನೀಡಿದ ಉತ್ತರದಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ವಿರುದ್ಧ ಅವಹೇಳನಾಕಾರಿ ಹಾಗೂ ಬೇಜವಾಬ್ದಾರಿಯುತ ಆರೋಪಗಳನ್ನು ಮಾಡುತ್ತಾ ಅತೀವ ಅವಿಧೇಯತೆಯನ್ನು ಪ್ರದರ್ಶಿಸಿ ಒಬ್ಬ ನ್ಯಾಯಾಧೀಶರಿಗೆ ಸಲ್ಲದ ರೀತಿಯಲ್ಲಿ ವರ್ತಿಸಿದ ಆರೋಪಕ್ಕೆ ಪ್ರತಿಯಾಗಿ ಆರೋಪಿತರು ತಮ್ಮನ್ನು ರಕ್ಷಿಸಿಕೊಳ್ಳಲು, ವ್ಯಾಪ್ತಿಯನ್ನು ಮೀರದಂತೆ ವಾದವನ್ನು ಮಂಡಿಸಲು ಅವಕಾಶವಿದೆ. ಆದರೆ ಆರೋಪಿತ ನ್ಯಾಯಾಂಗಾಧಿಕಾರಿಗಳು ಯಾವುದೇ ಆಧಾರಗಳಿಲ್ಲದೇ ವಿಚಾರಣಾ ಪ್ರಾಧಿಕಾರವನ್ನೂ ಟೀಕಿಸಿರುವುದರಿಂದ ಮೊದಲನೆ ಆರೋಪವು ಸಾಬೀತಾಗಿದೆ ಎಂಬ ವಿಚಾರಣಾಧಿಕಾರಿಗಳ ನಿರ್ಣಯವು ಅಂಗೀಕಾರ್ಹವಾಗಿದೆ.

ಶ್ರೀ ಜಿ. ನರಹರಿ, ಜಿಲ್ಲಾ ನ್ಯಾಯಾಧೀಶರು, ಇವರು ಕೋಲಾರದ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾಗಿ ಕಾರ್ಯನಿರ್ವಹಿಸುತ್ತಿದ್ದಾಗ, ಸೆಷನ್ಸ್ ಪ್ರಕರಣ ಸಂಖ್ಯೆ : 16/1991 ರಲ್ಲಿನ ಆರೋಪಿಗಳ ಹೇಳಿಕೆಯನ್ನು ದಾಖಲಿಸಲು ಅನುಸರಿಸಿದ ಪ್ರಕ್ರಿಯೆಯು

ಸಿ.ಆರ್.ಪಿ.ಸಿ. ಯ ಪರಿಚ್ಛೇದ 313 ರಂತೆ ಇರದೇ ಕಾನೂನಿಗೆ ವಿರುದ್ಧವಾಗಿದೆ. ಈ ಪ್ರಕ್ರಿಯೆಯನ್ನು ಕೇವಲ ಒಂದು ಔಪಚಾರಿಕತೆ ಎಂಬುದಾಗಿ ತಳೆದ ನಿಲುವನ್ನು ಪ್ರಶ್ನಿಸಿದಕ್ಕಾಗಿ ನೀಡಿದ ಉತ್ತರಗಳು ಮಾನ್ಯ ಉಚ್ಚ ನ್ಯಾಯಾಲಯಕ್ಕೆ ನಿಷ್ಠೆ ತೋರದಿರುವ ಹಾಗೂ ಕರ್ತವ್ಯ ಪ್ರಜ್ಞೆಯನ್ನು ಮರೆಯುವಲ್ಲಿ ವಿಫಲರಾಗಿರುತ್ತಾರೆ. ಅಲ್ಲದೇ ಒಬ್ಬ ನ್ಯಾಯಾಧೀಶರಿಗೆ ಸಲ್ಲದ ರೀತಿಯಲ್ಲಿ ವರ್ತಿಸಿದ್ದಾರೆ ಎಂಬ ಆರೋಪಕ್ಕೆ ಪ್ರತಿಯಾಗಿ ಆರೋಪಿತ ಜಿಲ್ಲಾ ನ್ಯಾಯಾಂಗಾಧಿಕಾರಿಗಳು ಸಿ.ಆರ್.ಪಿ.ಸಿ. ಯ ಪರಿಚ್ಛೇದ 313 ರಂತೆ ಆರೋಪಿಗಳ ಹೇಳಿಕೆಗಳನ್ನು ದಾಖಲಿಸುವಾಗ ಬೆಂಚ್ ಕ್ಲಾರ್ಕ್‌ರವರನ್ನು ನಂಬುವುದರಲ್ಲಿ ಯಾವುದೇ ತಪ್ಪಿಲ್ಲ ಎಂದು ವಾದಿಸಿರುತ್ತಾರೆ. ಆದರೆ ಮಾನ್ಯ ಸರ್ವೋಚ್ಚ ನ್ಯಾಯಾಲಯ ಹಾಗೂ ಉಚ್ಚ ನ್ಯಾಯಾಲಯಗಳು ಸಿ.ಆರ್.ಪಿ.ಸಿ. ಯ ಪರಿಚ್ಛೇದ 313 ರಂತೆ ಆರೋಪಿಗಳ ಹೇಳಿಕೆಗಳ ದಾಖಲಾತಿಯ ಮಹತ್ವವನ್ನು ಹಲವಾರು ಬಾರಿ ಉಚ್ಚರಿಸಿರುತ್ತವೆ. ಈ ಮಹತ್ವತೆಯು ನ್ಯಾಯಾಂಗಾಧಿಕಾರಿಗೆ ತಿಳಿದಿರಲಿಲ್ಲವೆಂಬುದು ಅವರ ಉತ್ತರದಿಂದ ಕಂಡುಬರುತ್ತದೆ. ಇದು ಅವರಿಗೆ ಕಾನೂನಿನ ಬಗ್ಗೆ ಸರಿಯಾದ ತಿಳುವಳಿಕೆ ಇಲ್ಲದಿರುವುದನ್ನು ತೋರಿಸುತ್ತದೆಯೇ ವಿನಹ ಅವರ ದುರ್ನಡತೆಯನ್ನಲ್ಲ. ಆದ್ದರಿಂದ ಎರಡನೇ ಆರೋಪವು ಸಾಬೀತಾಗಿರುವುದಿಲ್ಲವೆಂಬ ವಿಚಾರಣಾಧಿಕಾರಿಗಳ ನಿರ್ಣಯವನ್ನು ಒಪ್ಪಬಹುದಾಗಿದೆ.

ವಿಚಾರಣಾ ವರದಿಯ ಪ್ರತಿಯನ್ನು ಲಗತ್ತಿಸಿ ಶ್ರೀ ಜಿ. ನರಹರಿ, ಇವರಿಗೆ ಮೇಲೆ (4) ರಲ್ಲಿ ಓದಲಾದ ದಿನಾಂಕ 11.03.2009ರ ಎರಡನೇ ನೋಟೀಸ್ ನೀಡಿ ವಿಚಾರಣಾ ವರದಿಯ ಬಗ್ಗೆ ಏನಾದರೂ ಹೇಳುವುದಿದ್ದಲ್ಲಿ ಹೇಳಲು/ಲಿಖಿತ ಉತ್ತರ ನೀಡಲು ಅವಕಾಶ ಕಲ್ಪಿಸಲಾಯಿತು. ಶ್ರೀ ಜಿ. ನರಹರಿ ಅವರು ಮೇಲೆ (5) ರಲ್ಲಿ ಓದಲಾದ ದಿನಾಂಕ 28.03.2009 ರಲ್ಲಿ ಉತ್ತರ ಸಲ್ಲಿಸಿರುತ್ತಾರೆ. ಸದರಿಯವರ ಉತ್ತರಗಳನ್ನು ಪರಿಶೀಲಿಸಲಾಗಿ ಆರೋಪಿತರು ತಮ್ಮ ವಿರುದ್ಧ ಮಾಡಿದ ಆರೋಪಗಳಿಗೆ ಸಮರ್ಥನೀಯವಾದ ಉತ್ತರಗಳನ್ನು ನೀಡಿರುವುದಿಲ್ಲ. ಮುಂದುವರೆದು ಮೇಲೆ (7) ರಲ್ಲಿ ಓದಲಾದ ದಿನಾಂಕ 27-10-2010 ರಲ್ಲಿ ಸ್ವೀಕೃತವಾದ ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಆಪ್ತ ಕಾರ್ಯದರ್ಶಿಯವರ ಟಿಪ್ಪಣಿ ಹಾಗೂ ಅದರೊಂದಿಗೆ ಸ್ವೀಕರಿಸಲಾದ ಶ್ರೀ ಜಿ. ನರಹರಿ, ಅವರ ದಿನಾಂಕ 25-10-2010ರ ಮನವಿಯನ್ನು ಪರಿಶೀಲಿಸಿದ ನಂತರ, ವಿಚಾರಣೆ ಸಂಖ್ಯೆ : 1/2005 ಮತ್ತು 8/2005 ರಲ್ಲಿನ ಎಲ್ಲ ಆರೋಪಗಳು ಸಾಬೀತಾಗಿದ್ದು ವಿಚಾರಣೆ ಸಂಖ್ಯೆ : 12/2005 ರಲ್ಲಿನ ಒಂದನೇ ಆರೋಪ ಸಾಬೀತಾಗಿದ್ದು, ಎರಡನೇ ಆರೋಪ ಸಾಬೀತಾಗಿರುವುದಿಲ್ಲ ಎಂಬ ವಿಚಾರಣಾ ವರದಿಯನ್ನು ಒಪ್ಪಿಕೊಂಡು ಈ ಮುಂದಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 56 ಸೇಉಸ್ನಾ 2010, ಬೆಂಗಳೂರು, ದಿನಾಂಕ 06ನೇ ಏಪ್ರಿಲ್ 2011

ಘನತೆವೆತ್ತ ಕರ್ನಾಟಕ ರಾಜ್ಯಪಾಲರು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 9 ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ ಜಿ. ನರಹರಿ, ಜಿಲ್ಲಾ ನ್ಯಾಯಾಧೀಶರು, ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅದೇ ನಿಯಮಾವಳಿಯ ನಿಯಮ 8 (viii) ರ ಅನ್ವಯ ಸೇವೆಯಿಂದ ವಜಾಗೊಳಿಸಿದ್ದಾರೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಎ.ಆರ್. ವಿಜಯಾನಂದ ಶರ್ಮ,

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್. 1050

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ.

(ಸೇವೆಗಳು-3)

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ಕರ್ನಾಟಕ ಕಾನೂನು ವರದಿ ಪರಿಷತ್ ನಿಯಮಗಳು 1983- ಕರಡು ಪರೀಕ್ಷಕರು (ಕನ್ನಡ ಮತ್ತು ಇಂಗ್ಲೀಷ್) ಈ ಹುದ್ದೆಯ ನೇಮಕಾತಿ ವಿಧಾನ ಪರಿಷ್ಕರಣೆ ಬಗ್ಗೆ.

ಓದಲಾಗಿದೆ :
1. ಸರ್ಕಾರದ ಅಧಿಸೂಚನೆ ಸಂಖ್ಯೆ : ಡಿಪಿಎಆರ್ 125 ಎಸ್‌ಹೆಚ್‌ಸಿ 80, ದಿನಾಂಕ 26.09.1983.
2. ಕಾರ್ಯದರ್ಶಿ, ಕರ್ನಾಟಕ ಕಾನೂನು ವರದಿ ಪರಿಷತ್ ಇವರ ಪತ್ರ ಸಂಖ್ಯೆ : ಎಲ್‌ಆರ್‌ಸಿ 26/1995, ದಿನಾಂಕ 02-11-2010.

ಪ್ರಸ್ತಾವನೆ :

ಮೇಲೆ (1) ರಲ್ಲಿ ಓದಲಾದ ಕರ್ನಾಟಕ ಕಾನೂನು ವರದಿ ಪರಿಷತ್ ನಿಯಮಗಳು, 1983ರ ಕ್ರಮ ಸಂಖ್ಯೆ 7 ಮತ್ತು 10 ರಲ್ಲಿರುವ ಕನ್ನಡ ಮತ್ತು ಇಂಗ್ಲೀಷ್ ಕರಡು ಪರೀಕ್ಷಕರ (ಪ್ರೂಫ್ ರೀಡರ್ಸ್) ಹುದ್ದೆಯ ವೇತನ ಶ್ರೇಣಿಯು ರೂ. 8000-14800 ಇದ್ದು ಈ ಹುದ್ದೆಗಳನ್ನು ಪ್ರಸ್ತುತ ಸರ್ಕಾರಿ ಮುದ್ರಣಾಲಯ, ಕೆಂಗೇರಿ ಇಲ್ಲಿಂದ ನಿಯೋಜನೆ ಮೇಲೆ ತುಂಬಲಾಗುತ್ತಿದೆ. ಆದರೆ ಈ ಹುದ್ದೆಗಳನ್ನು ತುಂಬಲು ನಿರ್ದೇಶಕರು, ಸರ್ಕಾರಿ ಮುದ್ರಣಾಲಯ ಇವರನ್ನು ಕೋರಲಾಗಿ ಸರ್ಕಾರಿ ಮುದ್ರಣಾಲಯದಲ್ಲಿನ ಕರಡು ಪರೀಕ್ಷಕರ ಹುದ್ದೆಯ ವೇತನ ಶ್ರೇಣಿಯು ರೂ. 7275-13350 ಆಗಿದ್ದು, ಕರ್ನಾಟಕ ಕಾನೂನು ವರದಿ ಪರಿಷತ್‌ನ ಕರಡು ಪರೀಕ್ಷಕರ (ಪ್ರೂಫ್ ರೀಡರ್ಸ್) ಹುದ್ದೆಯ ವೇತನ ಶ್ರೇಣಿಯು ರೂ. 8000-14800 ಆಗಿರುವುದರಿಂದ ಸದರಿ ಹುದ್ದೆಗಳಿಗೆ ಸರ್ಕಾರಿ ಮುದ್ರಣಾಲಯದಿಂದ ಕರಡು ಪರೀಕ್ಷಕರನ್ನು ನಿಯೋಜಿಸಲು ಸಾಧ್ಯವಿಲ್ಲವೆಂದು ಶಿಕ್ಷಣ ಇಲಾಖೆ ತಿಳಿಸಿರುವ ಮೇರೆಗೆ ಪ್ರಸ್ತುತ ಪರಿಷತ್‌ನಲ್ಲಿ ಸರ್ಕಾರಿ ಮುದ್ರಣಾಲಯದಿಂದ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಕರಡು ಪರೀಕ್ಷಕರನ್ನು ವಾಪಸ್ಸು ಪಡೆದುಕೊಳ್ಳಲು ಮುದ್ರಣಾಲಯ ನಿರ್ಧರಿಸಿದೆ. ಇದೇ ವೇಳೆಯಲ್ಲಿ ಪರಿಷತ್‌ನ ಕರಡು ಪರೀಕ್ಷಕರ ಹುದ್ದೆಯ ವೇತನ ಶ್ರೇಣಿಯನ್ನು ಸರ್ಕಾರಿ ಮುದ್ರಣಾಲಯದಲ್ಲಿನ ಕರಡು ಪರೀಕ್ಷಕರ ಹುದ್ದೆಯ ವೇತನ ಶ್ರೇಣಿಗೆ ಬದಲಿಸಿದಲ್ಲಿ ಮುದ್ರಣಾಲಯದ ನೌಕರರನ್ನು ನಿಯೋಜಿಸಬಹುದು ಅಥವಾ ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಬಹುದು ಎಂದು ಸರ್ಕಾರಿ ಮುದ್ರಣಾಲಯದ ನಿರ್ದೇಶಕರು ಅಭಿಪ್ರಾಯಪಟ್ಟಿರುವುದರಿಂದ ಕರ್ನಾಟಕ ಕಾನೂನು ವರದಿ ಪರಿಷತ್ ನಿಯಮಗಳು, 1983ರ ಕ್ರಮ ಸಂಖ್ಯೆ 7 ಮತ್ತು 10 ರಲ್ಲಿರುವ ಕನ್ನಡ ಮತ್ತು ಇಂಗ್ಲೀಷ್ ಕರಡು ಪರೀಕ್ಷಕರ (ಪ್ರೂಫ್ ರೀಡರ್ಸ್) ಹುದ್ದೆಯ ವೇತನ ಶ್ರೇಣಿಯನ್ನು ರೂ. 8000-14800 ಗಳಿಂದ ಸರ್ಕಾರಿ ಮುದ್ರಣಾಲಯದ ಕರಡು ಪರೀಕ್ಷಕರ ಹುದ್ದೆಯ ವೇತನ ಶ್ರೇಣಿ ರೂ. 7275-13350 ಕ್ಕೆ ಬದಲಾಯಿಸಿ ತಿದ್ದುಪಡಿ ಮಾಡುವಂತೆ ಕರ್ನಾಟಕ ಕಾನೂನು ವರದಿ ಪರಿಷತ್‌ನ ಕಾರ್ಯದರ್ಶಿಯವರು ಮೇಲೆ (2) ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರವನ್ನು ಕೋರಿರುತ್ತಾರೆ.

ಈ ವಿಷಯವನ್ನು ದಿನಾಂಕ 11-03-2011 ರಂದು ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ವೃಂದ ಪರಿಶೀಲನಾ ಸಮಿತಿಯ ಉಪ ಸಮಿತಿಯಲ್ಲಿ ಚರ್ಚಿಸಲಾಗಿದೆ. ಸದರಿ ಸಭೆಯಲ್ಲಿ ಕರ್ನಾಟಕ ಕಾನೂನು ವರದಿ ಪರಿಷತ್ ನಿಯಮಗಳು, 1983ಕ್ಕೆ ವಿದ್ಯುಕ್ತ ತಿದ್ದುಪಡಿಯನ್ನು ಕಾಯ್ದಿರಿಸಿ ಒಂದು ಕಾರ್ಯಕಾರಿ ಆದೇಶವನ್ನು ಹೊರಡಿಸಲು ತೀರ್ಮಾನಿಸಲಾಗಿದೆ. ಆದುದರಿಂದ ಈ ಕೆಳಕಂಡಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 59 ಸೇಉಸ್ನಾ 2010, ಬೆಂಗಳೂರು, ದಿನಾಂಕ 06ನೇ ಏಪ್ರಿಲ್ 2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಸನ್ನಿವೇಶದಲ್ಲಿ ಕರ್ನಾಟಕ ಕಾನೂನು ವರದಿ ಪರಿಷತ್ ನಿಯಮಗಳು, 1983ರ ಕ್ರಮ ಸಂಖ್ಯೆ 7 ಮತ್ತು 10 ರಲ್ಲಿರುವ ಕರಡು ಪರೀಕ್ಷಕರು (ಕನ್ನಡ) ಮತ್ತು ಕರಡು ಪರೀಕ್ಷಕರು (ಇಂಗ್ಲೀಷ್) ಈ ಹುದ್ದೆಗಳಿಗೆ ಕೆಳಕಂಡಂತೆ ವೇತನ ಶ್ರೇಣಿ, ಹುದ್ದೆಗಳ ಸಂಖ್ಯೆ ಹಾಗೂ ನೇಮಕಾತಿ ವಿಧಾನವನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಗದಿಪಡಿಸಲಾಗಿದೆ.

Sl. No.	Category of Posts	Scale of pay	No. of posts	Method of recruitment	Qualifi-cations
7	Proof Readers (Kannada)	7275-13350	2	By deputation of an official from Government printing press or an official of equivalent grade from any other State Civil Services or from High Court of Karnataka	-
10	Proof Readers (English)	7275-13350	2	By deputation of an official from Government printing press or an official of equivalent grade from any other State Civil Services or from High Court of Karnataka	-

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ.ಆರ್. ವಿಜಯಾನಂದ ಶರ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ.
(ಸೇವೆಗಳು-3)

ಪಿ.ಆರ್. 1051

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

ವಿಷಯ : ದಿನಗೂಲಿ ಆಧಾರದ ಮೇಲೆ/ಮಾಸಿಕ ವೇತನ ಸಿಬ್ಬಂದಿಯಾಗಿ ಸೇವೆ ಸಲ್ಲಿಸಿರುವವರಿಗೆ ನಿವೃತ್ತಿ ವೇತನ ಸೌಲಭ್ಯ ನೀಡಲು ಪರಿಗಣಿಸುವ ಸೇವೆಯ ಪರಿಷ್ಕರಣೆ ಬಗ್ಗೆ.

ಓದಲಾಗಿದೆ :
1. ಸರ್ಕಾರಿ ಆದೇಶ ಸಂಖ್ಯೆ : ಡಿಪಿಎಆರ್ 2 ಎಸ್‌ಎಲ್‌ಸಿ 90, ದಿನಾಂಕ 6-8-1990.
2. ಸರ್ಕಾರಿ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಎಲ್‌ಸಿ 97, ದಿನಾಂಕ 26-9-1998.
3. ಸರ್ಕಾರಿ ಆದೇಶ ಸಂಖ್ಯೆ : ಎಫ್‌ಡಿ 6 ಸನಿತಿ 2003, ದಿನಾಂಕ 30-9-2003.
4. ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 15 ಸೇಸ್ಥಅ 2004, ದಿನಾಂಕ 8-7-2004.
5. ಸರ್ಕಾರಿ ಆದೇಶ ಸಂಖ್ಯೆ : ಎಫ್‌ಡಿ 6 ಎಸ್‌ಆರ್‌ಎ 2003, ದಿನಾಂಕ 22-10-2007.

ಪ್ರಸ್ತಾವನೆ :

ದಿನಗೂಲಿ ಆಧಾರದ ಮೇಲೆ ವಿವಿಧ ಇಲಾಖೆಗಳಲ್ಲಿ ದಿನಾಂಕ 1-7-84ರ ಮುಂಚಿತವಾಗಿ ನೇಮಕವಾದ ನೌಕರರ ಸೇವೆಯನ್ನು ಸಕ್ರಮಗೊಳಿಸುವ ಬಗ್ಗೆ ದಿನಾಂಕ 6-8-1990 ರಂದು ಮೇಲೆ (1) ರಲ್ಲಿ ಓದಲಾಗಿರುವ ಆದೇಶದ ಪ್ಯಾರಾ 14 ರಲ್ಲಿ ಅವರುಗಳು ಪಿಂಚಣಿ ಸೌಲಭ್ಯವನ್ನು ಪಡೆಯಲು ಅರ್ಹತಾ ಸೇವೆಯನ್ನು ಕರ್ನಾಟಕ ಸಿವಿಲ್ ಸೇವಾ ನಿಯಮಾವಳಿಯ ನಿಯಮ 248 ಎ ರನ್ವಯ ಲೆಕ್ಕ ಹಾಕಲು ಸೂಚಿಸಲಾಗಿತ್ತು. ನಿವೃತ್ತಿ ವೇತನ ಸೌಲಭ್ಯ ಪಡೆಯಲು ಕನಿಷ್ಠ 10 ವರ್ಷಗಳ ಅರ್ಹತಾ ಸೇವೆಯನ್ನು ಪೂರೈಸದೇ ಇರುವ ದಿನಗೂಲಿ ಆಧಾರದ ಮೇಲೆ/ಮಾಸಿಕ ವೇತನ ಸಿಬ್ಬಂದಿಯಾಗಿ ಸೇವೆ ಸಲ್ಲಿಸಿ ಸಕ್ರಮಗೊಂಡ ನೌಕರರ ಪ್ರಕರಣಗಳಲ್ಲಿ ಅವರು ದಿನಗೂಲಿ ಆಧಾರದ ಮೇಲೆ/ಮಾಸಿಕ ವೇತನ ಸಿಬ್ಬಂದಿಯಾಗಿ ಸಲ್ಲಿಸಿರುವ ಸೇವೆಯ 1/4 ಭಾಗ ಸೇವೆಯನ್ನು (ಗರಿಷ್ಠ ಮಿತಿ 3 ವರ್ಷಗಳು) ಕನಿಷ್ಠ ಅರ್ಹತಾ ಸೇವೆಗೆ ಕಡಿಮೆಯಾದ ಅವಧಿಗೆ ಸೇರ್ಪಡೆ ಮಾಡಲು ಮೇಲೆ (2) ರಲ್ಲಿ ಓದಲಾದ ದಿನಾಂಕ 26-9-1998ರ ಆದೇಶದಲ್ಲಿ ದಿನಾಂಕ 6-8-90 ರ ಆದೇಶದಲ್ಲಿನ ಪ್ಯಾರಾ 14 ನ್ನು ಪ್ರತಿಸ್ಥಾಪಿಸಲಾಗಿದೆ. ಸರ್ಕಾರಿ ನೌಕರರಿಗೆ ನಿವೃತ್ತಿ ವೇತನ ಪಡೆಯಲು ಅವರು ಕನಿಷ್ಠ 15 ವರ್ಷಗಳ ಅರ್ಹತಾದಾಯಕ ಸೇವೆಯನ್ನು ಸಲ್ಲಿಸಬೇಕೆಂದು ಮೇಲೆ (3) ರಲ್ಲಿ ಓದಲಾದ ದಿನಾಂಕ 30-9-2003ರ ಆದೇಶದಲ್ಲಿ ಇದನ್ನು ಮಾರ್ಪಡಿಸಿರುವ ಹಿನ್ನೆಲೆಯಲ್ಲಿ ದಿನಾಂಕ 6-8-90 ರ ಆದೇಶದ ಪ್ಯಾರಾ 14 ನ್ನು ದಿನಾಂಕ 8.7.2004 ರ ಆದೇಶದಲ್ಲಿ (ಕ್ರಮ ಸಂಖ್ಯೆ 4 ರಲ್ಲಿ ಓದಲಾಗಿದೆ) ಸೂಕ್ತವಾಗಿ ತಿದ್ದುಪಡಿ ಮಾಡಲಾಗಿತ್ತು. ಕ್ರಮ ಸಂಖ್ಯೆ 5 ರಲ್ಲಿ ಓದಲಾದ ದಿನಾಂಕ 22-10-2007ರ ಆದೇಶದಲ್ಲಿ ಸರ್ಕಾರಿ ನೌಕರರಿಗೆ ನಿವೃತ್ತಿ ಸೌಲಭ್ಯವನ್ನು ಪಡೆಯಲು ನಿಗದಿಪಡಿಸಿರುವ 15 ವರ್ಷಗಳ ಕನಿಷ್ಠ ಅರ್ಹತಾದಾಯಕ ಸೇವೆಯನ್ನು 10 ವರ್ಷಗಳಿಗೆ ಇಳಿಸಲಾಗಿದೆ. ಸದರಿ ಆದೇಶವು ದಿನಾಂಕ 1.9.2003 ರಿಂದ ಅನ್ವಯವಾಗುವಂತೆ ಕಾಲ್ಪನಿಕವಾಗಿ ಪೂರ್ವಸ್ಥಿತಿಗೆ ತರಲಾದ ಕಾರಣದಿಂದಾಗಿ (restored notionally) ಲಭ್ಯವಾಗುವ ಆರ್ಥಿಕ ಸೌಲಭ್ಯಗಳು ಆದೇಶ ಹೊರಡಿಸಿದ ದಿನಾಂಕದಿಂದ ಅಂದರೆ ದಿನಾಂಕ 22-10-2007 ರಿಂದ ಮಾತ್ರ ಲಭ್ಯವಾಗುವುದೆಂದು ಸದರಿ ಆದೇಶದಲ್ಲಿ ಸೂಚಿಸಲಾಗಿದೆ. ಈ ಹಿನ್ನೆಲೆಯಲ್ಲಿ ದಿನಗೂಲಿ ಆಧಾರದ ಮೇಲೆ/ಮಾಸಿಕ ವೇತನ ಸಿಬ್ಬಂದಿಯಾಗಿ ಸೇವೆ ಸಲ್ಲಿಸಿ ಸಕ್ರಮಗೊಂಡಿರುವ ನೌಕರರ ಪ್ರಕರಣಗಳನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 64 ಸೇಸ್ಥಅ 2011, ಬೆಂಗಳೂರು, ದಿನಾಂಕ 05ನೇ ಏಪ್ರಿಲ್ 2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ದಿನಾಂಕ 6-8-1990 ರ ಆದೇಶ ಸಂಖ್ಯೆ ಡಿಪಿಎಆರ್ 2 ಎಲ್ಎಲ್ಸಿ 90 ರ ಪ್ಯಾರಾ 14 ರಲ್ಲಿರುವ 'short of 15 years' ನ್ನು 'short of 10 years' ಎಂದು ತಿದ್ದುಪಡಿ ಮಾಡಲಾಗಿದೆ. ಈ ತಿದ್ದುಪಡಿಯಿಂದೊದಗುವ ಸೌಲಭ್ಯವನ್ನು ದಿನಾಂಕ 1-9-2003 ರಿಂದ ಕಾಲ್ಪನಿಕವಾಗಿ ಲೆಕ್ಕ ಹಾಕತಕ್ಕದ್ದು. ಈ ತಿದ್ದುಪಡಿಯಿಂದೊದಗುವ ಆರ್ಥಿಕ ಸೌಲಭ್ಯವು ದಿನಾಂಕ 22-10-2007 ರಿಂದ ಮಾತ್ರ ಲಭ್ಯವಾಗತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ. ಮಾರ್ಕಂಡೇಯ,

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್. 1052 ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ.

(ಸೇವಾ ನಿಯಮಗಳು-2)

ENERGY SECRETARIAT

Sub: Enhancement of wind power capacity from 4.2 MW to 37.8 MW in favour of M/s Suzlon Infrastucture Services Limited – reg.

Read: 1. Government Order No : EN 204 NCE 2009 dated : 20-05-2010.

2. Letter No : KRED/08/SISL-Hiremannapura (4.20 to 37.80 MW)/2011-577, dated 1/11-2-2011 received from the Managing Director, Karnataka Renewable Energy Development Limited, Bangalore.

Preamble:

In the Government Order read at (1) above, sanction has been accorded for allotment of 250.2 MW capacity Wind Power Project at Raichur, Bellary, Bijapur, Gulbarga and Haveri Districts in favour of M/s Suzlon Infrastructure Services Limited.

The Managing Director, Karnataka Renewable Energy Development Limited, Bangalore vide his letter read at (2) above, has recommended to enhance the wind power capacity from 4.2 MW (part capacity of 250.2 MW of Raichur District) to 37.8 at Hiremannapura, Kustagi Taluk of Koppal District in favour of M/s Suzlon Infrastructure Services Limited.

The proposal has been examined in detail and hence the following Order :-

GOVERNMENT ORDER NO.: EN 101 NCE 2011, BANGALORE, DATED: 06-04-2011

Government accords approval for enhancement of wind power capacity from 4.2 MW (part capacity of 250.2 MW of Raichur District) to 37.8 MW at Hiremannapura, Kustagi Taluk of Koppal District in favour of M/s Suzlon Infrastructure Services Limited as detailed below :

Geographical Area details	Sanctioned capacity in MW	Enhancement proposed in stage-I	No. of WTGs & rating in kw
It is a plain area with no-significant orientation located on the NE of Hiremannapura & spread around Gudadur village. It appears to be agriculture lands and is covered in the following geographical co-ordinates :- Latitude : 15°46'11" - 15°49'49"N Longitude 76°16'39" - 76°20'33"E Peaks ; 683, 690, 647, 659, 644 & 651 m Amsl. Toposheet No : 57 A/5	4.2 MW	33.6 MW	37.8 mw (18x2100 kw)

The Government has reserved the right to Cancel/modify this Order.

The other terms and conditions of the allotment Order read at (1) above shall continue as it is.

By order and in the name of the Governor of Karnataka,

SURESH B. KRISHNAPPANAVAR,

Under Secretary to Government,

PR No. 1053 Energy Department.

ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವಾಲಯ

ವಿಷಯ : ಕರ್ನಾಟಕ ನಾಗರೀಕ ಸೇವಾ ನಿಯಮ 32ರಡಿ ಸಹಾಯಕ ನಿರ್ದೇಶಕರ ಹುದ್ದೆಯಲ್ಲಿ ಸ್ವತಂತ್ರ ಪ್ರಭಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಪಶುವೈದ್ಯಾಧಿಕಾರಿಗಳ ನೇಮಕಾತಿ ಅವಧಿಯನ್ನು ಮುಂದುವರೆಸಲು ಅನುಮತಿ ನೀಡುವಿಕೆ.

ಓದಲಾಗಿದೆ :
1. ಸರ್ಕಾರಿ ಅಧಿಸೂಚನೆ ಸಂಖ್ಯೆ : ಪಸಂಮೀ 250 ಪಸಸೇ 2007, ದಿನಾಂಕ : 28-8-2007.
2. ಸರ್ಕಾರಿ ಅಧಿಸೂಚನೆ ಸಂಖ್ಯೆ : ಪಸಂಮೀ 250 ಪಸಸೇ 2007, ದಿನಾಂಕ : 8-10-2007.
3. ಪತ್ರ ಸಂಖ್ಯೆ : ಆಪಸಂ/ಸಿಬ್ಬಂದಿ-1/ವಿವ-31/2008-09, ದಿನಾಂಕ : 24-8-2009.
4. ಪತ್ರ ಸಂಖ್ಯೆ : ಆಪಸಂ/ಸಿಬ್ಬಂದಿ-1/ವಿವ-62/2009-10, ದಿನಾಂಕ : 11-1-2011.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಅಧಿಸೂಚನೆಯಲ್ಲಿ ಇಲಾಖೆಯ ಒಟ್ಟು 167 ಪಶುವೈದ್ಯಾಧಿಕಾರಿಗಳಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ನಿಯಮ 32ರನ್ವಯ ಸಹಾಯಕ ನಿರ್ದೇಶಕರ ಹುದ್ದೆಯಲ್ಲಿ ಸ್ವಂತ ವೇತನ ಮತ್ತು ವೇತನಶ್ರೇಣಿಯಲ್ಲಿ ಸ್ವತಂತ್ರ ಪ್ರಭಾರದ ಮೇಲೆ ಒಂದು ವರ್ಷದ ಅವಧಿಗೆ ಸ್ವತಂತ್ರ ಪ್ರಭಾರದ ಮೇಲೆ ಕಾರ್ಯನಿರ್ವಹಿಸಲು ನೇಮಿಸಲಾಗಿದೆ.

2. ಮೇಲೆ ಓದಲಾದ ಕ್ರಮಸಂಖ್ಯೆ (2)ರ ಅಧಿಸೂಚನೆಯಲ್ಲಿ ಡಾ॥ ಮನೋಹರ್.ಡಿ. ಕಬ್ಬೂರು, ಪಶುವೈದ್ಯಾಧಿಕಾರಿ ಹಾಗೂ ಡಾ॥ ಜಿ.ಎನ್. ನಾಗರಾಜು, ಪಶುವೈದ್ಯಾಧಿಕಾರಿ ಇವರುಗಳಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ನಿಯಮ 32ರನ್ವಯ ಸ್ವಂತ ವೇತನ ಮತ್ತು ವೇತನಶ್ರೇಣಿಯಲ್ಲಿ ಸ್ವತಂತ್ರ ಪ್ರಭಾರದ ಮೇಲೆ ನೇಮಿಸಲಾಗಿದೆ.

3. ಮೇಲೆ ಓದಲಾದ ಕ್ರಮಸಂಖ್ಯೆ (3) ಮತ್ತು (4) ರ ಪತ್ರಗಳಲ್ಲಿ ಆಯುಕ್ತರು, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಬೆಂಗಳೂರು ಇವರು ದಿನಾಂಕ : 28-8-2007 ಮತ್ತು ದಿನಾಂಕ : 8-9-2010 ರ ಆದೇಶಗಳಲ್ಲಿ 169 ಪಶುವೈದ್ಯಾಧಿಕಾರಿಗಳಿಗೆ ಸ್ವಂತ ವೇತನ ಮತ್ತು ವೇತನಶ್ರೇಣಿಯಲ್ಲಿ ಕೆ.ಸಿಎಸ್.ಆರ್. ನಿಯಮ 32 ರಡಿ ಸಹಾಯಕ ನಿರ್ದೇಶಕರ ಹುದ್ದೆಗೆ ಒಂದು ವರ್ಷದ ಅವಧಿಗೆ ನೇಮಿಸಲಾಗಿದ್ದು ಸದರಿ ಸ್ವತಂತ್ರ ಪ್ರಭಾರದ ಮೇಲಿನ ಅವಧಿ ಮುಕ್ತಾಯಗೊಂಡಿರುತ್ತದೆಂದು ಸದರಿ 167 ಹುದ್ದೆಗಳನ್ನು ಮುಂಬಡ್ತಿಯಿಂದಾಗಲೀ ಅಥವಾ ನೇರ ನೇಮಕಾತಿ ಮುಖಾಂತರವಾಗಲೀ ಭರ್ತಿ ಮಾಡದಿರುವುದರಿಂದ ಸ್ವತಂತ್ರ ಪ್ರಭಾರದ ಮೇಲೆ ನೇಮಿಸಿರುವ ಪಶುವೈದ್ಯಾಧಿಕಾರಿಗಳು ಸ್ವತಂತ್ರ ಪ್ರಭಾರದಲ್ಲಿಯೇ ಮುಂದುವರೆದಿರುತ್ತಾರೆಂದು ತಿಳಿಸಿರುತ್ತಾರೆ. ಈ ಎಲ್ಲಾ ಹುದ್ದೆಗಳು ತಾಲ್ಲೂಕು ಮತ್ತು ಗ್ರಾಮೀಣ ಪ್ರದೇಶದಲ್ಲಿದ್ದು, ಸ್ವತಂತ್ರ ಪ್ರಭಾರದ ಸಹಾಯಕ ನಿರ್ದೇಶಕರುಗಳು ಯೋಜನಾ ಕಾರ್ಯಕ್ರಮಗಳ ಅನುಷ್ಠಾನಾಧಿಕಾರಿಗಳಾಗಿ, ತಾಲ್ಲೂಕಿನ ನಿಯಂತ್ರಣಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸುತ್ತಿರುವುದರಿಂದ ರೈತಾಪಿ ವರ್ಗ ಹಾಗೂ ಜಾನುವಾರುಗಳ ಚಿಕಿತ್ಸಾ ದೃಷ್ಟಿಯಿಂದ ಅವರುಗಳ ಸೇವೆಯು ಪಶುವೈದ್ಯಕೀಯ ಆಸ್ಪತ್ರೆಗಳಿಗೆ ತುಂಬಾ ಅವಶ್ಯಕವಾಗಿರುತ್ತದೆಂದು ತಿಳಿಸಿರುತ್ತಾರೆ. ಕೆ.ಸಿ.ಎಸ್.ಆರ್. ನಿಯಮ 32ರಡಿ ಕಾರ್ಯನಿರ್ವಹಿಸುತ್ತಿರುವ 169 ಪಶುವೈದ್ಯಾಧಿಕಾರಿಗಳ ಪೈಕಿ ಡಾ॥ ಜಿ.ಎಂ. ಜಯರಾಮು ಇವರಿಗೆ ಈಗಾಗಲೇ ಸಹಾಯಕ ನಿರ್ದೇಶಕರ ಹುದ್ದೆಗೆ ಪೂರ್ವಾನ್ವಯವಾಗಿ ಮುಂಬಡ್ತಿ ನೀಡಿರುವುದರಿಂದ, ಡಾ॥ ರಘುಪತಿ. ಎಸ್. ಆಚಾರ್ಯ, ಡಾ॥ ನಾರಾಯಣ ಹೆಗಡೆ, ಡಾ॥ ದಯಾನಂದ ಪೈ, ಡಾ॥ ಎ.ಎಲ್. ನಾಗರಾಜಯ್ಯ, ಇವರುಗಳಿಗೆ ತಾತ್ಕಾಲಿಕವಾಗಿ ಮುಂಬಡ್ತಿ ತ್ಯಜಿಸಿ ಪಶುವೈದ್ಯಾಧಿಕಾರಿ ಹುದ್ದೆಯಲ್ಲಿಯೇ ಮುಂದುವರೆಯಲು ಅನುಮತಿ ನೀಡಿರುವುದರಿಂದ, ಡಾ॥ ವಿ.ಎಸ್. ವೀರನಗೌಡರ್ ಇವರಿಗೆ ಸ್ವ-ಇಚ್ಛಾ ನಿವೃತ್ತಿ ಹೊಂದಲು ಅನುಮತಿ ನೀಡಿರುವುದರಿಂದ, ಸದರಿ 6 ಅಧಿಕಾರಿಗಳನ್ನು ಹೊರತುಪಡಿಸಿ ಉಳಿದ 161 ಪಶುವೈದ್ಯಾಧಿಕಾರಿಗಳನ್ನು ಸ್ಥಾನಪನ್ನ ಮುಂಬಡ್ತಿ ನೀಡುವವರೆಗೂ ಅಥವಾ ನೇರ ನೇಮಕಾತಿಯಡಿ ತುಂಬುವವರೆಗೆ ಮುಂದುವರೆಸಲು ಅನುಮತಿ ನೀಡುವಂತೆ ಹಾಗೂ ಸ್ವತಂತ್ರ ಪ್ರಭಾರದಲ್ಲಿ ಮುಂದುವರೆಯುತ್ತಿರುವ ಪಶುವೈದ್ಯಾಧಿಕಾರಿಗಳಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ 68 ರನ್ವಯ 6 ತಿಂಗಳಿಗೂ ಮೀರಿ ಪ್ರಭಾರ ಭತ್ಯೆ ಪಡೆಯಲು ಮತ್ತು ಇನ್ನೂ ಕೆಲವು ಅಧಿಕಾರಿಗಳಿಗೆ ಸ್ವತಂತ್ರ ಪ್ರಭಾರದ ಅವಧಿ ಮುಕ್ತಾಯಗೊಂಡ ನಂತರವೂ ಪ್ರಭಾರ ಭತ್ಯೆ ಪಡೆಯಲು ಮಂಜೂರಾತಿ ನೀಡಿರುವುದಕ್ಕೆ ಘಟನೋತ್ತರ ಮಂಜೂರಾತಿ ನೀಡುವಂತೆ ಕೋರಿರುತ್ತಾರೆ. ಅಲ್ಲದೇ ಡಾ॥ ಪಿ. ಸುರೇಶ್ ಭಟ್ ಇವರು ಸ್ವತಂತ್ರ ಪ್ರಭಾರ ಇರಿಸಿದ ನಂತರ ವೈಯುಕ್ತಿಕ ಕಾರಣದಿಂದ ಸಹಾಯಕ ನಿರ್ದೇಶಕರ ಹುದ್ದೆಗೆ ಹಾಜರಾಗದೇ ಪಶುವೈದ್ಯಾಧಿಕಾರಿಯಾಗಿ ಪಶುಚಿಕಿತ್ಸಾಲಯ, ಕೊಳ್ತಿಗೆ, ದಕ್ಷಿಣ ಕನ್ನಡ ಜಿಲ್ಲೆ ಇಲ್ಲಿಯೇ ಮುಂದುವರೆದಿದ್ದು ತದನಂತರ ದಿನಾಂಕ : 4-8-2009 ರಂದು ಅರ್ಜಿ ಸಲ್ಲಿಸಿ ನಿಯುಕ್ತಿಗೊಳಿಸಿದ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗಲು ಅನುಮತಿ ಕೋರಿದ್ದ ಮೇರೆಗೆ, ಸದರಿ ಅಧಿಕಾರಿಗೆ ಅಂದಿನ ಆಯುಕ್ತರು ದಿನಾಂಕ : 10-8-2009 ರಂದು ಕರ್ತವ್ಯಕ್ಕೆ ಹಾಜರಾಗಲು ಅನುಮತಿ ನೀಡಿದ್ದು, ಈ ಅವಧಿಯಲ್ಲಿ ಸ್ವತಂತ್ರ ಪ್ರಭಾರದ ಮುಂದುವರಿಕೆ ಆದೇಶ ಇಲ್ಲದ ಕಾರಣ ಸದರಿ ಕ್ರಮಕ್ಕೆ ಸ್ಥಿರೀಕರಣ ನೀಡುವಂತೆ ಕೋರಿರುತ್ತಾರೆ.

4. ಆಯುಕ್ತರ ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ದಿನಾಂಕ : 28-8-2007 ಮತ್ತು ದಿನಾಂಕ : 8-9-2010ರ ಆದೇಶಗಳನ್ವಯ ಒಟ್ಟು 169 ಪಶುವೈದ್ಯಾಧಿಕಾರಿಗಳಿಗೆ ಸ್ವಂತ ವೇತನ ಮತ್ತು ವೇತನಶ್ರೇಣಿಯಲ್ಲಿ ಕೆ.ಸಿಎಸ್.ಆರ್. ನಿಯಮ 32ರಡಿ ಸಹಾಯಕ ನಿರ್ದೇಶಕರ ಹುದ್ದೆಯಲ್ಲಿ ಒಂದು ವರ್ಷದ ಅವಧಿಗೆ ನೇಮಿಸಲಾಗಿದ್ದು, ಸ್ವತಂತ್ರ ಪ್ರಭಾರದ ಮೇಲಿನ ನೇಮಕಾತಿ ಅವಧಿಯು ದಿನಾಂಕ : 27-8-2008ಕ್ಕೆ ಮುಕ್ತಾಯಗೊಂಡಿರುತ್ತದೆ. ಸದರಿ 169 ಪಶುವೈದ್ಯಾಧಿಕಾರಿಗಳ ಪೈಕಿ ಡಾ॥ಜಿ.ಎಂ. ಜಯರಾಮು (ಜೇಷ್ಠತಾ ಸಂಖ್ಯೆ : 721-ಕ್ರಮಸಂಖ್ಯೆ : 1) ಇವರಿಗೆ ಈಗಾಗಲೇ ಸಹಾಯಕ ನಿರ್ದೇಶಕರ ಹುದ್ದೆಗೆ ಪೂರ್ವಾನ್ವಯವಾಗಿ ಸ್ಥಾನಪನ್ನ ಮುಂಬಡ್ತಿ ನೀಡಲಾಗಿದೆ ಹಾಗೂ ಡಾ॥ ರಘುಪತಿ ಎಸ್. ಆಚಾರ್ಯ (ಜೇಷ್ಠತಾ ಸಂಖ್ಯೆ : 567-ಕ್ರಮಸಂಖ್ಯೆ 32), ಡಾ॥ ನಾರಾಯಣ ಹೆಗಡೆ (ಜೇಷ್ಠತಾ ಸಂಖ್ಯೆ : 624 ಕ್ರಮ ಸಂಖ್ಯೆ : 91), ಡಾ॥ ದಯಾನಂದ ಪೈ (ಜೇಷ್ಠತಾ ಸಂಖ್ಯೆ 677-ಕ್ರಮ ಸಂಖ್ಯೆ 132), ಡಾ॥ ಎ.ಎಲ್. ನಾಗರಾಜಯ್ಯ (ಜೇಷ್ಠತಾ ಸಂಖ್ಯೆ 723-ಕ್ರಮ ಸಂಖ್ಯೆ 165), ಈ ನಾಲ್ಕು ಅಧಿಕಾರಿಗಳಿಗೆ ಮುಂಬಡ್ತಿಯನ್ನು ತಾತ್ಕಾಲಿಕವಾಗಿ ತ್ಯಜಿಸಿ ಪಶುವೈದ್ಯಾಧಿಕಾರಿ ಹುದ್ದೆಯಲ್ಲಿಯೇ ಮುಂದುವರೆಯಲು, ಡಾ॥ ಪಿ. ರಮೇಶ್ ಉಪಾಧ್ಯಾಯ (ಜೇಷ್ಠತಾ ಸಂಖ್ಯೆ 572- ಕ್ರಮ ಸಂಖ್ಯೆ 40), ಇವರಿಗೆ ಸ್ವತಂತ್ರ ಪ್ರಭಾರದ ಮೇಲೆ ಸಹಾಯಕ ನಿರ್ದೇಶಕರ ಹುದ್ದೆಗೆ ನೇಮಿಸಿರುವುದನ್ನು ರದ್ದುಪಡಿಸಿ ಪಶುವೈದ್ಯಾಧಿಕಾರಿ ಹುದ್ದೆಯಲ್ಲಿಯೇ ಮುಂದವರೆಯಲು ಅನುಮತಿ ನೀಡಲಾಗಿದೆ ಮತ್ತು ಡಾ॥ ವಿ.ಎಸ್.ವೀರಣ್ಣಗೌಡ್ರ (ಜೇಷ್ಠತಾ ಸಂಖ್ಯೆ : 652-ಕ್ರಮ ಸಂಖ್ಯೆ : 107), ಸರ್ಕಾರಿ ಸೇವೆಯಿಂದ ಸ್ವ-ಇಚ್ಛಾ ನಿವೃತ್ತಿ ಹೊಂದಲು ಅನುಮತಿ

ಯೋಜನೆಯ ವೆಚ್ಚವನ್ನು ಪ್ರಧಾನ ಲೆಕ್ಕ ಶೀರ್ಷಿಕೆ "2501 ಗ್ರಾಮೀಣಾಭಿವೃದ್ಧಿಗಾಗಿ ವಿಶೇಷ ಕಾರ್ಯಕ್ರಮಗಳು 01 ಸಮಗ್ರ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳು–198 ಗ್ರಾಮ ಪಂಚಾಯತ್‌ಗಳಿಗೆ ಸಹಾಯ–6 ಗ್ರಾಮ ಪಂಚಾಯತ್‌ಗಳು–01–ಬ್ಲಾಕ್ ಅನುದಾನ ಕೇಂದ್ರ ಪುರಸ್ಕೃತ ಯೋಜನೆ (ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಯೋಜನೆ) 2010–2011ನೇ (2501–01–198–6–01)" (ಲಿಂಕ್ ಕೋಡ್ 2501–01–800–0–07) ಸಾಲಿನಲ್ಲಿ ಸರ್ಕಾರಿ ಆದೇಶ ಸಂಖ್ಯೆ ಎಫ್‌ಡಿ 7 ಜೆಡ್‌ಪಿಎ 2003 ದಿನಾಂಕ : 14–07–2005 ರನ್ವಯ ಖಜಾನೆಯಿಂದ ಪಡೆಯುವುದು

ನ್ಯಾಷನಲ್ ರೂರಲ್ ಲೈವ್ಲಿಹುಡ್ ಮಿಷನ್ (ಎನ್‌ಆರ್‌ಎಲ್‌ಎಂ)ಯಡಿ ಬೆಂಗಳೂರು ನಗರ ಜಿಲ್ಲಾ ಪಂಚಾಯತಿಯಲ್ಲಿ ಕಾಯ್ದಿರಿಸಿರುವ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಅನುದಾನವನ್ನು ಬೇರೆ ಯಾವ ಉದ್ದೇಶಗಳಿಗೆ ಬಳಸದೆ, ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯ ನೀಡುವ ಸೂಚನೆಯಂತೆ ವೆಚ್ಚ ಮಾಡುವುದು.

ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳಿಗೆ ಹಣ ತೆಗೆಯಲು ಕಾನೂನು ರೀತ್ಯಾ ಅಧಿಕಾರ ನೀಡಲಾಗಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ರವರ ಸಹಮತಿ ಸಂಖ್ಯೆ : ಗ್ರಾಅಪ 35 ಪಿಬಿಎಸ್ 2011 ದಿನಾಂಕ : 29–03–2011 ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಎ. ಮೇಘಣ್ಣವರ

ನಿರ್ದೇಶಕರು (ಸ್ವಉಕಾ) ಹಾಗೂ

ಪಿ.ಆರ್. 1104 ಪ.ನಿ. ಸರ್ಕಾರದ ಜಂಟಿ ಕಾರ್ಯದರ್ಶಿಗಳು

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವಾಲಯ

ವಿಷಯ : ಪಶ್ಚಿಮ ಘಟ್ಟಗಳ ಅಭಿವೃದ್ಧಿ ಕಾರ್ಯಕ್ರಮದ ಅಡಿ 2010–11ನೇ ಸಾಲಿಗೆ ಎರಡನೇ ಕಂತಿನ ಅನುದಾನವನ್ನು ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಆದೇಶ ಸಂ. ಗ್ರಾಅಪ 01 ಡಬ್ಲ್ಯೂಜಿಪಿ 2010, ದಿನಾಂಕ : 20–4–2010.
2. ಯೋಜನಾ ಆಯೋಗ (ಪಶ್ಚಿಮ ಘಟ್ಟಗಳ ಸಚಿವಾಲಯ), ಭಾರತ ಸರ್ಕಾರ, ನವದೆಹಲಿ ಇವರ ಪತ್ರ ಸಂ. ಪಿಸಿ(ಪಿ) 19/125/ಕೆಎಆರ್/2010–ಡಬ್ಲ್ಯೂಜಿಎಸ್ ದಿನಾಂಕ : 10–8–2010.
3. ಯೋಜನಾ ಆಯೋಗ (ಪಶ್ಚಿಮ ಘಟ್ಟಗಳ ಸಚಿವಾಲಯ), ಭಾರತ ಸರ್ಕಾರ, ನವದೆಹಲಿ ಇವರ ಪತ್ರ ಸಂ. ಪಿಸಿ(ಪಿ)19/320/ಎಸ್‌ಸಿಎ/2010–ಡಬ್ಲ್ಯೂಜಿಎಸ್ ದಿನಾಂಕ : 7–3–2011.
4. ಆರ್ಥಿಕ ಇಲಾಖೆಯ ಜಮಾ ಧೃಡೀಕರಣ ಪತ್ರ : CCS No. FD 13. BGL-2010, ದಿನಾಂಕ : 14–3–2011.
5. ಆರ್ಥಿಕ ಇಲಾಖೆಯ ಮರು ಹೊಂದಾಣಿಕೆಯ ಆದೇಶ ಸಂಖ್ಯೆ : FD 432 BRS 2010, ಬೆಂಗಳೂರು, ದಿನಾಂಕ : 28–3–11.
6. ಮಾನ್ಯ ವಿಧಾನಸಭಾ ಸದಸ್ಯರಾದ ಶ್ರೀ ವ್ಹಿ.ಎಸ್. ಪಾಟೀಲ್ ರವರು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರಿಗೆ ಬರೆದಿರುವ ಪತ್ರ ಸಂ. ವ್ಹಿ.ಎಸ್.ಪಿ/10–11, ದಿನಾಂಕ : 31–1–2011.
7. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿರವರ ಟಿಪ್ಪಣಿ ಸಂ. PSCM/638/2011, ದಿನಾಂಕ : 1–2–2011

ಪ್ರಸ್ತಾವನೆ :

ಪಶ್ಚಿಮ ಘಟ್ಟಗಳ ಅಭಿವೃದ್ಧಿ ಕಾರ್ಯಕ್ರಮದ ಅನುಷ್ಠಾನವನ್ನು ಮೇಲೆ ಓದಲಾದ ಪತ್ರ (1) ರಂತೆ 2010–11ನೇ ಸಾಲಿನಲ್ಲಿ ಮುಂದುವರೆಸಲಾಗಿದೆ. ಭಾರತ ಸರ್ಕಾರದ ಯೋಜನಾ ಆಯೋಗದ ಪಶ್ಚಿಮ ಘಟ್ಟಗಳ ಸಚಿವಾಲಯವು ಮೇಲೆ ಓದಲಾದ ಪತ್ರ (2) ರಲ್ಲಿ ಈ ಕಾರ್ಯಕ್ರಮದ ಅನುಷ್ಠಾನಕ್ಕಾಗಿ 2010–11ನೇ ಸಾಲಿನಲ್ಲಿ ₹ 2924.00 ಲಕ್ಷಗಳ ವಾರ್ಷಿಕ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿರುತ್ತದೆ. ಇದರಲ್ಲಿ ಶೇ. 90 ಭಾಗ ಅಂದರೆ ₹ 2631.60 ಲಕ್ಷ ಕೇಂದ್ರ ಸರ್ಕಾರ ಬಿಡುಗಡೆ ಮಾಡಲಿರುವ ನಿಧಿ ರೂಪದ್ದಾಗಿದ್ದು, ಉಳಿಕೆ ಶೇ. 10 ಭಾಗ ಅಂದರೆ ₹ 292.40 ಲಕ್ಷ ರಾಜ್ಯದ ಪಾಲಾಗಿರುತ್ತದೆ. ಕೇಂದ್ರ ಸಚಿವಾಲಯವು ಮೇಲೆ ಓದಲಾದ ಪತ್ರ (3) ರಲ್ಲಿ ಪ್ರಸಕ್ತ ಸಾಲಿನ ಒಟ್ಟಾರೆ ಅನುದಾನ ₹ 2924.00 ಲಕ್ಷ ಪೈಕಿ ಶೇ. 90 ರಷ್ಟು ಅಂದರೆ ₹ 2631.60 ಲಕ್ಷ ಆಗಲಿದ್ದು, ಅದರಲ್ಲಿ ಎರಡನೇ ಮತ್ತು ಅಂತಿಮ ಕಂತಿನ ಬಾಬ್ತು

ಶೇ. 25 ರಷ್ಟು ಅಂದರೆ ₹ 657.90 ಲಕ್ಷಗಳನ್ನು ರಾಜ್ಯಕ್ಕೆ ಬಿಡುಗಡೆ ಮಾಡಿದೆ. ಈ ಅನುದಾನವು ರಾಜ್ಯ ಸರ್ಕಾರದ ಖಾತೆಗೆ ಜಮಾ ಆಗಿರುವ ಬಗ್ಗೆ ಆರ್ಥಿಕ ಇಲಾಖೆಯು ಮೇಲೆ ಓದಲಾದ ಪತ್ರ (4) ರಂತೆ ಜಮಾ ಧೃಢೀಕರಣ ಪತ್ರವನ್ನು ನೀಡಿರುತ್ತದೆ. ಈ ಅನುದಾನದ ಜೊತೆಗೆ ರಾಜ್ಯದ ಪಾಲಿನ ಶೇ. 10 ಅನುದಾನವಾದ ₹ 73.10 ಲಕ್ಷಗಳನ್ನು ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆ ಮಾಡಬೇಕಾಗಿದೆ ಮತ್ತು ಕೇಂದ್ರ ಸರ್ಕಾರದ ಯೋಜನಾ ಆಯೋಗದಿಂದ ಅನುಮತಿ PC (P) 19/125/KAR/2010-WGS, ದಿನಾಂಕ : 10-12-2010 ನೀಡಿದಂತೆ ಹಾಗೂ ಸರ್ಕಾರದ ಪುನರ್ವಿನಿಯೋಗದ ಆದೇಶ ಸಂ. ಗ್ರಾಅಪ. 1. ಪಘಯೋ. 2010, ಬೆಂಗಳೂರು, ದಿನಾಂಕ : 27-12-2010 ರಂತೆ ಉತ್ತರ ಕನ್ನಡ ಜಿಲ್ಲೆ ಯಲ್ಲಾಪುರ ತಾಲ್ಲೂಕಿನಲ್ಲಿ ಕೇಂದ್ರ ಸರ್ಕಾರದ ಯೋಜನಾ ಆಯೋಗ ಅನುಮೋದಿಸಲ್ಪಟ್ಟ ವಿಶೇಷ ಯೋಜನಾ ಅನುಷ್ಠಾನಕ್ಕಾಗಿ ಕ್ರಮವಾಗಿ ಚಿಕ್ಕಮಗಳೂರು ಜಿಲ್ಲೆಯಿಂದ ₹ 20.00 ಲಕ್ಷ ಮತ್ತು ಕೊಡಗು ಜಿಲ್ಲೆಯಿಂದ ₹ 69.41 ಲಕ್ಷಗಳನ್ನು ಪುನರ್ವಿನಿಯೋಗ ಮಾಡುವಂತೆ ಸೂಚಿಸಲಾಗಿತ್ತು. ಈ ಪೈಕಿ ಚಿಕ್ಕಮಗಳೂರು ಜಿಲ್ಲೆಯಿಂದ ಮಾತ್ರ ₹ 20.00 ಲಕ್ಷಗಳನ್ನು ಉತ್ತರ ಕನ್ನಡ ಜಿಲ್ಲೆಗೆ ವರ್ಗಾಯಿಸಲಾಗಿರುತ್ತದೆ. ಉಳಿದಂತೆ, ₹ 69.41 ಲಕ್ಷಗಳನ್ನು ಯೋಜನಾ ಅನುಷ್ಠಾನಕ್ಕಾಗಿ ಉತ್ತರ ಕನ್ನಡ ಜಿಲ್ಲೆಗೆ ನೀಡಬೇಕಾಗಿರುತ್ತದೆ ಮತ್ತು ಅಭಿವೃದ್ಧಿ ಯೋಜನಾ ಕೋಶದ ಸಿಬ್ಬಂದಿ ಮತ್ತು ಆಡಳಿತ ವೆಚ್ಚಕ್ಕೆ ₹ 14.50 ಲಕ್ಷಗಳನ್ನು ಬಿಡುಗಡೆ ಮಾಡಬೇಕಾಗಿರುತ್ತದೆ. ಈ ಮೊತ್ತದಲ್ಲಿ ₹ 7.50 ಲಕ್ಷಗಳು ರಾಜ್ಯ ಪಾಲಿನ ಮೊತ್ತವಾದ ₹ 73.10 ಲಕ್ಷಗಳಲ್ಲಿ ಸೇರಿರುತ್ತದೆ.

ಮೇಲೆ ತಿಳಿಸಿರುವ ಎಲ್ಲಾ ಅಂಶಗಳಿಗೆ ಅನುಗುಣವಾಗಿ ಅನುದಾನ ಬಿಡುಗಡೆ ಮಾಡಲು, ರಾಜ್ಯ ವಲಯದ ಉಳಿಕೆ ಮೊತ್ತ ₹ 469.12 ಲಕ್ಷ ಮತ್ತು ಜಿಲ್ಲಾ ವಲಯದಲ್ಲಿ ಮೀಸಲಿಟ್ಟಿರುವ ₹ 460.00 ಲಕ್ಷಗಳನ್ನು ಪರಿಗಣಿಸಿ ಒಟ್ಟಾರೆ ಲಭ್ಯವಿರುವ ₹ 929.12 ಲಕ್ಷಗಳಲ್ಲಿ ಪುನರ್ವಿನಿಯೋಗದ ಮೊತ್ತವು ಅಂದರೆ ಕೇಂದ್ರ ಸರ್ಕಾರದ ಯೋಜನಾ ಆಯೋಗವು ಉತ್ತರ ಕನ್ನಡ ಜಿಲ್ಲೆ ಯಲ್ಲಾಪುರ ತಾಲ್ಲೂಕಿನಲ್ಲಿ ವಿಶೇಷ ಯೋಜನಾ ಅನುಷ್ಠಾನಕ್ಕಾಗಿ ಮಂಜೂರಾತಿ ನೀಡಿರುವ ಮೊತ್ತ ₹ 89.41 ಲಕ್ಷ ಸೇರಿದಂತೆ ಒಟ್ಟಾರೆ ₹ 827.41 ಲಕ್ಷಗಳನ್ನು ಬಿಡುಗಡೆ ಮಾಡಬೇಕಾಗಿರುತ್ತದೆ. ಈ ಮೊತ್ತದಲ್ಲಿ ಕೇಂದ್ರ ಪಾಲಿನ ₹ 657.90 ಮತ್ತು ರಾಜ್ಯ ಪಾಲಿನ ಮೊತ್ತ ₹ 169.51 ಲಕ್ಷಗಳಷ್ಟು ಬಿಡುಗಡೆ ಮಾಡಲು ಆದೇಶಿಸಲಾಗಿರುತ್ತದೆ.

ಆದುದರಿಂದ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 3 ಪಘಯೋ 2010 (ಭಾ), ಬೆಂಗಳೂರು, ದಿನಾಂಕ : 29-3-2011

ಕೇಂದ್ರ ಪುರಸ್ಕೃತ ಕಾರ್ಯಕ್ರಮವಾದ ಪಶ್ಚಿಮ ಘಟ್ಟಗಳ ಅಭಿವೃದ್ಧಿ ಕಾರ್ಯಕ್ರಮವನ್ನು 2010-11ನೇ ಸಾಲಿನಲ್ಲಿ ಅನುಮೋದಿತ ಕ್ರಿಯಾ ಯೋಜನೆಯ ಅನ್ವಯ ಅನುಷ್ಠಾನಗೊಳಿಸುವ ಸಲುವಾಗಿ ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ಎರಡನೇ ಹಾಗೂ ಅಂತಿಮ ಕಂತಿನ ಅನುದಾನ ₹ 657.90 ಲಕ್ಷ ಮತ್ತು ರಾಜ್ಯದ ಪಾಲಿನ ಶೇ. 10 ಅನುದಾನವಾದ ₹ 73.10 ಲಕ್ಷಗಳು, ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನಲ್ಲಿ ಕೇಂದ್ರ ಸರ್ಕಾರದ ಯೋಜನಾ ಆಯೋಗವು ಅನುಮೋದಿಸಲ್ಪಟ್ಟ ವಿಶೇಷ ಯೋಜನಾ ಅನುಷ್ಠಾನಕ್ಕಾಗಿ ಮತ್ತು ಪ.ಘ.ಯೋ. ರಾಜ್ಯ ಮಟ್ಟದ ಯೋಜನಾ ಕೋಶದ ವೆಚ್ಚ ₹ 14.50 ಲಕ್ಷಗಳು ಸೇರಿದಂತೆ ಈ ಮೊತ್ತದಲ್ಲಿ ₹ 7.50 ಲಕ್ಷಗಳು ರಾಜ್ಯ ಪಾಲಿನ ಮೊತ್ತವಾದ ₹ 73.10 ಲಕ್ಷಗಳಲ್ಲಿ ಸೇರಿರುತ್ತದೆ.

ಮೇಲಿನ ಎಲ್ಲಾ ಬಿಡುಗಡೆ ಅನುದಾನವು ಒಟ್ಟಾರೆ ₹ 827.41 ಲಕ್ಷಗಳನ್ನು (₹ ಎಂಟು ನೂರ ಇಪ್ಪತ್ತೇಳು ಲಕ್ಷ ಮತ್ತು ನಲವತ್ತೊಂದು ಸಾವಿರ ಮಾತ್ರ) ರಾಜ್ಯದ ಯೋಜನಾ ಅನುಷ್ಠಾನದ ಜಿಲ್ಲಾ ಪಂಚಾಯತಿಗಳಿಗೆ ಅನುಬಂಧ-1 ರಲ್ಲಿ ತೋರಿಸಿರುವಂತೆ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಬಿಡುಗಡೆ ಮಾಡಲಾಗಿದೆ.

1. 2010-11ನೇ ಸಾಲಿನಲ್ಲಿ ನಿಮ್ಮ ಜಿಲ್ಲೆಯ ಅನುಮೋದಿತ ಕ್ರಿಯಾ ಯೋಜನೆಯಲ್ಲಿ ನಮೂದಿಸಿರುವ ಕಾರ್ಯಕ್ರಮಗಳನ್ನು ಮಾತ್ರ ನಿಮ್ಮ ಜಿಲ್ಲೆಗೆ ನಿಗದಿಪಡಿಸಿರುವ ಅನುದಾನಕ್ಕೊಳಪಟ್ಟು ಅನುಷ್ಠಾನಗೊಳಿಸುವುದು.
2. ಪಶ್ಚಿಮ ಘಟ್ಟಗಳ ಅಭಿವೃದ್ಧಿ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರವು ಕಾಲಕಾಲಕ್ಕೆ ಹೊರಡಿಸುತ್ತಿರುವ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸುವುದು.
3. ಒಂದು ವಲಯಕ್ಕೆ ನಿಗದಿಪಡಿಸಿರುವ ಅನುದಾನವನ್ನು ಇನ್ನೊಂದು ವಲಯಕ್ಕೆ ಯಾವುದೇ ಕಾರಣಕ್ಕೂ ವರ್ಗಾಯಿಸಬಾರದು.
4. ಸಾಂಬಾರು ಮಂಡಳಿಯ ಕಾರ್ಯಕ್ರಮಗಳಿಗೆ ಪ್ರಸ್ತುತ ಕಂತಿನಲ್ಲಿ ಒದಗಿಸಿರುವ ಅನುದಾನ ₹ 3.20 ಲಕ್ಷಗಳನ್ನು ಆ ಮಂಡಳಿಗೆ ಸಂಬಂಧಪಟ್ಟ ಜಿಲ್ಲಾ ಪಂಚಾಯತಿಯು ಬಿಡುಗಡೆ ಮಾಡುವುದು.
5. 2009-10 ನೇ ಸಾಲಿನಲ್ಲಿ ಬಿಡುಗಡೆ ಮಾಡಿದ ಅನುದಾನದಲ್ಲಿ ಖರ್ಚಾಗದೇ ಉಳಿದ ಅನುದಾನವನ್ನು 2010-11ನೇ ಸಾಲಿನಲ್ಲಿ ಕಡ್ಡಾಯವಾಗಿ ಮತ್ತು ಸಂಪೂರ್ಣವಾಗಿ ದಿನಾಂಕ : 30-3-2011 ರೊಳಗಾಗಿ ಖರ್ಚು ಮಾಡಿ ಪ್ರಗತಿ ವರದಿಯನ್ನು ತಪ್ಪದೇ ಕಳುಹಿಸುವುದು.
6. ಕೇಂದ್ರ ಸರ್ಕಾರವು ನಿಗದಿಪಡಿಸಿರುವ ನಮೂನೆಯಲ್ಲೇ ಪ್ರತಿ ತ್ರೈಮಾಸಿಕ ವರದಿಯನ್ನು ಸಕಾಲದಲ್ಲಿ ತಪ್ಪದೇ ಸರ್ಕಾರಕ್ಕೆ ಸಲ್ಲಿಸುವುದು. (Statement-I-Financial, Statement-II-Physical, verification report for beneficiary oriented schemes, verification report for schemes relating to construction works)
7. ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳು ಸಹಾಯಾನುದಾನದ ಬಿಲ್ಲಿನ ಮೇಲೆ ನಿಯಮಗಳ ಪ್ರಕಾರ ಅನುದಾನವನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿಯಲ್ಲಿ ಖಜಾನೆಯಿಂದ ಪಡೆಯುವುದು.

2551-ಗುಡ್ಡಗಾಡು ಪ್ರದೇಶಗಳು-01 ಪಶ್ಚಿಮ ಘಟ್ಟಗಳು-001-ನಿರ್ದೇಶನ ಮತ್ತು ಆಡಳಿತ-0-01-ಯೋಜನಾ ಕೋಶ-059-ಇತರೆ ಖರ್ಚು (ಯೋಜನೆ)-2551-01-001-0-01-059, 2551-01-001-0-01-422 (SCP) ಮತ್ತು 2551-01-001-0-01-423 (TSP) ಮತ್ತು ದಕ್ಷಿಣ ಕನ್ನಡ ಮತ್ತು ಹಾಸನ ಜಿಲ್ಲೆಗಳಿಗೆ ಬಿಡುಗಡೆ ಮಾಡಿರುವ ಮೊತ್ತವನ್ನು 2551-01-198-6-02 ಜಿಲ್ಲಾ ವಲಯದಲ್ಲಿ ಮೀಸಲಿಟ್ಟಿರುವ ಲೆಕ್ಕಶೀರ್ಷಿಕೆಯಲ್ಲಿ ಮೊತ್ತವನ್ನು ಸೆಳೆಯುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಪಿ.ಎ. ಮೇಘಣ್ಣವರ
ನಿರ್ದೇಶಕರು,
ಗ್ರಾಮೀಣ ಮೂಲಭೂತ ಸೌಲಭ್ಯಗಳು,
ಹಾಗೂ ಪದನಿಮಿತ್ತ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಅನುಬಂಧ-1

ಸರ್ಕಾರದ ಆದೇಶದ ಸಂ. ಗ್ರಾಅಪ 3 ಪಘಯೋ 2010 (ಭಾ) ಬೆಂಗಳೂರು, ದಿನಾಂಕ : 29-3-2011.
ಪಶ್ಚಿಮ ಘಟ್ಟಗಳ ಅಭಿವೃದ್ಧಿ ಕಾರ್ಯಕ್ರಮದ ಅಡಿ 2010-11 ನೇ ಸಾಲಿನ ಜಿಲ್ಲಾವಾರು
ಎರಡನೇ ಕಂತಿನ ಅನುದಾನ ಬಿಡುಗಡೆ ತಃಖ್ತೆ (₹ ಲಕ್ಷಗಳಲ್ಲಿ)

ಕ್ರ .ಸಂ.	ಜಿಲ್ಲೆಯ ಹೆಸರು	2010-11ನೇ ಸಾಲಿನ ಜಿಲ್ಲಾವಾರು ಅನುದಾನ ಹಂಚಿಕೆ	ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗುತ್ತಿರುವ ಎರಡನೇ ಹಾಗೂ ಅಂತಿಮ ಕಂತಿನ ಅನುದಾನ				ಕಾಲಂ 4ರ ಪೈಕಿ ಸಾಂಬಾರು ಮಂಡಳಿಗೆ ಬಿಡುಗಡೆ ಆಗಿರುವ ಅನುದಾನ
			2551-01-001-0-01-059 ಇತರೆ ಖರ್ಚು	2551-01-001-0-01-422 SCP	2551-01-001-0-01-423 TSP	ಒಟ್ಟು ಮೊತ್ತ	
1	2	3	4	5	6	7	8
1	ಬೆಳಗಾಂ	467.75	73.46	18.28	25.19	116.93	–
2	ಚಾಮರಾಜನಗರ	86.20	12.44	5.85	3.26	21.55	–
3	ಚಿಕ್ಕಮಗಳೂರು*	276.35	66.96	17.54	4.59	89.09	–
4	ದಕ್ಷಿಣ ಕನ್ನಡ	206.30	29.50	13.08	9.00	51.58	–
5	ಧಾರವಾಡ	67.20	12.51	1.90	2.40	16.81	–
6	ಹಾಸನ	221.65	25.57	27.40	2.44	55.41	0.88
7	ಕೊಡಗು	247.90	44.79	9.31	7.87	61.97	0.83
8	ಮೈಸೂರು	96.95	14.17	5.93	4.14	24.24	–
9	ಶಿವಮೊಗ್ಗ	410.45	78.29	19.32	5.00	102.61	0.82
10	ಉತ್ತರ ಕನ್ನಡ **	516.40	178.76	12.71	7.04	198.51	0.67
11	ಉಡುಪಿ	296.85	59.06	8.86	6.29	74.21	–
	ಒಟ್ಟು	2894.00	595.51	140.18	77.22	812.91	3.20
12	ಪಶ್ಚಿಮ ಘಟ್ಟಗಳ ಅಭಿವೃದ್ಧಿ ಕಾರ್ಯಕ್ರಮ ಯೋಜನಾ ಕೋಶ	30.00	14.50	0.00	0.00	14.50	–
	ಜುಮ್ಲಾ	2924.00	610.01	140.18	77.22	827.41	3.20

* ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನಲ್ಲಿ ಯೋಜನಾ ಅನುಷ್ಠಾನಕ್ಕಾಗಿ ವರ್ಗಾವಣೆ ಮಾಡಿರುವ ಮೊತ್ತವಾದ ₹ 20.00 ಲಕ್ಷಗಳನ್ನು ಪುನಃ ತಮ್ಮ ಜಿಲ್ಲೆಗೆ ವರ್ಗಾಯಿಸಲಾಗಿದೆ.

** ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನಲ್ಲಿ ಯೋಜನಾ ಅನುಷ್ಠಾನಕ್ಕಾಗಿ ಮಂಜೂರಾತಿಯಾಗಿರುವ ಒಟ್ಟಾರೆ ₹ 89.41 ಲಕ್ಷಗಳ ಪೈಕಿ ಚಿಕ್ಕಮಗಳೂರು ಜಿಲ್ಲಾ ಪಂಚಾಯತಿಯಿಂದ ₹ 20.00 ಲಕ್ಷಗಳನ್ನು ವರ್ಗಾಯಿಸಲಾಗಿದ್ದು, ಉಳಿದಂತೆ ₹ 69.41 ಲಕ್ಷಗಳನ್ನು ಮಂಜೂರಾತಿ ಮೊತ್ತದಲ್ಲಿ ಭರಿಸಲು ಅನುದಾನ ಬಿಡುಗಡೆ ಮಾಡಲಾಗಿದೆ.

ಪಿ.ಎ. ಮೇಘಣ್ಣವರ
ನಿರ್ದೇಶಕರು,
ಗ್ರಾಮೀಣ ಮೂಲಭೂತ ಸೌಲಭ್ಯಗಳು,
ಹಾಗೂ ಪದನಿಮಿತ್ತ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪಿ.ಆರ್. 1105

ಜಲಸಂಪನ್ಮೂಲ ಸಚಿವಾಲಯ

ವಿಷಯ : ಕೊಪ್ಪಳ ಜಿಲ್ಲೆ ಕುಷ್ಟಗಿ ತಾಲ್ಲೂಕಿನ ನಿಡಶೇಸಿ ಗ್ರಾಮದ ಶ್ರೀಮತಿ ಬಸಮ್ಮ ಯಂಕಪ್ಪ ಹಾಗೂ ಇತರರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿಗೆ ಟೆಂಡರ್ ಅನುಮೋದಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ಉತ್ತರ) ವಲಯ, ಬಿಜಾಪುರರವರ ಪತ್ರದ ಕ್ರಮಾಂಕ : ಮುಇಂ/ಸನೀ(ಉ)ವ/ತಾ.ಸ-3/ಸ.ಇಂ-7/ನಿಡಶೇಸಿ/2010-11/1781, ದಿನಾಂಕ : 29-3-2011.

ಪ್ರಸ್ತಾವನೆ :

ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ನಿಡಶೇಸಿ ಗ್ರಾಮದ ಶ್ರೀಮತಿ ಬಸಮ್ಮ ಯಂಕಪ್ಪ ಹಾಗೂ ಇತರರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿಯ ಅಂದಾಜಿಗೆ ಕಾರ್ಯಪಾಲಕ ಇಂಜಿನಿಯರ್, ಸಣ್ಣ ನೀರಾವರಿ ವಿಭಾಗ, ಕುಷ್ಟಗಿ ರವರು ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಕುಷ್ಟಗಿ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಕರೆಯಲಾದ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ಜಿಲ್ಲಾ ಟೆಂಡರ್ ಬುಲೆಟಿನ್	12-11-2010
ವಿಜಯ ಕರ್ನಾಟಕ ದಿನ ಪತ್ರಿಕೆ	20-11-2010

ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಇಬ್ಬರು ಗುತ್ತಿಗೆದಾರರು ಭಾಗವಹಿಸಿದ್ದು, ಈ ಪೈಕಿ ಒಬ್ಬರು ಗುತ್ತಿಗೆದಾರರು ಮಾತ್ರ ಅರ್ಹತೆ ಹೊಂದಿದ್ದು, ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಹಾಗೂ ಪ್ರಸಕ್ತ ಸಾಲಿನ ದರಗಳನ್ನು ಪರಿಗಣಿಸಿ ಟೆಂಡರಿಗೆ ಇಡಲಾದ ಮೊತ್ತ			ರೂ. 6,53,888/-
ಕ್ರ. ಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಹಾಗೂ ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
1	ಶರಣಪ್ಪ ಕರಡೆನಪ್ಪನವರ ಗುತ್ತಿಗೆದಾರರು	8,33,959/-	27.54 ಹೆಚ್ಚು

ಮೇಲ್ಕಂಡಂತೆ ಶ್ರೀ ಶರಣಪ್ಪ ಕರಡೆನಪ್ಪನವರ, ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಅರ್ಹತೆ ಹೊಂದಿರುವ ಗುತ್ತಿಗೆದಾರರಾಗಿದ್ದು ಇವರು ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಂತೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 27.54 ರಷ್ಟು ಹೆಚ್ಚಾಗಿದ್ದು, ಸದರಿಯವರ ಟೆಂಡರ್‌ನ್ನು ಸಂಧಾನದ ಮೂಲಕ ಅಂಗೀಕರಿಸಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ಉತ್ತರ) ವಲಯ, ಬಿಜಾಪುರ ಇವರು ಮೇಲೆ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಗುತ್ತಿಗೆದಾರರು ನಂತರ ಪತ್ರವನ್ನು ನೀಡಿ ಪರಿಷ್ಕೃತ ದರಗಳ ಮೇಲೆ ಶೇ. 5.00 ಕ್ಕಿಂತ ಕಡಿಮೆ ದರದಲ್ಲಿ ಕಾಮಗಾರಿಯನ್ನು ನಿರ್ವಹಿಸುವುದಾಗಿ ತಿಳಿಸಿರುತ್ತಾರೆ. ಈ ಟೆಂಡರನ್ನು ಸರ್ಕಾರದಲ್ಲಿ ಪರಿಶೀಲಿಸಿ ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗಿಟ್ಟ ಪರಿಷ್ಕೃತ ಮೊತ್ತ ರೂ. 6,53,888/-ಗಳ ಮೇಲೆ ಶೇ 4.95ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 6,86,255/- ಗಳಿಗೆ ಅನುಮೋದಿಸಲು ಪರಿಗಣಿಸಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 10 ಏನೀಯೋ 2011 (ತಾಂತ್ರಿಕ), ಬೆಂಗಳೂರು, ದಿನಾಂಕ : 13-4-2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ನಿಡಶೇಸಿ ಗ್ರಾಮದ ಶ್ರೀಮತಿ ಬಸಮ್ಮ ಯಂಕಪ್ಪ ಹಾಗೂ ಇತರರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 6,53,888/-ಗಳ ಮೇಲೆ ಶೇ. 4.95 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 6,86,255/- ಗಳಿಗೆ (ಆರು ಲಕ್ಷದ ಎಂಭತ್ತಾರು ಸಾವಿರದ ಎರಡು ನೂರ ಐವತ್ತೈದು ರೂಪಾಯಿಗಳು ಮಾತ್ರ) ಶ್ರೀ ಶರಣಪ್ಪ ಕರಡೆನಪ್ಪನವರ, ಗುತ್ತಿಗೆದಾರರು ಇವರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ : 20-1-2003 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ರುದ್ರಮೂರ್ತಿ

ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

ಪಿ.ಆರ್. 1106

ಜಲಸಂಪನ್ಮೂಲ ಸಚಿವಾಲಯ

ವಿಷಯ : ಕೊಪ್ಪಳ ಜಿಲ್ಲೆ ಕುಷ್ಟಗಿ ತಾಲ್ಲೂಕಿನ ಪುರ ಗ್ರಾಮದ ಶ್ರೀ ಗರಡೆಪ್ಪ. ತಂದೆ ಹನುಮಪ್ಪ (ಸ.ನಂ. 94ಸಿ) ಹಾಗೂ ಇತರರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿಗೆ ಟೆಂಡರ್ ಅನುಮೋದಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ಉತ್ತರ) ವಲಯ, ಬಿಜಾಪುರರವರ ಪತ್ರದ ಕ್ರಮಾಂಕ : ಮುಇಂ/ಸನೀ(ಉ)ವ/ತಾ.ಸ-3/ಸ.ಇಂ-7/ಪುರ/2010-11/1783, ದಿನಾಂಕ : 29-3-2011.

ಪ್ರಸ್ತಾವನೆ :

ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಪುರ ಗ್ರಾಮದ ಶ್ರೀ ಗರಡೆಪ್ಪ. ತಂದೆ ಹನುಮಪ್ಪ (ಸ.ನಂ. 94ಸಿ) ಹಾಗೂ ಇತರರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿಯ ಅಂದಾಜಿಗೆ ಕಾರ್ಯಪಾಲಕ ಇಂಜಿನಿಯರ್, ಸಣ್ಣ ನೀರಾವರಿ ವಿಭಾಗ, ಕುಷ್ಟಗಿ ರವರು ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಕುಷ್ಟಗಿ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಕರೆಯಲಾದ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ಜಿಲ್ಲಾ ಟೆಂಡರ್ ಬುಲೆಟಿನ್	12-11-2010
ವಿಜಯ ಕರ್ನಾಟಕ ದಿನ ಪತ್ರಿಕೆ	20-11-2010

ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಒಬ್ಬರು ಗುತ್ತಿಗೆದಾರರು ಭಾಗವಹಿಸಿದ್ದು ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಹಾಗೂ ಪ್ರಸಕ್ತ ಸಾಲಿನ ದರಗಳನ್ನು ಪರಿಗಣಿಸಿ ಟೆಂಡರಿಗೆ ಇಡಲಾದ ಮೊತ್ತ			ರೂ. 5,44,829/-
ಕ್ರ. ಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಹಾಗೂ ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
1	ರಾಜಶೇಖರ ಐಲಿ, ಗುತ್ತಿಗೆದಾರರು	8,17,635/-	50.07 ಹೆಚ್ಚು

ಮೇಲ್ಕಂಡಂತೆ ಶ್ರೀ ರಾಜಶೇಖರ ಐಲಿ, ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಅರ್ಹತೆ ಹೊಂದಿರುವ ಗುತ್ತಿಗೆದಾರರಾಗಿದ್ದು ಇವರು ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಂತೆ ಪರಿಷ್ಕರಿಸಿದ ಟೆಂಡರಾಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 50.07 ರಷ್ಟು ಹೆಚ್ಚಾಗಿದ್ದು, ಸದರಿಯವರ ಟೆಂಡರ್‌ನ್ನು ಸಂಧಾನದ ಮೂಲಕ ಅಂಗೀಕರಿಸಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ಉತ್ತರ) ವಲಯ, ಬಿಜಾಪುರ ಇವರು ಮೇಲೆ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಗುತ್ತಿಗೆದಾರರು ನಂತರ ಪತ್ರವನ್ನು ನೀಡಿ ಪರಿಷ್ಕೃತ ದರಗಳ ಮೇಲೆ ಶೇ. 5.00 ಕ್ಕಿಂತ ಕಡಿಮೆ ದರದಲ್ಲಿ ಕಾಮಗಾರಿಯನ್ನು ನಿರ್ವಹಿಸುವುದಾಗಿ ತಿಳಿಸಿರುತ್ತಾರೆ. ಈ ಟೆಂಡರನ್ನು ಸರ್ಕಾರದಲ್ಲಿ ಪರಿಶೀಲಿಸಿ ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗಿಟ್ಟ ಪರಿಷ್ಕೃತ ಮೊತ್ತ ರೂ. 5,44,829/-ಗಳ ಮೇಲೆ ಶೇ 4.95 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 5,71,798/- ಗಳಿಗೆ ಅನುಮೋದಿಸಲು ಪರಿಗಣಿಸಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 09 ಏನೀಯೋ 2011 (ತಾಂತ್ರಿಕ), ಬೆಂಗಳೂರು, ದಿನಾಂಕ : 13-4-2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಪುರ ಗ್ರಾಮದ ಶ್ರೀ ಗರಡೆಪ್ಪ. ತಂದೆ ಹನುಮಪ್ಪ (ಸ.ನಂ. 94ಸಿ) ಹಾಗೂ ಇತರರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 5,44,829/-ಗಳ ಮೇಲೆ ಶೇ. 4.95 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 5,71,798/-ಗಳಿಗೆ (ಐದು ಲಕ್ಷದ ಎಪ್ಪತ್ತೊಂದು ಸಾವಿರದ ಏಳು ನೂರ ತೊಂಭತ್ತೆಂಟು ರೂಪಾಯಿಗಳು ಮಾತ್ರ) ಶ್ರೀ ರಾಜಶೇಖರ ಐಲಿ, ಗುತ್ತಿಗೆದಾರರು ಇವರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ : 20-1-2003 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ರುದ್ರಮೂರ್ತಿ

ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

ಪಿ.ಆರ್. 1107

ಜಲಸಂಪನ್ಮೂಲ ಸಚಿವಾಲಯ

ವಿಷಯ : ಕೊಪ್ಪಳ ಜಿಲ್ಲೆ ಕುಷ್ಟಗಿ ತಾಲ್ಲೂಕಿನ ಕುಷ್ಟಗಿ ಗ್ರಾಮದ ಹತ್ತಿರ ಶ್ರೀ ವೆಂಕಟೇಶ ಹನುಮಪ್ಪ ಹಾಗೂ ಇತರರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿಗೆ ಟೆಂಡರ್ ಅನುಮೋದಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ಉತ್ತರ) ವಲಯ, ಬಿಜಾಪುರರವರ ಪತ್ರದ ಕ್ರಮಾಂಕ : ಮುಇಂ/ಸನೀ(ಉ)ವ/ತಾ.ಸ-3/ಸ.ಇಂ-7/ಕುಷ್ಟಗಿ/2010-11/1782, ದಿನಾಂಕ : 29-3-2011.

ಪ್ರಸ್ತಾವನೆ :

ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಕುಷ್ಟಗಿ ಗ್ರಾಮದ ಹತ್ತಿರ ಶ್ರೀ ವೆಂಕಟೇಶ ಹನುಮಪ್ಪ ಹಾಗೂ ಇತರರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿಯ ಅಂದಾಜಿಗೆ ಕಾರ್ಯಪಾಲಕ ಇಂಜಿನಿಯರ್, ಸಣ್ಣ ನೀರಾವರಿ ವಿಭಾಗ, ಕುಷ್ಟಗಿ ರವರು ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಕುಷ್ಟಗಿ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಕರೆಯಲಾದ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ಜಿಲ್ಲಾ ಟೆಂಡರ್ ಬುಲೆಟಿನ್	12-11-2010
ವಿಜಯ ಕರ್ನಾಟಕ ದಿನ ಪತ್ರಿಕೆ	20-11-2010

ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಇಬ್ಬರು ಗುತ್ತಿಗೆದಾರರು ಭಾಗವಹಿಸಿದ್ದು, ಇವರ ಟೆಂಡರಿನ ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಹಾಗೂ ಪ್ರಸಕ್ತ ಸಾಲಿನ ದರಗಳನ್ನು ಪರಿಗಣಿಸಿ ಟೆಂಡರಿಗೆ ಇಡಲಾದ ಮೊತ್ತ			ರೂ. 6,75,458/-
ಕ್ರ. ಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಹಾಗೂ ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
1	ಮಲ್ಲಿಕಾರ್ಜುನ ನಾಯಕವಾಡಿ, ಗುತ್ತಿಗೆದಾರರು	7,84,249/-	16.10 ಹೆಚ್ಚು
2	ಮಂಜುನಾಥ ಅಭಿಗೇರಿ, ಗುತ್ತಿಗೆದಾರರು	8,51,532/-	26.06 ಹೆಚ್ಚು

ಮೇಲಿನ ವಿವರಗಳನ್ನು ಪರಿಶೀಲಿಸಿದಾಗ ಶ್ರೀ ಮಲ್ಲಿಕಾರ್ಜುನ ನಾಯಕವಾಡಿ, ಗುತ್ತಿಗೆದಾರರು ಟೆಂಡರ್‌ನಲ್ಲಿ ಕಡಿಮೆ ದರಗಳನ್ನು ನಮೂದಿಸಿರುವ ಗುತ್ತಿಗೆದಾರರಾಗಿದ್ದು, ಇವರು ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಂತೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 16.10 ರಷ್ಟು ಹೆಚ್ಚಾಗಿದ್ದು, ಸದರಿಯವರ ಟೆಂಡರ್‌ನ್ನು ಸಂದಾನದ ಮೂಲಕ ಅಂಗೀಕರಿಸಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ಉತ್ತರ) ವಲಯ, ಬಿಜಾಪುರ ಇವರು ಮೇಲೆ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಗುತ್ತಿಗೆದಾರರು ನಂತರ ಪತ್ರವನ್ನು ನೀಡಿ ಪರಿಷ್ಕೃತ ದರಗಳ ಮೇಲೆ ಶೇ. 5.00 ಕ್ಕಿಂತ ಕಡಿಮೆ ದರದಲ್ಲಿ ಕಾಮಗಾರಿಯನ್ನು ನಿರ್ವಹಿಸುವುದಾಗಿ ತಿಳಿಸಿರುತ್ತಾರೆ. ಈ ಟೆಂಡರನ್ನು ಸರ್ಕಾರದಲ್ಲಿ ಪರಿಶೀಲಿಸಿ ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗಿಟ್ಟ ಪರಿಷ್ಕೃತ ಮೊತ್ತ ರೂ. 6,75,458/-ಗಳ ಮೇಲೆ ಶೇ 4.95 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 7,08,893/- ಗಳಿಗೆ ಅನುಮೋದಿಸಲು ಪರಿಗಣಿಸಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 11 ಏನೀಯೋ 2011 (ತಾಂತ್ರಿಕ), ಬೆಂಗಳೂರು, ದಿನಾಂಕ : 13-4-2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಕುಷ್ಟಗಿ ಗ್ರಾಮದ ಶ್ರೀ ವೆಂಕಟೇಶ ಹನುಮಪ್ಪ ಹಾಗೂ ಇತರರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸುವ ಟೆಂಡರ್ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 6,75,458/-ಗಳ ಮೇಲೆ ಶೇ. 4.95 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 7,08,893/- ಗಳಿಗೆ (ಏಳು ಲಕ್ಷದ ಎಂಟು ಸಾವಿರದ ಎಂಟು ನೂರ ತೊಂಭತ್ತಮೂರು ರೂಪಾಯಿಗಳು ಮಾತ್ರ) ಶ್ರೀ ಮಲ್ಲಿಕಾರ್ಜುನ ನಾಯಕವಾಡಿ, ಗುತ್ತಿಗೆದಾರರು ಇವರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ : 20-1-2003 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ರುದ್ರಮೂರ್ತಿ

ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

ಪಿ.ಆರ್. 1108

ಜಲಸಂಪನ್ಮೂಲ ಸಚಿವಾಲಯ

ವಿಷಯ : ಕೊಪ್ಪಳ ಜಿಲ್ಲೆ ಕುಷ್ಟಗಿ ತಾಲ್ಲೂಕಿನ ಕಲಾಲಬಂಡಿ ಗ್ರಾಮದ ಹತ್ತಿರ ಶ್ರೀ ದುರುಗಪ್ಪ ಹಾಗೂ ಇತರರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿಗೆ ಟೆಂಡರ್ ಅನುಮೋದಿಸುವ ಕುರಿತು.

ಓದಲಾಗಿದೆ : ಮುಖ್ಯ ಇಂಜನಿಯರ್, ಸಣ್ಣ ನೀರಾವರಿ (ಉತ್ತರ) ವಲಯ, ಬಿಜಾಪುರರವರ ಪತ್ರದ ಕ್ರಮಾಂಕ : ಮುಇಂ/ಸನೀ(ಉ)ವ/ತಾ.ಸ-3/ಸ.ಇಂ-7/ಕಲಾಲಬಂಡಿ/2010-11/1780, ದಿನಾಂಕ : 29-3-2011.

ಪ್ರಸ್ತಾವನೆ :

ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಕಲಾಲಬಂಡಿ ಗ್ರಾಮದ ಹತ್ತಿರ ಶ್ರೀ ದುರಗಪ್ಪ ಸಾಬಪ್ಪ ಹಾಗೂ ಇತರರ ಜಮೀನುಗಳಿಗೆ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿಯ ಅಂದಾಜಿಗೆ ಕಾರ್ಯಪಾಲಕ ಇಂಜನಿಯರ್, ಸಣ್ಣ ನೀರಾವರಿ ವಿಭಾಗ, ಕುಷ್ಟಗಿ ರವರು ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿರುತ್ತಾರೆ.

ಈ ಕಾಮಗಾರಿಯನ್ನು ಕೈಗೊಳ್ಳಲು ಕುಷ್ಟಗಿ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಕರೆಯಲಾದ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ಜಿಲ್ಲಾ ಟೆಂಡರ್ ಬುಲೆಟಿನ್	12-11-2010
ವಿಜಯ ಕರ್ನಾಟಕ ದಿನ ಪತ್ರಿಕೆ	20-11-2010

ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಇಬ್ಬರು ಗುತ್ತಿಗೆದಾರರು ಭಾಗವಹಿಸಿದ್ದು, ಈ ಪೈಕಿ ಒಬ್ಬರು ಗುತ್ತಿಗೆದಾರರು ಮಾತ್ರ ಅರ್ಹತೆ ಹೊಂದಿದ್ದು, ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಹಾಗೂ ಪ್ರಸಕ್ತ ಸಾಲಿನ ದರಗಳನ್ನು ಪರಿಗಣಿಸಿ ಟೆಂಡರಿಗೆ ಇಡಲಾದ ಮೊತ್ತ			ರೂ. 6,68,483/-
ಕ್ರ. ಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಹಾಗೂ ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
1	ಆದನಗೌಡ ಪಾಟೀಲ ಗುತ್ತಿಗೆದಾರರು	8,32,689/-	24.56 ಹೆಚ್ಚು

ಮೇಲ್ಕಂಡಂತೆ ಶ್ರೀ ಆದನ ಗೌಡ ಪಾಟೀಲ, ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಅರ್ಹತೆ ಹೊಂದಿರುವ ಗುತ್ತಿಗೆದಾರರಾಗಿದ್ದು ಇವರು ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಂತೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 24.56 ರಷ್ಟು ಹೆಚ್ಚಾಗಿದ್ದು, ಸದರಿಯವರ ಟೆಂಡರ್‌ನ್ನು ಸಂಧಾನದ ಮೂಲಕ ಅಂಗೀಕರಿಸಲು ಮುಖ್ಯ ಇಂಜನಿಯರ್, ಸಣ್ಣ ನೀರಾವರಿ (ಉತ್ತರ) ವಲಯ, ಬಿಜಾಪುರ ಇವರು ಮೇಲೆ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಗುತ್ತಿಗೆದಾರರು ನಂತರ ಪತ್ರವನ್ನು ನೀಡಿ ಪರಿಷ್ಕೃತ ದರಗಳ ಮೇಲೆ ಶೇ. 5 ಕ್ಕಿಂತ ಕಡಿಮೆ ದರಗಳಲ್ಲಿ ಕಾಮಗಾರಿಯನ್ನು ನಿರ್ವಹಿಸುವುದಾಗಿ ತಿಳಿಸಿರುತ್ತಾರೆ. ಈ ಟೆಂಡರನ್ನು ಸರ್ಕಾರದಲ್ಲಿ ಪರಿಶೀಲಿಸಿ ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗಿಟ್ಟ ಪರಿಷ್ಕೃತ ಮೊತ್ತ ರೂ. 6,68,483/-ಗಳ ಮೇಲೆ ಶೇ 4.95 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 7,01,573 /- ಗಳಿಗೆ ಅನುಮೋದಿಸಲು ಪರಿಗಣಿಸಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 08 ಏನೀಯೋ 2011 (ತಾಂತ್ರಿಕ), ಬೆಂಗಳೂರು, ದಿನಾಂಕ : 13-4-2011

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಕಲಾಲಬಂಡಿ ಗ್ರಾಮದ ಶ್ರೀ ದುರುಗಪ್ಪ ಹಾಗೂ ಇತರರ ಜಮೀನಿಗೆ ನೀರಾವರಿ ಸೌಲಭ್ಯ ಒದಗಿಸುವ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 6,68,483/-ಗಳ ಮೇಲೆ ಶೇ. 4.95 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 7,01,573/-ಗಳಿಗೆ (ಏಳು ಲಕ್ಷದ ಒಂದು ಸಾವಿರದ ಐದು ನೂರ ಎಪ್ಪತ್ತಮೂರು ರೂಪಾಯಿಗಳು ಮಾತ್ರ) ಶ್ರೀ ಆದನಗೌಡ ಪಾಟೀಲ, ಗುತ್ತಿಗೆದಾರರು ಇವರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ : 20-1-2003 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ರುದ್ರಮೂರ್ತಿ

ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 1109

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

KA/ BG-GPO / 2515 / WPP-47 / 2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೬	ಬೆಂಗಳೂರು, ಗುರುವಾರ, ಜುಲೈ ೧೪, ೨೦೧೧ (ಆಷಾಢ ೨೩, ಶಕ ವರ್ಷ ೧೯೩೩)	ಸಂಚಿಕೆ ೨೮

ಭಾಗ – ೨

ನೇಮಕಗಳು, ಸ್ಥಳ ನೇಮಕಗಳು, ವರ್ಗಾವಣೆಗಳು, ರಜೆ ಮತ್ತು ಅಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯದ ಅಧಿಸೂಚನೆಗಳು

ಕಾರ್ಮಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಾಇ 13 ಎಲ್‌ಇಟ 2011, ಬೆಂಗಳೂರು, ದಿನಾಂಕ: 27ನೇ ಮೇ, 2011.

ಕಾರ್ಮಿಕ ಇಲಾಖೆಯ ಶ್ರೀ ಚಿದಾನಂದ. ಎಂ. ಎಸ್. ಸಹಾಯಕ ಕಾರ್ಮಿಕ ಆಯುಕ್ತರು, ಬೆಳಗಾಂ ಇವರನ್ನು ಕೆಳಕಂಡ ಷರತ್ತುಗಳಿಗೊಳಪಟ್ಟು ₹. 18150–450–19500–525–22650–600–26250–675–26925ರ ವೇತನ ಶ್ರೇಣಿಯ ಉಪಕಾರ್ಮಿಕ ಆಯುಕ್ತರ ಹುದ್ದೆಯಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು, ನಿಯಮ 32ರಡಿ ತಕ್ಷಣದಿಂದ ಜಾರಿಗೆ ಬರುವಂತೆ ಸ್ವತಂತ್ರ ಪ್ರಭಾರದಲ್ಲಿ ಇಡಲಾಗಿದೆ ಮತ್ತು ಉಪಕಾರ್ಮಿಕ ಆಯುಕ್ತರು, ಗುಲ್ಬರ್ಗಾ ಇಲ್ಲಿ ಖಾಲಿಯಿರುವ ಉಪಕಾರ್ಮಿಕ ಆಯುಕ್ತರ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಲಾಗಿದೆ.

<u>ಷರತ್ತುಗಳು</u>

1. ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು, ನಿಯಮ 32ರಡಿಯಲ್ಲಿನ ಸ್ವತಂತ್ರ ಪ್ರಭಾರ ವ್ಯವಸ್ಥೆಯು ಒಂದು ತಾತ್ಕಾಲಿಕ ವ್ಯವಸ್ಥೆಯಾಗಿದ್ದು, ಇದನ್ನು ಮುಂಬಡ್ತಿ ಎಂದು ಪರಿಗಣಿಸಲಾಗುವುದಿಲ್ಲ.
2. 1998ನೇ ಹಾಗೂ 1999ನೇ ಸಾಲಿನ ಕೆ.ಎ.ಎಸ್. ಸ್ಪರ್ಧಾತ್ಮಕ ಪರೀಕ್ಷೆಯ ಅಭ್ಯರ್ಥಿಗಳ ಜೇಷ್ಠತೆಯನ್ನು ನಿಗಧಿಪಡಿಸುವ ಬಗೆಗಿನ ಮೊಕದ್ದಮೆಯು ರಿಟ್ ಅರ್ಜಿ ಸಂಖ್ಯೆ: 10605–10620/2010 (S-KAT) ಮತ್ತು ರಿಟ್ ಅರ್ಜಿ 8198–8213/2010 ಮತ್ತು ರಿಟ್ ಅರ್ಜಿ ಸಂಖ್ಯೆ: 305–53/10 and connected matters ಯಲ್ಲಿ ಬಾಕಿ ಇರುವ ಕಾರಣ ಈ ಸ್ವತಂತ್ರ ಪ್ರಭಾರ ವ್ಯವಸ್ಥೆಯು ಈ ರಿಟ್ ಅರ್ಜಿಗಳ ತೀರ್ಮಾನಕ್ಕೆ ಒಳಪಡುತ್ತದೆ. ಸ್ವತಂತ್ರ ಪ್ರಭಾರ ವ್ಯವಸ್ಥೆಯ ಆಧಾರದಿಂದ ಜೇಷ್ಠತೆಯಲ್ಲಿ ಹಕ್ಕನ್ನು ಸಾಧಿಸುವಂತಿಲ್ಲ.
3. ಸ್ವತಂತ್ರ ಪ್ರಭಾರ ವ್ಯವಸ್ಥೆಯನ್ನು ಯಾವುದೇ ಸಂದರ್ಭದಲ್ಲಿ ಹಿಂತೆಗೆದುಕೊಳ್ಳಬಹುದಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಯು. ಎನ್. ನಾಗೇಂದ್ರ,
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.

ಪಿ.ಆರ್. 739

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಲಾ 137 ಎಲ್‌ಎಜಿ 2010, ಬೆಂಗಳೂರು, ದಿನಾಂಕ: 01ನೇ ಜೂನ್, 2011.

ಶ್ರೀಮತಿ [illegible] ರಾವ್, ಅಪರ ಸರ್ಕಾರಿ ವಕೀಲರು, ಭದ್ರಾವತಿ. ಇವರ ಸೇವಾವಧಿಯು ಮುಕ್ತಾಯಗೊಂಡಿರುವುದರಿಂದ ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳು 1977ರ ನಿಯಮ 26(2)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಹುದ್ದೆಯ ಅಧಿಕಾರ ವಹಿಸಿಕೊಳ್ಳುವ ದಿನಾಂಕದಿಂದ ಮೂರು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇವರನ್ನು

ಯಾವುದು ಮೊದಲೋ ಅಲ್ಲಿಯವರೆಗೆ ಶ್ರೀ ಹೆಚ್.ಎಲ್. ವಿಶ್ವನಾಥ್ ಹೊಸಮನಿ, ವಕೀಲರು, ಇವರನ್ನು ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲ್ಲೂಕಿನ ಅಪರ ಸರ್ಕಾರಿ ವಕೀಲರ ಹುದ್ದೆಗೆ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಸಯ್ಯದ್ ಅಬ್ದುಲ್ ನಜೀರ್,
ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ-1),
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ

ಪಿ.ಆರ್. 741

ವಾಣಿಜ್ಯ ಮತ್ತು ಕೈಗಾರಿಕೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ವಾಕೈ 15 ರೀಉನಿ 2011, ಬೆಂಗಳೂರು, ದಿನಾಂಕ: 26ನೇ ಮೇ, 2011.

ಅಧಿಸೂಚನೆ ಸಂಖ್ಯೆ:ಡಿಪಿಎಆರ್ 247 ಎಸ್ಎಎಸ್ 2011, ದಿನಾಂಕ:13-5-2011 ರಲ್ಲಿ ಶ್ರೀ ಜಿ. ರಾಮಚಂದ್ರ, ಭಾಆಸೇ., ಇವರನ್ನು ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ನೇಮಕ ಮಾಡುವುದಕ್ಕಾಗಿ ಇವರ ಸೇವೆಯನ್ನು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ವಶಕ್ಕೆ ನೀಡಲಾಗಿದೆ. ಅದರಂತೆ ಶ್ರೀ ಜಿ. ರಾಮಚಂದ್ರ, ಭಾಆಸೇ., ಇವರನ್ನು ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಹುದ್ದೆಗೆ ಮರು ಸ್ಥಳ ನಿಯುಕ್ತಿಗೊಳಿಸಿ, ಈ ಕೂಡಲೇ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಭಾರತಿ ಆರ್. ನಾಯಕ್,
ಪೀಠಾಧಿಕಾರಿ (ರೇಷ್ಮೆ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

ಪಿ.ಆರ್. 742

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ

ಅಧಿಕೃತ ಜ್ಞಾಪನ

ಸಂಖ್ಯೆ: ಮಮಇ 503 ಎಸ್‌ಜೆಡಿ 2010, ಬೆಂಗಳೂರು, ದಿನಾಂಕ: 31ನೇ ಮೇ, 2011.

ಸರ್ಕಾರದ ಆದೇಶ ಸಂಖ್ಯೆ: ಮಮಇ 145 ಎಸ್‌ಜೆಡಿ 2010 ದಿ: 30-08-2010ರಲ್ಲಿ ಶ್ರೀ ವೈ. ಬಿ. ಶಿಂಧೆ, ಸಹಾಯಕ ನಿರ್ದೇಶಕರು, ಇವರಿಗೆ ಉಪನಿರ್ದೇಶಕರ ಹುದ್ದೆಗೆ ನೀಡಿದ ಸ್ಥಾನಪನ್ನ ಬಡ್ತಿಯನ್ನು ಹಿಂಪಡೆದು ಕರ್ನಾಟಕ ನಾಗರೀಕ ಸೇವಾ (ಆರ್.ಪಿ.ಪಿ.ಪಿ.) ನಿಯಮಾವಳಿ 1978ರ ನಿಯಮ 2(1)(ಎ)ರನ್ವಯ ಪೂರ್ವಾನ್ವಯ ಬಡ್ತಿಯನ್ನು ಜೇಷ್ಠತೆಯಲ್ಲಿ ಇವರಿಗಿಂತ ಕಿರಿಯರಾದ ಶ್ರೀಮತಿ ಎಂ.ಎಸ್. ಸುಮನ್ ಇವರಿಗೆ ಉಪನಿರ್ದೇಶಕರ ಹುದ್ದೆಗೆ ಬಡ್ತಿ ನೀಡಿದ ದಿನಾಂಕ: 13-01-2009ರಿಂದ ಅನ್ವಯಿಸುವಂತೆ ಶ್ರೀ ವೈ. ಬಿ. ಶಿಂಧೆ, ಉಪನಿರ್ದೇಶಕರವರಿಗೆ ಸ್ಥಾನಪನ್ನ ಬಡ್ತಿಗೆ ಪರಿಗಣಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಆದೇಶಾನುಸಾರ,
ಬಿ. ಕಮಲಮ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

ಪಿ.ಆರ್. 743

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಆಕುಕ 94 ಎಂಎಸ್ಎಸ್ 2011, ಬೆಂಗಳೂರು, ದಿನಾಂಕ: 31ನೇ ಮೇ, 2011.

ಶ್ರೀ ಎಸ್. ಸೆಲ್ವ ಕುಮಾರ್, ಐ.ಎ.ಎಸ್., ಯೋಜನಾ ನಿರ್ದೇಶಕರು, ಕರ್ನಾಟಕ ಆರೋಗ್ಯ ಪದ್ಧತಿ ಅಭಿವೃದ್ಧಿ ಮತ್ತು ಸುಧಾರಣೆ ಮತ್ತು ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ, ಬೆಂಗಳೂರು ಇವರನ್ನು ದಿನಾಂಕ: 31-05-2011ರ ಅಪರಾಹ್ನದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ತಾತ್ಕಾಲಿಕವಾಗಿ ಅವರು ಕಾರ್ಯನಿರ್ವಹಿಸುತ್ತಿರುವ ಹುದ್ದೆಯ ಜೊತೆಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಮತ್ತು ಆಯುಷ್ ಇಲಾಖೆಯ ಶ್ರೀ ಡಿ. ಎನ್. ನಾಯಕ್, ಐ.ಎ.ಎಸ್., ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಮತ್ತು ಆಯುಷ್ ಇಲಾಖೆ ಇವರ ವಯೋನಿವೃತ್ತಿಯಿಂದ ದಿನಾಂಕ: 31-05-2011ರಂದು ತೆರವಾಗಲಿರುವ ಹುದ್ದೆಯಲ್ಲಿ ಹೆಚ್ಚುವರಿ ಪ್ರಭಾರದಲ್ಲಿರಿಸಿ ಸರ್ಕಾರ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಬಿ. ಎಫ್. ಹುಬ್ಬಳ್ಳಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಪಿ.ಆರ್. 744

ಅಧಿಸೂಚನೆ

ಸಂಖ್ಯೆ: ಆಕುಕ 52 ಆರ್‌ಜಿಯು 2011, ಬೆಂಗಳೂರು, ದಿನಾಂಕ: 23ನೇ ಮೇ, 2011.

ಡಾ॥ ವಸಂತ ಕಾಮತ್, ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರು, ವೈದ್ಯಶಾಸ್ತ್ರ ವಿಭಾಗ, ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆ, ಬೆಂಗಳೂರು, ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಮೂರು ವರ್ಷಗಳ ಅವಧಿಗೆ ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ, ಇಲ್ಲಿನ ನಿರ್ದೇಶಕರ ಹುದ್ದೆಗೆ ನೇಮಕ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ. ಕೆ. ಭೈರಪ್ಪ,
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ)

ಪಿ.ಆರ್. 745

ಅಧಿಸೂಚನೆ

ಸಂಖ್ಯೆ: ಆಕುಕ 93 ಎಂಎಸ್‌ಎಸ್ 2011, ಬೆಂಗಳೂರು, ದಿನಾಂಕ: 31ನೇ ಮೇ, 2011.

ಡಾ॥ ವಿ. ಡಿ. ಪಾಲೇಕರ್, ಯೋಜನಾ ನಿರ್ದೇಶಕರು (ಆರ್‌ಸಿಹೆಚ್), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಇವರು ಕಾರ್ಯನಿರ್ವಹಿಸುತ್ತಿರುವ ಹುದ್ದೆಯ ಜೊತೆಗೆ ನಿರ್ದೇಶಕರು, ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆ, ಮಾಗಡಿ ರಸ್ತೆ, ಬೆಂಗಳೂರು ಹಾಗೂ ನಿರ್ದೇಶಕರು, ಸಂಜಯ ಗಾಂಧಿ ಟ್ರಾಮ ಮತ್ತು ಅಸ್ತಿ ಚಿಕಿತ್ಸಾ ಸಂಸ್ಥೆ, ಬೆಂಗಳೂರು ಈ ಹುದ್ದೆಗಳಿಗೆ ಡಾ॥ ಎಸ್. ಪ್ರಕಾಶ್‌ರವರು ವಯೋ ನಿವೃತ್ತಿಯಿಂದ ದಿ: 31-05-2011ರಂದು ಅಪರಾಹ್ನ ತೆರವಾಗಲಿರುವ ಹುದ್ದೆಗಳಲ್ಲಿ ಹೆಚ್ಚುವರಿಯಾಗಿ ಕಾರ್ಯನಿರ್ವಹಿಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ನಿಯಮ 68ರ ಅನ್ವಯ ಹೆಚ್ಚುವರಿ ಪ್ರಭಾರದಲ್ಲಿ ಇಟ್ಟು ಆದೇಶಿಸಿದೆ.

ಡಾ॥ ವಿಮಲಾ ಆರ್. ಪಾಟೀಲ್, ನಿವಾಸಿ ವೈದ್ಯಾಧಿಕಾರಿ, ಕೆ.ಸಿ. ಜನರಲ್ ಆಸ್ಪತ್ರೆ, ಬೆಂಗಳೂರು ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ದಿನಾಂಕ: 31-05-2011ರ ಅಪರಾಹ್ನದಿಂದ ಜಾರಿಗೆ ಬರುವಂತೆ ಅವರು ಕಾರ್ಯನಿರ್ವಹಿಸುತ್ತಿರುವ ಹುದ್ದೆಯ ಜೊತೆಗೆ ಡಾ॥ ವಿಶ್ವಾರಾಧ್ಯ ಎಂ., ಅಧೀಕ್ಷಕರು, ಕೆ.ಸಿ. ಜನರಲ್ ಆಸ್ಪತ್ರೆ, ಮಲ್ಲೇಶ್ವರಂ, ಬೆಂಗಳೂರು ಇವರ ವಯೋ ನಿವೃತ್ತಿಯಿಂದ ದಿನಾಂಕ: 31-05-2011ರ ಅಪರಾಹ್ನ ತೆರವಾಗಲಿರುವ ಅಧೀಕ್ಷಕರು, ಕೆ.ಸಿ. ಜನರಲ್ ಆಸ್ಪತ್ರೆ ಈ ಹುದ್ದೆಯಲ್ಲಿ ಹೆಚ್ಚುವರಿಯಾಗಿ ಕಾರ್ಯನಿರ್ವಹಿಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ನಿಯಮ 68ರ ಅನ್ವಯ ಹೆಚ್ಚುವರಿ ಪ್ರಭಾರದಲ್ಲಿರಿಸಿದೆ.

ಡಾ॥ ಎಂ. ಚಂದ್ರಶೇಖರನ್, ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿಗಳು, ಚಿಕ್ಕಬಳ್ಳಾಪುರ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ದಿ: 31-05-2011ರ ಅಪರಾಹ್ನದಿಂದ ಜಾರಿಗೆ ಬರುವಂತೆ ಅವರು ಕಾರ್ಯನಿರ್ವಹಿಸುತ್ತಿರುವ ಹುದ್ದೆಯ ಜೊತೆಗೆ ಡಾ॥ ಬಿ. ಎಸ್. ಬೈರಾರೆಡ್ಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ಚಿಕ್ಕಬಳ್ಳಾಪುರ ಇವರ ವಯೋ ನಿವೃತ್ತಿಯಿಂದ ದಿನಾಂಕ : 31-05-2011ರ ಅಪರಾಹ್ನ ತೆರವಾಗಲಿರುವ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ಚಿಕ್ಕಬಳ್ಳಾಪುರ ಈ ಹುದ್ದೆಯಲ್ಲಿ ಹೆಚ್ಚುವರಿಯಾಗಿ ಕಾರ್ಯನಿರ್ವಹಿಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ನಿಯಮ 68ರ ಅನ್ವಯ ಪ್ರಭಾರದಲ್ಲಿರಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಬಿ. ಎಫ್. ಹುಬ್ಬಳ್ಳಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

ಪಿ.ಆರ್. 746

ಅಧಿಸೂಚನೆ

ಸಂಖ್ಯೆ: ಆಕುಕ 228 ಎಂಎಸ್‌ಎಸ್ 2010, ಬೆಂಗಳೂರು, ದಿನಾಂಕ: 31ನೇ ಮೇ, 2011

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಕೆಳಕಂಡ ಸಹನಿರ್ದೇಶಕರ ವೃಂದದ ಅಧಿಕಾರಿಗಳಿಗೆ ₹. 24450-600-26250-675-30300-750-31800/- ವೇತನ ಶ್ರೇಣಿಯ ಅಪರ ನಿರ್ದೇಶಕರ ಹುದ್ದೆಗೆ ಪದೋನ್ನತಿ ನೀಡಿ, ಈ ತಕ್ಷಣದಿಂದಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅವರ ಹೆಸರಿನ ಮುಂದೆ ಸೂಚಿಸಿರುವ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಿ ಸರ್ಕಾರ ನೇಮಿಸಿದೆ.

ಕ್ರಮ ಸಂಖ್ಯೆ	ಅಧಿಕಾರಿಯ ಹೆಸರು, ಪದನಾಮ ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳ	ಮುಂಬಡ್ತಿ ಮೇಲೆ ನೇಮಿಸಲಾದ ಹುದ್ದೆ/ ಸ್ಥಳ
1.	ಡಾ॥ ಟಿ. ಎಸ್. ಚೆಲುವರಾಜು, ಸಹನಿರ್ದೇಶಕರು (ಸಿಎಂಡಿ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು	ಯೋಜನಾ ನಿರ್ದೇಶಕರು (ಐ.ಡಿ.ಎಸ್.ಪಿ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು

೨.	ಡಾ॥ ಹೀರಾ ಬಿ. ರಾಯ್ಕರ್, ಸಹನಿರ್ದೇಶಕರು, ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆ, ಮಾಗಡಿ ರಸ್ತೆ, ಬೆಂಗಳೂರು	ಅಪರ ನಿರ್ದೇಶಕರು ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ, ಬೆಂಗಳೂರು

ಸದರಿ ಅಧಿಕಾರಿಗಳು ನೇಮಿಸಲಾದ ಸ್ಥಳದಲ್ಲಿ ಕೂಡಲೇ ಕಾರ್ಯ ವರದಿ ಮಾಡಿಕೊಂಡು ಸರ್ಕಾರವನ್ನೊಳಗೊಂಡಂತೆ ಸಂಬಂಧಪಟ್ಟವರೆಲ್ಲರಿಗೂ ಪ್ರಭಾರ ವರ್ಗಾವಣೆ ಪತ್ರವನ್ನು (ಸಿಟಿಸಿ) ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಬಿ. ಎಫ್. ಹುಬ್ಬಳ್ಳಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

ಪಿ.ಆರ್. 747

ಇಂಧನ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಇಎನ್ 72 ಸಮನ್ವಯ 2011, ಬೆಂಗಳೂರು, ದಿನಾಂಕ: 01ನೇ ಜೂನ್, 2011.

ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಮೈಸೂರು ಇದರ ಮೆಮೊರಾಂಡಂ ಆಫ್ ಅಸೋಸಿಯೇಷನ್ ಅಂಡ್ ಆರ್ಟಿಕಲ್ಸ್ ಆಫ್ ಅಸೋಸಿಯೇಷನ್ 72(ಎ) ಮತ್ತು (ಬಿ)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ ಭಾಗ್ಯ ನಾಯಕ್. ಬಿ ಮುಖ್ಯ ಇಂಜಿನಿಯರ್ (ವಿದ್ಯುತ್), (ಯೋಜನೆ ಮತ್ತು ಸಮನ್ವಯ), ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು ಇವರನ್ನು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಮೈಸೂರು ಇದರ ನಿರ್ದೇಶಕರು (ತಾಂತ್ರಿಕ) ಹುದ್ದೆಗೆ (ಇದೇ ಸಮ ಸಂಖ್ಯೆಯ ದಿನಾಂಕ 25-05-2011ರ ಅಧಿಸೂಚನೆಯಲ್ಲಿ ನೇಮಕ ಮಾಡಿದ್ದ ಶ್ರೀ ಚಿಕ್ಕನಂಜಪ್ಪ ಇವರ ಸ್ಥಾನದಲ್ಲಿ) ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಕ ಮಾಡಲಾಗಿದೆ.

ಶ್ರೀ ಚಿಕ್ಕನಂಜಪ್ಪ, ಮುಖ್ಯ ಇಂಜಿನಿಯರ್ (ವಿದ್ಯುತ್), ನಿರ್ದೇಶಕರು (ತಾಂತ್ರಿಕ), ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ ಇವರನ್ನು ಇದೇ ಸಮ ಸಂಖ್ಯೆಯ ದಿನಾಂಕ: 25-05-2011ರ ಅಧಿಸೂಚನೆಯಲ್ಲಿ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಮೈಸೂರು ಇದರ ನಿರ್ದೇಶಕರು (ತಾಂತ್ರಿಕ), ಹುದ್ದೆಗೆ ನೇಮಕ ಮಾಡಿರುವುದನ್ನು ಮಾರ್ಪಡಿಸಿ ಇವರನ್ನು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ ಇದರ ಮೆಮೊರಾಂಡಂ ಆಫ್ ಅಸೋಸಿಯೇಷನ್ ಅಂಡ್ ಆರ್ಟಿಕಲ್ಸ್ ಆಫ್ ಅಸೋಸಿಯೇಷನ್ 74 (ಎ) ಮತ್ತು (ಬಿ)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ನಿರ್ದೇಶಕರು (ತಾಂತ್ರಿಕ), ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ ಇದರ ನಿರ್ದೇಶಕರು (ತಾಂತ್ರಿಕ) ಹುದ್ದೆಯಲ್ಲಿಯೇ ಮುಂದುವರಿಸಲಾಗಿದೆ.

ಶ್ರೀ ಹೊಸಮನಿ. ಎ. ಜೆ., ಮುಖ್ಯ ಇಂಜಿನಿಯರ್ (ವಿದ್ಯುತ್), (Tendering & Proc.), ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು ಇವರನ್ನು ಇದೇ ಸಮ ಸಂಖ್ಯೆಯ ದಿನಾಂಕ: 25-05-2011ರ ಅಧಿಸೂಚನೆಯಲ್ಲಿ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಹುಬ್ಬಳ್ಳಿ ಇದರ ನಿರ್ದೇಶಕರು (ತಾಂತ್ರಿಕ) ಹುದ್ದೆಗೆ ನೇಮಕ ಮಾಡಿರುವುದನ್ನು ಮಾರ್ಪಡಿಸಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು ಇದರ ಮೆಮೊರಾಂಡಂ ಆಫ್ ಅಸೋಸಿಯೇಷನ್ ಅಂಡ್ ಆರ್ಟಿಕಲ್ಸ್ ಆಫ್ ಅಸೋಸಿಯೇಷನ್ 30 (1) (ಬಿ)ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮುಖ್ಯ ಇಂಜಿನಿಯರ್ (ವಿದ್ಯುತ್), (Tendering & Proc.) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು ಹುದ್ದೆಯಲ್ಲಿಯೇ ಮುಂದುವರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಸುರೇಶ್. ಬಿ. ಕೃಷ್ಣಪ್ಪನವರ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಪಿ.ಆರ್. 748

ಯುವಜನ ಸೇವಾ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಯುಸೇಇ 62 ಯುಇಸೇ 2011, ಬೆಂಗಳೂರು, ದಿನಾಂಕ: 31ನೇ ಮೇ, 2011.

ಶ್ರೀ ಆರ್. ಎಲ್. ಪಾಟೀಲ್, ಜಂಟಿ ನಿರ್ದೇಶಕರು, ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ, (ಗುಂಪು-'ಎ', ಆಯ್ಕೆದರ್ಜೆ ಅಧಿಕಾರಿ, ವೇತನ ಶ್ರೇಣಿ ₹. 22,135-30,300), ಇವರು ದಿನಾಂಕ: 31-05-2011ರ ಅಪರಾಹ್ನದಿಂದ ಜಾರಿಗೆ ಬರುವಂತೆ ಕೆ.ಸಿ.ಎಸ್.ಆರ್. ನಿಯಮ 95 ಮತ್ತು 283ರನ್ವಯ ಸರ್ಕಾರಿ ಸೇವೆಯಿಂದ ವಯೋ ನಿವೃತ್ತಿ ಹೊಂದಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಸಿ. ಶ್ರೀನಿವಾಸ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಯುವಜನ ಸೇವಾ ಇಲಾಖೆ.

ಪಿ.ಆರ್. 749

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 17 ಭಾನಿವಿ 2011, ಬೆಂಗಳೂರು, ದಿನಾಂಕ: 26ನೇ ಮೇ, 2011.

ಶ್ರೀಮತಿ ಎನ್. ಜಯಲಕ್ಷ್ಮಮ್ಮ, ಸಂಶೋಧನಾಧಿಕಾರಿ, ಭಾಷಾಂತರ ನಿರ್ದೇಶನಾಲಯ ಮತ್ತು ಭಾಷಾಂತರ ನಿರ್ದೇಶನಾಲಯ ಸೇವೆಗೆ ಸೇರಿದ ಹಾಗೂ ಪ್ರಸ್ತುತ ಕರ್ನಾಟಕ ಕಾನೂನು ವರದಿ ಪರಿಷತ್ತಿನಲ್ಲಿ ಉಪ ಭಾಷಾಂತರಕಾರರಾಗಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಶ್ರೀ ಹೆಚ್. ಎನ್. ಸೋಮಶೇಖರಪ್ಪ, ಸಂಶೋಧನಾಧಿಕಾರಿ (ವೇತನ ಶ್ರೇಣಿ ₹. 11,400-21,600) ಇವರಿಗೆ ತಕ್ಷಣದಿಂದಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಭಾಷಾಂತರ ನಿರ್ದೇಶನಾಲಯದಲ್ಲಿ ಖಾಲಿ ಇರುವ ಸಹಾಯಕ ನಿರ್ದೇಶಕರ ಹುದ್ದೆಗೆ ವೇತನ ಶ್ರೇಣಿ ₹. 14,050-25,050 ಸ್ಥಾನಪನ್ನ ಮುಂಬಡ್ತಿ ನೀಡಿ, ನೇಮಕ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಬಿ. ಜಿ. ಶ್ಯಾಮಲ,
ಸಹಾಯಕ ಪ್ರಾರೂಪಕಾರ ಮತ್ತು ಪದನಿಮಿತ್ತ
ಸರ್ಕಾರದ ಉಪಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.

ಪಿ.ಆರ್. 750

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 17 ಭಾನಿವಿ 2011, ಬೆಂಗಳೂರು, ದಿನಾಂಕ: 26ನೇ ಮೇ, 2011.

ಶ್ರೀ ವೆಂಕಟಾಚಲಪತಿ, ಸಹಾಯಕ ನಿರ್ದೇಶಕರು ಮತ್ತು ಶ್ರೀಮತಿ ಶೋಭಾ ಎಂ. ಕಟ್ಟಿ, ಸಹಾಯಕ ನಿರ್ದೇಶಕರು (ವೇತನ ಶ್ರೇಣಿ ₹. 14050-25,050) ಭಾಷಾಂತರ ನಿರ್ದೇಶನಾಲಯ ಇವರಿಗೆ ತಕ್ಷಣದಿಂದಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ₹. 18,150-26,925ರ ವೇತನ ಶ್ರೇಣಿಯಲ್ಲಿ ಉಪನಿರ್ದೇಶಕರು, ಭಾಷಾಂತರ ನಿರ್ದೇಶನಾಲಯ, ಬೆಂಗಳೂರು ಹುದ್ದೆಗೆ ಸ್ಥಾನಪನ್ನ ಮುಂಬಡ್ತಿ ನೀಡಿ ನೇಮಕ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಬಿ. ಜಿ. ಶ್ಯಾಮಲ,
ಸಹಾಯಕ ಪ್ರಾರೂಪಕಾರ ಮತ್ತು ಪದನಿಮಿತ್ತ
ಸರ್ಕಾರದ ಉಪಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.

ಪಿ.ಆರ್. 751

ಕಂದಾಯ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಂಇ 23 ಆರ್ಎಂಇ 2011, ಬೆಂಗಳೂರು, ದಿನಾಂಕ: 20ನೇ ಮೇ, 2011.

ಕರ್ನಾಟಕ ಮೇಲ್ಮನವಿ ನ್ಯಾಯಾಧಿಕರಣದಲ್ಲಿ ಜಿಲ್ಲಾ ನ್ಯಾಯಾಧೀಶ ಸದಸ್ಯರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ವಿ. ಹೆಚ್. ಕುಲಕರ್ಣಿ ಇವರ ಸೇವೆಯನ್ನು ಘನ ಕರ್ನಾಟಕ ಉಚ್ಚ ನ್ಯಾಯಾಲಯಕ್ಕೆ ಹಿಂತಿರುಗಿಸುವಂತೆ, ಘನ ಉಚ್ಚ ನ್ಯಾಯಾಲಯದ ರಿಜಿಸ್ಟ್ರಾರ್ ಜನರಲ್‌ರವರು ದಿನಾಂಕ 28-04-2011ರ ಪತ್ರ ಸಂಖ್ಯೆ: ಜಿಓಬಿ(I)4(1):2011ರಲ್ಲಿ ಕೋರಿರುವಂತೆ, ಸದರಿ ನ್ಯಾಯಾಧೀಶರ ಸೇವೆಯನ್ನು ಘನ ಉಚ್ಚ ನ್ಯಾಯಾಲಯಕ್ಕೆ ತಕ್ಷಣದಿಂದ ಜಾರಿಗೆ ಬರುವಂತೆ ಹಿಂದಿರುಗಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ರಾಮಚಂದ್ರಯ್ಯ,
ರಾಜ್ಯ ಪ್ರತಿನಿಧಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಕೆಎಟಿ ಮತ್ತು ಬಾನಿ)

ಪಿ.ಆರ್. 752

ಒಳಾಡಳಿತ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಒಇ 19 ಪೊಪಸೆ 2011, ಬೆಂಗಳೂರು, ದಿನಾಂಕ: 31ನೇ ಮೇ, 2011.

ಶ್ರೀ ಎಂ. ವೈ. ಕೊಟ್ರಣ್ಣವರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಇವರು ಸ್ಥಳ ನಿಯುಕ್ತಿಗಾಗಿ ಕಾಯ್ದ ದಿನಾಂಕ : 13-08-2010 ರಿಂದ 01-12-2010ರ ವರೆಗಿನ ಅವಧಿಯನ್ನು ಕೆ.ಸಿ.ಎಸ್.ಆರ್. ನಿಯಮ 8(15)(ಎಫ್)ರನ್ವಯ ಕಡ್ಡಾಯ ನಿರೀಕ್ಷಣಾ ಅವಧಿಯೆಂದು ಹಾಗೂ ದಿನಾಂಕ: 02-12-2010 ರಿಂದ 09-12-2010ರ ವರೆಗಿನ 8 ದಿನಗಳು ಅರ್ಹರಜೆ ಎಂಬುದಾಗಿ [ತಡವಾಗಿ ಕರ್ತವ್ಯಕ್ಕೆ

ಹಾಜರಾದ ಅವಧಿ-ಕ.ನಾ.ಸೇ.ನಿ. ನಿಯಮ 76(3)ರನ್ವಯ ಸಾರ್ವಜನಿಕ ಹಿತಶಕ್ತಿಯ ಮೇರೆಗೆ ವರ್ಗಾವಣೆ ಮಾಡಿರುವುದರಿಂದ ರಜೆಯ ಅರ್ಜಿಯನ್ನು ಪಡೆಯುವ ಷರತ್ತಿಗೊಳಪಟ್ಟು] ಮಂಜೂರು ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಹೆಚ್. ಕೆ. ನಿಂಗಪ್ಪ,
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು-ಬಿ)

ಪಿ.ಆರ್. 753

ಕರ್ನಾಟಕ ವಿಧಾನಸಭೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕವಿಸಸ/ಆ-1/114/ಎಫ್‌ಪಿಪಿ/2005, ಬೆಂಗಳೂರು, ದಿನಾಂಕ: 03ನೇ ಜೂನ್, 2011.

ವಿಷಯ: ಕರ್ನಾಟಕ ವಿಧಾನಸಭೆ ಸಚಿವಾಲಯದ ಶಾಖಾಧಿಕಾರಿ ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ.

2003ರ ಕರ್ನಾಟಕ ವಿಧಾನಸಭೆ ಸಚಿವಾಲಯದ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಾವಳಿಗಳ ನಿಯಮ 6 (ii)ರ ಪ್ರಕಾರ ಹಾಗೂ 1977ರ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿಗಳ ನಿಯಮ 19(3)(ಎ)ನ್ನು ಓದಿಕೊಂಡಂತೆ ಈ ಸಚಿವಾಲಯದಲ್ಲಿ ಹಿರಿಯ ಸಹಾಯಕ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಕೆಳಕಂಡ ನೌಕರರಿಗೆ ತಕ್ಷಣದಿಂದ ಜಾರಿಗೆ ಬರುವಂತೆ ವೇತನ ಶ್ರೇಣಿ ₹. 11400-300-12300-350-14400-400-16800-450-19500-525-21600ರಲ್ಲಿ ಶಾಖಾಧಿಕಾರಿ ಹುದ್ದೆಗೆ ಸ್ಥಾನಪನ್ನ ಮುಂಬಡ್ತಿ ನೀಡಲಾಗಿದೆ.

1. ಶ್ರೀ ಗೋಪಾಲ್
2. ಶ್ರೀಮತಿ ಎಂ. ವಿದ್ಯಾಶ್ರೀ

ಸಭಾಧ್ಯಕ್ಷರ ಆದೇಶಾನುಸಾರ,
ಕೆ. ನೂರ್ ಮಹಮದ್,
ಉಪ ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ ಸಚಿವಾಲಯ.

ಪಿ.ಆರ್. 754

ಒಳಾಡಳಿತ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಒಇ 4 ಪೊಸಿಲಿ 2010, ಬೆಂಗಳೂರು, ದಿನಾಂಕ: 03ನೇ ಜೂನ್, 2011.

ಶ್ರೀ ಆಯ್. ಕೆ. ತಳವಾರ, ಸಹಾಯಕ ಆಡಳಿತಾಧಿಕಾರಿ, ರವರನ್ನು ಸ್ವ-ಇಚ್ಛಾ ನಿವೃತ್ತಿ ಹೊಂದಲು ಸರ್ಕಾರದ ಅಧಿಸೂಚನೆ ಸಂಖ್ಯೆ ಒಇ 4 ಪೊಸಿಲಿ 2010 ದಿನಾಂಕ 18-01-2010ರಂದು ಹೊರಡಿಸಲಾಗಿರುತ್ತದೆ. ಅಧಿಕಾರಿಯು ತಮ್ಮ ಸ್ವ-ಇಚ್ಛಾ ನಿವೃತ್ತಿಯನ್ನು ಹಿಂಪಡೆಯಲು ಮನವಿ ಸಲ್ಲಿಸಿರುವುದನ್ನು ಪರಿಗಣಿಸಿ ಅಧಿಸೂಚನೆಯನ್ನು ರದ್ದುಪಡಿಸಿ ಇವರನ್ನು ಸರ್ಕಾರಿ ಸೇವೆಯಲ್ಲಿ ಮುಂದುವರಿಯಲು ಅನುಮತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಟಿ. ಎನ್. ರವಿಪ್ರಕಾಶ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ (ಪೊಲೀಸ್ ಸೇವೆಗಳು)

ಪಿ.ಆರ್. 755

ಆರ್ಥಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಆಇ 113 ರಾಲೆಪ 2011, ಬೆಂಗಳೂರು, ದಿನಾಂಕ: 31ನೇ ಮೇ, 2011.

ಸ್ಥಳ ನಿರೀಕ್ಷೆಯಲ್ಲಿರುವ ಶ್ರೀ ಜಿ. ಪಿ. ರಘು, ಉಪ ನಿಯಂತ್ರಕರು, ರಾಜ್ಯ ಲೆಕ್ಕಪತ್ರ ಇಲಾಖೆ, ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಮುಖ್ಯ ಅಭಿಯಂತರರ ಕಚೇರಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು, ಇಲ್ಲಿ ಖಾಲಿ ಇರುವ ಮುಖ್ಯ ಲೆಕ್ಕಾಧಿಕಾರಿ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ಎಸ್. ಶಿವರಾಮ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು)

ಪಿ.ಆರ್. 756

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 72 ಆಸೇವ 2011, ಬೆಂಗಳೂರು, ದಿನಾಂಕ: 01ನೇ ಜೂನ್, 2011.

ಈ ಕೆಳಕಂಡ ಕೆ.ಎ.ಎಸ್. (ಕಿರಿಯ ಶ್ರೇಣಿ) ಅಧಿಕಾರಿಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅವರುಗಳ ಹೆಸರಿನ ಮುಂದೆ ಸೂಚಿಸಿರುವ ಹುದ್ದೆಗಳಿಗೆ ವರ್ಗಾಯಿಸಿ ನೇಮಿಸಿದೆ.

ಕ್ರಮ ಸಂಖ್ಯೆ	ಅಧಿಕಾರಿಯ ಹೆಸರು ಮತ್ತು ಪ್ರಸ್ತುತ ಹುದ್ದೆ ಶ್ರೀಯುತರು:	ವರ್ಗಾಯಿಸಿ ನೇಮಿಸಲಾದ ಹುದ್ದೆ
1	ನವೀನ್ ಕುಮಾರ್ ರಾಜು, ಎಸ್. ಉಪ ವಿಭಾಗಾಧಿಕಾರಿಗಳು, ಕುಮಟಾ ಉಪ ವಿಭಾಗ, ಕುಮಟಾ, ಉತ್ತರ ಕನ್ನಡ ಜಿಲ್ಲೆ	ಉಪ ವಿಭಾಗಾಧಿಕಾರಿ, ರಾಮನಗರ ಉಪ ವಿಭಾಗ, ರಾಮನಗರ ಜಿಲ್ಲೆ-ಶ್ರೀ ಸಿ. ವಿಜಯಕುಮಾರ್ ಇವರ ವರ್ಗಾವಣೆಯಿಂದ ತೆರವಾದ ಸ್ಥಾನದಲ್ಲಿ.
2	ವಿಜಯ ಕುಮಾರ್ ಸಿ. ಉಪ ವಿಭಾಗಾಧಿಕಾರಿ, ರಾಮನಗರ ಉಪ ವಿಭಾಗ, ರಾಮನಗರ	ಉಪ ವಿಭಾಗಾಧಿಕಾರಿ, ಕುಮಟಾ ಉಪ ವಿಭಾಗ, ಕುಮಟಾ, ಉತ್ತರ ಕನ್ನಡ ಜಿಲ್ಲೆ-ಶ್ರೀ ನವೀನ್ ಕುಮಾರ್ ರಾಜು ಇವರ ವರ್ಗಾವಣೆಯಿಂದ ತೆರವಾದ ಸ್ಥಾನದಲ್ಲಿ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವಾಸುದೇವಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-2)

ಪಿ.ಆರ್. 757

ಅಧಿಸೂಚನೆ

ಸಂಖ್ಯೆ: ಸಿಆಸುಇ 557 ಸಅಸೇ 2010, ಬೆಂಗಳೂರು, ದಿನಾಂಕ: 31ನೇ ಮೇ, 2011.

ಶ್ರೀ ಕೆ. ಬಿ. ಮೇರುನಂದನ್, ಅಬಕಾರಿ ಅಧೀಕ್ಷಕರು ಇವರನ್ನು ಮಾನ್ಯ ಮುಖ್ಯಮಂತ್ರಿಯವರ ಸಚಿವಾಲಯದಲ್ಲಿ ದಿನಾಂಕ: 30-05-2011ರ ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 557 ಸಅಸೇ 2010ರಲ್ಲಿ ಸೃಜಿಸಲಾದ ವೇತನ ಶ್ರೇಣಿ ರಹಿತ ವಿಶೇಷಾಧಿಕಾರಿ ಹುದ್ದೆಗೆ ದಿನಾಂಕ: 28-10-2010ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅಥವಾ ಮಾನ್ಯ ಮುಖ್ಯಮಂತ್ರಿಯವರ ಪದಾವಧಿಯವರೆಗೆ-ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ವಿಶೇಷಾಧಿಕಾರಿ ಹುದ್ದೆಗೆ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ. ಆರ್. ವಿಜಯಾನಂದ ಶರ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-3)

ಪಿ.ಆರ್. 758

ಅಧಿಸೂಚನೆ

ಸಂಖ್ಯೆ: ಸಿಆಸುಇ 126 ಸೇಇಮು 2011, ಬೆಂಗಳೂರು, ದಿನಾಂಕ: 30ನೇ ಮೇ, 2011.

ಶ್ರೀ ಕೆ. ಎಲ್. ಪೂಜಾರ, ಸಹನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಪ್ರಸ್ತುತ, ಸಹನಿರ್ದೇಶಕರು, ಲೋಕ ಶಿಕ್ಷಣ ನಿರ್ದೇಶನಾಲಯ, ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ವೇತನ ಶ್ರೇಣಿ ₹. 24450-600-25250-675-30300-750-31800ರ ನಿರ್ದೇಶಕರು, ವೃತ್ತಿ ಶಿಕ್ಷಣ ಇಲಾಖೆ, ಈ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ. ಆರ್. ವಿಜಯಾನಂದ ಶರ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-3)

ಪಿ.ಆರ್. 759

ಅಧಿಸೂಚನೆ

ಸಂಖ್ಯೆ: ಸಿಆಸುಇ 36 ಸೇಇಮು 2011, ಬೆಂಗಳೂರು, ದಿನಾಂಕ: 31ನೇ ಮೇ, 2011.

ಡಾ॥ ವಿ. ಡಿ. ಪಾಲೇಕರ್, ಅಪರ ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆ, ಇವರಿಗೆ ವೇತನ ಶ್ರೇಣಿ ₹. 26250-675-30300-750-34800-850-36500ರ ನಿರ್ದೇಶಕರ ಹುದ್ದೆಗೆ ದಿನಾಂಕ: 1-6-2011ರಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸ್ಥಾನಪನ್ನ ಬಡ್ತಿ ನೀಡಿ ನಿರ್ದೇಶಕರು, ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆ ಈ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಿ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ. ಆರ್. ವಿಜಯಾನಂದ ಶರ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-3)

ಪಿ.ಆರ್. 760

ಅಧಿಸೂಚನೆ

ಸಂಖ್ಯೆ: ಸಿಆಸುಇ 210 ಸಿಶಾಸೇ 2010, ಬೆಂಗಳೂರು, ದಿನಾಂಕ: 31ನೇ ಮೇ, 2011.

2011ನೇ ಸಾಲಿನಲ್ಲಿ 60 ವರ್ಷ ವಯೋಮಿತಿಯು ಪೂರ್ಣಗೊಳ್ಳಲಿರುವ ಕರ್ನಾಟಕ ಸರ್ಕಾರ ಸಚಿವಾಲಯದ ಶಾಖಾಧಿಕಾರಿಯಾದ ಶ್ರೀ ಎಸ್. ಪ್ರಕಾಶ್, ಸಿಆಸು ಇಲಾಖೆ (ಶಿಷ್ಟಾಚಾರ-ವಿದೇಶ ಕೋಶ) ಇವರ ಜನ್ಮ ದಿನಾಂಕವು 11-05-1951 ಆಗಿದ್ದು, ಇವರು 60 ವರ್ಷ ವಯೋಮಿತಿಯು ಪೂರ್ಣಗೊಂಡು ದಿನಾಂಕ: 31-05-2011ರ ಅಪರಾಹ್ನದಿಂದ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ನಿವೃತ್ತರಾಗಲಿರುವರು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್. ಎನ್. ಕೃಷ್ಣಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸಿಬ್ಬಂದಿ)

ಪಿ.ಆರ್. 761

ಅಧಿಸೂಚನೆ

ಸಂಖ್ಯೆ: ಸಿಆಸುಇ 59 ಆಸೇವ 2011, ಬೆಂಗಳೂರು, ದಿನಾಂಕ: 28ನೇ ಮೇ, 2011.

ಶ್ರೀ ಮಲ್ಲೇಶಯ್ಯ, ಕೆ.ಎ.ಎಸ್. (ಹಿರಿಯ ಶ್ರೇಣಿ) ಅಧಿಕಾರಿ, ವಿಶೇಷ ಭೂಸ್ವಾಧೀನಾಧಿಕಾರಿ, ಭಾರತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (NHAI) ಕುಣಿಗಲ್, ಇವರನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ವಿಶೇಷ ಜಿಲ್ಲಾಧಿಕಾರಿ (ಭೂಸ್ವಾಧೀನ ಮತ್ತು ಸಂಯೋಜನೆ/Liaison) ರೈಲ್ವೆ ಇಲಾಖೆ, ಭಾರತ ಸರ್ಕಾರ, ಬೆಂಗಳೂರು ಹುದ್ದೆಗೆ ನಿಯೋಜನೆ ಮೇಲೆ ನೇಮಿಸಿದೆ.

ಹಾಗೂ ಶ್ರೀ ಮಲ್ಲೇಶಯ್ಯ, ಕೆ.ಎ.ಎಸ್. ಹಿರಿಯ ಶ್ರೇಣಿ ಅಧಿಕಾರಿ, ಇವರನ್ನು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ವಿಶೇಷ ಭೂಸ್ವಾಧೀನಾಧಿಕಾರಿ, ಭಾರತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (NHAI), ಕುಣಿಗಲ್, ಹುದ್ದೆಯಲ್ಲಿ ಮುಂದಿನ ಆದೇಶದವರೆಗೆ ಹೆಚ್ಚುವರಿ ಪ್ರಭಾರದಲ್ಲಿರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವಾಸುದೇವಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-2)

ಪಿ.ಆರ್. 762

ಅಧಿಸೂಚನೆ

ಸಂಖ್ಯೆ: ಸಿಆಸುಇ 06 ಆಸೇವ 2011, ಬೆಂಗಳೂರು, ದಿನಾಂಕ: 27ನೇ ಮೇ, 2011.

ಶ್ರೀ ಎಂ. ಶ್ರೀರಾಮರೆಡ್ಡಿ, ಕೆ.ಎ.ಎಸ್. (ಕಿರಿಯ ಶ್ರೇಣಿ) ಅಧಿಕಾರಿ, ಸಹಾಯಕ ಯೋಜನಾಧಿಕಾರಿ, ಡಿ.ಆರ್.ಡಿ.ಎ., ಬೆಂಗಳೂರು ನಗರ ಜಿಲ್ಲಾ ಪಂಚಾಯತ್, ಬೆಂಗಳೂರು ಇವರನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ವಿಶೇಷ ಭೂಸ್ವಾಧೀನಾಧಿಕಾರಿ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು-ಖಾಲಿ ಹುದ್ದೆಗೆ ವರ್ಗಾಯಿಸಿ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವಾಸುದೇವಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-2)

ಪಿ.ಆರ್. 763

ಅಧಿಸೂಚನೆ

ಸಂಖ್ಯೆ: ಸಿಆಸುಇ 286 ಸಅಸೇ 2011, ಬೆಂಗಳೂರು, ದಿನಾಂಕ: 30ನೇ ಮೇ, 2011.

ನೇಮಕಾತಿ ನಿರೀಕ್ಷಣೆಯಲ್ಲಿರುವ ಕರ್ನಾಟಕ ಸರ್ಕಾರ ಸಚಿವಾಲಯದ ಸೇವೆಗೆ ಸೇರಿದ ಶ್ರೀ ವಿ. ಸೀತಾರಾಂ, ಆಪ್ತ ಕಾರ್ಯದರ್ಶಿ (ಗ್ರೇಡ್-2) ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಪ್ರಧಾನ ಕಾರ್ಯದರ್ಶಿಯವರ ಆಪ್ತ ಶಾಖೆ, ಒಳಾಡಳಿತ ಇಲಾಖೆ ಇಲ್ಲಿ ಖಾಲಿ ಇರುವ ಆಪ್ತ ಕಾರ್ಯದರ್ಶಿ (ಗ್ರೇಡ್-2) ಹುದ್ದೆಗೆ ವರ್ಗಾಯಿಸಿ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ. ಆರ್. ವಿಜಯಾನಂದ ಶರ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-3)

ಪಿ.ಆರ್. 764

ಅಧಿಸೂಚನೆ

ಸಂಖ್ಯೆ: ಸಿಆಸುಇ 286 ಆಸೇವ 2010, ಬೆಂಗಳೂರು, ದಿನಾಂಕ: 28ನೇ ಮೇ, 2011.

ಶ್ರೀ ಡಿ. ಪಿ. ವೆಂಕಟೇಶ್, ಕೆ.ಎ.ಎಸ್. (ಕಿರಿಯ ಶ್ರೇಣಿ) ಅಧಿಕಾರಿ, ವಿಶೇಷ ಭೂಸ್ವಾಧೀನಾಧಿಕಾರಿ, ರಾಮನಗರ, ಇವರನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ವಿಶೇಷ ಭೂಸ್ವಾಧೀನಾಧಿಕಾರಿ, ಹೇಮಾವತಿ ನೀರಾವರಿ ಯೋಜನೆ, ನಾಗಮಂಗಲ, ಮಂಡ್ಯ ಜಿಲ್ಲೆ-ಖಾಲಿ ಹುದ್ದೆಗೆ ವರ್ಗಾಯಿಸಿ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವಾಸುದೇವಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-2)

ಪಿ.ಆರ್. 765

ಅಧಿಸೂಚನೆ

ಸಂಖ್ಯೆ: ಸಿಆಸುಇ 458 ಸಅಸೇ 2010, ಬೆಂಗಳೂರು, ದಿನಾಂಕ: 30ನೇ ಮೇ, 2011.

ಅಧಿಸೂಚನೆ ಸಂಖ್ಯೆ ಸಿಆಸುಇ 458 ಸಅಸೇ 2010, ದಿನಾಂಕ 05-05-2011ರಲ್ಲಿ ಶ್ರೀ ಹೆಚ್. ಹನುಮಂತಯ್ಯ, ಅಧೀನ ಕಾರ್ಯದರ್ಶಿ, ವಸತಿ ಇಲಾಖೆ ಇವರಿಗೆ ವೇತನ ಶ್ರೇಣಿ ₹. 20025-525-22650-600-26250-675-28275ರ ಉಪಕಾರ್ಯದರ್ಶಿ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಉಪಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ-ಹೊಸದಾಗಿ ಸೃಜಿಸಲಾದ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಿದ ಆದೇಶವನ್ನು ಮಾರ್ಪಡಿಸಿ ಉಪಕಾರ್ಯದರ್ಶಿ, ವಸತಿ ಇಲಾಖೆ-ಶ್ರೀ ಎಸ್. ಚಂದ್ರಶೇಖರಪ್ಪ ಇವರ ದೀರ್ಘಾವಧಿ ರಜೆಯಿಂದ ತೆರವಾದ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ. ಆರ್. ವಿಜಯಾನಂದ ಶರ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-3)

ಪಿ.ಆರ್. 766

PERSONNEL AND ADMINISTRATIVE REFORMS SECRETARIAT

NOTIFICATION

No. DPAR 247 SAS 2011 (P), Bangalore, Dated 9th June, 2011.

Sri Harsh Gupta, IAS (KN 97) Deputy Commissioner, Mysore District is transferred with immediate effect and posted until further orders as ***Additional Secretary to Government & E/o State Project Director, Sarva Shiksha Abhiyan, Bangalore*** vice Smt. Sandhya Venugopal Sharma, IAS transferred.

Sri P. S. Vastrad, IAS (KN 98), Deputy Commissioner, Davanagere District is transferred with immediate effect and posted until further orders ***as Deputy Commissioner, Mysore District*** vice Sri Harsh Gupta, IAS transferred.

By Order and in the Name of the Governor of Karnataka,
N. Srinivasa Murthy,
Under Secretary to Government,
DP & AR (Services-I)

P.R. 769

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 55 ಸೇಇಮು 2010, ಬೆಂಗಳೂರು, ದಿನಾಂಕ: 14ನೇ ಜೂನ್, 2011.

ಡಾ|| ಬಿ. ಆರ್. ಜಗಶೆಟ್ಟಿ, ಔಷಧ ನಿಯಂತ್ರಕರು, ಬೆಂಗಳೂರು, ಇವರು ಔಷಧ ನಿಯಂತ್ರಕರ ಹುದ್ದೆಯಲ್ಲಿ ದಿನಾಂಕ: 18-08-2008 ರಿಂದ 17-08-2009ರ ಅವಧಿಯವರೆಗೆ ಒಂದು ವರ್ಷ ಸ್ಥಾನಪನ್ನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 19(3)(ಸಿ)ರನ್ವಯ ತೃಪ್ತಿಕರವಾಗಿ ಪೂರ್ಣಗೊಳಿಸಿರುತ್ತಾರೆಂದು ಘೋಷಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ. ಆರ್. ವಿಜಯಾನಂದ ಶರ್ಮ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-3)

ಪಿ.ಆರ್. 770

PERSONNEL AND ADMINISTRATIVE REFORMS SECRETARIAT

NOTIFICATION

No. DPAR 89 SFP 2010, Bangalore, Dated 14th June, 2011.

The Notification No. 17016/8/2010-IFS-I, dated: 06th May, 2011 of Government of India, Ministry of Environment & Forests, New Delhi is hereby republished:

No. 17016/8/2010-IFS-I
Government of India/Bharat Sarkar
Ministry of Environment & Forests

Paryavam Bhavan, CGO Complex,
Lodhi Road, New Delhi,
Dated the 06th May, 2011

NOTIFICATION

In exercise of the powers conferred under sub-rule (1) of rule 5 of the Indian Forest Service (Cadre) Rules, 1966, the Central Government with concurrence of the State Governments of Gujarat and Karnataka hereby transfer Dr. Malathi Priya. M., IFS (GJ-2008) from Gujarat Cadre to Karnataka Cadre of the Indian Forest Service with immediate effect.

Sd/-
(S.S. Badhwan)
Director (IFS)
Tele Fax : 24367077

No. 17016/8/2010-IFS-I New Delhi Dated 06-05-2011

By Order and in the Name of the Governor of Karnataka,
A.P. ATRE,
Deputy Secretary to Government,
DP & AR (Services-4)

P.R. 771

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 14 ಎಸ್‌ಎಫ್‌ಎಸ್ 2011, ಬೆಂಗಳೂರು, ದಿನಾಂಕ: 14ನೇ ಜೂನ್, 2011.

ಶ್ರೀ ಆರ್. ಕೆ. ಸಿಂಗ್, ಐ.ಎಫ್.ಎಸ್. ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಕಾರ್ಯಕಾರಿ ನಿರ್ದೇಶಕರು (ಯೋಜನೆ ಮತ್ತು ಮಾರಾಟ ಅಭಿವೃದ್ಧಿ), ಜಂಗಲ್ ಲಾಡ್ಜಸ್ ಮತ್ತು ರಿಸಾರ್ಟ್ಸ್, ಬೆಂಗಳೂರು ಇವರಿಗೆ ದಿನಾಂಕ : 22-12-2010 ರಿಂದ 25-12-2010ರವರೆಗಿನ ರಜಾ ಅವಧಿಯಲ್ಲಿ ತಮ್ಮ ಪತ್ನಿ ಮತ್ತು ಪುತ್ರನೊಂದಿಗೆ ತಮ್ಮ ಸ್ವಂತ ಊರಾದ ಗೋರಖ್‌ಪುರ್ (ಉತ್ತರ ಪ್ರದೇಶ)ಗೆ ಹೋಗಿ ಬಂದಿರುವುದಕ್ಕೆ 2010-2011ರ ಬ್ಲಾಕ್ ಅವಧಿಯಲ್ಲಿ ಸ್ವಗ್ರಾಮ ಪ್ರಯಾಣ ರಿಯಾಯಿತಿಯನ್ನು (ಹೆಚ್‌ಟಿಸಿ) ಉಪಯೋಗಿಸಿಕೊಳ್ಳಲು ಸರ್ಕಾರವು ಘಟನೋತ್ತರ ಮಂಜೂರಾತಿಯನ್ನು ನೀಡಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ. ಪಿ. ಅತ್ರೆ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು-4)

ಪಿ.ಆರ್. 772

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಲಾ 60 ಎಲ್‌ಎಜಿ 2010, ಬೆಂಗಳೂರು, ದಿನಾಂಕ: 28ನೇ ಮೇ, 2011.

ಶ್ರೀ ಭವಾನಿ ಸಿಂಗ್. ಜಿ, ವಕೀಲರು, ಇವರನ್ನು ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು) ನಿಯಮಗಳ 1977 ನಿಯಮ 23ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ದಿನಾಂಕ: 23-05-2011ರಿಂದ ಜಾರಿಗೆ ಬರುವಂತೆ ಮೂರು ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಕರ್ನಾಟಕ ಉಚ್ಚ ನ್ಯಾಯಾಲಯದ ರಾಜ್ಯ ಸರ್ಕಾರಿ ಅಭಿಯೋಜಕರು-2 ಹುದ್ದೆಯಲ್ಲಿ ಮುಂದುವರೆಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಸಯ್ಯದ್ ಅಬ್ದುಲ್ ನಜೀರ್,
ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ-1)
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ.

ಪಿ.ಆರ್. 773

ಕಾರ್ಮಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಾಇ 223 ಐಡಿಎಂ 2010, ಬೆಂಗಳೂರು, ದಿನಾಂಕ: 08ನೇ ಜೂನ್, 2011.

ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಜಿಓಬಿ (I)4(1)/2011 ದಿನಾಂಕ: 26-05-2011ರಲ್ಲಿ ಶ್ರೀ ಆರ್. ಬಿ. ಧರ್ಮಗೌಡರ್, ಅಧ್ಯಕ್ಷಾಧಿಕಾರಿಗಳು, ಕಾರ್ಮಿಕ ನ್ಯಾಯಾಲಯ, ಬಿಜಾಪುರ ಇವರ ವರ್ಗಾವಣೆಯಿಂದ ತೆರವಾದ ಹುದ್ದೆಗೆ ಅಧ್ಯಕ್ಷಾಧಿಕಾರಿಗಳು ಪ್ರಿನ್ಸಿಪಾಲ್ ಜಡ್ಜ್, ಕೌಟುಂಬಿಕ ನ್ಯಾಯಾಲಯ, ಬಿಜಾಪುರ ಇವರನ್ನು ಕೂಡಲೇ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಸಮವರ್ತಿ ಪ್ರಭಾರದಲ್ಲಿಡುವಂತೆ ಕೋರಿರುತ್ತಾರೆ.

ಅದರಂತೆ ಅಧ್ಯಕ್ಷಾಧಿಕಾರಿ, ಪ್ರಿನ್ಸಿಪಾಲ್ ಜಡ್ಜ್, ಕೌಟುಂಬಿಕ ನ್ಯಾಯಾಲಯ, ಬಿಜಾಪುರ ಇವರನ್ನು ಈ ಕೂಡಲೇ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಅಧ್ಯಕ್ಷಾಧಿಕಾರಿ, ಕಾರ್ಮಿಕ ನ್ಯಾಯಾಲಯ, ಬಿಜಾಪುರ ಈ ಹುದ್ದೆಯಲ್ಲಿ ಸಮವರ್ತಿ ಪ್ರಭಾರದಲ್ಲಿಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಗೋವಿಂದಸ್ವಾಮಿ,
ಪೀಠಾಧಿಕಾರಿ-5,
ಕಾರ್ಮಿಕ ಇಲಾಖೆ, (ಕಾರಾವಿಯೋ (ವೈ) ಸೇವೆಗಳು)

ಪಿ.ಆರ್. 774

ಅಧಿಸೂಚನೆ

ಸಂಖ್ಯೆ: ಕಾಇ 223 ಐಡಿಎಂ 2010, ಬೆಂಗಳೂರು, ದಿನಾಂಕ: 06ನೇ ಜೂನ್, 2011.

ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಜಿಓಬಿ (I)4(1)/2011 ದಿನಾಂಕ: 30-05-2011ರಲ್ಲಿ ಶ್ರೀ ಪಿ. ಎಸ್. ದೇಸಾಯಿ, ಅಧ್ಯಕ್ಷಾಧಿಕಾರಿ ಅಪರ ಔದ್ಯೋಗಿಕ ನ್ಯಾಯಾಧಿಕರಣ, ಬೆಂಗಳೂರು ಇವರ ವರ್ಗಾವಣೆಯಿಂದ ತೆರವಾದ ಹುದ್ದೆಗೆ ಅಧ್ಯಕ್ಷಾಧಿಕಾರಿ, ಔದ್ಯೋಗಿಕ ನ್ಯಾಯಾಧಿಕರಣ, ಬೆಂಗಳೂರು ಇವರನ್ನು ಕೂಡಲೇ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಸಮವರ್ತಿ ಪ್ರಭಾರದಲ್ಲಿಡುವಂತೆ ಕೋರಿರುತ್ತಾರೆ.

ಅದರಂತೆ ಅಧ್ಯಕ್ಷಾಧಿಕಾರಿ, ಔದ್ಯೋಗಿಕ ನ್ಯಾಯಾಧಿಕರಣ, ಬೆಂಗಳೂರು ಇವರನ್ನು ಈ ಕೂಡಲೇ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಅಧ್ಯಕ್ಷಾಧಿಕಾರಿ, ಅಪರ ಔದ್ಯೋಗಿಕ ನ್ಯಾಯಾಧಿಕರಣ, ಬೆಂಗಳೂರು ಈ ಹುದ್ದೆಯಲ್ಲಿ ಸಮವರ್ತಿ ಪ್ರಭಾರದಲ್ಲಿಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಗೋವಿಂದಸ್ವಾಮಿ,
ಪೀಠಾಧಿಕಾರಿ-5,
ಕಾರ್ಮಿಕ ಇಲಾಖೆ, (ಕಾರಾವಿಯೋ (ವೈ) ಸೇವೆಗಳು)

ಪಿ.ಆರ್. 775

ನಗರಾಭಿವೃದ್ಧಿ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ನಅಇ 345 ಬೆಮಪ್ರಾ 2010, ಬೆಂಗಳೂರು, ದಿನಾಂಕ: 9ನೇ ಜೂನ್, 2011.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 4(ಸಿ)ರಲ್ಲಿನ (3)(1)(i) ಮತ್ತು (iv)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಈ ಕೆಳಕಂಡವರನ್ನು ರಾಣೆಬೆನ್ನೂರು ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷರು ಮತ್ತು ಸದಸ್ಯರನ್ನಾಗಿ ಸರ್ಕಾರದ ಇಚ್ಛಾನುಸಾರ ಅಥವಾ 3 ವರ್ಷದ ಅವಧಿಯವರೆಗೆ ಇವುಗಳಲ್ಲಿ ಯಾವುದು ಮೊದಲು ಅಲ್ಲಿಯವರೆಗೆ ನಾಮ ನಿರ್ದೇಶನ ಮಾಡಿ ಆದೇಶಿಸಲಾಗಿದೆ.

ಕ್ರಮ ಸಂಖ್ಯೆ	ಹೆಸರು ಮತ್ತು ವಿಳಾಸ	ಪದನಾಮ
1	ಶ್ರೀ ವಿಶ್ವನಾಥ ಶಂಕ್ರಗೌಡ ಪಾಟೀಲ, ರಾಣೇಬೆನ್ನೂರು	ಅಧ್ಯಕ್ಷರು
2	ಶ್ರೀ ಹರೀಶ ಬಸವನಗೌಡ, ರಾಮಲಿಂಗಣ್ಣನವರ, ಮೃತ್ಯುಂಜಯನಗರ, ರಾಣೇಬೆನ್ನೂರು	ಸದಸ್ಯರು
3	ಶ್ರೀ ಗಣೇಶ ಮಹದೇವಪ್ಪ ಕೊಪ್ಪದ, ಕುರುಬಗೇರಿ, ರಾಣೇಬೆನ್ನೂರು	ಸದಸ್ಯರು
4	ಶ್ರೀ ಮಲ್ಲಿಕಾರ್ಜುನ ಮಲ್ಲೇಶಪ್ಪ, ಪೂಜಾರ, ದೊಡ್ಡಪೇಟೆ, ರಾಣೇಬೆನ್ನೂರು	ಸದಸ್ಯರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ಎಂ. ಹಿರೇಮಠ,
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಪಿ.ಆರ್. 776

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಆಕುಕ 47 ಎಂಎಸ್ಎನ್ 2010, ಬೆಂಗಳೂರು, ದಿನಾಂಕ: 9ನೇ ಜೂನ್, 2011.

ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 47 ಎಂಎಸ್ಎನ್ 2010, ದಿನಾಂಕ: 21-2-2011ರ ಆದೇಶದಲ್ಲಿ ಶ್ರೀ ಹೆಚ್. ಹೆಚ್. ದಾಸೇಗೌಡ, ಉಪನ್ಯಾಸಕರು, ಸರ್ಕಾರಿ ಶುಶ್ರೂಷ ಮಹಾ ವಿದ್ಯಾಲಯ, ಕೋಟೆ, ಬೆಂಗಳೂರು ಇವರಿಗೆ ಪದೋನ್ನತಿ ನೀಡಿ ಮೆಡಿಕಲ್ ಕಾಲೇಜ್, ಹಾಸನ ಇಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಸ್ಥಳನಿಯುಕ್ತಿಗೊಳಿಸಲಾಗಿತ್ತು. ಅಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆ ಮಂಜೂರಾಗದ ಕಾರಣ, ಅದನ್ನು ಮಾರ್ಪಡಿಸಿ ಸದರಿಯವರನ್ನು ಶುಶ್ರೂಷ ಮಹಾ ವಿದ್ಯಾಲಯ, ಬೆಂಗಳೂರು ಇಲ್ಲಿ ಖಾಲಿ ಇರುವ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸ್ಥಳನಿಯುಕ್ತಿಗೊಳಿಸಿ ನೇಮಕ ಮಾಡಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಐ. ಹೇಮನಾಥ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೃಂದ ಮತ್ತು ನೇಮಕಾತಿ)

ಪಿ.ಆರ್. 777

ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಪಸಂಮೀ 192 ಮೀಇಸೇ 2010, ಬೆಂಗಳೂರು, ದಿನಾಂಕ: 8ನೇ ಜೂನ್, 2011.

ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ: 19-04-2011ರ ಅಧಿಸೂಚನೆಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಯಡಿ ಮೀನು/ಸೀಗಡಿ ಕೃಷಿಕರ ಅಭಿವೃದ್ಧಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅಧಿಕಾರಿ/ನೌಕರರುಗಳನ್ನು ಮೀನುಗಾರಿಕೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ವರ್ಗಾವಣೆ ಮಾಡಿ ನೇಮಿಸಿದ್ದ ಈ ಕೆಳಕಂಡ ಅಧಿಕಾರಿ/ನೌಕರರ ವರ್ಗಾವಣೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿ ಸದರಿಯವರನ್ನು ಮುಂದಿನ ಆದೇಶದವರೆಗೆ ಸಾರ್ವಜನಿಕ ಹಿತದೃಷ್ಟಿಯಿಂದ ಪ್ರಸ್ತುತ ಅವರ ಹೆಸರಿನ ಮುಂದೆ ಸೂಚಿಸಿರುವ ಸ್ಥಳಗಳಿಗೆ ವರ್ಗಾಯಿಸಿ ನೇಮಿಸಲಾಗಿದೆ.

ಕ್ರಮ ಸಂಖ್ಯೆ	ವರ್ಗಾಯಿಸಿ ನೇಮಿಸಲಾಗಿದ್ದ ಹುದ್ದೆ ಮತ್ತು ಸ್ಥಳ	ಮಾರ್ಪಡಿಸಿ ನೇಮಿಸಲಾಗಿರುವ ಹುದ್ದೆ ಮತ್ತು ಸ್ಥಳ
1.	ಶ್ರೀ ಕೆ. ಕೃಷ್ಣರಾಜ ಪುರಾಣಿಕ್, ಆಡಳಿತ ನಿರ್ದೇಶಕರು, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಸಹಕಾರಿ ಮೀನು ಮಾರಾಟ ಫೆಡರೇಷನ್ (ನಿ), ಮಂಗಳೂರು-ನಿಯೋಜನೆ ಮೇಲೆ.	ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ (ನಿ), ಮಂಗಳೂರು-ನಿಯೋಜನೆ ಮೇಲೆ
2.	ಶ್ರೀಮತಿ ಕೆ. ಎಸ್. ಪದ್ಮಾವತಮ್ಮ, ಬೆರಳಚ್ಚುಗಾರರು, ಮೀನುಗಾರಿಕೆ ಸಹಾಯಕ ನಿರ್ದೇಶಕರು (ಶ್ರೇಣಿ-1) ಕಛೇರಿ, ರಾಷ್ಟ್ರೀಯ ಮೀನುಮರಿ ಉತ್ಪಾದನಾ ಕೇಂದ್ರ, ಬಿ. ಆರ್. ಪ್ರಾಜೆಕ್ಟ್.	ಮೀನುಗಾರಿಕೆ ಸಹಾಯಕ ನಿರ್ದೇಶಕರು (ಶ್ರೇಣಿ-1) ಕಛೇರಿ, ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು.
3.	ಶ್ರೀ ಸಿದ್ದರಾಮಯ್ಯ, ಬೆರಳಚ್ಚುಗಾರರು ಮೀನುಗಾರಿಕೆ ಸಹಾಯಕ ನಿರ್ದೇಶಕರು (ಶ್ರೇಣಿ-1) ಕಛೇರಿ, ಮಡಿಕೇರಿ.	ಮೀನುಗಾರಿಕೆ ಹಿರಿಯ ಸಹಾಯಕ ನಿರ್ದೇಶಕರ ಕಛೇರಿ, ಚಿಕ್ಕಬಳ್ಳಾಪುರ.

<u>ಭಾಗ-2</u>

ಶ್ರೀ ದೊಡ್ಡಮನಿ, ಮೀನುಗಾರಿಕೆ ಹಿರಿಯ ಸಹಾಯಕ ನಿರ್ದೇಶಕರು, ಬಿಜಾಪುರ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಆಡಳಿತ ನಿರ್ದೇಶಕರು, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಸಹಕಾರಿ ಮೀನು ಮಾರಾಟ ಫೆಡರೇಷನ್ (ನಿ), ಮಂಗಳೂರು ಇಲ್ಲಿಗೆ ನಿಯೋಜನೆ ಮೇಲೆ ವರ್ಗಾಯಿಸಿ ನೇಮಿಸಿದೆ.

ಮೇಲ್ಕಂಡ ಅಧಿಕಾರಿ/ನೌಕರರುಗಳು ವರ್ಗಾಯಿಸಿದ ಸ್ಥಳಗಳಲ್ಲಿ ಕೂಡಲೇ ಹಾಜರಾಗತಕ್ಕದ್ದು. ಅಧಿಕಾರಿಗಳು ವರ್ಗಾಯಿಸಿದ ಸ್ಥಳಕ್ಕೆ ಕಾರ್ಯ ವರದಿ ಮಾಡಿಕೊಂಡ ಬಗ್ಗೆ ಸಂಬಂಧಿಸಿದವರಿಗೆ ಸಿ.ಟಿ.ಸಿ.ಯನ್ನು ಕಳುಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಡಿ. ಎಂ. ರಾಜಣ್ಣ,
ಸರ್ಕಾರದ ಅಧೀನ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ (ಮೀ)

ಪಿ.ಆರ್. 778

ಸಾರಿಗೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಾರಿಇ 191 ಸಾಇಸೇ 2010, ಬೆಂಗಳೂರು, ದಿನಾಂಕ: 10ನೇ ಜೂನ್, 2011

ಸಾರಿಗೆ ಇಲಾಖೆಯ ಈ ಕೆಳಕಂಡ ಜಂಟಿ ಸಾರಿಗೆ ಆಯುಕ್ತರುಗಳನ್ನು ಆಡಳಿತಾತ್ಮಕ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅವರುಗಳ ಹೆಸರುಗಳ ಮುಂದೆ ಸೂಚಿಸಿದ ಸ್ಥಳಗಳಿಗೆ ವರ್ಗಾಯಿಸಿ ನೇಮಿಸಿದೆ.

ಕ್ರಮ ಸಂಖ್ಯೆ	ಹೆಸರು ಮತ್ತು ಪದನಾಮ	ವರ್ಗಾವಣೆ ಮಾಡಿ ನೇಮಿಸಿರುವ ಸ್ಥಳ
1.	ಶ್ರೀ ಆರ್. ಮುನಿವೀರೇಗೌಡ, ಜಂಟಿ ಸಾರಿಗೆ ಆಯುಕ್ತರು (ಆಡಳಿತ), ಸಾರಿಗೆ ಆಯುಕ್ತರ ಕಛೇರಿ, ಬೆಂಗಳೂರು	ಜಂಟಿ ಸಾರಿಗೆ ಆಯುಕ್ತರು ಹಾಗೂ ಕಾರ್ಯದರ್ಶಿ, ರಾಜ್ಯ ಸಾರಿಗೆ ಪ್ರಾಧಿಕಾರ, ಸಾರಿಗೆ ಆಯುಕ್ತರ ಕಛೇರಿ, ಶ್ರೀ ಹೆಚ್. ಜಿ. ಕುಮಾರ್ ಇವರ ವರ್ಗಾವಣೆಯಿಂದ ತೆರವಾದ ಸ್ಥಾನಕ್ಕೆ
2.	ಶ್ರೀ ಹೆಚ್. ಜಿ. ಕುಮಾರ್, ಜಂಟಿ ಸಾರಿಗೆ ಆಯುಕ್ತರು ಹಾಗೂ ಕಾರ್ಯದರ್ಶಿ, ರಾಜ್ಯ ಸಾರಿಗೆ ಪ್ರಾಧಿಕಾರ, ಸಾರಿಗೆ ಆಯುಕ್ತರ ಕಛೇರಿ, ಬೆಂಗಳೂರು	ಜಂಟಿ ಸಾರಿಗೆ ಆಯುಕ್ತರು, (ನಗರ ಹಾಗೂ ಗ್ರಾಮಾಂತರ) ಬೆಂಗಳೂರು ಶ್ರೀ ರಿಚರ್ಡ್ ವಿನ್ಸೆಂಟ್ ಡಿಸೋಜಾ ಇವರ ವರ್ಗಾವಣೆಯಿಂದ ತೆರವಾದ ಸ್ಥಾನಕ್ಕೆ.
3.	ಶ್ರೀ ರಿಚರ್ಡ್ ವಿನ್ಸೆಂಟ್ ಡಿಸೋಜಾ, ಜಂಟಿ ಸಾರಿಗೆ ಆಯುಕ್ತರು, (ನಗರ ಹಾಗೂ ಗ್ರಾಮಾಂತರ) ಬೆಂಗಳೂರು.	ಜಂಟಿ ಸಾರಿಗೆ ಆಯುಕ್ತರು (ಆಡಳಿತ), ಸಾರಿಗೆ ಆಯುಕ್ತರ ಕಛೇರಿ, ಬೆಂಗಳೂರು, ಶ್ರೀ ಆರ್. ಮುನಿವೀರೇಗೌಡ ಇವರ ವರ್ಗಾವಣೆಯಿಂದ ತೆರವಾದ ಸ್ಥಾನಕ್ಕೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ರಾಮಚಂದ್ರ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರಿಗೆ ಇಲಾಖೆ.

ಪಿ.ಆರ್. 779

ಶಿಕ್ಷಣ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಇಡಿ 31 ಡಿಎಆರ್ 2011, ಬೆಂಗಳೂರು, ದಿನಾಂಕ: 14ನೇ ಜೂನ್, 2011

ಲೋಕೋಪಯೋಗಿ ಇಲಾಖೆಯ, ಅಧಿಸೂಚನೆ ಸಂಖ್ಯೆ: ಲೋಇ 769 ಸೇಸಎ 2010, ದಿನಾಂಕ 15.02.2011ರಲ್ಲಿ ಶ್ರೀ ಲಾಯಕ್ ಅಲಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಇವರ ಸೇವೆಯನ್ನು ನಿಯೋಜನೆ ಮೇಲೆ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗೆ ನೇಮಿಸುವ ಸಲುವಾಗಿ ಶಿಕ್ಷಣ ಇಲಾಖೆಯ ವಶಕ್ಕೆ ನೀಡಲಾಗಿದೆ.

ಅದರಂತೆ, ಶ್ರೀ ಲಾಯಕ್ ಅಲಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಇವರನ್ನು ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಅಡಿಯಲ್ಲಿ ಮೈಸೂರು ವಿಭಾಗದಲ್ಲಿ ಹೊಸದಾಗಿ ಸೃಜಿಸಿರುವ ಸಹಾಯಕ ಕಾರ್ಯಪಾಲಕ ಅಭಿಯಂತರರ ಹುದ್ದೆಗೆ ಮರು ಸ್ಥಳ ನಿಯುಕ್ತಿಗೊಳಿಸಿದೆ. ಸದರಿಯವರ ನಿಯೋಜನಾ ಷರತ್ತು ಮತ್ತು ನಿಬಂಧನೆಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್.ಬಿ. ಸಸಾಲಟ್ಟಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಆಡಳಿತ).

ಪಿ.ಆರ್. 780

ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಕಸಂವಾಪ್ರ 42 ಪ್ರವಾನಿ 2011, ಬೆಂಗಳೂರು, ದಿನಾಂಕ: 2ನೇ ಜೂನ್, 2011

ಶ್ರೀ ಎಂ.ಎಸ್. ಮಹಂತೇಶಯ್ಯ, ಸರ್ಕಾರದ ಉಪ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ ಇವರನ್ನು ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತದ ನಿರ್ದೇಶಕರ ಮಂಡಳಿಗೆ ನಿರ್ದೇಶಕರನ್ನಾಗಿ ಶ್ರೀ ಎಸ್.ಕೆ. ತೆಗ್ಗಿನಮನಿ, ಸರ್ಕಾರದ ಉಪ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ ಇವರ ವಯೋನಿವೃತ್ತಿಯಿಂದ ತೆರವಾದ ಸ್ಥಾನದಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನಾಮನಿರ್ದೇಶನ ಮಾಡಿ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್. ನಾರಾಯಣಪ್ಪ,
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ.

ಪಿ.ಆರ್. 781

ಅಧಿಸೂಚನೆ

ಸಂಖ್ಯೆ: ಕಸಂವಾಪ್ರ 41 ಪ್ರವಾನಿ 2011, ಬೆಂಗಳೂರು, ದಿನಾಂಕ: 2ನೇ ಜೂನ್, 2011

ಶ್ರೀ ಎಂ.ಎಸ್. ಮಹಂತೇಶಯ್ಯ, ಸರ್ಕಾರದ ಉಪ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ ಇವರನ್ನು ತಾಜ್ ಕರ್ನಾಟಕ ಹೋಟೆಲ್ ಅಂಡ್ ರೆಸಾರ್ಟ್ಸ್ ಲಿಮಿಟೆಡ್‌ನ ನಿರ್ದೇಶಕರ ಮಂಡಳಿಗೆ ನಿರ್ದೇಶಕರನ್ನಾಗಿ ಶ್ರೀ ಎಸ್.ಕೆ. ತೆಗ್ಗಿನಮನಿ, ಸರ್ಕಾರದ ಉಪ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ ಇವರ ವಯೋನಿವೃತ್ತಿಯಿಂದ ತೆರವಾದ ಸ್ಥಾನದಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನಾಮನಿರ್ದೇಶನ ಮಾಡಿ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್. ನಾರಾಯಣಪ್ಪ,
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ.

ಪಿ.ಆರ್. 782

ಆರ್ಥಿಕ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಆಇ 112 ರಾಲೆಪ 2011, ಬೆಂಗಳೂರು, ದಿನಾಂಕ: 1ನೇ ಜೂನ್, 2011

ಸರ್ಕಾರಿ ಅಧಿಸೂಚನೆ ಸಂಖ್ಯೆ: ಆಇ 296 ರಾಲೆಪ 2010, ದಿನಾಂಕ: 05.03.2011ರಲ್ಲಿ ಶ್ರೀ ರಾಥೋಡ್ ಕನ್ನಿರಾಂ ಟಿಕಾರಾಂ, ಲೆಕ್ಕಪರಿಶೋಧನಾಧಿಕಾರಿ, ಇವರಿಗೆ ಸಹಾಯಕ ನಿಯಂತ್ರಕರಾಗಿ ಮುಂಬಡ್ತಿ ನೀಡಿ ಇವರನ್ನು ಪ್ರಾದೇಶಿಕ ಆಯುಕ್ತರ ಕಚೇರಿ, ಗುಲ್ಬರ್ಗಾ, ಇಲ್ಲಿಗೆ ನಿಯೋಜಿಸಿರುವುದನ್ನು ಮಾರ್ಪಡಿಸಿ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಜಿಲ್ಲಾ ಪಂಚಾಯತ್, ಗುಲ್ಬರ್ಗಾ, ಇಲ್ಲಿನ ಡಿ.ಆರ್.ಡಿ.ಎ. ಕೋಶದ ಲೆಕ್ಕಾಧಿಕಾರಿ ಹುದ್ದೆಗೆ ಸ್ಥಳ ನಿಯುಕ್ತಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ.ಎಸ್. ಶಿವರಾಮ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆಡಳಿತ ಮತ್ತು ಮುಂಗಡಗಳು)

ಪಿ.ಆರ್. 783

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಿಆಸುಇ 39 ಎಸ್‌ಎಫ್‌ಎಸ್ 2011, ಬೆಂಗಳೂರು, ದಿನಾಂಕ: 8ನೇ ಜೂನ್, 2011.

ಶ್ರೀ ಎಂ.ಎಸ್. ಗೌಡರ್, ಐ.ಎಫ್.ಎಸ್. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು ಇವರಿಗೆ ದಿನಾಂಕ: 23-05-2011 ರಿಂದ 28-05-2011ರವರೆಗಿನ ಸಾಂದರ್ಭಿಕ ರಜಾ ಅವಧಿಯಲ್ಲಿ ತಮ್ಮ ಪತ್ನಿ ಮತ್ತು ಪುತ್ರಿಯೊಂದಿಗೆ ಸಿಕ್ಕಿಂ (ಗ್ಯಾಂಗ್‌ಟಕ್)ಗೆ ಹೋಗಿ ಬಂದಿರುವುದಕ್ಕೆ 2010-2011ರ ಬ್ಲಾಕ್ ಅವಧಿಯಲ್ಲಿ ಸ್ವಗ್ರಾಮ ಪ್ರಯಾಣ ರಿಯಾಯಿತಿಯನ್ನು (ಹೆಚ್‌ಟಿಸಿ) ರಜಾ ಪ್ರಯಾಣ ರಿಯಾಯಿತಿಯನ್ನಾಗಿ (ಎಲ್‌ಟಿಸಿ) ಪರಿವರ್ತಿಸಿ ಉಪಯೋಗಿಸಿಕೊಳ್ಳಲು, ಸರ್ಕಾರವು ಘಟನೋತ್ತರ ಮಂಜೂರಾತಿ ನೀಡಿದೆ. ಸದರಿ ಮಂಜೂರಾತಿಯನ್ನು ಭಾರತ ಸರ್ಕಾರದ O.M.No.31011/4/2007-Estt (A), dated: 02-05-2008ರ ಮೇರೆಗೆ ನೀಡಿದೆ.

ಸದರಿ ಸಂದರ್ಭದಲ್ಲಿ, ಅಧಿಕಾರಿಯವರಿಗೆ 10 ದಿನಗಳ ಗಳಿಕೆ ರಜೆಯನ್ನು ನಗಧೀಕರಣಗೊಳಿಸಲು ಸಹ ಮಂಜೂರಾತಿ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎ.ಪಿ. ಅತ್ರೆ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿ.ಆ.ಸು.ಇ. (ಸೇವೆಗಳು-4).

ಪಿ.ಆರ್. 784

ಅಧಿಸೂಚನೆ

ಸಂಖ್ಯೆ: ಸಿಆಸುಇ 457 ಆಸೇಇ 2010, ಬೆಂಗಳೂರು, ದಿನಾಂಕ: 8ನೇ ಜೂನ್, 2011.

ಶ್ರೀ ಬಿ. ನಂಜುಂಡೇಶ್ವರ್, ಕೆ.ಎ.ಎಸ್. ಹಿರಿಯ ಶ್ರೇಣಿ ಅಧಿಕಾರಿ, ಪ್ರಸ್ತುತ ನೇಮಕಾತಿ ನಿರೀಕ್ಷಣೆಯಲ್ಲಿರುವ ಇವರಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳು, ನಿಯಮ 285(1)(ಎ)ರಡಿ ಸ್ವಇಚ್ಛಾ ನಿವೃತ್ತಿ ಹೊಂದಲು ಅನುಮತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವಾಸುದೇವಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿ.ಆ.ಸು.ಇ. (ಸೇವೆಗಳು-2).

ಪಿ.ಆರ್. 785

ಅಧಿಸೂಚನೆ

ಸಂಖ್ಯೆ: ಸಿಆಸುಇ 90 ಆಸೇವ 2011, ಬೆಂಗಳೂರು, ದಿನಾಂಕ: 6ನೇ ಜೂನ್, 2011.

ಸರ್ಕಾರದ ಅಧಿಸೂಚನೆ ಸಂಖ್ಯೆ : ಸಿಆಸುಇ 90 ಆಸೇವ 2011 ದಿನಾಂಕ: 27-05-2011ರಲ್ಲಿ ಶ್ರೀ ಬಿ. ಹೆಚ್. ಸಿದ್ದಪ್ಪ, ಕೆ.ಎ.ಎಸ್. (ಕಿರಿಯ ಶ್ರೇಣಿ) ಅಧಿಕಾರಿ, ಉಪವಿಭಾಗಾಧಿಕಾರಿ, ಬೆಂಗಳೂರು ದಕ್ಷಿಣ ಉಪವಿಭಾಗ, ಬೆಂಗಳೂರು ಜಿಲ್ಲೆ, ಬೆಂಗಳೂರು ಇವರನ್ನು ಸದರಿ ಹುದ್ದೆಯಿಂದ ವರ್ಗಾಯಿಸುವುದನ್ನು ರದ್ದುಪಡಿಸಿ ಉಪವಿಭಾಗಾಧಿಕಾರಿ, ಬೆಂಗಳೂರು ದಕ್ಷಿಣ ಉಪವಿಭಾಗ, ಬೆಂಗಳೂರು ಜಿಲ್ಲೆ, ಬೆಂಗಳೂರು ಹುದ್ದೆಯಲ್ಲಿಯೇ ಮುಂದಿನ ಆದೇಶದವರೆಗೆ ಮುಂದುವರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವಾಸುದೇವಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿ.ಆ.ಸು.ಇ. (ಸೇವೆಗಳು-2)

ಪಿ.ಆರ್. 786

ಅಧಿಸೂಚನೆ

ಸಂಖ್ಯೆ: ಸಿಆಸುಇ 89 ಆಸೇವ 2011, ಬೆಂಗಳೂರು, ದಿನಾಂಕ: 1ನೇ ಜೂನ್, 2011.

ಡಾ॥ ವಿಜಯಕುಮಾರ್ ಎನ್. ತೋರಗಲ್, ಕೆ.ಎ.ಎಸ್. (ಹಿರಿಯಶ್ರೇಣಿ) ಅಧಿಕಾರಿ, ಪ್ರಸ್ತುತ ಅಪರ ಆಯುಕ್ತರು (ಭೂ ನಿರ್ವಹಣೆ ಯೋಜನೆ ಮತ್ತು ಇತರೆ), ಪ್ರಾದೇಶಿಕ ಆಯುಕ್ತರ ಕಛೇರಿ, ಬೆಳಗಾಂ ಇವರನ್ನು ಸಾರ್ವಜನಿಕ ಹಿತದೃಷ್ಟಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಮಾನ್ಯ ಕಂದಾಯ ಸಚಿವರ ಆಪ್ತಕಾರ್ಯದರ್ಶಿಯಾಗಿ ಮುಂದಿನ ಆದೇಶದವರೆಗೆ ಅಥವಾ ಮಾನ್ಯ ಸಚಿವರ ಪದಾವಧಿಯವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ. ವಾಸುದೇವಮೂರ್ತಿ,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿ.ಆ.ಸು.ಇ. (ಸೇವೆಗಳು-2)

ಪಿ.ಆರ್. 787

PERSONNEL AND ADMINISTRATIVE REFORMS SECRETARIAT

NOTIFICATION

No. DPAR 290 SAS 2011, Bangalore, Dated 10th June, 2011.

Smt. Sandhya Venugopal Sharma, IAS (1995 batch-borne on Tamil Nadu Cadre), working on inter-cadre deputation to Karnataka State is relieved from the State Government w.e.f. 10-06-2011 (afternoon) to take up the new assignment as Director in the Department of Space at Bangalore.

This is issued in pursuance of the Communication No. 22/2/2011-EO(MM.I), dated 19-05-2011 of Department of Personnel & Training, Government of India New Delhi and Order No. G.O. Rt. No. 1968, dated 07-06-2011 of the Government of Tamil Nadu.

By Order and in the Name of the Governor of Karnataka,
N. Srinivasa Murthy,
Under Secretary to Government,
DP & AR (Services-I)

P.R. 788

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಅಪಜೀ 125 ಅಪಸೇ 2010, ಬೆಂಗಳೂರು, ದಿನಾಂಕ: 02ನೇ ಜೂನ್, 2011.

ಕರ್ನಾಟಕ ಅರಣ್ಯ ಇಲಾಖೆಯ ಈ ಕೆಳಕಂಡ ವಲಯ ಅರಣ್ಯಾಧಿಕಾರಿಗಳನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 32ರನ್ವಯ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹುದ್ದೆಯ ಸ್ವತಂತ್ರ ಪ್ರಭಾರದಲ್ಲಿರಿಸಿ, ಅವರುಗಳನ್ನು ಈ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅವರ ಹೆಸರಿನ ಮುಂದೆ ನಮೂದಿಸಿದ ಹುದ್ದೆಗಳಿಗೆ ನೇಮಿಸಲಾಗಿದೆ.

ಕ್ರಮ ಸಂಖ್ಯೆ	ವಲಯ ಅರಣ್ಯ ಅಧಿಕಾರಿಯ ಹೆಸರು	ಸ್ವತಂತ್ರ ಪ್ರಭಾರದಲ್ಲಿರಿಸಿ ನೇಮಿಸಲಾದ ಸ್ಥಳ
01	ಶ್ರೀ ಹೆಚ್. ಎಂ. ಜಗದೀಶ್ ಕುಮಾರ್	ಜಲ ಸಂವರ್ಧನಾ ಯೋಜನಾ ಸಂಘ (ಪರಿಸರ), ಕೋಲಾರ ಹುದ್ದೆಗೆ ನೇಮಿಸಲು ಇವರ ಸೇವೆಯನ್ನು ಜಲ ಸಂಪನ್ಮೂಲ ಇಲಾಖೆಯ ವಶಕ್ಕೆ ನೀಡಲಾಗಿದೆ.
02	ಶ್ರೀ ಆರ್. ಜಿ. ನಾಯಕ್	ಹಳಿಯಾಳ ಉಪವಿಭಾಗ, ಹಳಿಯಾಳ
03	ಶ್ರೀ ಎಸ್. ಎಸ್. ಬೂಮ್‌ಕರ್	ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ (ಕಾರ್ಯ ಯೋಜನೆ) ಚಿಕ್ಕಮಗಳೂರು

04	ಶ್ರೀ ಎಸ್. ವೆಂಕಟೇಶ್	ಬೀದರ್ ಉಪವಿಭಾಗ, ಬೀದರ್
05	ಶ್ರೀ ವಿ. ಎಮ್. ಶರಣಬಸಪ್ಪ	ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಹುದ್ದೆಗೆ ನೇಮಿಸಲು ಇವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಶಕ್ಕೆ ನೀಡಲಾಗಿದೆ.
06	ಶ್ರೀ ವೈ. ಎನ್. ರಾಣೆ	ಕರ್ನಾಟಕ ರಾಜ್ಯ ಅರಣ್ಯ ಅಭಿವೃದ್ಧಿ ನಿಗಮ (ರಬ್ಬರ್ ವಿಭಾಗ) ಸುಳ್ಯ
07	ಶ್ರೀ ಸೈಯದ್ ಅಹಮ್ಮದ್ ಖಾನ್	ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ (ಕಾರ್ಯಯೋಜನೆ), ಬಳ್ಳಾರಿ
08	ಶ್ರೀ ಸಿ. ಆರ್. ಉಪ್ಪಾರ್	ಹೊಸನಗರ ಉಪವಿಭಾಗ, ಹೊಸನಗರ
09	ಶ್ರೀ ಟಿ. ತಿಮ್ಮಪ್ಪ	ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ (ಕಾರ್ಯಯೋಜನೆ), ಶಿವಮೊಗ್ಗ
10	ಶ್ರೀ ಜಿ. ವೈ. ರಾಜು	ಜಲಾನಯನ ಅಭಿವೃದ್ಧಿ ಇಲಾಖೆ, ಉಡುಪಿ ಹುದ್ದೆಗೆ ನೇಮಿಸಲು ಇವರ ಸೇವೆಯನ್ನು ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ವಶಕ್ಕೆ ನೀಡಲಾಗಿದೆ.
11	ಶ್ರೀ ಎಸ್.ಎಮ್. ಪಿರ್‌ಜಾದೆ	ಜಲಾನಯನ ಅಭಿವೃದ್ಧಿ ಇಲಾಖೆ, ಬೀದರ್ ಹುದ್ದೆಗೆ ನೇಮಿಸಲು ಇವರ ಸೇವೆಯನ್ನು ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ವಶಕ್ಕೆ ನೀಡಲಾಗಿದೆ.
12	ಶ್ರೀ ಬಿ. ವಿ. ನಾಗರಾಜೇಗೌಡ	ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ (ಕಾರ್ಯ ಯೋಜನೆ), ಮೈಸೂರು
13	ಶ್ರೀ ಆರ್. ಆರ್. ಬಜಂತ್ರಿ	ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಹುದ್ದೆಗೆ ನೇಮಿಸಲು ಇವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಶಕ್ಕೆ ನೀಡಲಾಗಿದೆ.
14	ಶ್ರೀ ಜಿ. ಎಸ್. ಸೌದಗಾರ್	ಸಾಮಾಜಿಕ ಅರಣ್ಯ, ಹುನಗುಂದ
15	ಶ್ರೀ ಎನ್. ಎನ್. ಚಚಡಿ	ಸಾಮಾಜಿಕ ಅರಣ್ಯ, ಯಾದಗೀರ್
16	ಶ್ರೀ ಆರ್. ತಿಪ್ಪೇಸ್ವಾಮಿ	ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಹುದ್ದೆಗೆ ನೇಮಿಸಲು ಇವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಶಕ್ಕೆ ನೀಡಲಾಗಿದೆ.
17	ಶ್ರೀ ಹೆಚ್. ಎನ್. ಚಂದ್ರ	ಸಾಮಾಜಿಕ ಅರಣ್ಯ, ತಿಪಟೂರು
18	ಶ್ರೀ ಎಸ್. ಜಿ. ನಾಯಕ್	ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಹುದ್ದೆಗೆ ನೇಮಿಸಲು ಇವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಶಕ್ಕೆ ನೀಡಲಾಗಿದೆ.
19	ಶ್ರೀ ಸಿ. ಎನ್. ನಾಯಕ್	ಸಾಮಾಜಿಕ ಅರಣ್ಯ, ಸಾಗರ
20	ಶ್ರೀ ಎಸ್. ಎಸ್. ಮಾದರ್	ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಹುದ್ದೆಗೆ ನೇಮಿಸಲು ಇವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ವಶಕ್ಕೆ ನೀಡಲಾಗಿದೆ.
21	ಶ್ರೀ ಎ. ವಿ. ಪಾಟೀಲ್	ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಹುದ್ದೆಗೆ ನೇಮಿಸಲು ಇವರ ಸೇವೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ವಶಕ್ಕೆ ನೀಡಲಾಗಿದೆ.
22	ಶ್ರೀ ಎಸ್. ವಿ. ನಾಯಕ್	ಬೆಂಗಳೂರು ನಗರ ಕೆರೆ ಉಪವಿಭಾಗ, ಬೆಂಗಳೂರು
23	ಶ್ರೀ ಎಂ. ಡಿ. ಕೆಂಚಪ್ಪನವರ್	ಅರಣ್ಯ ಸಂರಕ್ಷಣಾಧಿಕಾರಿಗಳ ತಾಂತ್ರಿಕ ಸಹಾಯಕರು, ಧಾರವಾಡ ವೃತ್ತ, ಧಾರವಾಡ
24	ಶ್ರೀ ಎ. ಬಿ. ಕಲ್ಲೂರು	ಸಾಮಾಜಿಕ ಅರಣ್ಯ, ಧಾರವಾಡ

ಈ ಆದೇಶದ ಪರಿಣಾಮದಿಂದಾಗಿ, ಸ್ಥಳನಿಯುಕ್ತಿಗಾಗಿ ಬಂದಿರುವ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ತಮ್ಮ ಪ್ರಸ್ತುತ ಹುದ್ದೆಯಿಂದ ಕೂಡಲೇ ಬಿಡುಗಡೆಗೊಂಡು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯವರಲ್ಲಿ ವರದಿ ಮಾಡಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ವಡಗಾವೆ ಬಸವರಾಜ್,

ಸರ್ಕಾರದ ಅಧೀನ ಕಾರ್ಯದರ್ಶಿ,

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ (ಸೇವೆಗಳು)

ಪಿ.ಆರ್. 791

KA / BG-GPO/2515/WPP-47/2009-2011

ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೪೬	ಬೆಂಗಳೂರು, ಗುರುವಾರ, ಜುಲೈ ೧೪, ೨೦೧೧ (ಆಷಾಢ ೨೩ ಶಕ ವರ್ಷ ೧೯೩೩)	ಸಂಚಿಕೆ ೨೮

ಭಾಗ–೩

ಸರ್ಕಾರದ ಆಯಾ ಇಲಾಖೆಗಳ ಮುಖ್ಯಸ್ಥರ ಮತ್ತು ಸ್ಥಳೀಯ ಪ್ರಾಧಿಕಾರಿಗಳಿಗೆ ಸಂಬಂಧಿಸಿದ ಅಧಿಸೂಚನೆಗಳು

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯ

ಬಿ3:ಅಮೊ:ವಾಹನ:ವಿವ:15/09-10, ದಿನಾಂಕ:05-02-2011

ಉಪಸ್ಥಿತರು : ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ.,
ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಪಿರ್ಯಾಧಿದಾರರು : ವಲಯ ಅರಣ್ಯಾಧಿಕಾರಿ,
ಆನಂದಪುರಂ ವಲಯ, ಚೋರಡಿ
(ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)

ಆರೋಪಿಗಳು : 1)ಬಿಕೇಶಿ 2)ಶಹೀದ್ 3)ವಾಜೀದ್ 4)ಇದಯಿತ್ 5)

ಬಾಧ್ಯತೆದಾರರು : ಯಾರು ಹಕ್ಕುಬಾದ್ಯತೆಯ ಅರ್ಜಿ ಸಲ್ಲಿಸಿರುವುದಿಲ್ಲ

ಪ್ರಸ್ತಾವನೆ:–

ದಿ:24–07–2009 ರಂದು ಆನಂದಪುರಂ ವಲಯದ ಚೋರಡಿ ಶಾಖೆಯ ವನಪಾಲಕರು ಮತ್ತು ಸಿಬ್ಬಂದಿಯವರು ಬೆಳಿಗ್ಗೆ 6–00 ಗಂಟೆಗೆ ಚೋರಡಿ ಗ್ರಾಮದ ಕರಡಿಬೆಟ್ಟ ಮೀಸಲು ಅರಣ್ಯದಲ್ಲಿ ಗಸ್ತು ಮಾಡುತ್ತಿರುವಾಗ ಚೋರಡಿಯಿಂದ ಶಿಕಾರಪುರಕ್ಕೆ ಹೋಗುವ ರಸ್ತೆಯಲ್ಲಿ ಎರಡು ಬೈಕ್‌ಗಳಲ್ಲಿ (ಬೀಟೆ ನಾಟಾ ಸಾಗಾಣಿಕೆ ಮಾಡುತ್ತಿರುವುದನ್ನು) ನಿಲ್ಲಿ ನೋಡಲಾಗಿ ಟಿ.ವಿ.ಎಸ್. ಬೈಕ್ ಕೆಎ–15–ಕೆ–3504ರಲ್ಲಿ ಒಂದು ಬೀಟೆ ತುಂಡು ಅಳತೆ 0.026 ಎಂ3 ಮತ್ತು ಇನ್ನೊಂದು ಹಿರೋಹೊಂಡಾ ಬೈಕ್ ಕೆಎ–27–ಕೆ–6266ರಲ್ಲಿ ಒಂದು ಬೀಟೆ ತುಂಡು ಅಳತೆ 0.027 ಎಂ3 ಇದ್ದು, ಈ ಬೀಟೆ ನಾಟಾ ಸಾಗಾಣಿಕೆಗೆ ರಹದಾರಿಯನ್ನು ಬೈಕ್‌ನಲ್ಲಿದ್ದ (1) ಬಿರೇಶ ಬಿನ್ ಹಾಲಪ್ಪಗೌಡ, 25 ವರ್ಷ, ಜಂಬೂರು ವಾಸಿ, ಸಾಗರ ತಾ. (2)ಷಹೀದ್ ಬಿನ್ ರಸೋಲ್ ಸಾಬ್, 23 ವರ್ಷ, ಈಸೂರು ಗ್ರಾಮ, ಶಿಕಾರಿಪುರ ತಾ. (3) ವಾಜೀದ್ ಬಿನ್ ಅಬ್ದುಲ್ ರೆಹಮಾನ್ ಸಾಬ್, 25 ವರ್ಷ, ತುಂಬೆಹೊಂಡ ಬೀದಿ, ಮುಸ್ಲಿಂ ಕೇರಿ, ಈಸೂರು ಗ್ರಾಮ, ಶಿಕಾರಿಪುರ ತಾ. (4) ಇದಾಲತ್ ಬಿನ್ ಖಾದರ್‌ಸಾಬ್, 34 ವರ್ಷ, ಗಾಂಧಿನಗರ ಒಂದನೇ ಮೈನ್, ಒಂದನೇ ಕ್ರಾಸ್, ಹರಿಹರ ತಾ. ಇವರನ್ನು ಕೇಳಲಾಗಿ ರಹದಾರಿ ಇಲ್ಲವೆಂದು ಮತ್ತು ಇದನ್ನು ಜಂಬೂರುಮನೆ ಬಳಿಯಿರುವ ಕಾಡಿನಿಂದ ಕಡಿದಿದ್ದೆಂದು ತಿಳಿಸಿದರು. ಈ ತುಂಡುಗಳಿಗೆ ಇಲಾಖೆಯ ಯಾವುದೇ ಛಾಪಾದ ಗುರುತಿರಲಿಲ್ಲ. ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ, ಆಸಾಮಿ, ವಾಹನ ಮತ್ತು ಬೀಟೆ ನಾಟಾವನ್ನು ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತಿ ವರದಿಯೊಂದಿಗೆ ಇಲಾಖಾ ಪರ ಜಪ್ತುಮಾಡಿ, ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 24, 62, 71(ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969ರ ಉಪ ನಿಯಮ 144, 165ರ ಪ್ರಕಾರ ಚೋರಡಿ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ: 50/09–10ನ್ನು ದಾಖಲಿಸಿ ವಾಹನವನ್ನು ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ದಿಗೆ ಕೊಡಲು ಆದೇಶವಾಗಿದೆ.

ನಂತರ ಈ ವಾಹನದ 'ಜಿ' ಎಕ್ಸ್‌ಟ್ರ್ಯಾಕ್ಟ್ ಈ ನ್ಯಾಯಾಲಯಕ್ಕೆ ಒದಗಿಸಲು ಸಹಾಯಕ ಸಾರಿಗೆ ಅಧಿಕಾರಿ, ಸಾಗರ ಇವರಿಗೆ ಈ ನ್ಯಾಯಾಲಯದ ಪತ್ರ ಸಂ:ಬಿ3.ಅಮೊ.ವಾಹನ.15/09-10ನ್ನು ದಿ:30-10-2009 ರಂದು ಬರೆದು ಕೋರಲಾಯಿತು. ಅದರಂತೆ ಸಾರಿಗೆ ಅಧಿಕಾರಿ, ಸಾಗರ ಇವರಿಂದ 'ಜಿ' ಎಕ್ಸ್‌ಟ್ರ್ಯಾಕ್ಟ್‌ನ್ನು ವಲಯ ಅರಣ್ಯಾಧಿಕಾರಿ ಸಾಗರ ವಲಯ, ಇವರು ಪಡೆದು ಪತ್ರ ಸಂ:ವಅಅ.ಅಮೊ.ವಾಹನ.1955/10-11 ದಿ:24-12-2010 ರಂದು ಈ ನ್ಯಾಯಾಲಯಕ್ಕೆ ಒದಗಿಸಿರುತ್ತಾರೆ. 'ಜಿ' ಎಕ್ಸ್‌ಟ್ರ್ಯಾಕ್ಟ್‌ನಲ್ಲಿ ನಮೂದಿಸಿದ ಆರ್.ಸಿ. ಮಾಲೀಕರಾದ ಶ್ರೀ ಜಿರೇಶ್ ಜಿನ್ ಹಾಲಪ್ಪಗೌಡ, ಜಂಬೂರುಮನೆ ವಾಸಿ, ಗೌತಮಪುರ ಅಂಚೆ, ಸಾಗರ ತಾ. ಇವರಿಗೆ ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ ಇವರ ಮುಖಾಂತರ ದಿ:30-12-2010 ರಂದು 30 ದಿನಗಳ ಕಾಲಾವಕಾಶ ನೀಡಿ ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71 ಬಿ(1)ರ ಪ್ರಕಾರ ನೋಟಿಸ್‌ನ್ನು ಜಾರಿ ಮಾಡಿದೆ. ಆದರೆ ಇಲ್ಲಿಯವರೆಗೂ ಆರ್.ಸಿ. ಮಾಲೀಕರಾಗಲೀ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಈ ವಾಹನದ ಹಕ್ಕುಬಾಧ್ಯತೆ ಅರ್ಜಿ ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:29-01-2011 ರಂದು ವಾದ ಮಂಡಿಸಿ, ಸದರಿ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಸಾಗಿಸುತ್ತಿರುವಾಗ ಮಾಲು ಸಹಿತ ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ ಇವರು ವಾಹನವನ್ನು ಜಪ್ತುಮಾಡಿ ಮಹಜರ್ ಪ್ರತಿ ಮತ್ತು ಪ್ರಥಮ ವರ್ತಮಾನ ವರದಿ, ಜಪ್ತಿ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುವುದರಿಂದ ಈ ವಾಹನದಲ್ಲಿ ಬೀಟೆ ತುಂಡುಗಳನ್ನು ಅಕ್ರಮವಾಗಿ ಸಾಗಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ. ಹಾಗೂ ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಗೊಂಡು ಮತ್ತು ಆರ್.ಸಿ. ಮಾಲೀಕರಿಗೆ ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71 ಬಿ(1)ರ ಪ್ರಕಾರ ನೋಟಿಸ್‌ನ್ನು ಜಾರಿ ಮಾಡಿ 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ)ಪ್ರಕಾರ ವಲಯ ಅರಣ್ಯಾಧಿಕಾರಿ, ಆನಂದಪುರಂ ವಲಯ, ಚೋರಡಿ ಇವರು ಜಪ್ತು ಮಾಡಿದ ವಾಹನ ಟಿ.ವಿ.ಎಸ್. ವಿಕ್ಟರ್ ಬೈಕ್ ಕೆಎ-15-ಕೆ-3504 (ಛಾಸ್ಸಿಸ್ ನಂ:MD625AF1561L47609, ಇಂಜಿನ್ ನಂ:OF1L61561355) ನ್ನು ಮತ್ತು ಈ ವಾಹನದಲ್ಲಿದ್ದ, 1 ತುಂಡು ಬೀಟೆ ಒಟ್ಟು 0.026 ಎಂ3ವು ಕರ್ನಾಟಕ ಸರ್ಕಾರದ ಸಂಪತ್ತು ಆಗಿರುವುದರಿಂದ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ ದಿ: 05-02-2011 ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30(ಮೂವತ್ತು) ದಿನಗಳ ಒಳಗಾಗಿ ಯಾರು ಯಾರೂ ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ
ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಪಿ.ಆರ್.211

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೊ:ವಾಹನ:ವಿವ:06/2010-11, ದಿನಾಂಕ:05-03-2011

ಉಪಸ್ಥಿತರು	:	ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.
ಫಿರ್ಯಾಧಿದಾರರು	:	ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ (ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)
ಆರೋಪಿಗಳು	:	(1) ಹರೀಶ (2)ಶಿವಕುಮಾರ (3)ರವಿ (4)ಸಿದ್ದಪ್ಪ (4)ಹರೀಶ (5)ರಾಘವೇಂದ್ರ
ಬಾಧ್ಯತೆದಾರರು	:	ಯಾರು ಮುಂದೆ ಬಂದಿರುವುದಿಲ್ಲ

ಪ್ರಸ್ತಾವನೆ:-

ದಿ:22-06-2010 ರಂದು ಅಂಬ್ಲಿಗೊಳ ವಲಯದ ಅಂಬ್ಲಿಗೊಳ ಶಾಖೆ ಮತ್ತು ಸಾಲೂರು ಶಾಖೆಯ ವನಪಾಲಕ, ಸಿಬ್ಬಂದಿಯವರು ಮತ್ತು ಅರಣ್ಯ ಸಂಚಾರಿದಳದ ಸಿಬ್ಬಂದಿಯವರೊಂದಿಗೆ ಬೆಳಂದೂರು ಮಸ್ಕಾ ಜಂಗ್ಲಿಯ ಬೆಳಂದೂರು ಗ್ರಾಮದ ಸ.ನಂ. 36ರಲ್ಲಿ ಬೆಳಿಗ್ಗೆ 7-30ರ ಸಮಯದಲ್ಲಿ ಅರಣ್ಯ ಗಸ್ತು ಮಾಡುತ್ತಿರುವಾಗ ಒಂದು ವಾಹನ ಮರಕ್ಕೆ ಡಿಕ್ಕಿ ಹೊಡೆದು ನಿಲ್ಲಿಸಿದ್ದು ಕಂಡುಬಂದಿದ್ದು, ಅದು ಬಿಳಿಬಣ್ಣದ ಮಾರುತಿ ಓಮ್ನಿ ವಾಹನವಾಗಿದ್ದು, ಜಿಎ-01-ಎನ್-0462 (ಛಾಸ್ಸಿಸ್ ನಂಬರ್ ಮತ್ತು ಇಂಜಿನ್ ನಂಬರ್ ಕಂಡುಬಂದಿರುವುದಿಲ್ಲ) ವಾಹನದೊಳಗಡೆ 6 ಜನರಿದ್ದು, ಒಬ್ಬ ವಾಹನವನ್ನು ರಿಪೇರಿ ಮಾಡುತ್ತಿದ್ದು, ಉಳಿದ 5 ಜನ ಹಿಂದೆ ಕುಳಿತ್ತಿದ್ದರು. ವಾಹನವನ್ನು ಸುತ್ತುವರಿದು 4 ಜನರನ್ನು ಹಿಡಿಯಲಾಯಿತು. ಉಳಿದ ಇಬ್ಬರು ಕೈಗೆ ಸಿಗದೇ ತಪ್ಪಿಸಿಕೊಂಡಿರುತ್ತಾರೆ. (1)ನೇ ಹರೀಶ ಬಿನ್ ಚಂದ್ರಪ್ಪ, 24 ವರ್ಷ, ಗಡೇಶ್ವರ ಬೀದಿ (2)ಶಿವಕುಮಾರ ಬಿನ್ ಸಿದ್ದಪ್ಪ, 25 ವರ್ಷ, ಭದ್ರಾಪುರ ವಾಸಿ (3)ರವಿ ಬಿನ್ ರಾಮಪ್ಪ, 23 ವರ್ಷ, ಭದ್ರಾಪುರ ವಾಸಿ (4) ಹರೀಶ ಬಿನ್ ತಿಮ್ಮಪ್ಪ, 19 ವರ್ಷ, ಭದ್ರಾಪುರ ವಾಸಿ, ಇಬ್ಬರು

ತಲೆಮರೆಸಿಕೊಂಡವರು (1)ಸಿದ್ದಪ್ಪ ಬಿನ್ ರಾಮಣ್ಣ, 25 ವರ್ಷ (2)ರಾಘವೇಂದ್ರ ಬಿನ್ ರಾಮಣ್ಣ, ಇಬ್ಬರು ಮಯಪ್ಪನಕೇರಿ, ಶಿಕಾರಿಪುರ ಟೌನ್ ಎಂದು ತಿಳಿಸಿದರು. ವಾಹನದೊಳಗಡೆ ಪರಿಶೀಲಿಸಿ ನೋಡಲಾಗಿ ಬೀಟೆ ಜಾತಿಯ 4 ತುಂಡುಗಳಿದ್ದು, ಅದರ ಅಳತೆ 0.768 ಎಂ3 ಪ್ರಮಾಣವಿದ್ದು, ಸದರಿ ತುಂಡುಗಳನ್ನು ಗರಗಸದಿಂದ ಕೊಯ್ದು ಮಾಡಿದಾಗಿದ್ದು, ಸಿಕ್ಕಿಬಿದ್ದ ಆಸಾಮಿಗಳನ್ನು ವಿಚಾರಿಸಲಾಗಿ ಸದರಿ ತುಂಡುಗಳನ್ನು ಸಿದ್ದಪ್ಪ ಬಿನ್ ರಾಮಣ್ಣ, ಎಂಬುವವರು ನಮ್ಮನ್ನು ಕರೆದುಕೊಂಡು ಬಂದರು. ನಂತರ ಬೆಳಂದೂರು ಎಂ.ಎಫ್.ನಲ್ಲಿ ಬೀಟೆ ಮರವನ್ನು ಕಡಿದು ಓಮ್ನಿಗೆ ಹಾಕಿಕೊಂಡು ಬರುತ್ತಿರುವಾಗ ಮರಕ್ಕೆ ಹೊಡೆದು ನಿಂತಿದೆಂದು ತಿಳಿಸಿದರು. ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ, ವಾಹನ ಮತ್ತು ಬೀಟೆ ನಾಟಾವನ್ನು ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತಿ ವರದಿಯೊಂದಿಗೆ ಇಲಾಖಾ ಪರ ಜಪ್ತುಮಾಡಿ, ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 24, 62, 71(ಎ), 104 (ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969ರ ಉಪ ನಿಯಮ 144, 165ರ ಪ್ರಕಾರ ಅಂಬ್ಲಿಗೊಳ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ:32/10-11ನ್ನು ದಾಖಲಿಸಿ ವಾಹನವನ್ನು ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ದಿಗೆ ಕೊಡಲು ಆದೇಶವಾಗಿದೆ.

ಈ ಪ್ರಕರಣದಲ್ಲಿ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ವಿಚಾರಣಾ ವರದಿ ಸಲ್ಲಿಸಿ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಮತ್ತು ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ದೋಷರೋಪಣಾ ಪಟ್ಟಿ ಸಲ್ಲಿಸಲು ಅನುಮತಿ ಕೋರಿರುತ್ತಾರೆ.

ನಂತರ ಈ ವಾಹನದ 'ಬಿ' ಎಕ್ಸ್‌ಟ್ರ್ಯಾಕ್ಟ್ ಈ ನ್ಯಾಯಾಲಯಕ್ಕೆ ಒದಗಿಸಲು The Director of Transport Commissioner Panaji, Goa ಇವರಿಗೆ ಈ ನ್ಯಾಯಾಲಯದ ಪತ್ರ ಸಂ:ಬಿ3.ಅಮೊ.ವಾಹನ.ಸಿಆರ್.06/10-11ನ್ನು ದಿ:01-07-2010 ರಂದು ಬರೆದು ಕೋರಲಾಯಿತು. ಇವರು ಈ ವಾಹನದ ಸಿ.ಸಿ.ಯನ್ನು ದಿ:10-07-2008 ರಂದು ಸಾರಿಗೆ ಕಛೇರಿ, ಸಾಗರಕ್ಕೆ ವರ್ಗಾಯಿಸಿದ ಬಗ್ಗೆ ತಿಳಿಸಿರುತ್ತಾರೆ. ಅದರಂತೆ, ಈ ನ್ಯಾಯಾಲಯದ ಪತ್ರ ಸಮ ಸಂಖ್ಯೆ ದಿ:29-07-2010 ರಂದು ಸಾರಿಗೆ ಅಧಿಕಾರಿ, ಸಾಗರ ಇವರಿಗೆ ಪತ್ರ ಬರೆದು ಈ ವಾಹನದ 'ಬಿ' ಎಕ್ಸ್‌ಟ್ರಾಕ್ಸ್‌ನ್ನು ಒದಗಿಸಲು ಕೋರಲಾಯಿತು. ಅದರಂತೆ ಈ ವಾಹನದ 'ಬಿ' ಎಕ್ಸ್‌ಟ್ರಾಕ್ಸ್‌ನ್ನು ದಿ:07-08-2010ರ ಪತ್ರದಲ್ಲಿ ಈ ನ್ಯಾಯಾಲಯಕ್ಕೆ ಒದಗಿಸಿರುತ್ತಾರೆ. 'ಬಿ' ಎಕ್ಸ್‌ಟ್ರಾಕ್ಸ್‌ನಲ್ಲಿ ನಮೂದಿಸಿದ ಆರ್.ಸಿ. ಮಾಲೀಕರ ಹೆಸರು ಶ್ರೀ ಸಿಧಿಕ್ ಅಹ್ಮದ್ ಬಿನ್ ಮೊಹಮ್ಮದ್ ಗೌಸ್, ಹೈಯರ್ ಪ್ರೇಮರಿ ಸ್ಕೂಲ್ ಹತ್ತಿರ, ಶಿಕಾರಿಪುರ ಇವರಿಗೆ ದಿ:26-08-2010 ರಂದು ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71ಜಿ(1)ರ ಪ್ರಕಾರ ಈ ವಾಹನದ ದಾಖಲೆಗಳನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಲು 30 ದಿನಗಳ ಕಾಲಾವಕಾಶ ನೀಡಿ ನೋಟಿಸ್‌ನ್ನು ನೊಂದಣಿ ಅಂಚೆ ಮೂಲಕ ಜಾರಿ ಮಾಡಿದೆ. ಆದರೂ ಸಹ ಈ ವಾಹನವನ್ನು ಬಿಡಿಸಿಕೊಳ್ಳಲು ಆರ್.ಸಿ. ಮಾಲೀಕರಾಗಲೀ ಅವರ ಪರ ವಕೀಲರಾಗಲೀ ಇಲ್ಲಿಯವರೆಗೆ ಹಕ್ಕುಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಿರುವುದಿಲ್ಲ.

ಈ ನಡುವೆ ಈ ವಾಹನದ ಬಗ್ಗೆ ಹೆಚ್ಚಿನ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ 30 ದಿನಗಳ ಕಾಲಾವಕಾಶ ನೀಡಿ ಸಂಖ್ಯೆ:ಬಿ3:ಅಮೊ:ವಾಹನ:ಸಿಆರ್:19/10-11/ದಿ:01-07-2010ರಂದು ಪ್ರಕಟಣೆಯನ್ನು ಹೊರಡಿಸಿ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಹಾಗೂ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ರಾಜ್ಯ ಮಟ್ಟದ ಪ್ರಚಲಿತ ದೈನಿಕ ಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಗಿತ್ತು. ಅದರಂತೆ ಈ ಪ್ರಕಟಣೆಯು ದಿ:17-07-2010ರಂದು ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ಮತ್ತು ದಿ:19-08-2010ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರು ವಾಹನ ಮಾಲೀಕರಾಗಲೀ ಅಥವಾ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:26-02-2011 ರಂದು ವಾದ ಮಂಡಿಸಿ, ಸದರಿ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಸಾಗಿಸುತ್ತಿರುವಾಗ ಮಾಲು ಸಹಿತ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ವಾಹನವನ್ನು ಜಪ್ತುಮಾಡಿ ಮಹಜರ್ ಪ್ರತಿ ಮತ್ತು ಪ್ರಥಮ ವರ್ತಮಾನ ವರದಿ, ಜಪ್ತಿ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುವುದರಿಂದ ಈ ವಾಹನದಲ್ಲಿ ಬೀಟೆ ತುಂಡುಗಳನ್ನು ಅಕ್ರಮವಾಗಿ ಸಾಗಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ. ಹಾಗೂ ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಗೊಂಡು ಮತ್ತು ಆರ್.ಸಿ. ಮಾಲೀಕರಿಗೆ ನೋಟಿಸ್ ಜಾರಿ ಮಾಡಿ 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ)ಪ್ರಕಾರ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ಜಪ್ತು ಮಾಡಿದ ವಾಹನ ಮಾರುತಿ ಓಮ್ನಿ ಜಿಎ-01-ಎನ್-0462 (ಛಾಸ್ಸಿಸ್ ನಂಬರ್ ಮತ್ತು ಇಂಜಿನ್ ನಂಬರ್ ಕಂಡುಬಂದಿರುವುದಿಲ್ಲ) ಮತ್ತು ಈ ವಾಹನದಲ್ಲಿದ್ದ 04 ತುಂಡು ಬೀಟೆ ಒಟ್ಟು-0.768ಎಂ3ನ ಕರ್ನಾಟಕ ಸರ್ಕಾರದ ಸಂಪತ್ತು ಆಗಿರುವುದರಿಂದ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ನನ್ನ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ

ಪರಿಪಡಿಸಿ ದಿ:05-03-2011 ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30(ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ
ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಪಿ.ಆರ್.637

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೊ:ವಾಹನ:ವಿವ: 07/2010-11, ದಿನಾಂಕ:05-03-2011

ಉಪಸ್ಥಿತರು : ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ.,
ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಫಿರ್ಯಾಧಿದಾರರು : ವಲಯ ಅರಣ್ಯಾಧಿಕಾರಿ,
ಅಂಬ್ಲಿಗೊಳ ವಲಯ (ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)

ಆರೋಪಿಗಳು : ಪತ್ತೆಯಾಗಿರುವುದಿಲ್ಲ

ಬಾಧ್ಯತೆದಾರರು : ಯಾರು ಮುಂದೆ ಬಂದಿರುವುದಿಲ್ಲ

ಪ್ರಸ್ತಾವನೆ:-

ದಿ:29-06-2010 ರಂದು ಅಂಬ್ಲಿಗೊಳ ವಲಯ, ಸಾಲೂರು ಶಾಖೆ ವನಪಾಲಕ ಮತ್ತು ಸಿಬ್ಬಂದಿಯವರು ಶಿಕಾರಿಪುರ ತಾಲ್ಲೂಕು ಅಂಜನಾಪುರ ಹೋಬಳಿ ಈಸೂರು ಗ್ರಾಮದ ಸಾಲೂರಿನಿಂದ ಈಸೂರಿಗೆ ಹೋಗುವ ಕಚ್ಚಾರಸ್ತೆಯಲ್ಲಿ ಗಸ್ತು ತಿರುಗುತ್ತಿರುವಾಗ ಸಾಲೂರು ಕಡೆಯಿಂದ ಒಂದು ನೀಲಿ ಬಣ್ಣದ ಮಾರುತಿ ಓಮ್ನಿ ವೇಗವಾಗಿ ಬರುತ್ತಿರುವುದನ್ನು ನಿಲ್ಲಿಸಲು ಕೈ ಮಾಡಿದಾಗ ವೇಗವಾಗಿ ಮುಂದೆಸಾಗಿ 50 ಅಡಿ ದೂರದಲ್ಲಿ ವಾಹನ ನಿಲ್ಲಿಸಿ, ಚಾಲಕನು ವಾಹನದಿಂದ ಇಳಿದು ಓಡಲು ಪ್ರಾರಂಭಿಸಿದಾಗ ಅವನನ್ನು ಬೆನ್ನಟ್ಟಿದ್ದರು. ಕೈಗೆಸಿಗದೇ ಓಡಿ ಪರಾರಿಯಾದರು. ವಾಹನ ಪರಿಶೀಲಿಸಿದಾಗ ಮಾರುತಿ ಓಮ್ನಿ ಆಗಿದ್ದು, ನಂಬರ್: ಜಿಎ-01-ಆರ್-4330 (Chassis No.ST-91-IN-960665, Engine No. Not visible) ಆಗಿದ್ದು, ವಾಹನದೊಳಗಡೆ ಬೀಟೆ ಜಾತಿಯ ಗರಗಸದಿಂದ ಕೊಯ್ತ ಮಾಡಿದ 5 ತುಂಡುಗಳಿದ್ದು, ಅದರ ಅಳತೆ 0.447 ಎಂ3 ಪ್ರಮಾಣವಿದ್ದು, ಈ ತುಂಡುಗಳನ್ನು ಸಾಗಿಸಲು ಯಾವುದೇ ರಹದಾರಿ ಇರಲಿಲ್ಲ. ಹಾಗೂ ಈ ತುಂಡುಗಳಿಗೆ ಇಲಾಖೆಯ ಯಾವುದೇ ಛಾಪಾದ ಗುರುತಿರಲಿಲ್ಲ. ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ, ವಾಹನ ಮತ್ತು ಬೀಟೆ ನಾಟಾವನ್ನು ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತಿ ವರದಿಯೊಂದಿಗೆ ಇಲಾಖಾ ಪರ ಜಪ್ತುಮಾಡಿ, ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 24, 62, 71(ಎ), 104(ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969ರ ಉಪ ನಿಯಮ 144, 165ರ ಪ್ರಕಾರ ಅಂಬ್ಲಿಗೊಳ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ:34/10-11ನ್ನು ದಾಖಲಿಸಿ ವಾಹನವನ್ನು ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಆದೇಶವಾಗಿದೆ.

ನಂತರ ಈ ಪ್ರಕರಣದಲ್ಲಿ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ವಿಚಾರಣಾ ವರದಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಿ, ವಾಹನ, ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ನಂತರ ಈ ವಾಹನದ ಬಿ ಎಕ್ಸ್‌ಟ್ರ್ಯಾಕ್ಟ್ ಈ ನ್ಯಾಯಾಲಯಕ್ಕೆ ಒದಗಿಸಲು The Director of Transport Commissioner Panaji, Goa ಇವರಿಗೆ ಈ ನ್ಯಾಯಾಲಯದ ಪತ್ರ ಸಂ:ಬಿ3.ಅಮೊ.ವಾಹನ.ಸಿಆರ್.07/10-11ನ್ನು ದಿ:01-07-2010 ರಂದು ಬರೆದು ಕೋರಲಾಯಿತು. ಆದರೆ, ಸಾರಿಗೆ ಅಧಿಕಾರಿಯು ಈ ವಾಹನದ ಬಿ ಎಕ್ಸ್‌ಟ್ರ್ಯಾಕ್ಸನ್ನು ಇಲ್ಲಿಯವರೆಗೆ ಈ ನ್ಯಾಯಾಲಯಕ್ಕೆ ಒದಗಿಸಿರುವುದಿಲ್ಲ.

ಈ ನಡುವೆ ಈ ವಾಹನದ ಬಗ್ಗೆ ಹೆಚ್ಚಿನ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ 30 ದಿನಗಳ ಕಾಲಾವಕಾಶ ನೀಡಿ ಸಂಖ್ಯೆ:ಬಿ3:ಅಮೊ:ವಾಹನ:ಸಿಆರ್:19/10-11/ದಿ:01-07-2010ರಂದು ಪ್ರಕಟಣೆಯನ್ನು ಹೊರಡಿಸಿ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಹಾಗೂ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ರಾಜ್ಯ ಮಟ್ಟದ ಪ್ರಚಲಿತ ದೈನಿಕ ಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಗಿತ್ತು. ಅದರಂತೆ ಈ ಪ್ರಕಟಣೆಯು ದಿ:17-07-2010ರಂದು ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ ಮತ್ತು ದಿ:19-08-2010ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರು ವಾಹನ ಮಾಲೀಕರಾಗಲೀ ಅಥವಾ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:26-02-2011 ರಂದು ವಾದ ಮಂಡಿಸಿ, ಸದರಿ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಸಾಗಿಸುತ್ತಿರುವಾಗ ಮಾಲು ಸಹಿತ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ವಾಹನವನ್ನು ಜಪ್ತುಮಾಡಿ ಮಹಜರ್ ಪ್ರತಿ ಮತ್ತು ಪ್ರಥಮ ವರ್ತಮಾನ ವರದಿ, ಜಪ್ತಿ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರಪಡಿಸಿರುವುದರಿಂದ ಈ ವಾಹನದಲ್ಲಿ ಬೀಟೆ ತುಂಡುಗಳನ್ನು ಅಕ್ರಮವಾಗಿ ಸಾಗಿಸಿರುವುದು ಸಾಬೀತಾಗಿರುತ್ತದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ. ಹಾಗೂ ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ)ಪ್ರಕಾರ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ಜಪ್ತು ಮಾಡಿದ ವಾಹನ ಮಾರುತಿ ಓಮ್ನಿ ಜಿಎ-01-ಆರ್-4330 (ಛಾಸ್ಸಿಸ್ ನಂ: ST-91-IN-960665, ಇಂಜಿನ್ ನಂ:Not Visible)ನ್ನು ಮತ್ತು ಈ ವಾಹನದಲ್ಲಿದ್ದ, 05 ತುಂಡು ಬೀಟೆ ಒಟ್ಟು=0.447ಎಂ3ನ್ನು ಕರ್ನಾಟಕ ಸರ್ಕಾರದ ಸಂಪತ್ತು ಆಗಿರುವುದರಿಂದ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ **ದಿ:05-03-2011** ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30(ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತದೆ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ
ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಪಿ.ಆರ್.645

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೋ:ವಾಹನ:ವಿವ:08/10-11, ದಿನಾಂಕ:05-03-2011

ಉಪಸ್ಥಿತರು : ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ.,
ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಫಿರ್ಯಾಧಿದಾರರು : ವಲಯ ಅರಣ್ಯಾಧಿಕಾರಿ,
ಅಂಬ್ಲಿಗೊಳ ವಲಯ, ಅಂಬ್ಲಿಗೊಳ (ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)

ಆರೋಪಿಗಳು : ಪತ್ತೆಯಾಗಿಲ್ಲ.

ಭಾಧ್ಯತೆದಾರರು : ಯಾರೂ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿಲ್ಲ.

ಪ್ರಸ್ತಾವನೆ:-

ದಿ:06-07-2010 ರಂದು ಅಂಬ್ಲಿಗೊಳ ವಲಯದ, ಅಂಬ್ಲಿಗೊಳ ಶಾಖೆಯ ವನಪಾಲಕ ಮತ್ತು ಸಿಬ್ಬಂದಿಯವರು ಸಾಗರ ತಾ॥ ಆನಂದಪುರಂ ಹೋಬಳಿ ಕುಡಿಗೆರೆ ಗ್ರಾಮ ಸ.ನಂ. 120 ರಲ್ಲಿ ಗಸ್ತು ತಿರುಗುತ್ತಾ ಕುಡಿಗೆರೆ ಗ್ರಾಮದಿಂದ ಸಾವೇಹಕ್ಕಲು ಕಡೆಗೆ ಹೋಗುತ್ತಿರುವಾಗ ಬೆಳಿಗ್ಗೆ ಸುಮಾರು 5-00 ಗಂಟೆ ಸಮಯದಲ್ಲಿ ಒಂದು ವಾಹನ ಹೆಡ್ ಲೈಟ್ ಹಾಕಿಕೊಂಡು ಬರುತ್ತಿರುವುದನ್ನು ನೋಡಿ ತಪಾಸಣೆಗೆ ವಾಹನದ ಹತ್ತಿರ ಹೋಗಲು ವಾಹನದೊಳಗಿದ್ದ 4-5 ಜನ ಕಾಡಿನಲ್ಲಿ ಓಡಿ ಕೈಗೆ ಸಿಗದೇ ಪರಾರಿಯಾದರು. ವಾಹನದ ಬಳಿ ಬಂದು ಪರಿಶೀಲಿಸಿ ನೋಡಲಾಗಿ ಬಿಳಿ ಬಣ್ಣದ ಮಾರುತಿ ವ್ಯಾನ್ ನಂ:ಜಿಎ-01-ಎನ್-2892 ಆಗಿದ್ದು, ವಾಹನದೊಳಗಡೆ ಬೀಟೆ ನಾಟಾ 8 ಇದ್ದು, ಅದರ ಅಳತೆ 0.637 ಎಂ3 ಪ್ರಮಾಣವಿದ್ದು, ಈ ತುಂಡುಗಳನ್ನು ಗರಗಸದಿಂದ ಕೊಯ್ತ ಮಾಡಿದಾಗಿದ್ದು, ಇದನ್ನು ಮರಗಳ್ಳರು ಕಳ್ಳಸಾಗಾಣಿಕೆ ಮಾಡುತ್ತಿರುವಾಗ ಇಲಾಖೆಯವರನ್ನು ಕಂಡು ಬಿಟ್ಟು ಓಡಿರುತ್ತಾರೆ. ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ, ವಾಹನ ಮತ್ತು ಅರಣ್ಯ ಉತ್ಪನ್ನಗಳಿಗೆ ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತು ವರದಿಯೊಂದಿಗೆ ವಾಹನ ಮತ್ತು ವಾಹನದಲ್ಲಿದ್ದ ಅರಣ್ಯ ಉತ್ಪನ್ನವನ್ನು ಇಲಾಖಾ ಪರ ಜಪ್ತುಮಾಡಿ ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 24, 62, 71(ಎ), 104(ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969ರ ಉಪನಿಯಮ 144, 165ರ ಪ್ರಕಾರ ಅಂಬ್ಲಿಗೊಳ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ:35/10-11ನ್ನು ದಾಖಲಿಸಿ, ವಾಹನವನ್ನು ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿ ಇಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಆದೇಶವಾಗಿದೆ.

ಈ ಪ್ರಕರಣದಲ್ಲಿ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ಈ ನ್ಯಾಯಾಲಯಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸಿ, ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ವಾಹನದ ಬಿ ವರದಿಯನ್ನು ಈ ನ್ಯಾಯಾಲಯಕ್ಕೆ ಒದಗಿಸಲು The Director of Transport Commissioner, Panji Goa ಇವರಿಗೆ ನ್ಯಾಯಾಲಯದಿಂದ ಸಂ:ಬಿ3.ಅಮೊ.ವಾಹನ.ಸಿಅರ್.08/10-11ದಿ:07-07-2010 ರಂದು ಪತ್ರ ಬರೆದು ಕೋರಲಾಗಿದೆ. ಆದರೆ, ಅವರಿಂದ ಇಲ್ಲಿಯವರೆಗೂ ಈ ವಾಹನದ ಬಿ ವರದಿಯನ್ನು ಈ ನ್ಯಾಯಾಲಯಕ್ಕೆ ಒದಗಿಸಿರುವುದಿಲ್ಲ.

ಈ ನಡುವೆ ಈ ವಾಹನದ ಬಗ್ಗೆ ಹೆಚ್ಚಿನ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ 30 ದಿನಗಳ ಕಾಲಾವಕಾಶ ನೀಡಿ ಸಂಖ್ಯೆ:ಬಿ3:ಅಮೊ:ವಾಹನ:ಸಿಆರ್-22/10-11ದಿ:11-08-2010ರಂದುಪ್ರಕಟಣೆಯನ್ನು ಹೊರಡಿಸಿ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಹಾಗೂ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ರಾಜ್ಯ ಮಟ್ಟದ ಪ್ರಚಲಿತ ದೈನಿಕ ಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಗಿತ್ತು. ಅದರಂತೆ ದಿ:24-08-2010 ರಂದು ಸಾಗರ ವಾರ್ತಾ ದಿನಪತ್ರಿಕೆಯಲ್ಲಿ ಮತ್ತು ದಿ:02-09-2010ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರು ವಾಹನ ಮಾಲೀಕರಾಗಲೀ ಅಥವಾ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:26-02-2011ರಂದು ವಾದ ಮಂಡಿಸಿ ಈ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಕಳ್ಳ ಸಾಗಾಣಿಕೆ ಮಾಡುತ್ತಿರುವ ಸಮಯದಲ್ಲಿ ವಾಹನವನ್ನು ಅರಣ್ಯ ಉತ್ಪನ್ನದ ಸಮೇತ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ಜಪ್ತುಮಾಡಿ, ಪ್ರಥಮ ವರ್ತಮಾನ ವರದಿ, ಜಪ್ತಿ ವರದಿ, ಮಹಜರ್ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುತ್ತಾರೆ. ಇದರಿಂದ ಈ ವಾಹನದಲ್ಲಿ ಅರಣ್ಯ ಉತ್ಪನ್ನ ಕಳ್ಳ ಸಾಗಾಣಿಕೆ ಮಾಡಿದ ಬಗ್ಗೆ ಸಾಬೀತಾಗಿದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ ಮತ್ತು ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಪ್ರಕಟಗೊಂಡು 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ) ಕಾಯಿದೆ ಪ್ರಕಾರ ವಲಯ ಅರಣ್ಯಾಧಿಕಾರಿ, ಅಂಬ್ಲಿಗೊಳ ವಲಯ, ಇವರು ಜಪ್ತು ಮಾಡಿದ ವಾಹನ ಮಾರುತಿ ವ್ಯಾನ್ ಜಿಎ-01 ಎನ್-2892, ಮತ್ತು ಈ ವಾಹನದಲ್ಲಿದ್ದ ಜೀಟೆ ನಾಟಾ 08=0.637 ಎಂ3ನ್ನು ಕರ್ನಾಟಕ ಸರ್ಕಾರದ ಸಂಪತ್ತು ಆಗಿರುವುದರಿಂದ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ ದಿ:05-03-2011 ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30 (ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ
ಪಿ.ಆರ್.646 ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೊ:ವಾಹನ:ವಿವ:11/10-11, ದಿನಾಂಕ:05-03-2011

ಉಪಸ್ಥಿತರು : ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ.,
ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಫಿರ್ಯಾಧಿದಾರರು : ವಲಯ ಅರಣ್ಯಾಧಿಕಾರಿ,
ಶಿಕಾರಿಪುರ ವಲಯ, ಶಿಕಾರಿಪುರ (ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)

ಆರೋಪಿಗಳು : ಪತ್ತೆಯಾಗಿಲ್ಲ

ಬಾಧ್ಯತೆದಾರರು : ಯಾರೂ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿಲ್ಲ.

ಪ್ರಸ್ತಾವನೆ:-

ದಿ:24-07-2010 ರಂದು ಶಿಕಾರಿಪುರ ವಲಯದ ವಲಯ ಅರಣ್ಯಾಧಿಕಾರಿ ಮತ್ತು ಸಿಬ್ಬಂದಿಯವರು ಶಿಕಾರಿಪುರ ತಾಲ್ಲೂಕು ಕಾಳೆನಹಳ್ಳಿ ಸಮೀಪ ಬಸ್‌ನಿಲ್ದಾಣದ ಬಳಿ ಗಸ್ತು ಕಾಯುತ್ತಿರುವಾಗ ರಸ್ತೆಯಲ್ಲಿ ಬರುವ ಎಲ್ಲಾ ವಾಹನಗಳನ್ನು ತಪಾಸಣೆ ಮಾಡುತ್ತಿರುವಾಗ ಬೆಳಗಿನ ಜಾವ ಸುಮಾರು 4-00 ಗಂಟೆ ಸಮಯದಲ್ಲಿ ಆನಂದಪುರಂ ಕಡೆಯಿಂದ ಶಿಕಾರಿಪುರ ಕಡೆಗೆ ಒಂದು ನೀಲಿ ಬಣ್ಣದ ಮಾರುತಿ ವ್ಯಾನ್ ಜಿಎ-02-ಎ-9952 ಬರುತ್ತಿರುವುದನ್ನು ನಿಲ್ಲಿಸಲು ಬ್ಯಾಟರಿ ಬೆಳಕಿನಿಂದ ಸೂಚಿಸಿದರು. ನಿಲ್ಲಿಸದೇ ವೇಗವಾಗಿ ಮುಂದೆ ಸಾಗಿದಾಗ ಇಲಾಖಾ ವಾಹನದಲ್ಲಿ ಬೆನ್ನಟ್ಟಿ ವಾಹನವನ್ನು ಗಾಮ ಕ್ರಾಸ್ ಬಳಿ ನಿಲ್ಲಿಸಿ, ವಾಹನದಲ್ಲಿದ್ದ ಆಸಾಮಿಗಳು ಯಾರು ಕೈಗೆ ಸಿಗದೇ ಕತ್ತಲೆಯಲ್ಲಿ ಪರಾರಿಯಾದರು. ನಂತರ ವಾಹನ ಪರಿಶೀಲಿಸಲಾಗಿ, ಅದರೊಳಗಡೆ ಸಾಗುವಾನಿ 1 ಎಳೆ ಮತ್ತು ಸಾಗುವಾನಿ ನಾಟಾ 10=0.694 ಎಂ3 ಪ್ರಮಾಣವಿದ್ದು, ಈ ನಾಟಾಗಳ ಮೇಲೆ ಇಲಾಖೆಯ ಛಾಪಾದ ಗುರುತಿರಲಿಲ್ಲ. ಆದ್ದರಿಂದ ಇದು ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ, ವಾಹನ ಮತ್ತು ಅರಣ್ಯ ಉತ್ಪನ್ನಗಳಿಗೆ ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತು ವರದಿಯೊಂದಿಗೆ ವಾಹನ ಮತ್ತು ವಾಹನದಲ್ಲಿದ್ದ ಅರಣ್ಯ ಉತ್ಪನ್ನವನ್ನು ಇಲಾಖಾ ಪರ ಜಪ್ತುಮಾಡಿ ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 24, 50(ಕೆ), 62, 71(ಎ) ರಿಂದ (ಜಿ) ಮತ್ತು ಕರ್ನಾಟಕ ಅರಣ್ಯ ಕಾನೂನು 1969ರ ಉಪನಿಯಮ 144, 165ರ ಪ್ರಕಾರ ಶಿಕಾರಿಪುರ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ:18/10-11ನ್ನು ದಾಖಲಿಸಿ, ವಾಹನವನ್ನು ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಶೆಡ್ಡಿನಲ್ಲಿ ಸುರಕ್ಷತೆಗಾಗಿ ಇಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಆದೇಶವಾಗಿದೆ.

ವಲಯ ಅರಣ್ಯಾಧಿಕಾರಿ, ಶಿಕಾರಿಪುರ ವಲಯ, ಇವರು ಈ ಪ್ರಕರಣದಲ್ಲಿ ವಿಚಾರಣಾ ವರದಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಿ, ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ವಾಹನದ ಬಿ ವರದಿಯನ್ನು ಈ ನ್ಯಾಯಾಲಯಕ್ಕೆ ಒದಗಿಸಲು The Director of Transport Commissioner, Panji Goa ಇವರಿಗೆ ನ್ಯಾಯಾಲಯದ ಪತ್ರ ಸಂ:ಬಿ3.ಅಮೊ.ವಾಹನ.ಸಿಆರ್.11/10-11ದಿ:29-07-2010 ರಂದು ಪತ್ರ ಬರೆದು ಕೋರಲಾಗಿದೆ. ಆದರೆ, ಅವರಿಂದ ಇಲ್ಲಿಯವರೆಗೂ ಈ ವಾಹನ ಬಿ ಪ್ರತಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಿರುವುದಿಲ್ಲ.

ಈ ನಡುವೆ ಈ ವಾಹನದ ಬಗ್ಗೆ ಹೆಚ್ಚಿನ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ 30 ದಿನಗಳ ಕಾಲಾವಕಾಶ ನೀಡಿ ಸಂಖ್ಯೆ:ಬಿ3:ಅಮೊ:ವಾಹನ:ಸಿಆರ್-22/10-11ದಿ:11-08-2010ರಂದು ಪ್ರಕಟಣೆಯನ್ನು ಹೊರಡಿಸಿ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಹಾಗೂ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ರಾಜ್ಯ ಮಟ್ಟದ ಪ್ರಚಲಿತ ದೈನಿಕ ಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಗಿತ್ತು. ಅದರಂತೆ ದಿ:24-08-2010 ರಂದು ಸಾಗರ ವಾರ್ತಾ ದಿನಪತ್ರಿಕೆಯಲ್ಲಿ ಮತ್ತು ದಿ:02-09-2010ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರು ವಾಹನ ಮಾಲೀಕರಾಗಲೀ ಅಥವಾ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:26-02-2011 ರಂದು ವಾದ ಮಂಡಿಸಿ ಈ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಕಳ್ಳ ಸಾಗಾಣಿಕೆ ಮಾಡುತ್ತಿರುವ ಸಮಯದಲ್ಲಿ ವಾಹನವನ್ನು ಅರಣ್ಯ ಉತ್ಪನ್ನದ ಸಮೇತ ವಲಯ ಅರಣ್ಯಾಧಿಕಾರಿ, ಶಿಕಾರಿಪುರ ವಲಯ, ಇವರು ಜಪ್ತುಮಾಡಿ, ಪ್ರಥಮ ವರ್ತಮಾನ ವರದಿ, ಜಪ್ತಿ ವರದಿ, ಮಹಜರ್ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುತ್ತಾರೆ. ಇದರಿಂದ ಈ ವಾಹನದಲ್ಲಿ ಅರಣ್ಯ ಉತ್ಪನ್ನ ಕಳ್ಳ ಸಾಗಾಣಿಕೆ ಮಾಡಿದ ಬಗ್ಗೆ ಸಾಬೀತಾಗಿದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ ಮತ್ತು ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಪ್ರಕಟಗೊಂಡು 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಾಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ) ಕಾಯಿದೆ ಪ್ರಕಾರ ವಲಯ ಅರಣ್ಯಾಧಿಕಾರಿ, ಶಿಕಾರಿಪುರ ವಲಯ, ಇವರು ಜಪ್ತು ಮಾಡಿದ ವಾಹನ ಮಾರುತಿ ವ್ಯಾನ್ ಜಿಎ-02-ಎ-9952, (ಇಂಜಿನ್ ನಂಬರ್ ಕಾಣಿಸುತ್ತಿಲ್ಲ ಮತ್ತು ಛಾಸ್ಸಿಸ್ ನಂಬರ್ ST-91-IN-723463)ನ್ನು ಮತ್ತು ಈ ವಾಹನದಲ್ಲಿದ್ದ ಸಾಗುವಾನಿ ನಾಟಾ 10=0.694ಎಂ3, ಸಾಗುವಾನಿ ಎಳೆ 1 ಸಂಖ್ಯೆಯನ್ನು ಕರ್ನಾಟಕ ಸರ್ಕಾರದ ಸಂಪತ್ತು ಆಗಿರುವುದರಿಂದ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ ದಿ:05-03-2011 ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30 (ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ
ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಪಿ.ಆರ್.650

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ನ್ಯಾಯಾಲಯದಲ್ಲಿ

ಬಿ3:ಅಮೊ:ವಾಹನ:ವಿವ:14/10-11, ದಿನಾಂಕ:28-05-2011

ಉಪಸ್ಥಿತರು : ಶ್ರೀ ಮನೋಜ್ ಕುಮಾರ್ ತ್ರಿಪಾಠಿ, ಭಾ.ಅ.ಸೇ.,
ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಗ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಪಿರ್ಯಾಧಿದಾರರು : ವಲಯ ಅರಣ್ಯಾಧಿಕಾರಿ,
ಆನವಟ್ಟಿ ವಲಯ, ಆನವಟ್ಟಿ (ಮಾನ್ಗ ಸಹಾಯಕ ಸರ್ಕಾರಿ ಅಭಿಯೋಜಕರು, ಸಾಗರ)

ಆರೋಪಿಗಳು : ಪತ್ತೆಯಾಗಿಲ್ಲ

ಭಾದ್ಗತೆದಾರರು : ಯಾರೂ ಹಕ್ಕುಬಾಧ್ಗತೆಯ ಅರ್ಜಿ ಸಲ್ಲಿಸಿಲ್ಲ.

ಪ್ರಸ್ತಾವನೆ:-

ದಿ:04-08-2010 ರಂದು ಆನವಟ್ಟಿ ವಲಯದ ಜೆಟ್ಟದಕುರ್ಲಿ ಶಾಖೆಯ, ವನಪಾಲಕ ಮತ್ತು ಸಿಬ್ಬಂದಿಯವರು ಸೊರಬ ತಾ॥ ಆನವಟ್ಟಿ ಹೋಬಳಿ ಹಾಯ, ಜೆಟ್ಟದಕುರ್ಲಿ ರಸ್ತೆಯಲ್ಲಿ ರಾತ್ರಿ ಸುಮಾರು 11-00 ಗಂಟೆ ಸಮಯದಲ್ಲಿ ಗಸ್ತು ಮಾಡುತ್ತಾ, ತುಡ್ನೂರು ಮಾರ್ಗವಾಗಿ ಬರುತ್ತಿರುವಾಗ ಒಂದು ವಾಹನ ಬರುತ್ತಿರುವುದನ್ನು ನಿಲ್ಲಿಸಲು ಸೂಚಿಸಿದರೂ ನಿಲ್ಲಿಸದೇ ವೇಗವಾಗಿ ಮುಂದೆ ಹೋದಾಗ ಅದನ್ನು ಇಲಾಖಾ ಜೀಪಿನಲ್ಲಿ ಬೆನ್ನಟ್ಟಿ ಹೋದಾಗ ಸದರಿ ವಾಹನವು ಸಮನವಳ್ಳಿ ಗೊಲ್ಲರ ತಂಡಕ್ಕೆ ಹೋಗುವ ಕೆಸರು ರಸ್ತೆಯಲ್ಲಿ ನಿಲ್ಲಿಸಿ, ವಾಹನದಲ್ಲಿದ್ದ ಆಸಾಮಿಗಳು ಪರಾರಿಯಾಗಿರುತ್ತಾರೆ. ವಾಹನ ಮಾರುತಿ ಓಮ್ನಿ ಕೆಎ-27-ಎಂ-2092, ಛಾಸ್ಸಿಸ್ ನಂಬರ್ ಮತ್ತು ಇಂಜಿನ್ ನಂಬರ್ ಕಂಡುಬಂದಿರುವುದಿಲ್ಲ. ವಾಹನದೊಳಗಡೆ ಹಸಿಯಾದ ದಸ್ತಾವೇಜು ಇಲ್ಲದ ಮತ್ತು ಇಲಾಖಾ ಛಾಪಾದ ಗುರುತಿಲ್ಲದ ಸಾಗುವಾನಿ ನಾಟ 06=0.261ಎಂ3 ಮತ್ತು ಬೀಟೆ ನಾಟಾ 03=0.087ಎಂ3ಗಳಿದ್ದು, ಇದು

ಅಕ್ರಮ ಸಾಗಾಣಿಕೆ ಎಂದು ಪರಿಗಣಿಸಿ, ವಾಹನ ಮತ್ತು ಅರಣ್ಯ ಉತ್ಪನ್ನಗಳಿಗೆ ಪ್ರಥಮ ವರ್ತಮಾನ ವರದಿ, ಮಹಜರ್ ವರದಿ, ಜಪ್ತು ವರದಿಯೊಂದಿಗೆ ವಾಹನ ಮತ್ತು ವಾಹನದಲ್ಲಿದ್ದ ಅರಣ್ಯ ಉತ್ಪನ್ನವನ್ನು ಇಲಾಖಾ ಪರ ಜಪ್ತುಮಾಡಿ ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 24, 62, 71(ಎ), 104 (ಎ) ಮತ್ತು ಕರ್ನಾಟಕ ಅರಣ್ಯ ಕಾನೂನು 1969ರ ಉಪನಿಯಮ 144, 165ರ ಪ್ರಕಾರ ಆನವಟ್ಟಿ ವಲಯದ ಅರಣ್ಯ ಮೊಕದ್ದಮೆ ಸಂಖ್ಯೆ:50/10-11ನ್ನು ದಾಖಲಿಸಿ, ವಾಹನವನ್ನು ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಇವರ ಸಮಕ್ಷಮ ಹಾಜರ್ಪಡಿಸಿರುತ್ತಾರೆ. ನಂತರ ಈ ವಾಹನವನ್ನು ಸರ್ಕಾರಿ ನಾಟಾ ಸಂಗ್ರಹಾಲಯದಲ್ಲಿರುವ ವಾಹನ ಕಟ್ಟಿನಲ್ಲಿ ಸುರಕ್ಷತೆಗಾಗಿ ಇಡಲು ವಲಯ ಅರಣ್ಯಾಧಿಕಾರಿ, ಸರ್ಕಾರಿ ನಾಟಾ ಸಂಗ್ರಹಾಲಯ, ಸಾಗರ ಇವರ ಸುಪರ್ಧಿಗೆ ಕೊಡಲು ಆದೇಶವಾಗಿದೆ.

ಈ ಪ್ರಕರಣದಲ್ಲಿ ವಲಯ ಅರಣ್ಯಾಧಿಕಾರಿ, ಆನವಟ್ಟಿ ವಲಯ, ಇವರು ಈ ನ್ಯಾಯಾಲಯಕ್ಕೆ ವಿಚಾರಣಾ ವರದಿಯನ್ನು ಸಲ್ಲಿಸಿ, ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ವಾಹನದ ಬಿ ವರದಿಯನ್ನು ಈ ನ್ಯಾಯಾಲಯಕ್ಕೆ ಒದಗಿಸಲು ಪ್ರಾದೇಶಿಕ ಸಾರಿಗೆ ಅಧಿಕಾರಿ, ಹಾವೇರಿ ಇವರಿಗೆ ಈ ನ್ಯಾಯಾಲಯದಿಂದ ಸಂ:ಬಿ3.ಅಮೊ.ವಾಹನ.ಸಿಅರ್.14/10-11 ದಿ:07-08-2010 ರಂದು ಪತ್ರ ಬರೆದು ಕೋರಲಾಗಿದೆ. ಅದಕ್ಕೆ ಹಾವೇರಿ ಸಾರಿಗೆ ಅಧಿಕಾರಿ ರವರ ಸಂ:ಪ್ರಾಸಾಕ.ಹಾ.ಕೆಎ-27-ಎಂ-2092 ದಿ:12-08-2010ರ ಪತ್ರದಲ್ಲಿ ಈ ವಾಹನದ ತಿರುವಳಿಯನ್ನು ದಿ:18-01-2010 ರಂದು ಸಾರಿಗೆ ಅಧಿಕಾರಿ, ಸಾಗರ ಇವರಿಗೆ ಕಳುಹಿಸಿದರ ಬಗ್ಗೆ ವರದಿಸಿರುತ್ತಾರೆ. ಇವರು ತಿಳಿಸಿದಂತೆ ಸಾರಿಗೆ ಅಧಿಕಾರಿ, ಸಾಗರ ಇವರಿಗೆ ಬಿ3.ಅಮೊ.ವಾಹನ.ವಿವ.14/10-11 ದಿ:01-10-2010 ರಂದು ಪತ್ರ ಬರೆದು ಈ ವಾಹನದ ಬಿ ಎಕ್ಸ್‌ಟ್ರ್ಯಾಕ್ಟ್‌ನ್ನು ಈ ನ್ಯಾಯಾಲಯಕ್ಕೆ ಒದಗಿಸಲು ಕೋರಲಾಗಿತ್ತು. ಆದರೆ, ಅವರಿಂದ ಇಲ್ಲಿಯವರೆಗೂ ಈ ವಾಹನ ಬಿ ವರದಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸಿರುವುದಿಲ್ಲ. ಈ ವಾಹನ ಮುಟ್ಟುಗೋಲು ಹಾಕಿಕೊಂಡ ನಂತರ ಆರ್.ಸಿ. ಮಾಲೀಕರು ನ್ಯಾಯಾಲಯದ ಮೊರೆ ಹೋದಲ್ಲಿ ಅದಕ್ಕೆ ಸಾರಿಗೆ ಅಧಿಕಾರಿ, ಸಾಗರ ಇವರೇ ನೇರ ಹೊಣೆಗಾರರಾಗಿರುತ್ತಾರೆ.

ಈ ನಡುವೆ ಈ ವಾಹನದ ಬಗ್ಗೆ ಹೆಚ್ಚಿನ ಪ್ರಚಾರಕ್ಕಾಗಿ ಈ ನ್ಯಾಯಾಲಯದಿಂದ 30 ದಿನಗಳ ಕಾಲಾವಕಾಶ ನೀಡಿ ಸಂಖ್ಯೆ:ಬಿ3:ಅಮೊ:ವಾಹನ:ಸಿಆರ್-22/10-11ದಿ:11-08-2010ರಂದುಪ್ರಕಟಣೆಯನ್ನು ಹೊರಡಿಸಿ ಪ್ರತಿಯನ್ನು ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ವಿಭಾಗ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಹಾಗೂ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸಿ ರಾಜ್ಯ ಮಟ್ಟದ ಪ್ರಚಲಿತ ದೈನಿಕ ಪತ್ರಿಕೆಯಲ್ಲಿ ಪ್ರಕಟಿಸಲು ಕೋರಲಾಗಿತ್ತು. ಅದರಂತೆ ದಿ: 24-08-2010 ರಂದು ಸಾಗರ ವಾರ್ತಾ ದಿನಪತ್ರಿಕೆಯಲ್ಲಿ ಮತ್ತು ದಿ:02-09-2010ರಂದು ರಾಜ್ಯ ಗೆಜೆಟ್ ಪತ್ರಿಕೆಯಲ್ಲಿ ಪ್ರಕಟಗೊಂಡು 30 ದಿನಗಳಾದರು ವಾಹನ ಮಾಲೀಕರಾಗಲೀ ಅಥವಾ ಅವರ ಪರ ವಕೀಲರಾಗಲೀ ಈ ನ್ಯಾಯಾಲಯಕ್ಕೆ ಹಕ್ಕುಬಾಧ್ಯತೆಯ ಅರ್ಜಿ ಸಲ್ಲಿಸಿರುವುದಿಲ್ಲ.

ಸಹಾಯಕ ಸರ್ಕಾರಿ ಅಭಿಯೋಜಕರು ದಿ:26-02-2011ರಂದು ವಾದ ಮಂಡಿಸಿ ಈ ವಾಹನದಲ್ಲಿ ಅರಣ್ಯ ಉತ್ಪನ್ನವನ್ನು ಕಳ್ಳ ಸಾಗಾಣಿಕೆ ಮಾಡುತ್ತಿರುವ ಸಮಯದಲ್ಲಿ ವಾಹನವನ್ನು ಅರಣ್ಯ ಉತ್ಪನ್ನದ ಸಮೇತ ವಲಯ ಅರಣ್ಯಾಧಿಕಾರಿ, ಆನವಟ್ಟಿ ವಲಯ, ಇವರು ಜಪ್ತುಮಾಡಿ, ಪ್ರಥಮ ವರ್ತಮಾನ ವರದಿ, ಜಪ್ತಿ ವರದಿ, ಮಹಜರ್ ವರದಿಯನ್ನು ಈ ನ್ಯಾಯಾಲಯಕ್ಕೆ ಹಾಜರ್ಪಡಿಸಿರುತ್ತಾರೆ. ಇದರಿಂದ ಈ ವಾಹನದಲ್ಲಿ ಅರಣ್ಯ ಉತ್ಪನ್ನ ಕಳ್ಳ ಸಾಗಾಣಿಕೆ ಮಾಡಿದ ಬಗ್ಗೆ ಸಾಬೀತಾಗಿದೆ. ಆದ್ದರಿಂದ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲು ಕೋರಿರುತ್ತಾರೆ.

ಈ ಪ್ರಕರಣದ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ, ಅಭಿಯೋಜಕರ ವಾದವನ್ನು ಕೇಳಿದೆ ಮತ್ತು ಈ ವಾಹನದ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಿರುತ್ತದೆ. ಈ ಪ್ರಕಟಣೆಯು ರಾಜ್ಯ ಗೆಜೆಟ್‌ನಲ್ಲಿ ಪ್ರಕಟಗೊಂಡು 30 ದಿನಗಳಾದರೂ ಯಾರೂ ಹಕ್ಕು ಬಾಧ್ಯತೆಯ ಅರ್ಜಿಯನ್ನು ಈ ನ್ಯಾಯಾಲಯಕ್ಕೆ ಸಲ್ಲಿಸದೇ ಇದ್ದುದ್ದರಿಂದ ಈ ಪ್ರಕರಣದ ವಿದ್ಯಮಾನಗಳನ್ನು ಅರಿತು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

ಆದೇಶ

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಶ್ರೀ ಮನೋಜ್ ಕುಮಾರ ತ್ರಿಪಾಠಿ, ಭಾ.ಅ.ಸೇ., ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ ಆದ ನಾನು, ಕರ್ನಾಟಕ ಅರಣ್ಯ ಕಾಯಿದೆ 1963 ಸೆಕ್ಷನ್ 71(ಎ) ರಿಂದ (ಜಿ) ಕಾಯಿದೆ ಪ್ರಕಾರ ವಲಯ ಅರಣ್ಯಾಧಿಕಾರಿ, ಆನವಟ್ಟಿ ವಲಯ, ಇವರು ಜಪ್ತು ಮಾಡಿದ ವಾಹನ ಮಾರುತಿ ವ್ಯಾನ್ ಕೆಎ-27-ಎಂ-2092, (ಇಂಜಿನ್ ನಂಬರ್ ಮತ್ತು ಛಾಸ್ಸಿಸ್ ನಂಬರ್ ಕಂಡುಬಂದಿರುವುದಿಲ್ಲ)ನ್ನು ಮತ್ತು ಈ ವಾಹನದಲ್ಲಿದ್ದ ಸಾಗುವಾನಿ ನಾಟಾ 06=0.261 ಎಂ3, ಮತ್ತು ಬೀಟೆ ನಾಟಾ 03=0.087 ಎಂ3ನ್ನು ಕರ್ನಾಟಕ ಸರ್ಕಾರದ ಸಂಪತ್ತು ಆಗಿರುವುದರಿಂದ ಅಂತಿಮವಾಗಿ ಮುಟ್ಟುಗೋಲು ಹಾಕಿಕೊಂಡಿರುತ್ತೇನೆ. ಮುಟ್ಟುಗೋಲು ಹಾಕಿಕೊಂಡ ವಾಹನ ಮತ್ತು ಅರಣ್ಯ ಉತ್ಪನ್ನವನ್ನು ಸರ್ಕಾರಕ್ಕೆ ಅನುಕೂಲಕರವಾಗಿ ವಿಲೇ ಮಾಡಲು ಆದೇಶಿಸಿದ್ದೇನೆ. ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕಯಂತ್ರದಲ್ಲಿ ಮುದ್ರಿಸಿ, ನಂತರ ಸರಿಪಡಿಸಿ ದಿ:28-05-2011 ರಂದು ನನ್ನ ಸಹಿ ಹಾಗೂ ಮೊಹರಿನೊಂದಿಗೆ ತೆರೆದ ನ್ಯಾಯಾಲಯದಲ್ಲಿ ಆದೇಶಿಸಿದ್ದೇನೆ. ಈ ಆದೇಶ ಹೊರಡಿಸಿದ 30 (ಮೂವತ್ತು) ದಿನಗಳ ಒಳಗಾಗಿ ಯಾರು ಮೇಲ್ಮನವಿ ಸಲ್ಲಿಸದೇ ಹೋದಲ್ಲಿ ಇದೇ ಅಂತಿಮ ಆದೇಶವಾಗಿರುತ್ತದೆ.

ಅಧಿಕೃತ ಅಧಿಕಾರಿ ಹಾಗೂ ಉಪ ಅರಣ್ಯ
ಸಂರಕ್ಷಣಾಧಿಕಾರಿ, ಸಾಗರ ವಿಭಾಗ, ಸಾಗರ.

ಪಿ.ಆರ್.651

ಕೃಷಿ ಮಾರಾಟ ಇಲಾಖೆ

ಕೃಷಿ ಮಾರಾಟ ನಿರ್ದೇಶಕರ ಕಛೇರಿ, ನಂ.16, 11ನೇ ರಾಜಭವನ ರಸ್ತೆ, ಪಿ.ಬಿ.ನಂ.5309, ಬೆಂಗಳೂರು

ಅಧಿಸೂಚನೆ

ಸಂಖ್ಯೆ: ಕೃಮಾಇ/26/ಚುನಾವ/2005, ಬೆಂಗಳೂರು, ದಿನಾಂಕ:30/31.05.2010

ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966ರ ಕಲಂ 11ರ ಉಪ ಪ್ರಕರಣ (1)(viii)ರಲ್ಲಿನ ಅಧಿಕಾರದ ಮೇರೆಗೆ ಕರ್ನಾಟಕದಲ್ಲಿನ ಕೃಷಿ ಮಾರಾಟ ಇಲಾಖೆಯ ನಿರ್ದೇಶಕನಾದ ವಿ.ಬಿ. ಪಾಟೀಲ್ ಆದ ನಾನು ಕಛೇರಿಯ ಅಧಿಸೂಚನೆ ಸಂಖ್ಯೆ: ಕೃಮಾಇ/26/ಚುನಾವ/2005, ದಿನಾಂಕ:25.10.2010ರಲ್ಲಿ ಗಂಗಾವತಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಮಾಡಿದ್ದ ಇಲಾಖಾ ಪ್ರತಿನಿಧಿ ನಾಮನಿರ್ದೇಶನವನ್ನು ರದ್ದುಗೊಳಿಸಿ. ಈ ಕೆಳಕಂಡ ಅಧಿಕಾರಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಇಲಾಖಾ ಪ್ರತಿನಿಧಿ ಸದಸ್ಯರನ್ನಾಗಿ ನಾಮಕರಣ ಮಾಡಿದ್ದೇನೆ.

ಕ್ರಮ ಸಂಖ್ಯೆ	ಜಿಲ್ಲೆಯ ಹೆಸರು	ಸಮಿತಿಯ ಹೆಸರು	ಸದಸ್ಯರನ್ನಾಗಿ ನಾಮಕರಣ ಮಾಡಲಾಗಿರುವ ಅಧಿಕಾರಿ
1.	ಕೊಪ್ಪಳ	ಗಂಗಾವತಿ	ಕಾರ್ಯದರ್ಶಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ರಾಯಚೂರು.

ವಿ.ಬಿ. ಪಾಟೀಲ್
ನಿರ್ದೇಶಕರು.

ಪಿ.ಆರ್.579

ಕರ್ನಾಟಕ ವಿಧಾನ ಪರಿಷತ್ತು

ವಿಧಾನ ಪರಿಷತ್ತಿನ ಸಚಿವಾಲಯ, ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನಸೌಧ, ಬೆಂಗಳೂರು-560 001

ಅಧಿಸೂಚನೆ

ಸಂಖ್ಯೆ: ಕವಿಪ/ಶಾರಶಾ/424/115ನೇ ಅ/11, ಬೆಂಗಳೂರು, ದಿನಾಂಕ:07.06.2011

2ನೇ ಜೂನ್, 2011ರ ಗುರುವಾರದಂದು ಪ್ರಾರಂಭವಾದ ಕರ್ನಾಟಕ ವಿಧಾನ ಪರಿಷತ್ತಿನ ನೂರ ಹದಿನೈದನೆಯ ಅಧಿವೇಶನವನ್ನು 7ನೇ ಜೂನ್, 2011ರ ಮಂಗಳವಾರದಂದು ಅನಿರ್ದಿಷ್ಟ ಕಾಲದವರೆಗೆ ಮುಂದೂಡಲಾಯಿತು.

ವಿ. ಶ್ರೀಶ್
ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.

KARNATAKA LEGISLATIVE COUNCIL

Legislative Council Secretariat, P.B.No.5079, Vidhana Soudha, Bangalore-560 001

NOTIFICATION

No.KLC/LGC/424/115th Session/11, Bangalore, Dated:07.06.2011

The Hundred and Fifteenth Session of Karnataka Legislative Council which commenced on Thursday, the 02nd June, 2011 was adjourned sine-die on Tuesday, the 7th June, 2011.

V. SHREESH
Secretary,
Karnataka Legislative Council.

PR-642

ಕರ್ನಾಟಕ ವಿಧಾನಸಭೆ

ವಿಧಾನಸಭೆಯ ಸಚಿವಾಲಯ, ಅಂಚೆ ಪೆಟ್ಟಿಗೆ ನಂ.5074, ವಿಧಾನಸೌಧ, ಬೆಂಗಳೂರು-560 233

ಸಂಖ್ಯೆ: ವಿಸಸ/ಶಾರಶಾ/24/ಸಿಎ/2011, ಬೆಂಗಳೂರು, ದಿನಾಂಕ:03.06.2011

ವಿಷಯ: ವಿಧಾನಸಭಾ ಸದಸ್ಯರ ವಿಳಾಸ ಬದಲಾವಣೆ.

ಹೊಸದುರ್ಗ ವಿಧಾನಸಭಾ ಕ್ಷೇತ್ರದ ಮಾನ್ಯ ಸದಸ್ಯರಾದ ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು ಕೆಳಕಂಡಂತೆ ತಮ್ಮ ವಿಳಾಸವನ್ನು ಬದಲಾಯಿಸಿರುತ್ತಾರೆ.

ಶ್ರೀ ಗೂಳಿಹಟ್ಟಿ ಡಿ. ಶೇಖರ್,

ವಿಧಾನಸಭಾ ಸದಸ್ಯರು, ನಂ.47, ಅಚ್ಚಯ್ಯ ಲೇಔಟ್, 2ನೇ ಕ್ರಾಸ್, ಆರ್.ಎಂ.ವಿ. ಎಕ್ಸ್‌ಟೆನ್‌ಷನ್ ವಾರ್ಡ್ ನಂ.35, ಸದಾಶಿವನಗರ (ಮೇಕ್ರಿ ಸರ್ಕಲ್ ಹತ್ತಿರ), ಬೆಂಗಳೂರು.

ಆದಕಾರಣ, ಮಾನ್ಯ ಸದಸ್ಯರಿಗೆ ಇನ್ನು ಮುಂದೆ ಕಳುಹಿಸಲಾಗುವ ಎಲ್ಲಾ ಕಾಗದ ಪತ್ರಗಳನ್ನು ಮೇಲ್ಕಂಡ ವಿಳಾಸಕ್ಕೆ ಕಳುಹಿಸಿಕೊಡಬೇಕೆಂದು ಕೋರಲು ನಿರ್ದೇಶಿತನಾಗಿದ್ದೇನೆ.

ಕೆ.ಸಿ. ಗೋಪಿಕೃಷ್ಣ
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ.

ಪಿ.ಆರ್.605

ಕರ್ನಾಟಕ ವಿಧಾನಸಭೆ

ವಿಧಾನಸಭೆಯ ಸಚಿವಾಲಯ, ಅಂಚೆ ಪೆಟ್ಟಿಗೆ ನಂ.5074, ವಿಧಾನಸೌಧ, ಬೆಂಗಳೂರು-560 233

ಸಂಖ್ಯೆ: ವಿಸಸ/ಶಾರಶಾ/24/ಸಿಎ/2011, ಬೆಂಗಳೂರು, ದಿನಾಂಕ:02.06.2011

ವಿಷಯ: ವಿಧಾನಸಭಾ ಸದಸ್ಯರ ವಿಳಾಸ ಬದಲಾವಣೆ.

ಕನಕಗಿರಿ ವಿಧಾನಸಭಾ ಕ್ಷೇತ್ರದ ಮಾನ್ಯ ಸದಸ್ಯರಾದ ಶ್ರೀ ಶಿವರಾಜ್ ಎಸ್. ತಂಗಡಗಿ ಅವರು ಕೆಳಕಂಡಂತೆ ತಮ್ಮ ವಿಳಾಸವನ್ನು ಬದಲಾಯಿಸಿರುತ್ತಾರೆ.

ಶ್ರೀ ಶಿವರಾಜ್ ಎಸ್. ತಂಗಡಗಿ,

ವಿಧಾನಸಭಾ ಸದಸ್ಯರು, ನಂ.456, 5ನೇ ಮುಖ್ಯರಸ್ತೆ, 7ನೇ ಅಡ್ಡರಸ್ತೆ, ಹೆಚ್.ಎ.ಜಿ., ಆರ್.ಎಂ.ವಿ. 2ನೇ ಹಂತ, ಬೆಂಗಳೂರು.

ಆದಕಾರಣ, ಮಾನ್ಯ ಸದಸ್ಯರಿಗೆ ಇನ್ನು ಮುಂದೆ ಕಳುಹಿಸಲಾಗುವ ಎಲ್ಲಾ ಕಾಗದ ಪತ್ರಗಳನ್ನು ಮೇಲ್ಕಂಡ ವಿಳಾಸಕ್ಕೆ ಕಳುಹಿಸಿಕೊಡಬೇಕೆಂದು ಕೋರಲು ನಿರ್ದೇಶಿತನಾಗಿದ್ದೇನೆ.

ಕೆ.ಸಿ. ಗೋಪಿಕೃಷ್ಣ
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ.

ಪಿ.ಆರ್.606

ಕರ್ನಾಟಕ ವಿಧಾನಸಭೆ

ವಿಧಾನಸಭೆಯ ಸಚಿವಾಲಯ, ಅಂಚೆ ಪೆಟ್ಟಿಗೆ ನಂ.5074, ವಿಧಾನಸೌಧ, ಬೆಂಗಳೂರು-560 233

ಸಂಖ್ಯೆ: ವಿಸಸ/ಶಾರಶಾ/24/ಸಿಎ/2011, ಬೆಂಗಳೂರು, ದಿನಾಂಕ:01.06.2011

ವಿಷಯ: ವಿಧಾನಸಭಾ ಸದಸ್ಯರ ವಿಳಾಸ ಬದಲಾವಣೆ.

ಚಾಮರಾಜ ವಿಧಾನಸಭಾ ಕ್ಷೇತ್ರದ ಮಾನ್ಯ ಸದಸ್ಯರಾದ ಶ್ರೀ ಹೆಚ್.ಎಸ್. ಶಂಕರಲಿಂಗೇಗೌಡ ಅವರು ಕೆಳಕಂಡಂತೆ ತಮ್ಮ ವಿಳಾಸವನ್ನು ಬದಲಾಯಿಸಿರುತ್ತಾರೆ.

ಶ್ರೀ ಹೆಚ್.ಎಸ್. ಶಂಕರಲಿಂಗೇಗೌಡ

ವಿಧಾನಸಭಾ ಸದಸ್ಯರು, ನಂ.85, 'ನಾಗಲಕ್ಷ್ಮಿ ಶಂಕರಾಲಯ' ಸಾಹುಕಾರ ಚನ್ನಯ್ಯ ರಸ್ತೆ, ಟಿ.ಕೆ. ಬಡಾವಣೆ, ಮೈಸೂರು.

ಆದಕಾರಣ, ಮಾನ್ಯ ಸದಸ್ಯರಿಗೆ ಇನ್ನು ಮುಂದೆ ಕಳುಹಿಸಲಾಗುವ ಎಲ್ಲಾ ಕಾಗದ ಪತ್ರಗಳನ್ನು ಮೇಲ್ಕಂಡ ವಿಳಾಸಕ್ಕೆ ಕಳುಹಿಸಿಕೊಡಬೇಕೆಂದು ಕೋರಲು ನಿರ್ದೇಶಿತನಾಗಿದ್ದೇನೆ.

ಕೆ.ಸಿ. ಗೋಪಿಕೃಷ್ಣ
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನಸಭೆ.

ಪಿ.ಆರ್.607

ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಯವರ ಕಛೇರಿ, ಉತ್ತರ ಕನ್ನಡ, ಕಾರವಾರ

ಪ್ರಕಟಣೆ

ಸಂಖ್ಯೆ: ಬಿಸಿಎಂ:ಅ.ಸ.:ಕಾನೂನು:ಸಿಆರ್-11:2011-12, ದಿನಾಂಕ:20.06.2011

ವಿಷಯ: 2011-12ನೇ ಸಾಲಿನಲ್ಲಿ ಮತೀಯ ಅಲ್ಪಸಂಖ್ಯಾತರ ಕಾನೂನು ಪದವೀಧರರಿಗೆ ತರಬೇತಿ ನೀಡುವ ಕುರಿತು.

2011-12ನೇ ಸಾಲಿನಲ್ಲಿ ಉತ್ತರ ಕನ್ನಡ ಜಿಲ್ಲೆಯ ಮತೀಯ ಅಲ್ಪಸಂಖ್ಯಾತರ ಕಾನೂನು ಪದವೀಧರರಿಗೆ ವಕೀಲ ವೃತ್ತಿ ಮತ್ತು ಜ್ಯೂಡಿಸಿಯಲ್ ಸೇವೆಗೆ ಸಂಬಂಧಿಸಿದಂತೆ ನ್ಯಾಯಾಡಳಿತದಲ್ಲಿ 4 ವರ್ಷಗಳ ತರಬೇತಿ ನೀಡುವ ಕುರಿತು ಮತೀಯ ಅಲ್ಪಸಂಖ್ಯಾತರ ಕಾನೂನು ಪದವೀಧರರಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಆಸಕ್ತ ಮತೀಯ ಅಲ್ಪಸಂಖ್ಯಾತರ ಕಾನೂನು ಪದವೀಧರರು ಈ ಕೆಳಕಂಡ ನಿಬಂಧನೆಗಳಿಗೊಳಪಟ್ಟು ಅರ್ಜಿಗಳನ್ನು ದಿನಾಂಕ:20.07.2011ರ ಒಳಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಧಿಕಾರಿಗಳು, ಉತ್ತರ ಕನ್ನಡ ಜಿಲ್ಲೆ, ಕಾರವಾರ ರವರಿಗೆ ಸಲ್ಲಿಸತಕ್ಕದ್ದು. ನಿಗದಿತ ಅರ್ಜಿ ನಮೂನೆಗಳನ್ನು ಈ ಕಛೇರಿಯಿಂದ ಪಡೆಯಬಹುದಾಗಿದೆ.

ನಿಬಂಧನೆಗಳು:

1) ಅಭ್ಯರ್ಥಿಯು ಕಾನೂನು ಪದವಿ ಪಾಸು ಮಾಡಿರಬೇಕು. ಮತೀಯ ಅಲ್ಪಸಂಖ್ಯಾತರ ವರ್ಗಕ್ಕೆ ಸೇರಿದವರಾಗಿರಬೇಕು. (ಮುಸ್ಲಿಂ, ಕ್ರಿಶ್ಚಿನ್, ಜೈನ್, ಬೌದ್ಧ ಮತ್ತು ಫಾರ್ಸಿ) ಸಮುದಾಯಕ್ಕೆ ಸೇರಿದವರಾಗಿದ್ದು ರಾಜ್ಯದ ನಿವಾಸಿಯಾಗಿರಬೇಕು. ವಕೀಲ ವೃತ್ತಿ ಅಭ್ಯಾಸ (ಪ್ರ್ಯಾಕ್ಟೀಸ್) ನಿಗದಿಪಡಿಸಿರುವ ಅರ್ಹತೆ ಹೊಂದಿದ್ದು ತರಬೇತಿಗೆ ಅರ್ಜಿ ಸಲ್ಲಿಸುವ ದಿನಾಂಕಕ್ಕಿಂತ ಮುಂಚಿತವಾಗಿ ಎರಡು ವರ್ಷದೊಳಗೆ ಬಾರ್ ಕೌನ್ಸಿಲ್‌ನಲ್ಲಿ ಹೆಸರು ನೊಂದಾಯಿಸಿಕೊಂಡಿರತಕ್ಕದ್ದು.

2) ಕಾನೂನು ತರಬೇತಿ ಭತ್ಯೆಗಾಗಿ ಜಿಲ್ಲೆಯಿಂದ ಎರಡು ಅಭ್ಯರ್ಥಿಗಳನ್ನು ಮಾತ್ರ ಆಯ್ಕೆ ಮಾಡಲಾಗುವುದು.

3) ಅಭ್ಯರ್ಥಿಗಳ ಪಾಲಕರು/ ಪೋಷಕರ ವಾರ್ಷಿಕ ಆದಾಯ ಮಿತಿ ರೂ.15,000/- ರ ಒಳಗಿರಬೇಕು. ಪ್ರವರ್ಗ-1 ರಡಿಯಲ್ಲಿ ಬರುವ ಮತೀಯ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಆದಾಯ ಮಿತಿ ಇರುವುದಿಲ್ಲ.

4) ತರಬೇತಿ ಅವಧಿಯು ನಾಲ್ಕು ವರ್ಷಗಳು ತರಬೇತಿ ಅವಧಿಯಲ್ಲಿ ಮಾಹೆಯಾನ ರೂ.1,000/- ದಂತೆ ತರಬೇತಿ ಭತ್ಯೆ ನೀಡಲಾಗುವುದು.

5) ತರಬೇತಿ ಸೌಲಭ್ಯ ಪಡೆಯಲಿಚ್ಚಿಸುವ ಅಭ್ಯರ್ಥಿಗಳ ವಯೋಮಿತಿ 30 ವರ್ಷ ಮೀರಿರಬಾರದು.

6) ಆಯ್ಕೆಯಾದ ಅಭ್ಯರ್ಥಿಗಳು ಜಿಲ್ಲಾ ಪಬ್ಲಿಕ್ ಪ್ರೊಸಿಕ್ಯೂಟರ್, ಸರ್ಕಾರಿ ವಕೀಲರು ಇತರೇ ಯಾವುದೇ 20 ವರ್ಷಗಳಿಗೆ ಕಡಿಮೆ ಇಲ್ಲದಂತೆ ಸೇವೆ ಸಲ್ಲಿಸಿರುವ ವಕೀಲರ ಹತ್ತಿರ ತರಬೇತಿಗೆ ನಿಯೋಜಿಸಲಾಗುವುದು.

7) ಆಯ್ಕೆಯಾದ ಅಭ್ಯರ್ಥಿಗಳು ಸುಳ್ಳು ಆದಾಯ, ಜಾತಿ ಪ್ರಮಾಣ ಪತ್ರ ನೀಡಿ ಆಯ್ಕೆಯಾಗಿರುವುದು ಕಂಡು ಬಂದಲ್ಲಿ ಶಿಕ್ಷೆಗೆ ಗುರಿಪಡಿಸಿ ತರಬೇತಿ ಭತ್ಯೆ ನೀಡಿರುವ ಒಟ್ಟು ಹಣದ ಜೊತೆಗೆ ಶೇಕಡಾ 10% ಬಡ್ಡಿ ಸೇರಿಸಿ ಕಂದಾಯ ಬಾಕಿ ರೂಪದಲ್ಲಿ ವಸೂಲು ಮಾಡಲಾಗುವುದು. ಅಪೂರ್ಣ ಹಾಗೂ ಸಕಾಲದಲ್ಲಿ ಬಾರದ ಅರ್ಜಿಗಳನ್ನು ಯಾವುದೇ ಕಾರಣ ನೀಡದೇ ತಿರಸ್ಕರಿಸಲಾಗುವುದು.

ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು
ಪಿ.ಆರ್.671 ಅಲ್ಪಸಂಖ್ಯಾತರ ಅಧಿಕಾರಿ, ಕಾರವಾರ.

ಗೌರವಾನ್ವಿತ 1ನೇ ಎ.ಸಿ.ಎಂ.ಎಂ. ನ್ಯಾಯಾಲಯ, ಬೆಂಗಳೂರು ನಗರ

ಪ್ರಕಟಣೆ

ದಿನಾಂಕ:08.06.2011

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಚಾಮರಾಜಪೇಟೆ ಪೊಲೀಸ್ ಠಾಣೆಯಲ್ಲಿ ವಾರಸುದಾರರು ಇಲ್ಲದ ಈ ಕೆಳಕಂಡ ವಾಹನಗಳನ್ನು ಮತ್ತು ಠಾಣಾ ಪ್ರಕರಣಗಳಲ್ಲಿ ಈ ಕೆಳಕಂಡ ವಾಹನಗಳನ್ನು ಅಮಾನತ್ತು ಪಡಿಸಿಕೊಂಡಿರುತ್ತದೆ. ಈ ಕೆಳಕಂಡ ಠಾಣಾ ಪ್ರಕರಣಗಳು ವಿಲೇವಾರಿಯಾಗಿ ವರ್ಷಗಳು ಕಳೆದರೂ ಸಹ ಸದರಿ ವಾಹನಗಳ ಮಾಲೀಕರುಗಳು ಇದುವರೆಗೆ ತಮ್ಮ ವಾಹನಗಳನ್ನು ಈ ನ್ಯಾಯಾಲಯದಿಂದ ಆದೇಶ ಪಡೆದು ತಮ್ಮ ಸುಪರ್ದಿಗೆ ಪಡೆದುಕೊಂಡಿರುವುದಿಲ್ಲ. ಸದರಿ ಈ ಕೆಳಕಂಡ ವಾಹನಗಳ ವಾರಸುದಾರರು ತಮ್ಮ ಮಾಲೀಕತ್ವದ ಬಗ್ಗೆ ಈ ಪ್ರಕಟಣೆ ಪ್ರಕಟವಾದ 30 ದಿನದೊಳಗಾಗಿ ವಾಹನಗಳ ಮಾಲೀಕತ್ವದ ಮೂಲ ದಾಖಲಾತಿಗಳೊಂದಿಗೆ ಈ ನ್ಯಾಯಾಲಯದಲ್ಲಿ ತಮ್ಮ ಮಾಲೀಕತ್ವವನ್ನು ರುಜುವಾತು ಪಡಿಸುವುದು. ನಿಗದಿಪಡಿಸಿದ ಅವಧಿಯೊಳಗಡೆ ಸದರಿ ವಾಹನಗಳ ಮಾಲಿಕತ್ವದ ಬಗ್ಗೆ ಈ ನ್ಯಾಯಾಲಯದಲ್ಲಿ ಹಾಜರಾಗಿ ರುಜುವಾತು ಪಡಿಸದಿದ್ದಲ್ಲಿ ನಿಯಮಾನುಸಾರ ಸಾರ್ವಜನಿಕರ ಬಹಿರಂಗ ಹರಾಜು ನಡೆಸಲಾಗುವುದು.

ವಾರಸುದಾರರು ಇಲ್ಲದೆ ಅಮಾನತ್ತು ಪಡಿಸಿಕೊಂಡಿರುವ ವಾಹನಗಳು

Sl. No.	Cmiss/PF No.	Type of Vehicle	Reg.No.	Cha.No.	Eng.No.
1.	Cmiss No.230/11 PF No.-49/11	T.V.S. XL	KA-01-S-2611	A101F527301	A101M50811
2.	Cmiss No.231/11 PF No.50/11	T.V.S. XL Super	KA-02-EV-3140	MD6218D1762D2757	0D1D61667941
3.	Cmiss No.232/11 PF No.51/11	Kinetic Honda	AP-31-Q-6099	NIFRE963411	959142NIERE
4.	Cmiss No.234/11 PF No.52/11	Kinetic Honda ZX	KA-05-Q-7757	N11MJ665334	658381NIEMJ
5.	Cmiss No.235/11 PF No.53/11	Kinetic Honda ZX	KA-04-X-39	NIFRM28414	021713NIERM
6.	Cmiss No.236/11 PFNo.54/11	Kinetic Honda ZX	KA-14-H-7186	IFMA583781	576526NIEMA
7.	Cmiss No.244/11 PF No.55/11	Bajaj Chethak	KA-05-EC-6415	06CBFM31722	C0EBFM8128381483
8.	Cmiss No.245/11 PF No.56/11	Kinetic Honda	KA-01-L-8843	NIFPF798415	792837NIEPF
9.	Cmiss No.246/11 PF No.57/11	Bajaj Chethak	CTO-4541	WO5D373854	W05E274775
(1) ಅರಣ್ಯ ವೀಕ್ಷಕ ಹುದ್ದೆಯ ನೇರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿರುವ ಎಲ್ಲಾ ವೃತ್ತಗಳಲ್ಲಿ ಒಂದೇ ದಿನಾಂಕ ಮತ್ತು ಒಂದೇ ಸಮಯದಲ್ಲಿ ನೇಮಕಾತಿಗೆ ಸಂಬಂಧಿಸಿದ ಎಲ್ಲಾ ಪರೀಕ್ಷೆಗಳನ್ನು ನಡೆಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಯಾವುದಾದರೂ ಒಂದೇ ವೃತ್ತಕ್ಕೆ ಸಂಬಂಧಿಸಿದ ಅರಣ್ಯ ವೀಕ್ಷಕ ಹುದ್ದೆಗೆ ಅರ್ಜಿ ಸಲ್ಲಿಸುವುದುಒಳಿತು.

(2) ಅಭ್ಯರ್ಥಿಗಳು ನೇಮಕಾತಿಯ ಎಲ್ಲಾ ಪರೀಕ್ಷೆಗಳಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು ಹಾಗೂ ಈ ಎಲ್ಲಾ ಪರೀಕ್ಷೆಗಳು ಒಂದಕ್ಕಿಂತ ಹೆಚ್ಚಿನ ದಿನ ನಡೆಯುವುದರಿಂದ ಈ ಬಗ್ಗೆ ಎಲ್ಲಾ ಪೂರ್ವಸಿದ್ದತೆ ಹಾಗೂ ತಂಗುವಿಕೆ ಬಗ್ಗೆ ಸ್ವಂತ ಖರ್ಚಿನಲ್ಲಿ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು.

7.3 ಲಿಖಿತ ಪರೀಕ್ಷೆ ಬರೆಯುವಭಾಷೆ:

ಲಿಖಿತ ಪರೀಕ್ಷೆ ಬರೆಯಲುಅಭ್ಯರ್ಥಿಗಳು ಕನ್ನಡ ಅಥವಾ ಆಂಗ್ಲ ಭಾಷೆಯನ್ನು ಆಯ್ದುಕೊಳ್ಳಬಹುದಾಗಿದೆ. ಅಭ್ಯರ್ಥಿಯು ಆಯ್ದುಕೊಂಡ ಪರೀಕ್ಷೆಬರೆಯುವ ಭಾಷೆಯನ್ನು ಅರ್ಜಿಯಸಂಬಂಧಿಸಿದ ಕಾಲಂನಲ್ಲಿ ತಪ್ಪದೆ ನಮೂದಿಸಬೇಕು. ಅಭ್ಯರ್ಥಿಯು ಅರ್ಜಿಯಲ್ಲಿ ಒಂದು ಸಾರಿ ನಮೂದಿಸಿರುವ ಲಿಖಿತ ಪರೀಕ್ಷೆಬರೆಯುವ ಭಾಷೆಯನ್ನು ಯಾವುದೇ ಕಾರಣಕ್ಕೂ ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

7.4 7ನೇ ತರಗತಿ ಹಾಗೂ ಅದಕ್ಕಿಂತ ಮೇಲ್ಪಟ್ಟ ವಿದ್ಯಾಭ್ಯಾಸದಲ್ಲಿ ಕನ್ನಡ ಭಾಷೆಯನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಅಭ್ಯಸಿಸದೇ ಇರುವ ಅಭ್ಯರ್ಥಿಗಳಿಗೆ ಕರ್ನಾಟಕ ಸಿವಿಲ್ ಸೇವೆಗಳು (ನೇಮಕಾತಿ) (ಕನ್ನಡ ಭಾಷಾ ಪರೀಕ್ಷೆ) ನಿಯಮಗಳು, 1984ಕ್ಕೆ ಪೂರಕವಾಗಿ ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 69 ಎಸ್‌ಸಿಆರ್ 84 ದಿನಾಂಕ 23-9-1985ರಲ್ಲಿ ಸೂಚಿಸಿದ ಪ್ರಕಾರಅಂತಹ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನವನ್ನು ಪರೀಕ್ಷಿಸಲು ನಿಗದಿಪಡಿಸಿದ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ನಂತರವೇ ಅಭ್ಯರ್ಥಿಗಳು ನೇಮಕಾತಿ ಹೊಂದಲು ಅರ್ಹರಾಗುತ್ತಾರೆ.ಕನ್ನಡ ಭಾಷಾ ಪರೀಕ್ಷೆಯಲ್ಲಿ ಅನುತ್ತೀರ್ಣರಾಗುವ ಅಭ್ಯರ್ಥಿಗಳನ್ನು ಮುಂದಿನ ಆಯ್ಕೆ ಪ್ರಕ್ರಿಯೆಯಿಂದ ಕೈಬಿಡಲಾಗುವುದು.

7.5ಕನ್ನಡ ಭಾಷಾ ಪರೀಕ್ಷೆಯ ಪಠ್ಯಕ್ರಮ

7.6.ಕನ್ನಡ ಭಾಷಾ ಪರೀಕ್ಷೆಯನ್ನು ಎರಡು ಹಂತದಲ್ಲಿ ನಡೆಸಲಾಗುತ್ತದೆ. ಇದರ ವಿವರ ಕೆಳಗೆ ನಮೂದಿಸಿದೆ.

ಸಮಯ: 1.00 ಗಂಟೆ

ಮೊದಲನೇ ಹಂತ–ಲಿಖಿತ ಪರೀಕ್ಷೆ:	ಲಿಖಿತ ಪರೀಕ್ಷೆಗೆ ಕನ್ನಡ ಶಾಲಾ ನಾಲ್ಕನೇ ತರಗತಿಯ ಕನ್ನಡ ಮುಖ್ಯ ಪಠ್ಯಪುಸ್ತಕ ಹಾಗೂ ವಿವಿಧ ಲೇಖಕರು ಬರೆದ ಕರ್ನಾಟಕ ವಯಸ್ಕರ ಶಿಕ್ಷಣ ಪರಿಷತ್ತು ಪ್ರಕಟಿಸಿರುವ "ಸತ್ಯಕ್ಕೆ ಬೆಲೆ ಕೊಟ್ಟ ಗೆಳೆಯರು" ಎಂಬ ಪಾಠದಿಂದ ಆರಂಭವಾಗುವ ಸಣ್ಣಕಥೆಗಳು ಇವುಗಳಿಂದ ಪ್ರಶ್ನೆಗಳನ್ನು ಕೊಡಲಾಗುವುದು.	90 ಅಂಕಗಳು
ಎರಡನೇ ಹಂತ–ಮೌಖಿಕ ಪರೀಕ್ಷೆ:	ಅ) ಮುದ್ರಿತ ಹಾಗೂ ಹಸ್ತ ಪ್ರತಿಗಳನ್ನು ಓದುವುದು. ಆ) ಅರ್ಜಿಗಳನ್ನು ಓದಿ ವಿವರಿಸುವುದು. ಇ) ಸಂಭಾಷಣೆ ನಡೆಸುವುದು.	10 ಅಂಕಗಳು

7.7ಈ ಕೆಳಗಿನ ಮಟ್ಟದಲ್ಲಿ ಮೂರು ವಿಧದಲ್ಲಿ ಕನಿಷ್ಠ ಅಂಕಗಳನ್ನು ಪಡೆದವರು ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರುವರೆಂದು ಪರಿಗಣಿಸಲಾಗುವುದು.

(ಅ) ಲಿಖಿತ ಪರೀಕ್ಷೆಯಲ್ಲಿ ಪಡೆಯತಕ್ಕ ಕನಿಷ್ಠ ಅಂಕಗಳು: 30

(ಆ) ಮೌಖಿಕ ಪರೀಕ್ಷೆಯಲ್ಲಿ ಪಡೆಯತಕ್ಕ ಕನಿಷ್ಠ ಅಂಕಗಳು: 3

(ಇ) ಲಿಖಿತ ಪರೀಕ್ಷೆಯಲ್ಲಿ ಮತ್ತು ಮೌಖಿಕ ಪರೀಕ್ಷೆಯಲ್ಲಿ ಒಟ್ಟಿಗೆ ಪಡೆಯತಕ್ಕ ಕನಿಷ್ಠ ಅಂಕಗಳು: 35

8.ಅಭ್ಯರ್ಥಿಗಳು ಲಿಖಿತ ಪರೀಕ್ಷೆಯಲ್ಲಿಗಳಿಸಿದ ಅಂಕಗಳ ಮೆರಿಟ್ ಆಧಾರದಲ್ಲಿ ಹಾಗೂ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮ, ಮೀಸಲಾತಿ ನಿಯಮಗಳ ಪ್ರಕಾರ ಪರಿಗಣಿಸಿ ಅಂತಿಮ ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.

9. ನೇಮಕಾತಿ ಹೊಂದಿದ ಅಭ್ಯರ್ಥಿಗಳ ಸ್ಥಳ ನಿಯುಕ್ತಿ:

ನೇಮಕಾತಿ ಹೊಂದಿದ ಅಭ್ಯರ್ಥಿಯು ಪ್ರಪ್ರಥಮವಾಗಿ ನೇಮಕ ಮಾಡಿದ ಸ್ಥಳದಲ್ಲಿ ಕನಿಷ್ಠ 5 ವರ್ಷಗಳ ಸೇವೆಯನ್ನು ಪೂರೈಸತಕ್ಕದ್ದು.

10. ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಲ್ಲಿಸಬೇಕಾದ ದಾಖಲೆ/ಪ್ರಮಾಣ ಪತ್ರಗಳ ವಿವರ: ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರಿ ಅರ್ಜಿ ಸಲ್ಲಿಸುವವರು ಜಾತಿ ಪ್ರಮಾಣ ಪತ್ರ ಹಾಗೂ ಆದಾಯ ಪ್ರಮಾಣ ಪತ್ರ, ಇತ್ಯಾದಿ ಮೀಸಲಾತಿ ಕುರಿತು ಪ್ರಮಾಣ ಪತ್ರಗಳನ್ನು ಈ ಕೆಳಕಂಡ ನಮೂನೆಗಳಲ್ಲಿ ಹೊಂದಿರಬೇಕು.

10.1 ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರವನ್ನು "ನಮೂನೆ–ಡಿ"ರಲ್ಲಿ ಪಡೆದಿರಬೇಕು.

10.2 ಪ್ರವರ್ಗ–I ಕ್ಕೆ ಸೇರಿದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರವನ್ನು "ನಮೂನೆ–ಇ" ರಲ್ಲಿಪಡೆದಿರಬೇಕು.

10.3 ಪ್ರವರ್ಗ–IIಎ, IIಬಿ, IIIಎ ಮತ್ತು IIIಬಿ. ಗೆ ಸೇರಿದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಆದಾಯ ಮತ್ತು ಜಾತಿ ಪ್ರಮಾಣ ಪತ್ರವನ್ನು "ನಮೂನೆ–ಎಫ್"ರಲ್ಲಿಪಡೆದಿರಬೇಕು.

ವಿಶೇಷ ಸೂಚನೆ:–"ನಮೂನೆ–ಎಫ್" ಪ್ರಮಾಣ ಪತ್ರವು ಅಧಿಸೂಚನೆಯ ದಿನಾಂಕಕ್ಕೆ ಐದು (5) ವರ್ಷಗಳಿಗಿಂತ ಹೆಚ್ಚು ಹಳೆಯ ಸಮಯದ್ದಾಗಿರಬಾರದು. ಅವಧಿ ಮೀರಿದ ಪ್ರಮಾಣ ಪತ್ರವನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

10.4 ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಯು ಸಂಬಂಧಪಟ್ಟ ತಹಶೀಲ್ದಾರ್‌ರಿಂದ "ನಮೂನೆ–3" ರಲ್ಲಿ ನೀಡಿರುವ ಪ್ರಮಾಣ ಪತ್ರವನ್ನುಪಡೆದಿರಬೇಕು.

10.5 ಮಾಜಿ ಸೈನಿಕ ಅಭ್ಯರ್ಥಿಗಳು ಸಂಬಂಧಪಟ್ಟ ಘಟಕದಿಂದ ಡಿಸ್‌ಚಾರ್ಜ್ ಹೊಂದಿದ ಬಗ್ಗೆ ಮೂಲ ಪ್ರಮಾಣ ಪತ್ರ ಮತ್ತು ಪೆನ್‌ಷನ್ ಪಡೆಯುತ್ತಿರುವ ಬಗ್ಗೆ ದಾಖಲೆ ಪತ್ರ ಪಡೆದಿರಬೇಕು ಹಾಗೂ ಮಾಜಿ ಸೈನಿಕ ಮೀಸಲಾತಿಗೆ ನಿಯಮಾನುಸಾರ ಅರ್ಹರೇ ಎಂಬ ಬಗ್ಗೆ ಪ್ರಮಾಣ ಪತ್ರವನ್ನು ಹತ್ತಿರದ ಸೈನಿಕ ಕಲ್ಯಾಣ ಹಾಗೂ ಪುನರ್ವಸತಿ ಇಲಾಖೆಯಿಂದ ಪಡೆದಿರಬೇಕು.

10.6 (ಅ) ಗ್ರಾಮೀಣ ಮೀಸಲಾತಿ ಕೋರುವಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ–I, IIಎ, IIಬಿ, IIIಎ ಮತ್ತು IIIಬಿ, ಸಾಮಾನ್ಯ ಅರ್ಹತೆಯಅಭ್ಯರ್ಥಿಗಳು 1ನೇ ತರಗತಿಯಿಂದ 7ನೇ ತರಗತಿಯವರೆಗೆ (ಎಲ್ಲಾ ವರ್ಷಗಳು)ಗ್ರಾಮೀಣ ಪ್ರದೇಶದ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಿದ ಬಗ್ಗೆ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರಿಂದ ನೀಡಲಾದ "ನಮೂನೆ–2"ನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳುಮೇಲುರುಜು ಮಾಡಿದ ಪ್ರಮಾಣ ಪತ್ರವನ್ನುಪಡೆದಿರಬೇಕು.

(ಆ) ಗ್ರಾಮೀಣ ಮೀಸಲಾತಿ ಕೋರಿರುವ ಸಾಮಾನ್ಯ ಅರ್ಹತೆಯ (General Merit) ಅಭ್ಯರ್ಥಿಗಳು ಮೇಲೆ 10.6(ಅ) ರಲ್ಲಿ ತಿಳಿಸಿರುವ "ನಮೂನೆ–2" ರ ಜೊತೆಗೆ ನಿಗದಿತ "ನಮೂನೆ–1" ರಲ್ಲಿ ಸಂಬಂಧಪಟ್ಟ ತಹಶೀಲ್ದಾರರಿಂದ ಅವರು ಮೇಲುಸ್ಥರ (Creamy Layer) ಪರಿಮಿತಿಯಲ್ಲಿ ಬರುವುದಿಲ್ಲವೆಂದು ದೃಢೀಕರಿಸಿರುವ ಪ್ರಮಾಣ ಪತ್ರ ಪಡೆದಿರಬೇಕು.

ವಿಶೇಷ ಸೂಚನೆ:– ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ–I, IIಎ, IIಬಿ, IIIಎ ಮತ್ತು IIIಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಆದಾಯ ಮತ್ತು ಜಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

10.7 ಕನ್ನಡ ಮಾಧ್ಯಮ ವರ್ಗೀಕರಣದಲ್ಲಿ ಮೀಸಲಾತಿ ಕೋರಿರುವ ಅಭ್ಯರ್ಥಿಗಳು 1ನೇ ತರಗತಿಯಿಂದ 7ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಬಗ್ಗೆ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಮಾಡಿಸಿ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿದ ಪ್ರಮಾಣ ಪತ್ರ ಪಡೆದಿರಬೇಕು.

10.8 ಅರಣ್ಯ ಪ್ರೇರಕರಾಗಿ ಅಧಿಸೂಚನೆ ದಿನಾಂಕಕ್ಕೆ ಐದು (5) ವರ್ಷಗಳ ಸೇವೆಯನ್ನು ಸಲ್ಲಿಸಿದ್ದು, ಪ್ರಸ್ತುತ ಅರಣ್ಯ ಪ್ರೇರಕರಾಗಿ ಮುಂದುವರೆಯುತ್ತಿರುವ ಅರಣ್ಯ ಪ್ರೇರಕರ ಬಗ್ಗೆ ಸಂಬಂಧಿಸಿದ ಸಾಮಾಜಿಕ ಅರಣ್ಯ ವಿಭಾಗಗಳ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಂದ ಪ್ರಮಾಣ ಪತ್ರವನ್ನುಪಡೆದಿರಬೇಕು.

10.9 ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳಿಗೆ ಮೀಸಲಾತಿ ಕೋರುವ ಅಭ್ಯರ್ಥಿಗಳು ಕುಷ್ಠರೋಗದಿಂದ ಗುಣಮುಖರಾಗಿರುವ ಬಗ್ಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ 19.11.2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನಿನಿ 2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಕುಷ್ಠರೋಗದಿಂದ ಗುಣಮುಖರಾಗಿರುವ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

10.10 ಕ್ರಮ ಸಂಖ್ಯೆ 1.2 ರಲ್ಲಿ ನಮೂದಿಸಿರುವ ಪರಿಶಿಷ್ಠ ಪಂಗಡಕ್ಕೆ ಸೇರಿದನಿಗದಿಪಡಿಸಿರುವ ಬುಡಕಟ್ಟು ಜನಾಂಗದಅಭ್ಯರ್ಥಿಗಳು 1ನೇ ತರಗತಿಯಿಂದ 7ನೇ ತರಗತಿಯವರೆಗೆ ಅಭ್ಯಸಿಸಿದಶಾಲೆಯ ಮುಖ್ಯೋಪಾಧ್ಯಾಯರಿಂದ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸುವುದು ಹಾಗೂ ವಾಸಸ್ಥಳದ ಬಗ್ಗೆ ಸಂಬಂಧಿಸಿದ ತಹಶೀಲ್ದಾರ್‌ರವರಿಂದ ದೃಢೀಕರಣ ಪತ್ರವನ್ನು ಪಡೆದು ಸಲ್ಲಿಸುವುದು.

11.0 **ಗಮನಿಸಬೇಕಾದ ಮುಖ್ಯ ಅಂಶಗಳು:**

11.1 **ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಯು ಆಯ್ಕೆಗೆ ಅರ್ಹತೆ ಪಡೆಯುವುದಿಲ್ಲ.**

11.2 ನಿಗದಿತ ಅರ್ಜಿಯಲ್ಲಿ ಚಿತ್ತು ಅಥವಾ ಹೊಡೆದು ಹಾಕುವುದು ಕೂಡ ಮಾಡಬಾರದು. ಹಾಗೇನಾದರೂ ಚಿತ್ತು ಆದಲ್ಲಿ, ಹೊಡೆದು ಹಾಕಿದಲ್ಲಿ ಅಥವಾ ಅರ್ಜಿಯನ್ನು ವಿರೂಪಗೊಳಿಸಿದ್ದಲ್ಲಿ ಮತ್ತೊಂದು ಅರ್ಜಿಯನ್ನು ತುಂಬಿ ಸಲ್ಲಿಸುವುದು ಅವಶ್ಯಕ. ಭರ್ತಿ ಮಾಡಿದ ಅರ್ಜಿಯಲ್ಲಿನ ವಿವರಗಳು ಸರಿಯಾಗಿದೆಯೇ ಎಂದು ಮನಗಂಡು ಆ ನಂತರ ಅರ್ಜಿಯನ್ನು ಸಲ್ಲಿಸುವುದು ಸೂಕ್ತ.

11.3 ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳಲು ಸೂಚಿಸಿದೆ.

11.4 ಅಭ್ಯರ್ಥಿಯು ಅರ್ಜಿಯನ್ನು ಭರ್ತಿ ಮಾಡುವಾಗ ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಬಾರದು. ಅಸ್ಪಷ್ಟ/ಅಪೂರ್ಣ/ತಪ್ಪು ಅಥವಾ ಸುಳ್ಳು ಮಾಹಿತಿ ನೀಡಿದ್ದಲ್ಲಿ ಅಭ್ಯರ್ಥಿಗಳೇ ಅದಕ್ಕೆ ನೇರ ಮತ್ತು ಸಂಪೂರ್ಣ ಜವಾಬ್ದಾರರಾಗುತ್ತಾರೆ. ಅಭ್ಯರ್ಥಿಗಳುನಿಗದಿತ ಅರ್ಜಿಯಲ್ಲಿ ನೀಡಿರುವ ಮಾಹಿತಿ/ವಿವರಗಳನ್ನು ಯಾವುದೇ ಹಂತದಲ್ಲಿಯೂ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ.ಆದ ಪ್ರಯುಕ್ತ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಈ ಕಚೇರಿಯ ಅಧಿಸೂಚನೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳು ಹಾಗೂ ಅರ್ಜಿ ಭರ್ತಿ ಮಾಡುವ ವಿಧಾನದ ಕುರಿತು ಸೂಚಿಸಿರುವ ಎಲ್ಲಾ ಅಂಶಗಳನ್ನು ಸರಿಯಾಗಿ ಅರ್ಥೈಸಿಕೊಂಡು, ಅರ್ಜಿಯನ್ನು ಸರಿಯಾಗಿ ಮತ್ತು ಸಮರ್ಪಕವಾಗಿ ಭರ್ತಿ ಮಾಡತಕ್ಕದ್ದು.

11.5 ಪ್ರವರ್ಗದ ಮೀಸಲಾತಿಯಲ್ಲಿ ಆಯ್ಕೆ ಬಯಸುವ ಅಭ್ಯರ್ಥಿಗಳು ಅರ್ಜಿಯಲ್ಲಿ ಪ್ರವರ್ಗದ ಕಾಲಂ ಅನ್ನು ಕಡ್ಡಾಯವಾಗಿ ನಮೂದಿಸಬೇಕು. ಈ ಕಾಲಂ ಅನ್ನು ಭರ್ತಿ ಮಾಡದೆ ಖಾಲಿ ಬಿಟ್ಟಲ್ಲಿ "ಸಾಮಾನ್ಯ ಅರ್ಹತೆ" ಎಂದು ಪರಿಗಣಿಸಲಾಗುವುದು. ಯಾವುದೇ ಹಂತದಲ್ಲಿ ಅಭ್ಯರ್ಥಿಯು ತಾನು ಹೊಂದಿರುವ ಪ್ರವರ್ಗದ ಕುರಿತು ಮಾಹಿತಿಯನ್ನು ಹೊಸದಾಗಿ ಸೇರ್ಪಡೆ ಮಾಡಲು ಅಥವಾ ಬದಲಾವಣೆ ಮಾಡಲು ಅವಕಾಶವಿಲ್ಲ.

11.6 ಅಂಚೆ ಮೂಲಕ ಅಥವಾ ಇನ್ನಿತರೆ ಯಾವುದೇ ವ್ಯವಸ್ಥೆ ಮೂಲಕ ನಿಗದಿಪಡಿಸಿದ ದಿನಾಂಕದ ನಂತರ ಸ್ವೀಕೃತವಾದ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ ಹಾಗೂ ಅರ್ಜಿಗಳು ಮೇಲೆ ತಿಳಿಸಿರುವ ವಿಳಾಸಕ್ಕೆ ತಲುಪಲು ವಿಳಂಬವಾದರೆ ಅಥವಾ ಸ್ವೀಕೃತವಾಗದೇ ಇರುವುದಕ್ಕೆ ಇಲಾಖೆಯು ಜವಾಬ್ದಾರಿಯಲ್ಲ.

11.7 ನಿಗದಿತ ನಮೂನೆಯಲ್ಲಿಲ್ಲದ ಅಥವಾ ಅಸ್ಪಷ್ಟ/ಅಪೂರ್ಣ ಮಾಹಿತಿ ಭರ್ತಿ ಮಾಡಿದ ಅರ್ಜಿಗಳನ್ನು ಅನರ್ಹ ಅರ್ಜಿಗಳೆಂದು ಪರಿಗಣಿಸಿ ತಿರಸ್ಕರಿಸಲಾಗುವುದು. ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ಭರ್ತಿ ಮಾಡದೆ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ವಂಚಿತರಾದಲ್ಲಿ ತತ್ಸಂಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

11.8 ಒಬ್ಬನೇ ಅಭ್ಯರ್ಥಿಯು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ತಾನು ಸಲ್ಲಿಸಿರುವ ಎಲ್ಲಾ ಅರ್ಜಿಗಳಲ್ಲಿಯೂ ಒಂದೇ ರೀತಿ ಮಾಹಿತಿಯನ್ನು ನೀಡಿದಲ್ಲಿ ಅಭ್ಯರ್ಥಿ ಸಲ್ಲಿಸಿರುವ ಯಾವುದಾದರೂ ಒಂದು ಅರ್ಜಿಯನ್ನು ಮಾತ್ರ ಪರಿಗಣಿಸಲಾಗುವುದು. ಈ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ.

11.9 ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚಿನ ಅರ್ಜಿ ಭರ್ತಿ ಮಾಡಿ ಬೇರೆ ಬೇರೆ ಅರ್ಜಿಗಳಲ್ಲಿ ವಿಭಿನ್ನವಾದ ಮಾಹಿತಿಗಳನ್ನು ನಮೂದಿಸಿದ್ದಲ್ಲಿ ಅಂತಹ ಅಭ್ಯರ್ಥಿಯು ಸಲ್ಲಿಸಿದ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

11.10 ಪ್ರಸ್ತುತ ಸರ್ಕಾರಿ (ಕೇಂದ್ರ ಸರ್ಕಾರ/ಕರ್ನಾಟಕ ರಾಜ್ಯ ಸರ್ಕಾರ/ಇತರೆ ರಾಜ್ಯಗಳು) ಹಾಗೂ ಸಂಸ್ಥೆಗಳಲ್ಲಿ ಅಥವಾ ಪ್ರಾಧಿಕಾರದಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಕಡ್ಡಾಯವಾಗಿ ಅನುಮತಿ ಪತ್ರವನ್ನು ಪಡೆದಿಟ್ಟುಕೊಂಡು ಅರಣ್ಯ ಇಲಾಖೆಯು ಆಪೇಕ್ಷಿಸಿದಾಗ ನೀಡತಕ್ಕದ್ದು.

11.11 ಯಾವುದೇ ಅಭ್ಯರ್ಥಿಯು ತನ್ನ ಆಯ್ಕೆಗೆ ಸಂಬಂಧಿಸಿದಂತೆ ಬಾಹ್ಯ ಒತ್ತಡ ತರಲು ಪ್ರಯತ್ನಿಸಿದಲ್ಲಿ ಅಂತಹ ಅಭ್ಯರ್ಥಿಯನ್ನು ಆಯ್ಕೆ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗುವುದು.

11.12 ಕರ್ನಾಟಕ ರಾಜ್ಯದ ಯಾವುದೇ ಸರ್ಕಾರಿ ಇಲಾಖೆ, ಕೇಂದ್ರ ಸರ್ಕಾರಿ ಇಲಾಖೆ ಅಥವಾ ಅರೆ ಸರ್ಕಾರಿ ಸ್ವಾಮ್ಯದ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

11.13 ಕಾನೂನು ಬಾಹಿರವೆಂದು ಘೋಷಿಸಲಾದ ಸಂಸ್ಥೆ/ಸಂಸ್ಥೆಗಳು ಅಥವಾ ಸಂಘದ/ಸಂಘಗಳ ಸದಸ್ಯರಾಗಿದ್ದರೆ ಅಥವಾ ಇನ್ನಾವುದೇ ರೀತಿಯಲ್ಲಿ ಅಂತಹ ಸಂಸ್ಥೆ/ಸಂಸ್ಥೆಗಳು ಅಥವಾ ಸಂಘ/ಸಂಘಗಳೊಂದಿಗೆ ನಿಕಟ ಸಂಪರ್ಕ ಹೊಂದಿದ್ದರೆ ಅಂತಹ ವ್ಯಕ್ತಿ ನೇಮಕಾತಿಗೆ ಅರ್ಹರಾಗುವುದಿಲ್ಲ.

11.14 ಅಭ್ಯರ್ಥಿಯು ಸಮಾಜಘಾತುಕ ಕೃತ್ಯಗಳಲ್ಲಿ ತೊಡಗಿ ಅಪರಾಧಿಯಾಗಿದ್ದರೆ ಅಂತಹ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

11.15 ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿಯರನ್ನು / ಪತಿಯರನ್ನು ಹೊಂದಿದ ಪುರುಷ / ಮಹಿಳೆ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೇ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

11.16 ಯಾವುದೇ ಅಭ್ಯರ್ಥಿಯು ಕೇಂದ್ರ ಅಥವಾ ಯಾವುದೇ ರಾಜ್ಯ ಸರ್ಕಾರ / ಸರ್ಕಾರಿ ಸಂಸ್ಥೆಗಳಿಗೆ ನಡೆಸುವ ಯಾವುದೇ ಪರೀಕ್ಷೆಗಳಿಗೆ ಅಥವಾ ಆಯ್ಕೆಗಳಿಗೆ ಹಾಜರಾಗಲು ತಾತ್ಕಾಲಿಕವಾಗಿ ಬಹಿಷ್ಕರಿಸಲ್ಪಟ್ಟಿದ್ದರೆ ಅಥವಾ ಖಾಯಂ ಆಗಿ ಅನರ್ಹಗೊಂಡಿದ್ದರೆ ಅಥವಾ ಬಹಿಷ್ಕರಿಸಲ್ಪಟ್ಟಿದ್ದರೆ, ಅಂತಹ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

11.17 ಅಭ್ಯರ್ಥಿಯು ನೇಮಕಾತಿ ಪರೀಕ್ಷೆಗೆ ಬೇರೊಬ್ಬ ವ್ಯಕ್ತಿಯನ್ನು ತನ್ನ ಪರವಾಗಿ ಕಳುಹಿಸಿದಲ್ಲಿ ಅಥವಾ ತಪ್ಪು ಮಾಹಿತಿಗಳನ್ನು ನಮೂದಿಸಿದಲ್ಲಿ ಅಥವಾ ಕೃತ್ರಿಮ ಅಥವಾ ತಿದ್ದಿದ ದಾಖಲಾತಿಗಳನ್ನು ಅಥವಾ ಅಸತ್ಯ ವಿವರಗಳನ್ನು ನೀಡಿದಲ್ಲಿ ಅಥವಾ ಸತ್ಯ ವಿಷಯಗಳನ್ನು ಮರೆಮಾಚಿದ ಅಥವಾ ಅನುಚಿತ ಮಾರ್ಗಗಳನ್ನು ಉಪಯೋಗಿಸಿದಲ್ಲಿ ಅಥವಾ ಪ್ರಯತ್ನಿಸಿದಲ್ಲಿ ಈ ನೇಮಕಾತಿಗೆ ಅವರನ್ನು ಅನರ್ಹರೆಂದು ಪರಿಗಣಿಸಲಾಗುವುದು ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ಉಪ ನಿಯಮ 20 ರಂತೆ ಅಪರಾಧಿ ವ್ಯವಹರಣೆಗೆ ಒಳಪಡುವರು.

11.18 ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ–ಎಸ್‌ಪಿಎಲ್–04–ಪಿಇಟಿ–2005 ದಿನಾಂಕ 31–3–2006 ರಂತೆ ಅಂಶದಾಯಿ ನಿವೃತ್ತಿ ಯೋಜನೆ (Contributory Pension Scheme) ಗೆ ಈ ನೇಮಕಾತಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಬದ್ಧರಾಗಿರುತ್ತಾರೆ.

11.19 ಲಿಖಿತ ಪರೀಕ್ಷೆಯ ಪ್ರಶ್ನೆ ಪತ್ರಿಕೆಯ ಬಗ್ಗೆ ಅಭ್ಯರ್ಥಿಗಳಿಗೆ ಯಾವುದೇ ಬಗೆಯ ಆಕ್ಷೇಪಣೆ ಇದ್ದಲ್ಲಿ ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಅಭ್ಯರ್ಥಿಗಳು ಆಯಾ ಪರೀಕ್ಷಾ ದಿನವೇ ಅಭ್ಯರ್ಥಿಯ ಹೆಸರು, ವಿಳಾಸ, ನೋಂದಣಿ ಸಂಖ್ಯೆ, ಆಕ್ಷೇಪಣೆಯ ವಿವರ, ಸಹಿ, ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ಸಂಬಂಧಿಸಿದ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಪ್ರಾದೇಶಿಕ ಪರೀಕ್ಷಕರು ಇವರಿಗೆ ಸಲ್ಲಿಸಿ ಅವರಿಂದ ಸ್ವೀಕೃತಿ (Acknowledgement)ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ.

11.20 ಆಯ್ಕೆ ಮತ್ತು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ಆಯ್ಕೆಗೆ ಪರಿಗಣಿಸಿರುವ ಅಂಶಗಳ ಬಗ್ಗೆ ವ್ಯತ್ಯಾಸ ಕಂಡು ಬಂದಲ್ಲಿ ಅಥವಾ ಆಕ್ಷೇಪಣೆ ಸಲ್ಲಿಕೆಯಾದಲ್ಲಿ, ಕೋರ್ಟು ತೀರ್ಪುಗಳು, ಸರಕಾರದ ನಿರ್ದೇಶನಗಳು, ಇಲಾಖೆ ಸುತ್ತೋಲೆಗಳು ಬಂದಲ್ಲಿ, ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿ ಸೂಕ್ತ ಬದಲಾವಣೆ ಮಾಡಿ ಆಯ್ಕೆ ಪಟ್ಟಿ ಪರಿಷ್ಕರಿಸುವ ಅಧಿಕಾರವನ್ನು ಆಯ್ಕೆ ಪ್ರಾಧಿಕಾರವು ಹೊಂದಿರುತ್ತದೆ.

11.21 ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿರುವ ಹುದ್ದೆಗಳ ಸಂಖ್ಯೆಯಲ್ಲಿ ಕಡಿತ ಅಥವಾ ಹೆಚ್ಚುವರಿ ಆದಲ್ಲಿ ಮತ್ತು ಮೀಸಲಾತಿ ವರ್ಗೀಕರಣದಲ್ಲಿ ಏನಾದರೂ ಬದಲಾವಣೆ ಮಾಡಬೇಕಾದ ಅವಶ್ಯಕತೆ ಕಂಡು ಬಂದಲ್ಲಿ ಬದಲಾವಣೆ ಮಾಡಲಾಗುವುದು ಮತ್ತು ಬದಲಾದ ವಿವರಗಳನ್ನು ಇಲಾಖಾವೆಬ್‌ಸೈಟ್: www.karnatakaforest.gov.inನಲ್ಲಿ ಪ್ರಕಟಿಸಲಾಗುವುದು.

11.22 ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ ಮತ್ತು ಅಧಿನಿಯಮಗಳಿಗೆ (Rules & Regulations) ಬದ್ಧನಾಗಿರುತ್ತಾನೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

11.23 ಉತ್ತರ ಪತ್ರಿಕೆಯನ್ನು ಸ್ಕ್ಯಾನಿಂಗ್ ಮಾಡಿಸಿ ಗಣಕ ಯಂತ್ರದ ಮುಖೇನ ಅರ್ಹತಾ ಪಟ್ಟಿಯನ್ನು ಸಿದ್ಧಪಡಿಸುವುದರಿಂದ ಲಿಖಿತಪರೀಕ್ಷೆಗೆ ಅರ್ಹತೆ ಪಡೆದಿರುವ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಮಾಹಿತಿಯನ್ನು ಭರ್ತಿ ಮಾಡುವ ಸಲುವಾಗಿ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಗೆ ತಪ್ಪದೇ ಹಾಜರಾಗತಕ್ಕದ್ದು. ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಕೆಲವು ಮಾರ್ಗಸೂಚನೆಗಳನ್ನು ನೀಡುತ್ತಾರೆ.

11.24 ಯಾವುದೇ ಪರೀಕ್ಷೆಗೆ ಸೂಚನೆ / ತಿಳುವಳಿಕೆ ಪತ್ರ ದೊರಕದ ಅಭ್ಯರ್ಥಿಗಳು ನೇಮಕಾತಿಗೆ ಆಯ್ಕೆಯಾಗಿ ರುವುದಿಲ್ಲವೆಂದು ತಿಳಿಯುವುದು. ಈ ವಿಷಯದಲ್ಲಿ ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದವಿರುವುದಿಲ್ಲ.

11.25 ಪ್ರಸ್ತುತ ನೋಟಿಫೈ ಮಾಡಿರುವ ಅರಣ್ಯ ವೀಕ್ಷಕ ಹುದ್ದೆಗಳ ಸಂಖ್ಯೆಗಳಲ್ಲಿ ಸಂದರ್ಭಕ್ಕನುಸಾರ ಹೆಚ್ಚಳ ಅಥವಾ ಕಡಿತ ಮಾಡಿದಲ್ಲಿ ಈ ವಿವರವನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಪಡಿಸಲಾಗುವುದು.

ಮೈಸೂರು,
ದಿನಾಂಕ: 27–06–2011.

ಅರಣ್ಯ ಸಂರಕ್ಷಣಾಧಿಕಾರಿ
ಮತ್ತು ಆಯ್ಕೆ ಪ್ರಾಧಿಕಾರ,
ಮೈಸೂರು ವೃತ್ತ, ಮೈಸೂರು.

ಅರ್ಜಿ ಭರ್ತಿ ಮಾಡುವ ವಿಧಾನದ ಮಾಹಿತಿ

- ➢ ಅಭ್ಯರ್ಥಿಯು ಅರ್ಜಿಯನ್ನು ತುಂಬುವ ಮುನ್ನ ನೇಮಕಾತಿ ಅಧಿಸೂಚನೆ/ಅರ್ಜಿ ಭರ್ತಿ ಮಾಡುವ ವಿಧಾನದ ಮಾಹಿತಿಯನ್ನುಓದಿ ಮನದಟ್ಟು ಮಾಡಿಕೊಂಡು ಅರ್ಜಿಯನ್ನು ಭರ್ತಿ ಮಾಡುವುದು.
- ➢ ಅಭ್ಯರ್ಥಿಗೆ ಅನ್ವಯಿಸುವ ಮಾಹಿತಿಯನ್ನು ಕಪ್ಪು ಅಥವಾ ನೀಲಿ ಬಣ್ಣದ ಬಾಲ್ ಪಾಯಿಂಟ್ ಪೆನ್ ಉಪಯೋಗಿಸಿ ಭರ್ತಿ ಮಾಡುವುದು ಹಾಗೂ ಅನ್ವಯಿಸುವ ಚೌಕಗಳನ್ನು (✓) ಟಿಕ್ ಮಾಡುವುದು.

1. ನಿಗದಿಪಡಿಸಿರುವ ಚೌಕದೊಳಗೆ ಅಭ್ಯರ್ಥಿಯ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅಂಟಿಸಬೇಕು. (ಭಾವಚಿತ್ರದ ಮೇಲೆ ಸಹಿ ಮಾಡಬಾರದು, ಪಿನ್ನು ಹಾಕಬಾರದು).

1. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಅಂಟಿಸುವುದು.

2. ನಿಗದಿಪಡಿಸಿರುವ ಚೌಕದೊಳಗೆ ಮಾತ್ರ ಅಭ್ಯರ್ಥಿಯು ಕಪ್ಪು ಅಥವಾ ನೀಲಿ ಬಣ್ಣದ ಬಾಲ್ ಪಾಯಿಂಟ್ ಪೆನ್ನಿನಿಂದ ಸಹಿ ಮಾಡುವುದು.

2. ಅಭ್ಯರ್ಥಿಯ ಸಹಿ.

3. **ಅಭ್ಯರ್ಥಿಯ ಹೆಸರು, ತಂದೆಯ ಹೆಸರು ಮತ್ತು ಪೂರ್ಣ ಅಂಚೆ ವಿಳಾಸ (ಪಿನ್ ಕೋಡ್‌ನೊಂದಿಗೆ):** ವಿವರಗಳನ್ನು ಸ್ಪಷ್ಟವಾಗಿ ಕೆಳಗಿನ ಚೌಕದಲ್ಲಿ ಬರೆಯಿರಿ. ಈ ಚೌಕದ ಹೊರಗೆ ಬರೆಯಬೇಡಿ.

ಉದಾಹರಣೆ:

ಪ್ರವೀಣ್ ಕುಮಾರ್ ಎ. ಎಸ್.,
ಶ್ರೀ ನಾರಾಯಣನವರ ಮಗ, ನಂ.42, 15ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು–560003.

4. **ಅಭ್ಯರ್ಥಿಯ ಹೆಸರು:**ಶಾಲಾ ವರ್ಗಾವಣೆ ಪತ್ರ/ಅಂಕಪಟ್ಟಿಯಲ್ಲಿರುವಂತೆ ಅಭ್ಯರ್ಥಿಯ ಹೆಸರನ್ನು ಕಾಲಂನ ಚೌಕಗಳಲ್ಲಿ ಬಿಡಿಬಿಡಿಯಾಗಿ **ಆಂಗ್ಲ ಭಾಷೆಯ** CAPITAL LETTERS **ಗಳಲ್ಲಿ** ಮಾತ್ರ ಬರೆಯುವುದು. ಹೆಸರಿನ ಆರಂಭ, ಮಧ್ಯ ಅಥವಾ ಕೊನೆಯಲ್ಲಿ ಇನಿಷಿಯಲ್ಸ್ (Initials)ಇದ್ದಲ್ಲಿ ಅದನ್ನು ಒಂದು ಚೌಕದಲ್ಲಿ ಬರೆದು ಅಕ್ಕಪಕ್ಕದ ಚೌಕಗಳನ್ನು ಖಾಲಿ ಬಿಡುವುದು. ಯಾವುದೇ ಚುಕ್ಕೆಯನ್ನು ಈ ಚೌಕಗಳಲ್ಲಿ ಇಡುವಂತಿಲ್ಲ. ಒಂದಕ್ಕಿಂತ ಹೆಚ್ಚು ಆಂಗ್ಲ ಅಕ್ಷರಗಳ ಇನಿಷಿಯಲ್ಸ್ ಇದ್ದಲ್ಲಿ ಪ್ರತಿ ಇನಿಷಿಯಲ್ ಅಕ್ಷರಗಳನ್ನು ಬಿಡಿ ಬಿಡಿಯಾಗಿ ಬೇರೆ ಬೇರೆ ಚೌಕಗಳಲ್ಲಿ ಬರೆಯುವುದು ಮತ್ತು ಇನಿಷಿಯಲ್‌ನ ಅಕ್ಕಪಕ್ಕದ ಚೌಕಗಳನ್ನು ಖಾಲಿ ಬಿಡುವುದು.

ಉದಾ:

P	R	A	V	E	E	N		K	U	M	A
R		A		S							

5. **ಮೊಬೈಲ್ ಸಂಖ್ಯೆ:**ಅಭ್ಯರ್ಥಿಯ ಅಥವಾ ಪೋಷಕರ ಬಳಿ ಮೊಬೈಲ್ ಫೋನ್ ಇದ್ದಲ್ಲಿ ಅದರ ಸಂಖ್ಯೆಯನ್ನು ನಿಗದಿತ ಚೌಕಗಳಲ್ಲಿ ನಮೂದಿಸುವುದು. ಒಂದು ವೇಳೆ ಮೊಬೈಲ್ ಫೋನ್ ಇಲ್ಲದೇ ಇದ್ದಲ್ಲಿ, ಮೊಬೈಲ್ ಸಂಖ್ಯೆ ಚೌಕಗಳನ್ನು ಖಾಲಿ ಬಿಡುವುದು.

6. **ಜನ್ಮ ದಿನಾಂಕ:** ಅಭ್ಯರ್ಥಿಯ ಜನ್ಮ ದಿನ, ತಿಂಗಳು ಹಾಗೂ ವರ್ಷವನ್ನು ಕಾಲಂನ ಚೌಕಗಳಲ್ಲಿ ಕ್ರಮವಾಗಿ ಈ ಕೆಳಕಂಡಂತೆ ನಮೂದಿಸುವುದು. ಅಭ್ಯರ್ಥಿಯು ಹುಟ್ಟಿದ ದಿನಾಂಕ ಸಿಂಗಲ್ ಡಿಜಿಟ್ ಆಗಿದ್ದಲ್ಲಿ ಮೊದಲನೇ ಚೌಕದಲ್ಲಿ ಶೂನ್ಯ (0) ವನ್ನು ತಪ್ಪದೆ ಬರೆಯುವುದು.*ಉದಾಹರಣೆ:*ಅಭ್ಯರ್ಥಿಯ ಹುಟ್ಟಿದ ದಿನಾಂಕವು 04-09-1985 ಆಗಿದ್ದಲ್ಲಿ ಅದನ್ನು ಕೆಳಕಂಡಂತೆ ಭರ್ತಿ ಮಾಡಬೇಕು.

ಉದಾ:

ದಿನ			ತಿಂಗಳು			ವರ್ಷ			
0	4	/	0	9	/	1	9	8	5

7. **ಲಿಂಗ:** *ಉದಾಹರಣೆ:* ಅಭ್ಯರ್ಥಿಯು ಪುರುಷರಾಗಿದ್ದಲ್ಲಿ [√] ಹೌದು [ ] ಇಲ್ಲ

8. **ಪ್ರವರ್ಗ:** ಅನ್ವಯಿಸುವ ಪ್ರವರ್ಗದ ಚೌಕವನ್ನು (ಟಿಕ್) √ ಮಾಡಿ.

ಉದಾಹರಣೆ: ಅಭ್ಯರ್ಥಿಯು ಪರಿಶಿಷ್ಟ ಜಾತಿ ಪ್ರವರ್ಗದ ಮೀಸಲಾತಿಗೆ ಅರ್ಹರಿದ್ದಲ್ಲಿ

[ ] ಸಾಮಾನ್ಯ ವರ್ಗ	[√] ಪರಿಶಿಷ್ಟ ಜಾತಿ	[ ] ಪರಿಶಿಷ್ಟ ಪಂಗಡ	[ ] ಪ್ರವರ್ಗ–I
[ ] ಪ್ರವರ್ಗ–II(ಎ)	[ ] ಪ್ರವರ್ಗ–II(ಬಿ)	[ ] ಪ್ರವರ್ಗ–III(ಎ)	[ ] ಪ್ರವರ್ಗ–III(ಬಿ)

9. **ಸಮತಳ ಮೀಸಲಾತಿ:** ಸಮತಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಅನ್ವಯಿಸುವ ಚೌಕವನ್ನು (ಟಿಕ್) √ ಮಾಡಿ. *ಉದಾ:* ಅಭ್ಯರ್ಥಿಯು ಯೋಜನಾ ನಿರಾಶ್ರಿತ, ಗ್ರಾಮೀಣ ಹಾಗೂ ಕನ್ನಡ ಮಾಧ್ಯಮ ಮೀಸಲಾತಿಗೆ ಅರ್ಹರಿದ್ದಲ್ಲಿ:

[ ] ಮಾಜಿ ಸೈನಿಕ [ ] ಅಂಗವಿಕಲ ಅಭ್ಯರ್ಥಿ (ಕುಷ್ಠರೋಗದಿಂದ ಗುಣಮುಖ ಹೊಂದಿದವರಿಗೆ ಮಾತ್ರ)

[√] ಯೋಜನಾ ನಿರಾಶ್ರಿತ [√] ಗ್ರಾಮೀಣ [√] ಕನ್ನಡ ಮಾಧ್ಯಮ

10. ಅರಣ್ಯ ಪ್ರೇರಕರಾಗಿ ಕನಿಷ್ಠ ಐದು (5) ವರ್ಷಗಳ ಸೇವೆ ಸಲ್ಲಿಸಿ ಪ್ರಸ್ತುತ ಅರಣ್ಯ ಪ್ರೇರಕರಾಗಿಯೇ ಕರ್ತವ್ಯ ನಿರ್ವಹಿಸುತ್ತಿರುವಿರಾ: *ಉದಾಹರಣೆ:* ಅರಣ್ಯ ಇಲಾಖೆಯಲ್ಲಿ ಅರಣ್ಯ ಪ್ರೇರಕರಾಗಿ ಕನಿಷ್ಠ ಐದು (5) ವರ್ಷಗಳ ಸೇವೆ ಸಲ್ಲಿಸಿ ಪ್ರಸ್ತುತ ಅರಣ್ಯ ಪ್ರೇರಕರಾಗಿಯೇ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ: [√] ಹೌದು [ ] ಇಲ್ಲ

11. **ಅಭ್ಯರ್ಥಿಯು ಮಾಜಿ ಸೈನಿಕರಾಗಿದ್ದಲ್ಲಿ, ಅಭ್ಯರ್ಥಿಯು ಸಶಸ್ತ್ರ ಪಡೆಗಳಲ್ಲಿ ಸಲ್ಲಿಸಿದ ಸೇವಾ ಅವಧಿ:** *ಉದಾ:* ಮಾಜಿ ಸೈನಿಕ ಅಭ್ಯರ್ಥಿಯು ಸಶಸ್ತ್ರ ಪಡೆಗಳಲ್ಲಿ 16 ವರ್ಷ 08 ತಿಂಗಳು 15 ದಿನ ಸೇವೆ ಸಲ್ಲಿಸಿದ್ದಲ್ಲಿ ಅದನ್ನು ಈ ಕೆಳಗೆ ನೀಡಿರುವ ಮಾದರಿಯಲ್ಲಿ ಕ್ರಮವಾಗಿ ಬರೆಯುವುದು. ಒಂದು ವೇಳೆ ಅಭ್ಯರ್ಥಿಯು ಮಾಜಿ ಸೈನಿಕರಲ್ಲದ ಪಕ್ಷದಲ್ಲಿ ಸಂಬಂಧಿತ ಚೌಕವನ್ನು ಖಾಲಿ ಬಿಡುವುದು.

ವರ್ಷ	ತಿಂಗಳು	ದಿನ
1 6	0 8	1 5

12. **ಅರಣ್ಯದಲ್ಲಿ ವಾಸಿಸುವ ಪರಿಶಿಷ್ಟ ಪಂಗಡದವರೇ:** *ಉದಾಹರಣೆ:* ಅಧಿಸೂಚನೆಯ ಕ್ರಮ ಸಂಖ್ಯೆ: 1.2 ರಲ್ಲಿ ಸೂಚಿಸಿರುವ ಅನ್ವಯ ಅಭ್ಯರ್ಥಿಯು ಅರಣ್ಯದಲ್ಲಿ ವಾಸಿಸುವ ಪರಿಶಿಷ್ಟ ಪಂಗಡದವರಾಗಿದ್ದಲ್ಲಿ:

[√] ಹೌದು [ ] ಇಲ್ಲ

13. **ಅರಣ್ಯದಲ್ಲಿ ವಾಸಿಸುವ ಪರಿಶಿಷ್ಟ ಪಂಗಡದವರಾಗಿದ್ದರೆ, ಜಾತಿಯ ಹೆಸರನ್ನು ನಮೂದಿಸಿ:** *ಉದಾ:* ಅಧಿಸೂಚನೆಯ ಕ್ರಮ ಸಂಖ್ಯೆ: 1.2 ರಲ್ಲಿ ಸೂಚಿಸಿರುವ ಅನ್ವಯ ಅಭ್ಯರ್ಥಿಯು ಅರಣ್ಯದಲ್ಲಿ ವಾಸಿಸುವ ಪರಿಶಿಷ್ಟ ಪಂಗಡದ ಮಲೆಕುಡಿ ಜಾತಿಯವರಾಗಿದ್ದಲ್ಲಿ: [MELAKUDI]

14. **7ನೇ ತರಗತಿ ತೇರ್ಗಡೆಯಾಗಿರುವಿರಾ:** *ಉದಾ:* ಅಭ್ಯರ್ಥಿಯು 7ನೇ ತರಗತಿ ತೇರ್ಗಡೆಯಾಗಿದ್ದಲ್ಲಿ:

[√] ಹೌದು [ ] ಇಲ್ಲ

15. **ನೇಮಕಾತಿ ಲಿಖಿತ ಪರೀಕ್ಷೆಗೆ ಆಯ್ದುಕೊಂಡ ಮಾಧ್ಯಮ:** *ಉದಾ:* ಅಭ್ಯರ್ಥಿಯು ಲಿಖಿತ ಪರೀಕ್ಷೆಯನ್ನು ಕನ್ನಡ ಮಾಧ್ಯಮದಲ್ಲಿ ಬರೆಯಲು ಅಪೇಕ್ಷಿಸಿದ್ದಲ್ಲಿ:

[√] ಕನ್ನಡ [ ] ಆಂಗ್ಲ

ವಿಶೇಷ ಸೂಚನೆ:–ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸಿರುವ ಘೋಷಣೆಯನ್ನು ಓದಿ ಮನದಟ್ಟು ಮಾಡಿಕೊಂಡು ಮನವರಿಕೆ ಮಾಡಿಕೊಂಡು, ಅರಣ್ಯ ಇಲಾಖೆಯು ಅಪೇಕ್ಷಿಸಿರುವ ಮಾಹಿತಿ/ವಿವರಗಳನ್ನು ಭರ್ತಿ ಮಾಡಿಘೋಷಣೆಯ ಕೆಳಗೆ ದಿನಾಂಕವನ್ನು ನಮೂದಿಸಿ, ಸಹಿ ಮಾಡುವುದು.

ಮೈಸೂರು,
ದಿನಾಂಕ: 27–06–2011.

ಅರಣ್ಯ ಸಂರಕ್ಷಣಾಧಿಕಾರಿ
ಮತ್ತು ಆಯ್ಕೆ ಪ್ರಾಧಿಕಾರ,
ಮೈಸೂರು ವೃತ್ತ, ಮೈಸೂರು.

ಕರ್ನಾಟಕ ಅರಣ್ಯ ಇಲಾಖೆ

ಅರಣ್ಯ ವೀಕ್ಷಕ ಹುದ್ದೆಗೆ ಅರ್ಜಿ

1. ನಿಮ್ಮ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಅಂಟಿಸಿ.

ಅರ್ಜಿಯನ್ನು ಭರ್ತಿ ಮಾಡಲು ಸೂಚನೆಗಳು:–

ಎ) ಕನ್ನಡ ಭಾಷೆಯ ದಪ್ಪ ಅಥವಾ ಆಂಗ್ಲ ಭಾಷೆಯ Capital ಅಕ್ಷರಗಳಲ್ಲಿ ಭರ್ತಿ ಮಾಡಬೇಕು

ಬಿ) ಯಾವುದೇ ಅರ್ಜಿ ಶುಲ್ಕ ಇರುವುದಿಲ್ಲ ಹಾಗೂ ಅರ್ಜಿಯ ಜೊತೆ ಯಾವುದೇ ದಾಖಲೆಗಳನ್ನು ಸಲ್ಲಿಸಬಾರದು.

ಸಿ) ಸೂಕ್ತ ಅಂಕಣವನ್ನು √ ಮಾಡಿ

ಡಿ) ಈ ಅರ್ಜಿಯನ್ನು ಮಡಚಬೇಡಿ, ಭಾವಚಿತ್ರಕ್ಕೆ ಪಿನ್ನು ಹಾಕಬೇಡಿ ಮತ್ತು ಸ್ವಚ್ಛವಾಗಿಡಿ.

ಇ) ನೇಮಕಾತಿ ಅಧಿಸೂಚನೆಯನ್ನು ಓದಿ ಚೆನ್ನಾಗಿ ಮನದಟ್ಟು ಮಾಡಿಕೊಂಡು ಅರ್ಜಿಯನ್ನು ಭರ್ತಿ ಮಾಡುವುದು.

2. ಅಭ್ಯರ್ಥಿಯ ಸಹಿ.

3. ಅಭ್ಯರ್ಥಿಯ ಹೆಸರು, ತಂದೆಯ ಹೆಸರು ಮತ್ತು ಪೂರ್ಣ ಅಂಚೆ ವಿಳಾಸ (ಪಿನ್ ಕೋಡ್‌ನೊಂದಿಗೆ)

4. ಅಭ್ಯರ್ಥಿಯ ಹೆಸರು (ಆಂಗ್ಲ ಭಾಷೆಯ CAPITAL ಅಕ್ಷರಗಳಲ್ಲಿ ಭರ್ತಿ ಮಾಡಬೇಕು

5. ಮೊಬೈಲ್ ದೂರವಾಣಿ ಸಂಖ್ಯೆ

6 ಜನ್ಮ ದಿನಾಂಕ ದಿನ / ತಿಂಗಳು / ವರ್ಷ

7. ಲಿಂಗ ☐ ಪುರುಷ ☐ ಮಹಿಳೆ

8. ಪ್ರವರ್ಗ ☐ ಸಾಮಾನ್ಯ ವರ್ಗ ☐ ಪರಿಶಿಷ್ಟ ಜಾತಿ ☐ ಪರಿಶಿಷ್ಟ ಪಂಗಡ

☐ ಪ್ರವರ್ಗ–I ☐ ಪ್ರವರ್ಗ–II(ಎ) ☐ ಪ್ರವರ್ಗ–II(ಬಿ)

☐ ಪ್ರವರ್ಗ–III(ಎ) ☐ ಪ್ರವರ್ಗ –III(ಬಿ)

9. ಸಮತಳ ಮೀಸಲಾತಿ ☐ ಮಾಜಿ ಸೈನಿಕ ☐ ಅಂಗವಿಕಲ ಅಭ್ಯರ್ಥಿ (ಕುಷ್ಠರೋಗದಿಂದ ಗುಣಮುಖ ಹೊಂದಿದವರಿಗೆ ಮಾತ್ರ)

☐ ಯೋಜನಾ ನಿರಾಶ್ರಿತ ☐ ಗ್ರಾಮೀಣ ☐ ಕನ್ನಡ ಮಾಧ್ಯಮ

10. ಅರಣ್ಯ ಪ್ರೇರಕರಾಗಿ ಕನಿಷ್ಠ 5 ವರ್ಷಗಳ ಸೇವೆ ಸಲ್ಲಿಸಿ ಪ್ರಸ್ತುತ ಅರಣ್ಯ ಪ್ರೇರಕರಾಗಿಯೇ ಕರ್ತವ್ಯ ನಿರ್ವಹಿಸುತ್ತಿರುವಿರಾ ☐ ಹೌದು ☐ ಇಲ್ಲ

11. ಅಭ್ಯರ್ಥಿಯು ಮಾಜಿ ಸೈನಿಕರಾಗಿದ್ದಲ್ಲಿ ಸಶಸ್ತ್ರ ಪಡೆಗಳಲ್ಲಿ ಸಲ್ಲಿಸಿದ ಸೇವಾ ಅವಧಿ ವರ್ಷ / ತಿಂಗಳು / ದಿನ

12. ಅರಣ್ಯದಲ್ಲಿ ವಾಸಿಸುವ ಪರಿಶಿಷ್ಟ ಪಂಗಡದವರೇ ☐ ಹೌದು ☐ ಇಲ್ಲ

13. ಅರಣ್ಯದಲ್ಲಿ ವಾಸಿಸುವ ಪರಿಶಿಷ್ಟ ಪಂಗಡದವರಾಗಿದ್ದರೆ, ಜಾತಿಯ ಹೆಸರನ್ನು ನಮೂದಿಸಿ

14. 7ನೇ ತರಗತಿ ತೇರ್ಗಡೆಯಾಗಿರುವಿರಾ ☐ ಹೌದು ☐ ಇಲ್ಲ

15. ನೇಮಕಾತಿ ಲಿಖಿತ ಪರೀಕ್ಷೆಗೆ ಆಯ್ದುಕೊಂಡ ಮಾಧ್ಯಮ ☐ ಕನ್ನಡ ☐ ಆಂಗ್ಲ

ಘೋಷಣೆ:– ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ವಿವರಗಳು ಸತ್ಯ ಹಾಗೂ ಪರಿಪೂರ್ಣವಾಗಿರುತ್ತದೆ. ಅರ್ಜಿಯಲ್ಲಿ ಯಾವುದೇ ತಪ್ಪು ಮಾಹಿತಿ ನೀಡಿರುವುದು ಕಂಡು ಬಂದಲ್ಲಿ ನನ್ನ ಅರ್ಜಿಯನ್ನು ತಿರಸ್ಕರಿಸುವ ಅಥವಾ ನನ್ನನ್ನು ಸೇವೆಯಿಂದ ಯಾವುದೇ ಮುನ್ಸೂಚನೆ ಇಲ್ಲದೆ ವಜಾ ಮಾಡಬಹುದು ಹಾಗೂ ನನ್ನ ವಿರುದ್ಧ ತತ್ಸಬಂಧ ಕ್ರಿಮಿನಲ್ ಕ್ರಮ ಕೈಗೊಳ್ಳಲು ಇಲಾಖೆಗೆ ಅಧಿಕಾರವಿದೆಯೆಂದು ಅರಿತಿದ್ದೇನೆ. ಅಲ್ಲದೆ, ನಾನು ಈವರೆಗೆ ಯಾವುದೇ ಕ್ರಿಮಿನಲ್ ಮೊಕದ್ದಮೆಗಳಲ್ಲಿ ವಿಚಾರಣೆಗೆ/ಶಿಕ್ಷೆಗೆ ಒಳಪಟ್ಟಿಲ್ಲವೆಂದು ದೃಢೀಕರಿಸುತ್ತೇನೆ.

ದಿನಾಂಕ: ಅಭ್ಯರ್ಥಿಯ ಸಹಿ

ಪಿ.ಆರ್.243

ನಿರ್ದೇಶಕರವರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-01

ಅಧಿಸೂಚನೆ

ಸಂಖ್ಯೆ: ಡಿಟಿಇ/07/ಇಎಸ್‌ಟಿ(2)ಎ/2008/6, ದಿನಾಂಕ:24.03.2011/01.04.2011

ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿನ ಸಿಸ್ಟಂ ಅನಲಿಸ್ಟ್ (ಗ್ರೂಪ್-ಸಿ) ಹುದ್ದೆಗಳಿಗೆ ಆಯ್ಕೆಯಾಗಿರುವ ಈ ಕೆಳಕಂಡ ಅಭ್ಯರ್ಥಿಗಳನ್ನು ಎರಡು ವರ್ಷಗಳ ಪರಿವೀಕ್ಷಣಾ ಅವಧಿಯ ಮೇರೆಗೆ ವೇತನ ಶ್ರೇಣಿ ರೂ.8825-16000 ರಲ್ಲಿ ನೇಮಕಾತಿ ಮಾಡಿ, ದಿನಾಂಕ:24.03.2011 ರಂದು ನಡೆದ ಕೌನ್ಸಿಲಿಂಗ್‌ನಲ್ಲಿ ಅವರ ಹೆಸರಿನ ಮುಂದೆ ಸೂಚಿಸಿರುವ ಸಂಸ್ಥೆಗೆ ಸ್ಥಳನಿಯುಕ್ತಿಗೊಳಿಸಲಾಗಿದೆ.

ಕ್ರ.ಸಂ.	ಹೆಸರು	ಸ್ಥಳ/ ಪಾಲಿಟೆಕ್ನಿಕ್
1.	Mamatha P. System Analyst Nethaji Circle, Guttappa Colony, J.P.Nagar, Shimoga-577201	112 Govt. Polytechnic, Tumkur.
2.	Madhusudana S.M. System analyst S/o Marigowda S. Siddanakoppalu, Siddapura Post, K.R. Nagara Taluk, K.R.Nagar-571602	154 Government Polytechnic Holenarisipura.
3.	Bhaskara L. System analyst Vategundi House, Mudur Post and Village, Kundapura, Udupi-576233	163 Government Polytechnic Bantwala (D.K.)
4.	Latha S.C. System analyst D/o Channakeshava Murthy M.H. LLB Badaveni, No.10, Vidyanagar, 2nd Cross, B.H. Road, Shimoga-577203.	143 Government Polytechnic for W Siralkoppa
5.	Kaushik P. System Analyst #754, LIG, 2nd Huduco, Ist Stage, Hebbal, Mysore-570017.	160 Government Polytechnic, Mirlay
6.	Santhosh Kumar K. System Analyst S/o Dikondandan N. Arahatholalukaimara, Bhadravathi, Shimoga-577227	150 Government Polytechnic, Hangal
7.	Manu K.V. System Analyst D/o Venkataswamy K.R., G. Rangapura, Gulasinda Post, Kasaba Hobli, Channarayapatna-573116	145 Government Polytechnic, Udupi
8.	Punith Kumar P. System Analyst S/o P.G.Shet, Main Road, Nallur (P), Channagiri (T), Davangere-577221.	147 Government Polytechnic, Gadag
9.	Sangeetha S. System Analyst D/o Shivaswamy, Sundahalli, Yeliur Post, Mandya-5714101.	144 Government Polytechnic, Karkala
10.	Siddharam Gour System Analyst At Post Tamba, Indi Taluk, Tamba, Bijapur-586215.	162 Government Polytechnic, Joida

ಕ್ರ.ಸಂ.	ಹೆಸರು	ಸ್ಥಳ/ ಪಾಲಿಟೆಕ್ನಿಕ್
11.	Rekha System Analyst W/o Yesudas Nandgadnkar, H.No.2-907/43/2, Vijay Nivas, Pragathi Nagar, Badepur Colony, Gulbarga-585105	161 Government Polytechnic, Affzalpura
12.	Syed Saleemuddin System Analyst S/o Syed Shahabuddin, Agriculturist, Chinnasandra (P & V), Chintamani, Chickbalapur-563128	146 Government Polytechnic, Lingasaguru
13.	Dayananda K.P. System Analyst Room No.117, New Block, Ubdice Boys Hostel, MCC B. Block, Davangere-577004	151 Government Polytechnic, Belagi.

ನಿರ್ದೇಶಕರ ಕಛೇರಿ,

ಪಿ.ಆರ್.163 ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.

ನಿರ್ದೇಶಕರವರ ಕಛೇರಿ, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು–01

ಅಧಿಸೂಚನೆ

ಸಂಖ್ಯೆ: ಡಿಟಿಇ/57/ಇಎಸ್‌ಟಿ(2)ಎ/2010/7, ದಿನಾಂಕ:24.03.2011/01.04.2011

ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿನ ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗದ ಉಪನ್ಯಾಸಕರ ಹುದ್ದೆಗಳಿಗೆ ಆಯ್ಕೆಯಾಗಿರುವ ಈ ಕೆಳಕಂಡ ಅಭ್ಯರ್ಥಿಗಳನ್ನು ಎರಡು ವರ್ಷಗಳ ಪರಿವೀಕ್ಷಣಾ ಅವಧಿಯ ಮೇರೆಗೆ ಎ.ಐ.ಸಿ.ಟಿ.ಇ. ವೇತನ ಶ್ರೇಣಿ ರೂ.8000–275–13500 ರಲ್ಲಿ ನೇಮಕಾತಿ ಮಾಡಿ, ದಿನಾಂಕ:24.03.2011 ರಂದು ನಡೆದ ಕೌನ್ಸಿಲಿಂಗ್‌ನಲ್ಲಿ ಅವರ ಹೆಸರಿನ ಮುಂದೆ ಸೂಚಿಸಿರುವ ಸಂಸ್ಥೆಗೆ ಸ್ಥಳನಿಯುಕ್ತಿಗೊಳಿಸಲಾಗಿದೆ.

ಕ್ರ.ಸಂ.	ಹೆಸರು	ಸ್ಥಳ/ ಪಾಲಿಟೆಕ್ನಿಕ್
1.	Narasimhaiah G. Mechanical Engg. (General) S/o Ganganarasimhaiah, No.65, 5th Main, 1st Cross, H.V.R. Layout, Kamakshipalya, Bangalore-560079	175 Govt. Polytechnic, Immadihalli
2.	Kumaraswamy H.S. Mechanical Engg. (General) S/o Shivaraja, Hullenahally, Kembalu (P), Baguru (H), Channarayapatna (T), Hassana-573111	175 Govt. Polytechnic, Immadihalli
3.	Ramya K. Mechanical Engg. (General) W/o Mahesh R.V. Kaustubha, 54/2, 1st Floor, 11th Cross, 3rd Main, Basappa Layout, Hanumanthanagar, Bangalore-560019.	183 Govt. Polytechnic, Channasandra
4.	Sharmas Vali S. Mechanical Engg. (General) 2nd Ward Chapparada Halli, Yeshwanth Nagar (Post), Sandur (Tq) Bellary (Dist), Bellary-583124.	174 Govt. Polytechnic, Kudligi
5.	Sharana Kumara K. Mechanical Engg. (General) # 103, Ward No.10, Marriswami Mutt Street, Bellary, Bellary-583101.	172 Govt. Polytechnic, Kampli
6.	Aprameya C.R. Mechanical Engg. (General) C/o Saroja R. Acharya, E 174N, 'Pithru Chaya', 9th Main, 6th Cross, Gowdki Hola, Bagalakunte, Bangalore-560073..	172 Govt. Polytechnic, Kampli

ಕ್ರ.ಸಂ.	ಹೆಸರು	ಸ್ಥಳ/ ಪಾಲಿಟೆಕ್ನಿಕ್
7.	Bhagyalakshmi N.E. Mechanical Engg. (General) C/o D Ramesh, #240/C Type II West Colony, Rail Wheel Factory, Yelahanka, Bangalore-560064.	170 Govt. Polytechnic, Harihara
8.	Sheshagiri A.T. Mechanical Engg. (General) S/o Timmanna Bhatta A.S. #171, 1st Main, 4th Cross, Srinivasanagar, Bangalore-560050.	130 Govt. Polytechnic, Chamarajanagar
9.	Vijay C.G. Mechanical Engg. (General) Santhe Pete Road, Chelur at Post, Gubbi Taluk, Tumkur, Tumkur-572117.	169 Govt. Polytechnic, Kolar Gold Fields
10.	Bharamu Banajawad Mechanical Engg. (General) 1810A, Near Yellamma Temple, Terdal-587315.	178 Govt. Polytechnic, Rabakavi Banahatti
11.	Somashekara P. Mechanical Engg. (General) S/o G.R. Paramashivaiah, Sri Kalleswara Nilaya, 60 feet Road, IIIrd Cross, Vinobanagar, Shimoga-577204.	170 Govt. Polytechnic, Harihara
12.	Shivakumara N.V. Mechanical Engg. (General) S/o Venkateshappa, Niduvalalu Niduvalalu (Post), Hebbur (Hobli), Tumkur-572120	130 Govt. Polytechnic, Chamarajnagar
13.	Chandrahasa C.N. Mechanical Engg. (General) S/o Narayanappa, Chowdeswarihalli, Kutagal Post, Ramanagara Dist., Ramanagara-571511.	169 Govt. Polytechnic, Kolar Gold Fields
14.	Shashidhara K.N. Mechanical Engg. (General) S/o Ningappa, Kallakere, Belagumba (Post.. Arasikere-573103.	182 Govt. Polytechnic, Hiriyur
15.	Ikbal Patil Mechanical Engg. (General) S/o I.B. Patil, A.P-Satti, Tal-Athani Dist: Belgaum-591240	171 Govt. Polytechnic,Hubli
16.	Venkatesh Murthy R. Mechanical Engg. (General) S/o B.L. Rajanna, #34, 19th cross, Near Govt. School, Maha Yogi Vemana Road Entrance, Kaggadasapura, C.V. Raman Nagar Post, Bangalore-560093.	169 Govt. Polytechnic, Kolar Gold Fields
17.	Sheshadri Rao S. Mechanical Engg. (General) #994, "Arun Agam", 9th Cross, 2nd Main Udhaya Nagar, Bangalore-560016.	181 Govt. Polytechnic, Aurad
18.	Vasantha K.C. Mechanical Engg. (General) S/o Chandre Gowda, Opp BCM Hostel, Javagal Road, Kalasapura (Post), Chickmagalur-577102.	168 Govt. Polytechnic, Hosadurga

ಕ್ರ.ಸಂ.	ಹೆಸರು	ಸ್ಥಳ/ ಪಾಲಿಟೆಕ್ನಿಕ್
19	Thaurya Naik Mechanical Engg. (General) C/o Mangalore Nagaraj, # 154, Ashraya Nilaya, New Borewell Layout, Konena Agrahara, HAL., Bangalore-560017.	172 Govt. Polytechnic, Kampli
20.	Manju R.B. Mechanical Engg. (General) S/o Byregowda R.T. Rudrapatna (Post), Arakalgud (Taluk), Hassan (Dist)., Hassan-573150	182 Govt. Polytechnic, Hiriyur
21.	Manjunatha Mechanical Engg. (General) S/o Mallikarjunaiah, Ballekatte, Muniyur (P), Turuvekere (T). Tumkur Dist-572227	182 Govt. Polytechnic, Hiriyur
22.	Malagouda Patil Mechanical Engg. (General) Malagouda Siddagouda Patil, AP: Naganur, TA: Gokak Dist: Belgaum, Gokak-591319.	171 Govt. Polytechnic, Hubli
23.	C.N. Vikas Mechanical Engg. (General) S/o C.B. Nagaraj, #1641/30 14th Cross, 2nd Main, S.V. Layout, Davangere-577004.	173 Govt. Polytechnic, Harapanahalli
24.	Venkatesha H.J. Mechanical Engg. (General) S/o Jayaramu, Hulaganahalli, Maddur Tq: Mandya Dist: Maddur-571429.	168 Govt. Polytechnic, Hosadurga
25.	Manu Kumar N. Mechanical Engg. (General) S/o Naveen Kumar P. Door No. B=23, Old Bar Line Police Qtrs., Behind Kote Police Station, Shimoga-577201.	173 Govt. Polytechnic, Harapanahalli
26.	Poornima Y.H. Mechanical Engg. (General) W/o Yogananda S.B. C/o Mahalingappa, #93/A 2nd Main #5th Cross, Janatha Colony, Mariyappana Palya, Gnanabharathi Post, Bangalore-560056	168 Govt. Polytechnic, Hosadurga
27.	Prashanthkumar J. Mechanical Engg. (General) Vatalu Village and Post T. Narasipura Taluk, Mysore District-571124.	173 Govt. Polytechnic, Harapanahalli
28.	Maleppa Garasangi Mechanical Engg. (General) S/o Basappa Garasangi, Shivanagi Post, Bijapur Taluk, Bijapur Dist. Bijapur-586127.	176 Govt. Polytechnic, Zalaki
29.	Manoharachari P.S. Mechanical Engg. (General) S/o Sridharachari P.V. Tank Bund Road Near Adarsha Theatre., Chintamani-563125	144 Govt. Polytechnic, Karkala

ಕ್ರ.ಸಂ.	ಹೆಸರು	ಸ್ಥಳ/ ಪಾಲಿಟೆಕ್ನಿಕ್
30.	Kiranakumar Nalavade Mechanical Engg. (General) S/o S.K. Nalavade SDC, O/o AEE KBJN(L), NRBC sub Divn. #33, Rodalbanda Camp, UKP Tq: Lingasgur Dist: Raichur, Lingasgur-584127	165 Govt. Polytechnic, Karatagi
31.	Prasad Kumar C.M. Mechanical Engg. (General) S/o Mallikrjuna C.A. #210, K.T. Street C.N. Halli, Chikkanayakanahalli(T), Tumkur-572214.	145 Govt. Polytechnic, Udupi
32.	Mallikarjuna K. Mechanical Engg. (General) Behind Shakti Gas Gowdon, Basaveshwara School Lane, Nittuvalli New Extn. Lenin Nagar, Davanagere-577004.	174 Govt. Polytechnic, Kudligi
33.	Shivakumar P.V. Mechanical Engg. (General) S/o Late Venkataswamy S.V. Sri Lakshmi Venkateshwar, Nilaya Compound, 6th Cross, Sonnashetty Halli, Chintamani, CB.Pura (DT), Chintamani-563125.	145 Govt. Polytechnic, Udupi
34.	Rajitha K. Mechanical Engg. (General) C/o R.S. Chandra Shekar, Gowri Nilaya, Thyagaraja Colony, Gowribidanur-561208	164 Govt. Polytechnic, Mudhol
35.	Narayana K. Jannu Mechanical Engg. (General) 1st Floor 3rd Main, 14th Cross, Vinobanagar, Davanagere-577006	167 Govt. Polytechnic, Mundagod
36.	Venkatesh Murthy K. Mechanical Engg. (General) #135/2, 8th cross, BSK 3rd Stage, Lakshmappa Garden, Drain Parrallel Road, Bangalore-560085.	145 Govt. Polytechnic, Udupi
37.	Sathish Kumar R. Aralikatti Mechanical Engg. (General) Renukamba Nilaya, 2nd Main, 17th Cross, Kalidas Nagar, Harihar-577601	177 Govt. Polytechnic, Siddapur
38.	Shiddalingayya Mathad Mechanical Engg. (General) Kollapur, Bisalahalli (Post), Byadgi (Taluk) Haveri (Dist:. Byadgi-581106	185 Govt. Polytechnic, Bankapur
39.	Yathisha R.S. Mechanical Engg. (General) S/o Late Shankaregowda RK., Rachenahally, Shravanabelagola (H), Channarayapatna (T), Hassan (D)., Shravanabelagola-573135	185 Govt. Polytechnic,Bankapur
40.	Sudhir S. Mechanical Engg. (General) S/o Sridhara Vinayak Shet. Door No.210, Vinoba Nagar, Sagar (T), Shimoga (D., Sagar-577401	177 Govt. Polytechnic, Siddapur

ಕ್ರ.ಸಂ.	ಹೆಸರು	ಸ್ಥಳ/ ಪಾಲಿಟೆಕ್ನಿಕ್
41.	Shashikumar G.M. Mechanical Engg. (General) C/o Venkatesh KB, No-08 H.L.B.C Sub-Divn. Shravanabelagola, At (P), Chennarayapattana (Tq), Hassan-573135	177 Govt. Polytechnic, Siddapura
42.	Keshava K.G. Mechanical Engg. (General) S/o Ganesha K.H. # 603, New Street, Kikkeri., K.R. Pet Taluk, Mandya Dist., K.R. Pet-571423.	185 Govt. Polytechnic, Bankapur
43.	Shivaling I. Mukanavar Mechanical Engg. (General) Plot No.72, Sector 3, Scheme No.12, 8th Cross, Bhagyanagar, Tilakwadi, Belgaum-590007.	179 Govt. Polytechnic, Athani
44.	Ravikumara K. Mechanical Engg. (General) S/o Kariyanna L., Areyur @ Post., Tumkur-572118.	181 Govt. Polytechnic, Aurad
45.	Raghavendra Patil Mechanical Engg. (General) S/o Hanumanthappa Patil, Near Ayurvedic Hospital, Tq & Dt: Koppal, Ginigera-583228	165 Govt. Polytechnic, Karatagi
46.	Raghavendra S. Gudadaigol Mechanical Engg. (General) # 588/A, Anugrah, Kodadavvan Galli, A/P Muchandi T/D: Belgaum, Belgaum-590010.	164 Govt. Polytechnic, Mudhol
47.	Vishwanath D. Mechanical Engg. (General) C/o R. Sumitra, House No.50, Forest Quarters, Belegal Cross, Bellary-583102.	174 Govt. Polytechnic, Kudligi
48.	Ananda K.N. Mechanical Engg. (General) Gundenahalli, Billanakote (Post), Nelamangala (Tq), Bangalore Rural Dist: Nelamangala-562111	179 Govt. Polytechnic, Athani
49.	Ananda Koppalada Mechanical Engg. (General) C/o Megharaja N.P. H.No.54/A, W.No.34, Devinagara, 2nd Cross, Bellary, Bellary-583104.	178 Govt. Polytechnic, Rabakavi Banahatti
50.	Puneeth Kumar S. Mechanical Engg. (General) S/o B. Rajalakshmi, Door No.1516, 4th Cross, IRWIN Road, Lashkar-Mohalla, Mysore-570001.	179 Govt. Polytechnic, Athani
51.	Priyanka M. Mechanical Engg. (General) Door No.3809/2D, 4th Main, Behind Church, Tilak Nagar, Mysore-570021.	181 Govt. Polytechnic, Aurad

ಕ್ರ.ಸಂ.	ಹೆಸರು	ಸ್ಥಳ/ ಪಾಲಿಟೆಕ್ನಿಕ್
52.	Suhil Pasha Mechanical Engg. (General) Mudigere Road, J.P. Nagar, Belur., Hassan-573115.	167 Govt. Polytechnic, Mundagod
53.	Surekha A. Mechanical Engg. (General) #53/1, 1st Cross, Ambedkar Layout, K.P. Agrahara, Magadi Road Post, Bangalore-560023.	178 Govt. Polytechnic, Rabakavi Banahatti
54.	Vidya N. Mechanical Engg. (General) U75/1, Pipe Line, 6th Cross, U75/1, Pipe Line 6th Cross, Bangalore-560004	180 Govt. Polytechnic, Surapura
55.	Prem Datta Mechanical Engg. (General) Plot No.182/B, C.I.B. Colony, Behind Central Bus-Stand, Gulbarga-585103.	180 Govt. Polytechnic, Surapura
56.	Hemavathi Mechanical Engg. (General) D/o Dadegowda, Kachagondana Halli, Atharagange (P), Bhadravathi(T), Shimoga (D), Bhadravathi-577245.	176 Govt. Polytechnic, Zalaki
57.	Smitha S. Mechanical Engg. (General) #956/1, Zoo Garden Road, Indiranagar, Mysore-570010	184 Govt. Polytechnic, Devadurga
58.	Neetha G.M. Mechanical Engg. (General) #2009, 2nd Cross, Papaiah Reddy Lane, Near Yellamma Temple, New Thippasandra, Bangalore-560075.	184 Govt. Polytechnic, Devadurga
59.	Shabeer Mechanical Engg. (General) S/o T. Basha Sab, Deogiri (P), Sandur (T), Deogiri-583112	180 Govt. Polytechnic, Surapura
60.	Archana Hanchate Mechanical Engg. (General) C/o: Keshavrao E. Jawalkar, 8 No. School, Shahapeth Galli, Bijapur-586103	176 Govt. Polytechnic, Zalaki
61.	Vani Shree R. Mechanical Engg. (General) D/o R.M. Ramaiah, Near Central School Ramanagar, Bandihatti Cowl Bazar, Bellary-583102	184 Govt. Polytechnic, Devadurga
62.	Neelambika N. Mechanical Engg. (General) D/o Nijaguna, Type 6th No.181, RTPS Colony Shaktinagar, Tq & Dist: Raichur, Raichur-584170.	166 Govt. Polytechnic, Kalagi
63.	Bindu Y. Mechanical Engg. (General) # 2474, Keshav Nilaya, Vivekanda Nagar Main Road, Vivekananda Nagar, Bangarpet-563114.	166 Govt. Polytechnic, Kalagi

ಅಭ್ಯರ್ಥಿಯು ಈ ಆದೇಶದ ದಿನಾಂಕದ 15 ದಿನಗಳೊಳಗಾಗಿ ತಮಗೆ ಸ್ಥಳ ನಿಯುಕ್ತಿಗೊಳಿಸಲಾದ ಸಂಸ್ಥೆಯಲ್ಲಿ ಎಲ್ಲಾ ಮೂಲ ದಾಖಲೆಗಳೊಂದಿಗೆ ಕಾರ್ಯವರದಿ ಮಾಡಿಕೊಳ್ಳತಕ್ಕದ್ದು.

ಸದರಿ ನೇಮಕಾತಿಯು ಈ ಕೆಳಕಂಡ ಷರತ್ತುಗಳಿಗೊಳಪಟ್ಟಿರುತ್ತದೆ.

1) ಈ ನೇಮಕಾತಿಯು ಪರಿವೀಕ್ಷಣಾ ಅವಧಿ ಮುಗಿಯುವವರೆಗೆ ತಾತ್ಕಾಲಿಕವಾಗಿದ್ದು ಆಗಿಂದಾಗ್ಗೆ ವಿಧಿಸುವ ಸೇವಾ ಷರತ್ತುಗಳಿಗೆ ಒಳಪಟ್ಟಿರುತ್ತದೆ.
2) ಅಭ್ಯರ್ಥಿಯು ಕಾರ್ಯವರದಿಯ ಸಮಯದಲ್ಲಿ ತಮ್ಮ ಜನ್ಮ ದಿನಾಂಕ, ವಿದ್ಯಾರ್ಹತೆ, ನಡತೆ, ಮತ್ತು ವೈದ್ಯಕೀಯ ಪ್ರಮಾಣ ಪತ್ರದ ಮೂಲ ದಾಖಲೆಗಳನ್ನು ಸಂಬಂಧಪಟ್ಟ ಸಂಸ್ಥೆಗಳ ಪ್ರಾಚಾರ್ಯರಿಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
3) ಕರ್ನಾಟಕ ಸೇವಾ (ಸೇವಾ ಮತ್ತು ಕನ್ನಡ ಭಾಷೆ ಪರೀಕ್ಷೆಗಳು) ನಿಯಮಗಳ (1974)ರ ಅಡಿ ನಿಗದಿಪಡಿಸಿರುವ ಕನ್ನಡ ಭಾಷಾ ಪರೀಕ್ಷೆಯನ್ನು ಪರಿವೀಕ್ಷಣಾ ಅವಧಿಯಲ್ಲಿ ಉತ್ತೀರ್ಣರಾಗತಕ್ಕದ್ದು.
4) ಇವರ ಸೇವಾ ಜೇಷ್ಠತೆಯು ಪ್ರಸ್ತುತ ಕರ್ನಾಟಕ ಲೋಕ ಸೇವಾ ಆಯೋಗದ ಆಯಾಯ ವಿಷಯದಲ್ಲಿ ನಿರ್ಧರಿಸಿದಂತೆ ಇರತಕ್ಕದ್ದು. ನಂತರ ಕರ್ನಾಟಕ ಲೋಕಸೇವಾ ಆಯೋಗವು ಕ್ರೋಢೀಕೃತ ಜೇಷ್ಠತಾ ಪಟ್ಟಿಯಲ್ಲಿ ನಿಗದಿ ಪಡಿಸಿದಂತೆ ಹಾಗೂ ತದನಂತರ ಹಾಗೂ ಸರ್ಕಾರ ಹೊರಡಿಸುವ ಅಧಿಸೂಚನೆಯಂತೆ ಇರತಕ್ಕದ್ದು.
5) ಗುಣ ನಡತೆ (ಪೊಲೀಸ್ ವರದಿ) ಸಿಂಧುತ್ವ ಪ್ರಮಾಣ ಪತ್ರಗಳು ಬಂದಿಲ್ಲದ ಪ್ರಕರಣಗಳಲ್ಲಿ ಗುಣ ನಡತೆ (ಪೊಲೀಸ್ ವರದಿ), ಸಿಂಧುತ್ವ ಪ್ರಮಾಣ ಪತ್ರಗಳು ಬಂದಾಗ ಅವುಗಳಲ್ಲಿ ಯಾವುದಾದರೂ ನ್ಯೂನತೆಗಳು ಕಂಡುಬಂದಲ್ಲಿ ಅಂತಹ ನೇಮಕಾತಿಗಳನ್ನು ರದ್ದುಪಡಿಸಲು ಕ್ರಮಕೈಗೊಳ್ಳಲು ತಮ್ಮಿಂದ ಅಭ್ಯಂತರವಿಲ್ಲ ಎಂಬ ಬಗ್ಗೆ ಅಭ್ಯರ್ಥಿಗಳು ಮುಚ್ಚಳಿಕೆ ಪತ್ರವನ್ನು ಕಾರ್ಯವರದಿ ಸಮಯದಲ್ಲಿ ನೀಡತಕ್ಕದ್ದು.

ನಿರ್ದೇಶಕರು

ಪಿ.ಆರ್.164

ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.

FORM-I

(See Rule 19)

NOTIFICATION

OFFICE OF THE BLOCK EDUCATION OFFICER SAVANUR

Shri SHABBEER AHAMMAD ALLAUDDEEN KUNDI Working as Assistant Teacher in the Govt-Lower Primary School Chikkabudihal Tq: Savanur (Education Department) Office of the Block Education Officer Savanur is permitted to change his name as **Shri SHABBEER AHAMMAD ALLAUDDEEN RITTI.**

BLOCK EDUCATIONAL OFFICER SAVANUR

PD-76

DIST. HAVERI.

ಕರ್ನಾಟಕ ಅರಣ್ಯ ಇಲಾಖೆ

ಚಿಕ್ಕಮಗಳೂರು ವೃತ್ತದಲ್ಲಿ ಅರಣ್ಯ ವೀಕ್ಷಕರ ಹುದ್ದೆಗಳಿಗೆ ನೇರ ನೇಮಕಾತಿ ಬಗ್ಗೆ ಅಧಿಸೂಚನೆ

ಭರ್ತಿಯಾದ ಅರ್ಜಿ ಸ್ವೀಕರಿಸಲು ಕೊನೆಯ ದಿನಾಂಕ:23.07.2011

ಅಧಿಸೂಚನೆ ಸಂಖ್ಯೆ: ಎ4–ಇಎಸ್‌ಟಿ–ನೇಮಕಾತಿ–ಆವೀ–ವಿವ–08/2011–12, ದಿನಾಂಕ:20.06.2011

ಚಿಕ್ಕಮಗಳೂರು ಅರಣ್ಯ ವೃತ್ತದ ವ್ಯಾಪ್ತಿ ಭದ್ರಾ ವನ್ಯಜೀವಿ ವಿಭಾಗದಲ್ಲಿ ಅರಣ್ಯ ವೀಕ್ಷಕರ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಿದ ಅರ್ಜಿಗಳನ್ನು ಅರಣ್ಯ ಸಂರಕ್ಷಣಾಧಿಕಾರಿ, ಚಿಕ್ಕಮಗಳೂರು ವೃತ್ತ, ಅರಣ್ಯ ಕಛೇರಿಗಳ ಸಂಕೀರ್ಣ, ಕೆ.ಎಂ.ರಸ್ತೆ, ಚಿಕ್ಕಮಗಳೂರು–577101 ಇಲ್ಲಿಗೆ ದಿನಾಂಕ:23.07.2011 ರಂದು ಅಪರಾಹ್ನ 5.30 ಗಂಟೆಗೆ ಅಥವಾ ಅದಕ್ಕಿಂತ ಮುಂಚಿತವಾಗಿ ತಲುಪಿಸತಕ್ಕದ್ದು. ಅರ್ಜಿಗಳನ್ನು ಅಂಚೆ ಮೂಲಕ ಅಥವಾ ಮುದ್ದಾಂ ಆಗಿ ಸಲ್ಲಿಸಬಹುದು. ಯಾವುದೇ ಅರ್ಜಿ ಶುಲ್ಕ ಇರುವುದಿಲ್ಲ ಹಾಗೂ ಅರ್ಜಿ ಜೊತೆಗೆ ಯಾವುದೇ ದಾಖಲೆಗಳನ್ನು ಸಲ್ಲಿಸಬಾರದು. ಲಕೋಟೆಯ ಮೇಲೆ "ಅರಣ್ಯ ವೀಕ್ಷಕರ ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಜಿ" ಎಂದು ಕಡ್ಡಾಯವಾಗಿ ನಮೂದಿಸತಕ್ಕದ್ದು. ಅರ್ಜಿ ನಮೂನೆಯನ್ನು ಇಲಾಖಾ ವತಿಯಿಂದ ಮಾರಾಟ ಮಾಡಲಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿ ನಮೂನೆಗಳನ್ನು ಟೈಪ್ ಅಥವಾ ಕಂಪ್ಯೂಟರ್ ಪ್ರಿಂಟ್‌ಗಳಲ್ಲಿ ತಯಾರಿಸಿ ಅರ್ಜಿ ಸಲ್ಲಿಸಬಹುದು. ಅರ್ಜಿ ನಮೂನೆಯ ಮಾದರಿಯನ್ನು ಅಧಿಸೂಚನೆಯೊಂದಿಗೆ ಪ್ರತ್ಯೇಕವಾಗಿ ಲಗತ್ತಿಸಿದೆ. ಅರ್ಜಿ ನಮೂನೆ ಹಾಗೂ ವಿವರಗಳನ್ನು ಅರಣ್ಯ ಇಲಾಖೆಯ **www.karnatakaforest.gov.in** ವೆಬ್‌ಸೈಟ್‌ನಲ್ಲಿ ಪ್ರಕಟಿಸಿದ್ದು, ಇದರಿಂದಲೂ ಸಹ ನೋಡಿಕೊಳ್ಳಬಹುದಾಗಿದೆ.

ಚಿಕ್ಕಮಗಳೂರು ಅರಣ್ಯ ವೃತ್ತದ ವ್ಯಾಪ್ತಿ ಭದ್ರಾ ವನ್ಯಜೀವಿ ವಿಭಾಗದಲ್ಲಿ ಒಟ್ಟು 40 ಅರಣ್ಯ ವೀಕ್ಷಕರ ಹುದ್ದೆಗಳನ್ನು ತುಂಬುವ ಬಗ್ಗೆ ವಿವರ ಈ ಕೆಳಕಂಡಂತೆ ಇರುತ್ತದೆ.

ವೇತನ ಶ್ರೇಣಿ: 5200–100–6000–125–6500–150–7100–175–7800–200–8200

I. ಭದ್ರಾ ವನ್ಯಜೀವಿ ವಿಭಾಗ – 40 ಹುದ್ದೆಗಳು:

ಅ. ಇತರೆ ವರ್ಗಗಳ ಅಭ್ಯರ್ಥಿ ಹುದ್ದೆಗಳ ಮೀಸಲಾತಿ ವರ್ಗೀಕರಣ (ಶೇ. 50)

ಮೀಸಲಾತಿಯ ವರ್ಗ	ವಿವಿಧ ಸಮತಳ ಮೀಸಲಾತಿ ವಿವರ								
	ಸಾಮಾನ್ಯ ಅಭ್ಯರ್ಥಿ	ಪರಿಶಿಷ್ಟ ಜಾತಿ	ಪರಿಶಿಷ್ಟ ಪಂಗಡ	ಪ್ರವರ್ಗ– I	ಪ್ರವರ್ಗ– II(A)	ಪ್ರವರ್ಗ– II(B)	ಪ್ರವರ್ಗ– III(A)	ಪ್ರವರ್ಗ– III(B)	ಒಟ್ಟು
ಸಾಮಾನ್ಯ ವರ್ಗ	06	02	-	-	03	01	01	01	14
ಗ್ರಾಮೀಣ ಅಭ್ಯರ್ಥಿ	03	01	-	-	01	-	-	-	05
ಮಾಜಿ ಸೈನಿಕ	01	-	-	-	-	-	-	-	01
ಒಟ್ಟು :	**10**	**03**	**-**	**-**	**04**	**01**	**01**	**01**	**20**

ಆ. ಸರ್ಕಾರದ ಅಧಿಸೂಚನೆ ಸಂಖ್ಯೆ: FEE-91-FTC-2002, ದಿನಾಂಕ: 06–12–2003 ರ ಪ್ರಕಾರ ಭದ್ರಾ ವನ್ಯಜೀವಿ ವಿಭಾಗಕ್ಕೆ ನಿಗಧಿಯಾದ 40 ಹುದ್ದೆಗಳ ಪೈಕಿ ಶೇ.50 ರಷ್ಟು ಹುದ್ದೆಗಳಿಗೆ ಸ್ಥಳೀಯ ಅರಣ್ಯ ವಾಸಿ ಬುಡಕಟ್ಟು ಪರಿಶಿಷ್ಟ ಪಂಗಡ ಅಭ್ಯರ್ಥಿಗಳನ್ನು ನೇರ ನೇಮಕಾತಿ ಮೂಲಕ ತುಂಬುವಂತೆ ತಿಳಿಸಿರುವ ಮೇರೆಗೆ ಈ ಕೆಳಗಿನಂತೆ ಮೀಸಲಾತಿಯನ್ನು ನಿಗಧಿಪಡಿಸಲಾಗಿದೆ.

ಮೀಸಲಾತಿಯ ವರ್ಗ	ಒಟ್ಟು
ಭದ್ರಾ ವನ್ಯಜೀವಿ ವಿಭಾಗ ವ್ಯಾಪ್ತಿಯಲ್ಲಿ ಬರುವ ತಾಲ್ಲೂಕುಗಳಲ್ಲಿ ಒಂದನೇ ತರಗತಿಯಿಂದ ಏಳನೇ ತರಗತಿವರೆಗೆ ಅಭ್ಯಾಸ ಮಾಡಿದ ಅರಣ್ಯ ವಾಸಿ ಬುಡಕಟ್ಟು ಜನಾಂಗದ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಅಂದರೆ ಜೇನು ಕುರುಬ, ಕಾಡು ಕುರುಬ, ಹಕ್ಕಿಪಿಕ್ಕಿ, ಸೋಲಿಗ, ಸೋಲಿಗಾರು, ಹೆರವ, ಗೌಡ್ಲು, ಇರುಲಾರ್, ಇರುಲಿಗ, ಕೊರಗ, ಮೇಲಕುಡಿ, ಮಲೈಕುಡಿ, ಮಾಲೇರು, ಮೇದ ಮತ್ತು ತೋಡ ಪಂಗಡಗಳಿಗೆ ಸೇರಿದ ಅಭ್ಯರ್ಥಿಗಳಿಗೆ	20
ಒಟ್ಟು :	**20**

ಅರ್ಹತೆ ಮತ್ತು ನಿಬಂಧನೆ:

(i). **ಪೌರತ್ವ–**

ಈ ಕೆಳಗೆ ಕಾಣಿಸಿದ ವ್ಯಕ್ತಿಗಳು ಮಾತ್ರ ಈ ಅಧಿಸೂಚನೆಯಲ್ಲಿ ವಿವರಿಸಿದ ಹುದ್ದೆಗಳಿಗೆ ನೇಮಕಾತಿ ಹೊಂದಲು ಅರ್ಹರಾಗಿರುತ್ತಾರೆ.

ಅ) ಭಾರತದ ಪೌರ, (ಆ) ಭೂತಾನದ ಪ್ರಜೆ, (ಇ) ನೇಪಾಳದ ಪ್ರಜೆ, (ಈ) ಭಾರತದಲ್ಲಿ ಖಾಯಂ ಆಗಿ ನೆಲೆಸುವ ಉದ್ದೇಶದಿಂದ 1962ರ ಜನವರಿ 1ನೇ ದಿನಾಂಕಕ್ಕೆ ಮೊದಲು ಭಾರತಕ್ಕೆ ಬಂದಿರುವ ಟಿಬೆಟಿಯನ್ ನಿರಾಶ್ರಿತರು.

ಉ) ಭಾರತದಲ್ಲಿ ಖಾಯಂ ಆಗಿ ನೆಲೆಸುವ ಉದ್ದೇಶದಿಂದ ಪಾಕಿಸ್ಥಾನ, ಮಯನ್ಮಾರ್ (ಬರ್ಮಾ), ಶ್ರೀಲಂಕಾ, ಪೂರ್ವ ಆಫ್ರಿಕಾದ ರಾಷ್ಟ್ರಗಳಾದ, ಕೀನ್ಯಾ, ಉಗಾಂಡಾ, ತಾಂಜಾನಿಯಾ, ಸಂಯುಕ್ತ ಗಣರಾಜ್ಯ (ಹಿಂದಿನ ಟಾಂಗನಿಕಾ, ಜಂಜಿಬಾರ), ಝಾಂಬಿಯಾ, ಮಾಲವಿ, ಜೈರ್, ಇಥಿಯೋಪಿಯಾ ಅಥವಾ ವಿಯೆಟ್ನಾಂ ಗಳಿಂದ ವಲಸೆ ಬಂದ ಭಾರತೀಯ ಮೂಲದ ವ್ಯಕ್ತಿ. ('ಅ' ಯಿಂದ **'ಉ' ವರೆಗೆ ಕಾಣಿಸಿರುವ ಅಭ್ಯರ್ಥಿಯು ವಲಸೆ ಬಂದ ಬಗ್ಗೆ ಅವನು ವಾಸಿಸುವ ಜಿಲ್ಲಾ ಸರಹದ್ದಿನ ಜಿಲ್ಲಾಧಿಕಾರಿ/ಜಿಲ್ಲಾ ನ್ಯಾಯಾಧೀಶರಿಂದ ಪ್ರಮಾಣ ಪತ್ರ ಪಡೆದು ಒಪ್ಪಿಸಬೇಕು. ಇಲ್ಲದ ಪಕ್ಷದಲ್ಲಿ ನೇಮಕಾತಿಗೆ ಅರ್ಹನಾಗಿರುವುದಿಲ್ಲ).**

(ii) **ವಿದ್ಯಾರ್ಹತೆ –**

ಏಳನೇ ತರಗತಿ ಪಾಸಾಗಿರಬೇಕು.

(iii) **ವಯೋಮಿತಿ:**

ಕರ್ನಾಟಕ ನಾಗರೀಕ ಸೇವಾ ನಿಯಮಗಳು (ಸಾಮಾನ್ಯ ನೇಮಕಾತಿ)–1977 ರ ನಿಯಮ 6 ರಂತೆ ಅರ್ಜಿ ಸಲ್ಲಿಸಲು ನೇಮಕಾತಿ ಬಗ್ಗೆ ಹೊರಡಿಸಿರುವ ಅಧಿಸೂಚನೆ ದಿನಾಂಕದಂದು ಅಂದರೆ ದಿನಾಂಕ 27–06–2011 ಕ್ಕೆ ಅಭ್ಯರ್ಥಿಗೆ ಕನಿಷ್ಠ 18 ವರ್ಷ ವಯಸ್ಸಾಗಿರಬೇಕು ಮತ್ತು ಈ ಕೆಳಕಂಡಂತೆ ಗರಿಷ್ಠ ವಯೋಮಿತಿ ಮೀರಿರಬಾರದು.

(ಅ) ಪರಿಶಿಷ್ಟ ಜಾತಿ/ಪ.ಪಂಗಡ/ಪ್ರವರ್ಗ:1 ರಲ್ಲಿ ತೋರಿಸಲಾಗಿರುವ ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ 3[illegible] ವರ್ಷಗಳು.

(ಆ) ಇತರ ಪ್ರವರ್ಗಗಳು ಅಂದರೆ 2(ಎ) ಅಥವಾ 2(ಬಿ) ಅಥವಾ 3(ಎ) ಅಥವಾ 3(ಬಿ) ರಲ್ಲಿ ತೋರಿಸಲಾಗಿರುವ ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ 32 ವರ್ಷಗಳು.

(ಇ) ಇತರೆ ಅಭ್ಯರ್ಥಿಗಳಿಗೆ 30 ವರ್ಷಗಳು.

(ಈ) **ಮಾಜಿ ಸೈನಿಕರಿಗೆ:-** ಸಶಸ್ತ್ರ ಪಡೆಗಳಲ್ಲಿ ಸೇವೆ ಸಲ್ಲಿಸಿ ನಿಯಮಾನುಸಾರ ನಿವೃತ್ತಿ/ಡಿಮೊಬಿಲೈಜೆಷನ್ (Demobilisation) ಅಥವಾ ರಿಟ್ರೇಂಚ್‌ಮೆಂಟ್ (Retrenchement) ಅಥವಾ ನಿವೃತ್ತಿ ಹೊಂದಿದ ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಅವರು ಎಷ್ಟು ವರ್ಷ ಸೇನೆಯಲ್ಲಿ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳ ಅವಧಿಯ ವಯೋಮಿತಿ ಸಡಿಲಿಕೆ ನೀಡಲಾಗುವುದು.

ವಿವರಣೆ: "ಮಾಜಿ ಸೈನಿಕ" ಎಂದರೆ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರಲ್ಲಿ ಅರ್ಥೈಸಿರುವಂತಾಗಿದೆ. ಈ ಪದದ ಅರ್ಥ ವಿವರಣೆ ಈ ಕೆಳಕಂಡಂತಿದೆ:

2 (1) (i) "Ex-serviceman" means a person, who has served in any rank (whether as a regular Army, Navy and combatant or as a non-combatant) in the regular Army, Navy and Air Force of the Union but does not include a person who has served in the Defence Security Corps, the General Reserved Engineering Force, the Lok Sahayak Sena and the Para Military Forces; and

(a) who has retired from such service after earning his pension; or

(b) who has been released from such service on medical grounds attributable to military service or circumstances beyond his control and awarded medical or other disability pension; or

(c) who has been released otherwise than on his own request from such service as a result of reduction in establishment; or

(d) who has been released from such service after completing the specific period of engagement otherwise than at his own request or by way of dismissal or discharge on account of mis-conduct or inefficiency and has been given a gratuity and includes personnel of the Territorial Army of the following categories namely:-

(i) pension holders for continuous embodied service;

(ii) persons with disability attributable to military service; and

(iii) gallantry award winners.

Explanation: The persons serving in the armed forces of the union, who on retirement from service, would come under the category of ex-serviceman may be permitted to apply for re-employment one year before the completion of the specified terms of agreement and avail themselves of all concessions available to ex-servicemen, but shall not be appointed to a State Civil Service or Post until they are permitted to leave the uniform.

(ಉ) ಅರಣ್ಯ ಇಲಾಖೆಯ ಅರಣ್ಯ ಪ್ರೇರಕರಾಗಿದ್ದಲ್ಲಿ ವಯೋಮಿತಿ ಕೆಳಗಿನಂತಿರುತ್ತದೆ.

1. ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡ ಮತ್ತು ಪ್ರ.ವರ್ಗ 1 ರ ಇತರೆ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ 43 ವರ್ಷಗಳು.
2. ಪ್ರವರ್ಗ–2(ಎ) ಅಥವಾ 2(ಬಿ) ಅಥವಾ 3(ಎ) ಅಥವಾ 3(ಬಿ) ರ ಇತರೆ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ 42 ವರ್ಷಗಳು.
3. ಇತರೆ ಅಭ್ಯರ್ಥಿಗಳಿಗೆ 40 ವರ್ಷ.
4. ಈ ವಯೋಮಿತಿ ಸವಲತ್ತು ಹೊಂದಲು ಅರಣ್ಯ ಪ್ರೇರಕ ಅಭ್ಯರ್ಥಿಯು ಕನಿಷ್ಟ 5 ವರ್ಷ ಇಲಾಖೆಯಲ್ಲಿ ನಿಗಧಿಗೊಳಿಸಿದ ಗೌರವ ಧನದೊಂದಿಗೆ ಸೇವೆ ಸಲ್ಲಿಸಿ ಈ ಅಧಿಸೂಚನೆ ಹೊರಡಿಸಿದ ದಿನಾಂಕದಂದು ಅರಣ್ಯ ಪ್ರೇರಕರಾಗಿ ಸೇವೆ ಸಲ್ಲಿಸುತ್ತಿರಬೇಕು.

ಮೂಲ ದಾಖಲೆಗಳ ಪರಿಶೀಲನೆ:

1. ಏಳನೇ ತರಗತಿ ಪಾಸಾದ ಬಗ್ಗೆ ಅಂಕಪಟ್ಟಿ
2. ಜನ್ಮ ದಿನಾಂಕದ ಬಗ್ಗೆ ಧೃಡೀಕರಣ ಪತ್ರ (ಶಾಲಾ ವರ್ಗಾವಣ ಪತ್ರ / ಕ್ಯುಮ್ಯುಲೇಟೀವ್ ರೆಕಾರ್ಡ್ / ಅಂಕ ಪಟ್ಟಿ ಅಥವಾ ಯಾವುದಾದರೂ ಅಧಿಕೃತ ಧೃಡೀಕರಣ ಪತ್ರ)
3. ಮೀಸಲಾತಿ ಕೋರಿರುವ ಬಗ್ಗೆ ಪ್ರಮಾಣ ಪತ್ರ
4. ಮಾಜಿ ಸೈನಿಕ ಅಭ್ಯರ್ಥಿಯು ಸೇನೆಯಿಂದ ಬಿಡುಗಡೆ ಹೊಂದಿದ ಬಗ್ಗೆ ಡಿಸ್‌ಚಾರ್ಜ್ ಪುಸ್ತಕ ಹಾಗೂ ಪಿಂಚಣಿ ಪಡೆಯುತ್ತಿರುವ ಬಗ್ಗೆ ದಾಖಲೆ
5. ಈ ಮೇಲಿನ ಮೂಲ ದಾಖಲೆಗಳನ್ನು ಪರಿಶೀಲಿಸಿ ಅರ್ಜಿಯಲ್ಲಿ ನಮೂದಿಸಿರುವ ಮಾಹಿತಿಗೂ ಹಾಗೂ ಪ್ರಸ್ತುತ ಸಲ್ಲಿಸಿರುವ ದಾಖಲೆಗಳಿಗೆ ಹೊಂದಾಣಿಕೆಯಾದಲ್ಲಿ ಮಾತ್ರ ಅಭ್ಯರ್ಥಿಗಳು ಮುಂದಿನ ಪರೀಕ್ಷೆಗಳಿಗೆ ಅರ್ಹತೆ ಹೊಂದುತ್ತಾರೆ.

6. ಮೇಲ್ಕಂಡ ಮೂಲ ದಾಖಲುಗಳನ್ನು ಹಾಗೂ ಸದರಿ ದಾಖಲಿನ 01 ದೃಢೀಕೃತ ಪ್ರತಿಯನ್ನು ದಾಖಲುಗಳ ಪರಿಶೀಲನಾ ಸಂದರ್ಭದಲ್ಲಿ ಒದಗಿಸುವುದು.

ಅ) ದೈಹಿಕ ತಾಳ್ವಿಕೆ ಪರೀಕ್ಷೆ:

ಅಭ್ಯರ್ಥಿಗಳು ಪುರುಷರಾಗಿದ್ದರೆ 1600 ಮೀಟರ್ ದೂರದ ಓಟವನ್ನು 6 ನಿಮಿಷಗಳಲ್ಲಿ ಮಹಿಳೆಯರಾಗಿದ್ದರೆ 1000 ಮೀ. ದೂರದ ಓಟವನ್ನು 5 ನಿಮಿಷಗಳಲ್ಲಿ ಮುಗಿಸಬೇಕು. ಈ ರೀತಿ ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳು ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಅರ್ಹತೆ ಹೊಂದುತ್ತಾರೆ.

(ಆ) ದೈಹಿಕ ಸಾಮರ್ಥ್ಯ ಪರೀಕ್ಷೆ:–

ಓಟ:– ಪುರುಷರು–100 ಮೀಟರ್ ಓಟವನ್ನು 15 ಸೆಕೆಂಡುಗಳಲ್ಲಿ ಮುಗಿಸಬೇಕು.
ಮಹಿಳೆಯರು 100 ಮೀಟರ್ ಓಟವನ್ನು 18.5 ಸೆಕೆಂಡುಗಳಲ್ಲಿ ಮುಗಿಸಬೇಕು.

ಹೈಜಂಪ್:– ಪುರುಷರು– 1.20 ಮೀಟರ್ ಎತ್ತರ ಹಾರಬೇಕು.
ಮಹಿಳೆಯರು– 0.90 ಮೀಟರ್ ಎತ್ತರ ಹಾರಬೇಕು.

ಲಾಂಗ್‌ಜಂಪ್: ಪುರುಷರು– 3.80 ಮೀಟರ್ ಉದ್ದಕ್ಕೆ ಜಿಗಿಯಬೇಕು.
ಮಹಿಳೆಯರು 2.50 ಮೀಟರ್ ಉದ್ದಕ್ಕೆ ಜಿಗಿಯಬೇಕು.

ಶಾಟ್‌ಪುಟ್ : ಪುರುಷರು–5.60 ಮೀಟರ್ ದೂರಕ್ಕೆ ಎಸೆಯಬೇಕು.
ಮಹಿಳೆಯರು–3.76 ಮೀಟರ್ ದೂರಕ್ಕೆ ಎಸೆಯಬೇಕು.

ಓಟ : ಪುರುಷರು–800 ಮೀಟರ್‌ಗಳ ದೂರವನ್ನು 2 ನಿಮಿಷ 50 ಸೆಕೆಂಡ್‌ಗಳಲ್ಲಿ ಓಡಬೇಕು.
ಮಹಿಳೆಯರು–200 ಮೀಟರ್‌ಗಳ ದೂರವನ್ನು 40 ಸೆಕೆಂಡ್‌ಗಳಲ್ಲಿ ಓಡಬೇಕು.

ಈ ಮೇಲಿನ 5 ದೈಹಿಕ ಸಾಮರ್ಥ್ಯ ಪರೀಕ್ಷೆಗಳ ಪೈಕಿ ಅಭ್ಯರ್ಥಿಯು ಕನಿಷ್ಠ 3 ಪರೀಕ್ಷೆಗಳಲ್ಲಿ ಜಯಶೀಲರಾಗಬೇಕು. ಹೀಗೆ ಜಯಶೀಲರಾದ ಅಭ್ಯರ್ಥಿಗಳು ದೈಹಿಕ ದಾಢ್ಯತೆ ಪರೀಕ್ಷೆಗೆ ಅರ್ಹರಾಗುತ್ತಾರೆ.

(ಇ) ದೈಹಿಕ ದಾಢ್ಯತೆ ಪರೀಕ್ಷೆ:

ಅಭ್ಯರ್ಥಿಗಳು ಈ ಕೆಳಗಿನ ಕನಿಷ್ಟ ದೇಹದಾಢ್ಯತೆಯನ್ನು ಹೊಂದಿರಬೇಕು.

	ಕನಿಷ್ಠ ಎತ್ತರ	ಎದೆ ಸುತ್ತಳತೆ		ತೂಕ
		ಸಾಮಾನ್ಯ ಸ್ಥಿತಿ	ಕನಿಷ್ಟ ಹಿಗ್ಗುವಿಕೆ	ಕನಿಷ್ಠ ತೂಕ
ಪುರುಷರಿಗೆ	163 ಸೆ.ಮೀ	79 ಸೆ.ಮೀ.	5 ಸೆ.ಮೀ.	–
ಮಹಿಳೆಯರಿಗೆ	150 ಸೆ.ಮೀ.	–	–	40 ಕೆ.ಜಿ.

ಸರ್ಕಾರದ ಅಧಿಸೂಚನೆ ಸಂಖ್ಯೆ: FEE-91-FTC-2002, ದಿನಾಂಕ: 06–12–2003 ರ ಪ್ರಕಾರ ವನ್ಯಜೀವಿ ವಿಭಾಗಗಳಲ್ಲಿ ಲಭ್ಯವಾಗುವ ಖಾಲಿ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸ್ಥಳೀಯ ಅರಣ್ಯ ವಾಸಿ ಬುಡಕಟ್ಟು ಜನಾಂಗದ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಅಂದರೆ, ಜೇನು ಕುರುಬ, ಕಾಡು ಕುರುಬ, ಹಕ್ಕಿಪಿಕ್ಕಿ, ಸೋಲಿಗ, ಸೋಲಿಗಾರು, ಹೆರವ, ಗೌಡ್ಲು, ಇರುಲಾರ್, ಇರುಲಿಗ, ಕೊರಗ, ಮೇಲಕುಡಿ, ಮಲೈಕುಡಿ, ಮಾಲೇರು, ಮೇದ ಮತ್ತು ತೋಡ ಪಂಗಡಗಳಿಗೆ ಸೇರಿದ ಅಭ್ಯರ್ಥಿಗಳು ಈ ಕೆಳಗಿನಂತೆ ದೈಹಿಕ ದಾಢ್ಯತೆಯನ್ನು ಹೊಂದಿರಬೇಕು.

	ಕನಿಷ್ಠ ಎತ್ತರ	ಎದೆ ಸುತ್ತಳತೆ		ತೂಕ
		ಸಾಮಾನ್ಯ ಸ್ಥಿತಿ	ಕನಿಷ್ಟ ಹಿಗ್ಗುವಿಕೆ	ಕನಿಷ್ಠ ತೂಕ
ಪುರುಷರಿಗೆ	152 ಸೆ.ಮೀ	74 ಸೆ.ಮೀ.	5 ಸೆ.ಮೀ.	–
ಮಹಿಳೆಯರಿಗೆ	145 ಸೆ.ಮೀ.	–	–	38 ಕೆ.ಜಿ.

ಸರ್ಕಾರದ ಅಧಿಸೂಚನೆ ಸಂಖ್ಯೆ: FEE-91-FTC-2002, ದಿನಾಂಕ: 06-12-2003 ರ ಪ್ರಕಾರ ಈ ಕೆಳಕಂಡ ದೈಹಿಕ ನ್ಯೂನತೆಗಳನ್ನು ಹೊಂದಿರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

1. ತೊಡರು ಗಾಲು (Knock-knee)
2. ಬಾಗಿದ ಕಾಲುಗಳು (Bow legs)
3. ಸಮತಟ್ಟಾದ ಪಾದ (Flat feet)
4. ಗಂಟುಗಟ್ಟಿದ ನರಗಳು (Varicose veins)
5. ಮಾತಾಡಲು ಮತ್ತು ಕೇಳುವ ಸಾಮರ್ಥ್ಯದಲ್ಲಿ ತೊಡಕು (impediment in speech and hearing)
6. ಅಂಡವಾಯು (hydrocele in men)
7. ಬಣ್ಣಕುರುಡು/ಇರುಳುಕುರುಡು (vision/color blindness/night blindness)

ದೃಷ್ಟಿ ಸಾಮರ್ಥ್ಯ : ಅಭ್ಯರ್ಥಿಗಳು ಈ ಕೆಳಗಿನಂತೆ ನಿಗದಿಪಡಿಸಿರುವ ಅಂತರಗಳ ದೃಷ್ಟಿ ಸಾಮರ್ಥ್ಯವನ್ನು ಕನ್ನಡಕ ಸಹಿತ / ಕನ್ನಡಕ ರಹಿತವಾಗಿ ಕಡ್ಡಾಯವಾಗಿ ಹೊಂದಿರಬೇಕು.

8. ದೂರ ದೃಷ್ಟಿ ಸಾಮರ್ಥ್ಯ : ಅ) ಉತ್ತಮ ಕಣ್ಣು (better eye) - 6/6 ಮೀ.
ಆ) ದೋಷಯುಕ್ತ ಕಣ್ಣು (Worse eye) - 6/9 ಮೀ.

9. ಸಮೀಪ ದೃಷ್ಟಿ ಸಾಮರ್ಥ್ಯ : ಅ) ಉತ್ತಮ ಕಣ್ಣು (better eye) - 0/6 ಮೀ.
ಆ) ದೋಷಯುಕ್ತ ಕಣ್ಣು (Worse eye) - 0/8 ಮೀ.

ಪ್ರತಿಯೊಂದು ಕಣ್ಣು ಉತ್ತಮ ದೃಷ್ಟಿ ಸಾಮರ್ಥ್ಯವನ್ನು ಹೊಂದಿರಬೇಕು. ಬಣ್ಣಕುರುಡು, ಮೆಳ್ಳೆಗಣ್ಣು, ಅನಾರೋಗ್ಯದ ಕಣ್ಣುಗಳನ್ನು ರೆಪ್ಪೆ ದೋಷ ಹೊಂದಿರುವ ಅಭ್ಯರ್ಥಿಗಳನ್ನು ಅಭ್ಯರ್ಥಿತನದಿಂದ ಅನರ್ಹಗೊಳಿಸಲಾಗುವುದು.

ಶ್ರವಣ ಶಕ್ತಿ ಪರೀಕ್ಷೆ :

10. **ಶ್ರವಣ ಸಾಮರ್ಥ್ಯ :** ಅ) ರಿನ್ನರ್ಸ್ ಟೆಸ್ಟ್ (Rinner's test), ಅ) ವೆಬ್ಬರ್ಸ್ ಟೆಸ್ಟ್ (Webber's test), ಇ) ಟೆಸ್ಟ್ ಫಾರ್ ವರ್ಟಿಗೋ (test for vertigo) ಈ ಮೂರು ಶ್ರವಣ ಪರೀಕ್ಷೆಗಳಲ್ಲಿ ದೋಷಗಳನ್ನು ಹೊಂದಿದ್ದು ಕಂಡು ಬಂದಲ್ಲಿ ಅಂತಹ ಅಭ್ಯರ್ಥಿಗಳನ್ನು ಅಭ್ಯರ್ಥಿತನದಿಂದ ಅನರ್ಹಗೊಳಿಸಲಾಗುವುದು.

ಎಲ್ಲಾ ಅಭ್ಯರ್ಥಿಗಳಿಗೆ ದೈಹಿಕ ತಾಳ್ವಿಕೆ ಪರೀಕ್ಷೆಯು ಕಡ್ಡಾಯವಾಗಿರುತ್ತದೆ. ದೈಹಿಕ ತಾಳ್ವಿಕೆ ಪರೀಕ್ಷೆಯಲ್ಲಿ ಅರ್ಹರಾದವರಿಗೆ ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಅವಕಾಶ ನೀಡಲಾಗುವುದು. ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿ ಅರ್ಹರಾದವರಿಗೆ ದೈಹಿಕದಾರ್ಢ್ಯತೆ ಪರೀಕ್ಷೆಗೆ ಒಳಪಡಿಸಲಾಗುವುದು. ಈ ಎಲ್ಲಾ ಪರೀಕ್ಷೆಗಳಲ್ಲಿ ಅರ್ಹರಾದವರು ಲಿಖಿತ ಪರೀಕ್ಷೆಗೆ ಹಾಜರಾಗಲು ಅರ್ಹತೆ ಹೊಂದುತ್ತಾರೆ.

(v). ಲಿಖಿತ ಪರೀಕ್ಷೆ:

ಲಿಖಿತ ಪರೀಕ್ಷೆಯು ಒಂದು ಗಂಟೆಯ ಅವಧಿಯದಾಗಿದ್ದು ಇದು ಪ್ರಾಥಮಿಕ ಸಾಮಾನ್ಯ ಜ್ಞಾನ ಹಾಗೂ ಪ್ರಾಥಮಿಕ ಅಂಕ ಗಣಿತ ವಿಷಯಗಳನ್ನು ಒಳಗೊಂಡಿದ್ದು, ಒಟ್ಟು 100 ಅಂಕಗಳ ಆಬ್‌ಜೆಕ್ಟಿವ್ ಮಾದರಿಯ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ.

ಗಮನಿಸಬೇಕಾದ ಅಂಶಗಳು –

1. ನಿಗದಿತ ಕೊನೆಯ ದಿನಾಂಕದ ನಂತರ ಬಂದ ಅಂದರೆ ದಿನಾಂಕ 23.07.2011 ರಂದು ಸಂಜೆ 5–30 ಗಂಟೆಯೊಳಗೆ ಈ ಕಛೇರಿಗೆ ತಲುಪದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಮತ್ತು ಅರ್ಜಿಗಳನ್ನು ಸ್ವೀಕರಿಸಿದ ಬಗ್ಗೆ ಯಾವುದೇ ಸ್ವೀಕೃತಿಯನ್ನು ನೀಡಲಾಗುವುದಿಲ್ಲ. ಅರ್ಜಿಗಳನ್ನು ಅಂಚೆಗಳ ಮೂಲಕ – ಮುದ್ದಾಂ ಮೂಲಕವಾಗಿ ಮಾತ್ರ ಸ್ವೀಕರಿಸಲಾಗುವುದು.
2. ನಿಗದಿತ ನಮೂನೆಯಲ್ಲಿಲ್ಲದ ಅಥವಾ ಅಪೂರ್ಣ ಮಾಹಿತಿ ನೀಡಿದ ಅರ್ಜಿಗಳನ್ನು ಅನರ್ಹ ಅರ್ಜಿಗಳೆಂದು ತಿರಸ್ಕರಿಸಲಾಗುವುದು.
3. ಅರ್ಜಿಯೊಂದಿಗೆ ನಿಮ್ಮ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ 3 ಭಾವಚಿತ್ರ ಹಾಗೂ ₹.5/– ರ ಅಂಚೆ ಚೀಟಿ ಅಂಟಿಸಿದ ಸ್ವವಿಳಾಸವಿರುವ ಎರಡು ಲಕೋಟೆಯನ್ನು ಕಳುಹಿಸುವುದು.
4. **ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರಿದ ಅಭ್ಯರ್ಥಿಗಳು ಸಲ್ಲಿಸಬೇಕಾದ ಪ್ರಮಾಣ ಪತ್ರಗಳ ವಿವರ :**

ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರಿ ಅರ್ಜಿ ಸಲ್ಲಿಸುವವರು ಜಾತಿ ಪ್ರಮಾಣ ಪತ್ರವನ್ನು ಈ ಕೆಳಕಂಡ ನಮೂನೆಗಳಲ್ಲಿ ಹೊಂದಿರಬೇಕು. ಮೀಸಲಾತಿ ವರ್ಗೀಕರಣ / ಜಾತಿ ಪ್ರಮಾಣ ಪತ್ರಗಳು ಅಧಿಸೂಚನೆ ದಿನಾಂಕಕ್ಕೆ ಒಂದು ವರ್ಷದೊಳಗೆ ನೀಡಿರುವ ಪ್ರಮಾಣ ಪತ್ರವಾಗಿರಬೇಕು.

3.1 ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರ "ನಮೂನೆ–ಡಿ" ರಲ್ಲಿ.

3.2 ಪ್ರವರ್ಗ–1 ರ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರ "ನಮೂನೆ–ಇ" ರಲ್ಲಿ.

3.3 ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರ "ನಮೂನೆ–ಎಫ್" ರಲ್ಲಿ.

ಸೂಚನೆ:– "ನಮೂನೆ–ಎಫ್" ಪ್ರಮಾಣ ಪತ್ರವು ಒಂದು ವರ್ಷದೊಳಗೆ ನೀಡಿರುವ ಪ್ರಮಾಣ ಪತ್ರವಾಗಿರಬೇಕೆಂಬುದನ್ನು ಅಭ್ಯರ್ಥಿಯು ಗಮನದಲ್ಲಿಡತಕ್ಕದ್ದು.

3.4 ಮಾಜಿ ಸೈನಿಕರಾಗಿದ್ದಲ್ಲಿ ಸಂಬಂಧಪಟ್ಟ ಘಟಕದಿಂದ ಡಿಸ್‌ಚಾರ್ಜ್ ಮೂಲ ಪ್ರಮಾಣ ಪತ್ರ ಮತ್ತು ಪಿಂಚಣಿ ಪಡೆಯುತ್ತಿರುವ ಬಗ್ಗೆ ದಾಖಲೆ ಒದಗಿಸಬೇಕು

3.5(ಅ) ಗ್ರಾಮೀಣ ಮೀಸಲಾತಿ ವರ್ಗೀಕರಣದಲ್ಲಿ ಮೀಸಲಾತಿ ಕೋರಿರುವ ಅಭ್ಯರ್ಥಿಗಳು 1 ನೇ ತರಗತಿಯಿಂದ 10ನೇ ತರಗತಿಯವರೆಗೆ ಎಲ್ಲಾ ವರ್ಷಗಳು ವಿದ್ಯಾಭ್ಯಾಸ ಮಾಡಿದ ಬಗ್ಗೆ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರಿಂದ ನೀಡಲಾದ ನಮೂನೆ-2 ನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿಸಿರಬೇಕು.

(ಆ) ಗ್ರಾಮೀಣ ಮೀಸಲಾತಿಗೆ ಅರ್ಹರಾದ ಸಾಮಾನ್ಯ ಗುಂಪಿನ ಅಭ್ಯರ್ಥಿಗಳು ಮೇಲೆ 3.5 (ಅ)ರಲ್ಲಿ ತಿಳಿಸಿರುವ ನಮೂನೆ-2 ರ ಜೊತೆಗೆ ನಿಗದಿತ ನಮೂನೆ-1 ರಲ್ಲಿ ಸಂಬಂಧಪಟ್ಟ ತಹಶೀಲ್ದಾರರಿಂದ ಅವರು ಕ್ರೀಮಿಲೇಯರ್ (ಮೇಲುಸ್ಥರ) ಪರಿಮಿತಿಯಲ್ಲಿ ಬರುವುದಿಲ್ಲವೆಂದು ಧೃಢೀಕರಿಸಿರುವ ಪ್ರಮಾಣ ಪತ್ರ ಪಡೆದಿರಬೇಕು.

3.6 ಯೋಜನಾ ನಿರಾಶ್ರಿತ ಮೀಸಲಾತಿ ವರ್ಗೀಕರಣದಲ್ಲಿ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರರಿಂದ ನಿಗದಿತ ನಮೂನೆಯಲ್ಲಿ ನೀಡಿರುವ ಪ್ರಮಾಣ ಪತ್ರ.

5. ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿಯರನ್ನು : ಪತಿಯರನ್ನು ಹೊಂದಿದ ಪುರುಷ : ಮಹಿಳೆ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

6. ಯಾವುದೇ ಅಭ್ಯರ್ಥಿಯು ತನ್ನ ಅಭ್ಯರ್ಥಿತನಕ್ಕೆ ಯಾವುದೇ ಬಾಹ್ಯ ಒತ್ತಡ ತರಲು ಪ್ರಯತ್ನಿಸಿದಲ್ಲಿ ಅಂತಹ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗುವುದಿಲ್ಲ.

7. ಕಾನೂನು ಬಾಹಿರನೆಂದು ಸಂಸ್ಥೆ ಅಥವಾ ಸಂಘ ಘೋಷಿಸಲಾದ ಸದಸ್ಯರಾಗಿದ್ದರೆ ಅಥವಾ ಇನ್ನಾವುದೇ ರೀತಿಯಲ್ಲಿ ಅಂತಹ ಸಂಘ ಸಂಸ್ಥೆಗಳೊಂದಿಗೆ ನಿಕಟ ಸಂಪರ್ಕ ಹೊಂದಿದ್ದರೆ ಅಂತಹ ವ್ಯಕ್ತಿ ನೇಮಕಾತಿಗೆ ಅರ್ಹರಾಗುವುದಿಲ್ಲ.

8. ಅಭ್ಯರ್ಥಿಯು ಸಮಾಜ ಘಾತುಕ ಕೃತ್ಯಗಳಲ್ಲಿ ತೊಡಗಿ ಅಪರಾಧಿಯಾಗಿದ್ದರೆ ಅಂತಹ ವ್ಯಕ್ತಿಗಳು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

9. ಭಾರತ ಸರ್ಕಾರ, ರಾಜ್ಯ ಸರ್ಕಾರದ ಅಥವಾ ಸರ್ಕಾರಿ ನಿಗಮಗಳ ಸೇವೆಯಿಂದ ವಜಾ ಆಗಿರುವವರು ನೇಮಕಾತಿಗೆ ಅರ್ಹರಾಗಿರುವುದಿಲ್ಲ.

10. ಯಾವುದೇ ಅಭ್ಯರ್ಥಿಯು ಕೇಂದ್ರ ಅಥವಾ ಯಾವುದೇ ರಾಜ್ಯ ಸರ್ಕಾರ: ಸರ್ಕಾರಿ ಸಂಸ್ಥೆಗಳಿಗೆ ನಡೆಸುವ ಯಾವುದೇ ಪರೀಕ್ಷೆಗಳಿಗೆ ಅಥವಾ ಆಯ್ಕೆಗಳಿಗೆ ಹಾಜರಾಗುವುದರಿಂದ, ತಾತ್ಕಾಲಿಕವಾಗಿ ಬಹಿಷ್ಕರಿಸಲ್ಪಟ್ಟಿದ್ದರೆ ಅಥವಾ ಖಾಯಂ ಆಗಿ ಅನರ್ಹಗೊಂಡಿದ್ದರೆ ಅಥವಾ ಬಹಿಷ್ಕರಿಸಲ್ಪಟ್ಟಿದ್ದರೆ, ಸರ್ಕಾರವು ಈ ಎಲ್ಲಾ ಸಂದರ್ಭಗಳನ್ನು ಪುನರವಲೋಕಿಸಿ ಈ ನೇಮಕಾತಿಗೆ ಅರ್ಹನೆಂದು ಪರಿಗಣಿಸುವವರೆಗೆ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

11. ಅಭ್ಯರ್ಥಿಯು ನೇಮಕಾತಿ ಪರೀಕ್ಷೆಯಲ್ಲಿ ಬೇರೊಬ್ಬ ವ್ಯಕ್ತಿಯನ್ನು ತನ್ನ ಪರವಾಗಿ ಕಳಿಸಿದಲ್ಲಿ ತಪ್ಪು ಮಾಹಿತಿಗಳನ್ನು ನಮೂದಿಸಿದಲ್ಲಿ ಅಥವಾ ಕೃತ್ರಿಮ ಅಥವಾ ತಿದ್ದಿದ ದಾಖಲಾತಿಗಳನ್ನು ಅಥವಾ ಅಸತ್ಯ ವಿವರಗಳನ್ನು ನೀಡಿದಲ್ಲಿ ಅಥವಾ ಸತ್ಯ ವಿಷಯಗಳನ್ನು ಮರೆಮಾಚಿದ ಅಥವಾ ಅನುಚಿತ ಮಾರ್ಗಗಳನ್ನು ಉಪಯೋಗಿಸಿದಲ್ಲಿ ಅಥವಾ ಪ್ರಯತ್ನಿಸಿದಲ್ಲಿ ಅನರ್ಹರೆಂದು ಪರಿಗಣಿಸಲಾಗುವುದು ಮತ್ತು ಅಪರಾಧಿ ವ್ಯವಹರಣೆಗೆ ಒಳಪಡುವರು.

12. ಅಭ್ಯರ್ಥಿಗಳು ನೇಮಕಾತಿ ಪರೀಕ್ಷೆಗಳಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು.

13. ಯಾವುದೇ ಪರೀಕ್ಷೆಗೆ ಸೂಚನೆ / ತಿಳುವಳಿಕೆ ದೊರೆಯದ ಅಭ್ಯರ್ಥಿಗಳು ನೇಮಕಾತಿಗೆ ಅಯ್ಕೆಯಾಗಿರುವುದಿಲ್ಲವೆಂದು ತಿಳಿಯುವುದು. ಈ ವಿಷಯದಲ್ಲಿ ಯಾವುದೇ ಪತ್ರ ವ್ಯವಹಾರಕ್ಕೆ ಅಸ್ಪದವಿರುವುದಿಲ್ಲ.

ಅರಣ್ಯ ಸಂರಕ್ಷಣಾಧಿಕಾರಿ
ಮತ್ತು ಆಯ್ಕೆ ಪ್ರಾಧಿಕಾರಿ,
ಚಿಕ್ಕಮಗಳೂರು ವೃತ್ತ, ಚಿಕ್ಕಮಗಳೂರು.

ಪಿ.ಆರ್.239

PROCEEDINGS OF THE KARNATAKA STATE BOARD OF WAKFS, BANGALORE

Sub: Assumption of Ahle Sunnath Jamath, Asar Mohalla, Old Hubli, Hubli-Dharwad District, under the direct management of the Board.

Ref:

The institution viz., Ahle Sunnath Jamath, Asar Mohalla, Old Hubli, Hubli, Dharwad District, is a Wakf institution. The said institution is managed by a managing committee constituted by the Board vide order No. KTW/CMC/90/DHD/06-07 Dated:31.08.2007 to function for a period of three years, its term expired on 30.08.2010. The said wakf institution has Bye-laws approved by the Board vide its order No.KTW/BLS/93/DHD/06-07 Dated:17.08.2007.

The Chairman, DWAC, Dharwad, vide his letter Dated:23.09.2010 has requested to appoint Election Officer and Assistant Election Officer to conduct election to the said Wakf, since the term of managing committee has expired and the Bye-laws of the said Wakf has also been approved. The Board has appointed Mr. Abdul Kareem Khan Mahaboob Khan Masti, Advocate & Mr. Abdul Razak Raj Mohammed Khawas, Retd. High School Teacher as Returning Officer & Assistant Returning Officer respectively to conduct election to the said Wakf vide order No.KTW/CMC/32/DHD/2010-11, Dated:22.11.2010.

The Chairman, DWAC, Dharwad, vide his letter Dated:04.02.2011 alongwith the letter of Returning Officer has reported that the President/ Secretary of the said institution is not co-operating with the Returning Officer with regard to conducting of election and the Secretary has misbehaved and asked the Returning Officer & Assistant Returning Officer not to conduct election and recommended to appoint Administrator, by taking the institution under direct management of the Board. The period for which the present committee was appointed was expired and there is vacancy in the managing committee and there is no other person to be appointed as Muthawalli.

The matter was placed before the Administrator of Karnataka State Board of Wakfs, Bangalore. The Administrator has accorded its approval as proposed for taking the said Wakf institution under the direct management of the Board and to appoint Sri Siraj Saheb Mahbub Saheb Hudedmani, District Adult Educational Officer, Dharwad, as its Administrator on 24.02.2011.

Hence this Order.

ORDER NO.KTW/CMC/32/DHD/2010-11 Dated: 05.03.2011

In view of the facts mentioned in the Preamble and in exercise of the powers conferred under section 65 of the Wakf Act 1995, the Karnataka State Board of Wakfs, Bangalore, assume the institution viz., Ahle Sunnath Jamath, Asar Mohalla, Old Hubli, Hubli, Dharwad District, under the direct management of the Board and appoints Sri Siraj Saheb Mahbub Saheb Hudedmani, District Adult Educational Officer, Dharwad, as its Administrator to manage day to day affairs of the said institution until further order.

The Administrator shall function in accordance with the Wakf Act 1995 and Karnataka Wakf Rules, 1997 and the direction issued by the Karnataka State Board of Wakfs from time to time.

By Order of the Administrator
Chief Executive Officer
Karnataka State Board of Wakfs.

PD-30

KARNATAKA STATE BOARD OF WAKF

[Constituted by the Govt. of Karnataka under the Wakf Act, 1995 (Central Act-43 of 95)]

Darul Awkaf, #6, Cunningham Road, Bangalore-560052

NOTIFICATION No.KTW/MSC/33/BGM/10-11, Dated:20.04.2011

Sub: Notification regarding the acquisition of immoveable property by Anjuman-e-Islam, Belgaum under Section 53 of the Wakf Act, 1995.

Where as the Administrator, Anjuman-e-Islam, Belgaum has submitted an application for acquiring the immoveable properties noted in the schedule below out of its own funds/ taking loans, Under Section 53 of the Wakf Act, 1995 and Sub-rule (1) of Rule 50 of the Wakf Rules.

SCHEDULE

Name of the Wakf	Details of immovable property proposed for purchased				Amount Proposed
	Sy.No./property No/Khata No.2A	Extent/ Area Dimension 2B	Village/ town City N.S.E.W. 2C	Boundaries	
1	2				
Anjuman-e-Islam Belgaum	Sy.No.570 & 571	20,650.50.Sq.Mtrs Allotted by Commissioner, Belgaum, Urban Development Authority, Belgaum under Scheme No.35, 43 & 43A	Kanbargi Village Belgaum District		Rs.4.65 Crores (Rupees - Four Crores Sixty Five lakhs only) Excluding Registration fee.

Where after careful consideration of this application it is found that the said application is adequate and reasonable as per the report furnish by Administrator, Anjuman-e-Islam Belgaum.

Now, there fore in exercise of the powers conferred Under Section 53, it is to inform to the General Public and any persons interested in this Wakf to file Objections. Suggestions if any in respect of the said transaction to the Board within 10 days from the date of publication of this Notification in the official Gazette. The Objections/ Suggestions if any shall be addressed to the Chief Executive Officer and the Ex-Officio Secretary of Karnataka State Board of Wakf in an envelope superscribed "Objections/ Suggestions" with reference to notification No.KTW/MSC/33/BGM/10-11, Dated:20.04.2011.

Chief Executive Officer
Karnataka State Board of Wakfs.

PD-53

ಅಧ್ಯಕ್ಷರು, ಭೂಮಾಪನ ಇಲಾಖೆ, ನೇರ ನೇಮಕಾತಿ ಸಮಿತಿ ಹಾಗೂ ಆಯುಕ್ತರು ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು

ಅಧಿಸೂಚನೆ

ಸಂ.ಸಿಬ್ಬಂದಿ.ನೇಮಕಾತಿ.164/2011 ದಿನಾಂಕ: 25/6/2011

1. ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ಹಾಗೂ ಭೂಮಾಪನ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಭೂಮಾಪನ ಇಲಾಖೆಯಲ್ಲಿನ ಈ ಕೆಳಕಂಡ **ಭೂಮಾಪಕರ** ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಪತ್ರ ಸಂ.ಕಂ.ಇ. 280 ಭೂದಾಸ 2011 ದಿನಾಂಕ: 26–4–2011 ರಲ್ಲಿ ಅನುಮತಿಸಿದಂತೆ ಅರ್ಹ ಅಭ್ಯರ್ಥಿಗಳಿಂದ Online (ಆನ್–ಲೈನ್) ಮುಖಾಂತರ ಅರ್ಜಿಗಳನ್ನು ಆಹ್ವಾನಿಸಿದೆ.

ಹುದ್ದೆ / Post	ವೇತನ ಶ್ರೇಣಿ / Pay scale	ಹುದ್ದೆಗಳ ಸಂಖ್ಯೆ No. of Posts
ಲ್ಯಾಂಡ್ ಸರ್ವೆಯರ್ (ಭೂಮಾಪಕರು)	ವೇತನ ಶ್ರೇಣಿ: ರೂ.6250–125–6500–150–7100–175–7800–200–8600–225–9500–250–10500–300–12000	1834

ಪಿಂಚಣಿ ಸೌಲಭ್ಯ : ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ (ಎಸ್‌ಪಿಎಲ್).04/ ಪಿಇಟಿ.2005 ದಿನಾಂಕ: 31.3.2006 ರಂತೆ ದಿನಾಂಕ:01–04–2006 ರಿಂದ ಅನ್ವಯಿಸುವಂತೆ **ನೂತನ ಪಿಂಚಣಿ ಯೋಜನೆಯನ್ನು** (New Pension Scheme) ಯನ್ನು ಜಾರಿಗೆ ತರಲಾಗಿದೆ. ಈ ಯೋಜನೆಯ ಪ್ರಕಾರ ಹೊಸದಾಗಿ ನೇಮಕಾತಿ ಹೊಂದುವ ನೌಕರರು, ಸದರಿ ಆದೇಶದ ಪ್ರಕಾರ ತನ್ನ ಮೂಲ ವೇತನ ಮತ್ತು ತುಟ್ಟಿಭತ್ಯೆಯ ಶೇಕಡ 10 ರಷ್ಟನ್ನು ಪ್ರತಿ ಮಾಹೆ ವಂತಿಗೆಯಾಗಿ ನೂತನ ಪಿಂಚಣಿ ಯೋಜನೆಯಲ್ಲಿ ತೊಡಗಿಸತಕ್ಕದ್ದು. ಮತ್ತು ಅಷ್ಟೇ ಪ್ರಮಾಣದ ಮೊತ್ತವನ್ನು ಸರ್ಕಾರವೂ ಭರಿಸಿ ಈ ಯೋಜನೆಯಲ್ಲಿ ಸಂಗ್ರಹಿಸಲಾಗುತ್ತದೆ. ಹೀಗೆ ಸಂಗ್ರಹಗೊಂಡ ಮೊತ್ತವನ್ನು ಸದರಿ ಆದೇಶದಲ್ಲಿ ವಿವರಿಸಿರುವಂತೆ ವಯೋನಿವೃತ್ತಿ ಅಥವಾ ಸ್ವಇಚ್ಛಾ ನಿವೃತ್ತಿ ಮತ್ತು ಸರ್ಕಾರಿ ಸೇವೆಯಲ್ಲಿರುವಾಗಲೇ ಮರಣ ಹೊಂದಿದ ಸಂದರ್ಭದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ (ಎಸ್‌ಪಿಎಲ್).04/ಪಿಇಟಿ.2005 ದಿ: 31.3.2006 ರಂತೆ ಷರತ್ತಿಗೊಳಪಟ್ಟು ನಿಯಮಾನುಸಾರ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಈ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ತಾತ್ಕಾಲಿಕವಾಗಿ (Tentatively) ಸೆಪ್ಟೆಂಬರ್ 2011 ರ ಕೊನೆಯ ವಾರ ಅಥವಾ ಅಕ್ಟೋಬರ್ 2011 ರ ಮೊದಲ ವಾರದಲ್ಲಿ ನಡೆಸಲು ಉದ್ದೇಶಿಸಿದೆ. ಪರೀಕ್ಷೆಯ ಖಚಿತ ದಿನಾಂಕವನ್ನು ಅಭ್ಯರ್ಥಿಗಳಿಗೆ **15–8–2011** ರ ಮುಂಚಿತವಾಗಿ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲಾಗುವುದು.

ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು. ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಅಂತಹ ಅರ್ಜಿಗಳನ್ನು ಯಾವುದೇ ಮುನ್ಸೂಚನೆಯಿಲ್ಲದೇ ತಿರಸ್ಕರಿಸಲಾಗುವುದು.

ಅರ್ಜಿಗಳನ್ನು ಆನ್–ಲೈನ್ (Online) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

2. **ಇಲಾಖಾ ಕಿರು ಪರಿಚಯ ಮತ್ತು ಹುದ್ದೆಯ ಕರ್ತವ್ಯ ಹಾಗೂ ಜವಾಬ್ದಾರಿಯ ಬಗ್ಗೆ ಅನುಬಂಧ–1 ರಲ್ಲಿ ವಿವರಿಸಿದೆ.**
3. **ಪರೀಕ್ಷಾ ಶುಲ್ಕ :**

ಸಾಮಾನ್ಯ ಅರ್ಹತೆ, ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ	ರೂ.500/–
ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1 ಮತ್ತು ಅಂಗವಿಕಲ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ	ರೂ.300/–

ಅ) ಅಭ್ಯರ್ಥಿಗಳು ಯಾವುದೇ ತಪ್ಪು ಮಾಹಿತಿಯನ್ನು ನೀಡದೇ ಅರ್ಜಿ ಭರ್ತಿ ಮಾಡಲು On-Line ನಲ್ಲಿ ನೀಡಿರುವ ಸೂಚನೆಗಳನ್ವಯ ಭರ್ತಿ ಮಾಡತಕ್ಕದ್ದು.

ಆ) ಆನ್–ಲೈನ್ (On-Line) ಮುಖಾಂತರವಲ್ಲದೆ, ಇತರೆ ಯಾವುದೇ ನಮೂನೆಯಲ್ಲಾಗಲಿ, ಬೆರಳಚ್ಚು ಫೋಟೋ ಪ್ರತಿ ಮಾಡಿ, ಅಥವಾ ಕೈಬರಹದೊಂದಿಗೆ ಸಲ್ಲಿಸಲ್ಪಡುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ನಿಗದಿತ ಶುಲ್ಕವನ್ನು **ಸಿಂಡಿಕೇಟ್ ಬ್ಯಾಂಕ್ (Syndicate Bank)** ನ ಯಾವುದೇ ಶಾಖೆಯಲ್ಲಿ ಪಾವತಿಸಬಹುದು. ಈ ಸಂಬಂಧ On-Line ನಲ್ಲಿ ಅರ್ಜಿ ಸಲ್ಲಿಸುವಾಗ ಶುಲ್ಕ ಪಾವತಿಸಲು ಚಲನ್‌ಗಳನ್ನು **download** ಮಾಡಿಕೊಂಡು ನಿಗದಿಪಡಿಸಿದ ಮೊಬಲಗನ್ನು ಸಂಬಂಧಿಸಿದ ಬ್ಯಾಂಕ್‌ಗೆ ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಪಾವತಿಸತಕ್ಕದ್ದು. ಶುಲ್ಕ ಪಾವತಿಸುವುದು ಅರ್ಜಿ ಸಲ್ಲಿಸುವ ವಿಧಾನದ **ಕಂಡಿಕೆ–4** ರಲ್ಲಿ ವಿವರಿಸಿರುವ **ಪ್ರಕಾರ ಅರ್ಜಿ ಶುಲ್ಕವನ್ನು.** ವೆಬ್‌ಸೈಟ್ ಮೂಲಕ http://sslr.kar.nic.in ಪಡೆದ ಚಲನ್‌ನಲ್ಲಿಯೇ ಪಾವತಿಸಿ ನಂತರ **Upload** ಮಾಡಬೇಕು.

(ರಾಜ್ಯದಲ್ಲಿನ ಸಿಂಡಿಕೇಟ್ ಬ್ಯಾಂಕ್ ಶಾಖೆಗಳ ವಿವರಗಳನ್ನು ಅನುಬಂಧ–4 ರಲ್ಲಿ ನೀಡಲಾಗಿದೆ)

ಇದನ್ನು ಹೊರತುಪಡಿಸಿ ಯಾವುದೇ ವಿಧವಾದ ಬ್ಯಾಂಕ್ ಶುಲ್ಕ ಇತ್ಯಾದಿ ಪಾವತಿಸುವ ಆವಶ್ಯಕತೆ ಇರುವುದಿಲ್ಲ. ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.

4. **Online (ಆನ್ – ಲೈನ್) ಮುಖಾಂತರ ಅರ್ಜಿ ಸಲ್ಲಿಸುವ ವಿಧಾನ:–**

ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಈ ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು. ಈ ಸೂಚನೆಗಳನ್ನು ಓದಿದ ನಂತರವೇ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

4(i) ಅಭ್ಯರ್ಥಿಗಳು ಅಧಿಕೃತ ವೆಬ್‌ಸೈಟ್ http://sslr.kar.nic.in ಅನ್ನು ತೆರೆದ ಕೂಡಲೇ ಕಂಪ್ಯೂಟರ್ ಪರದೆಯ ಮೇಲೆ ಹುದ್ದೆಗಳ ಪಟ್ಟಿ, ಅಧಿಸೂಚನೆ ಮತ್ತು ಅರ್ಜಿ ಸಲ್ಲಿಸುವ ಬಗ್ಗೆ ಲಭ್ಯವಿರುವ ಬಹು ಆಯ್ಕೆಯ button ಮೂಡುತ್ತದೆ. ಅದರಲ್ಲಿ ಮೊದಲು ಅಧಿಸೂಚನೆಯನ್ನು ತೆರೆದು ಓದಿ ತಿಳಿದುಕೊಳ್ಳತಕ್ಕದ್ದು. ನಂತರ "apply" button click ಮಾಡಿದ ನಂತರ ಅರ್ಜಿ ಭರ್ತಿ ಮಾಡುವ ಸಂಕ್ಷಿಪ್ತ ಸೂಚನೆಗಳು ಪರದೆಯ ಮೇಲೆ ಮೂಡುತ್ತದೆ. ಸೂಚನೆಯ ಕಡೆಯಲ್ಲಿ "proceed" button ಅನ್ನು ಒತ್ತಿದರೆ online ಅರ್ಜಿ ನಮೂನೆ ಮೂಡುತ್ತದೆ. **ಅಧಿಸೂಚನೆಯಲ್ಲಿರುವ ಸೂಚನೆಗಳನ್ನು ತಪ್ಪದೇ ಓದಿಕೊಂಡು ಅದರಂತೆ ಅರ್ಜಿಯನ್ನು ಭರ್ತಿಮಾಡತಕ್ಕದ್ದು.**

ಅಭ್ಯರ್ಥಿಯು ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಒಂದು ಬಿಳಿಯ ಹಾಳೆಯ ಮೇಲಿಟ್ಟು ಭಾವಚಿತ್ರದ ಕೆಳಗೆ ಕಪ್ಪು ಶಾಯಿಯ ಸ್ಕೆಚ್ / ಮಾರ್ಕರ್ ಪೆನ್ನಿನಲ್ಲಿ ಸಹಿಯನ್ನು ಮಾಡಿ ಇದನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಬೇಕು. ಯಾವುದೇ ಕಾರಣಕ್ಕೂ **ಭಾವಚಿತ್ರದ ಮೇಲೆ ಸಹಿ ಮಾಡಬಾರದು.**

ನಂತರ ಅಭ್ಯರ್ಥಿಯು **"Preview"** button ಅನ್ನು ಒತ್ತಿದರೆ Application number ಸೃಜನೆಯಾಗುತ್ತದೆ. ಮತ್ತು ಅಭ್ಯರ್ಥಿಗಳು ಅರ್ಜಿಯಲ್ಲಿ ಭರ್ತಿ ಮಾಡಿದ ಎಲ್ಲಾ ವಿವರಗಳು ಪರದೆಯ ಮೇಲೆ ಮೂಡುತ್ತದೆ. ಈ Online Application number ಅನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಬರೆದಿಟ್ಟುಕೊಳ್ಳತಕ್ಕದ್ದು. ಈ Application number ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೂ ಅವಶ್ಯಕವಾಗಿರುತ್ತದೆ.

ಅಭ್ಯರ್ಥಿಯ ವಿವರಗಳು ಪರದೆಯ ಮೇಲೆ ಮೂಡಿದ ಕೂಡಲೇ ಎಲ್ಲಾ ವಿವರಗಳನ್ನು ಪರಿಶೀಲಿಸಿ ಏನಾದರೂ ತಪ್ಪಾಗಿದ್ದಲ್ಲಿ ಅದನ್ನು ಸರಿಪಡಿಸಲು **"edit"** button ಮೇಲೆ ಕ್ಲಿಕ್ ಮಾಡಿ ನಂತರ ಅಗತ್ಯ ತಿದ್ದುಪಡಿಗಳನ್ನು ಮಾಡತಕ್ಕದ್ದು.

ಆನಂತರ ಅರ್ಜಿಯಲ್ಲಿ ಭರ್ತಿ ಮಾಡಿರುವ ಎಲ್ಲಾ ವಿವರಗಳು ಸರಿಯಾಗಿರುತ್ತವೆ ಎಂದು ಮನದಟ್ಟು ಮಾಡಿಕೊಂಡು, **"submit"** button click ಮಾಡಿದಲ್ಲಿ, ಸ್ವೀಕೃತಿ ಪತ್ರ ಅಂದರೆ ಭರ್ತಿ ಮಾಡಿರುವ ಅರ್ಜಿ ಪರದೆಯ ಮೇಲೆ ಮೂಡುತ್ತದೆ. ಪರದೆಯಲ್ಲಿ ಮೂಡಿರುವ ಅರ್ಜಿಯ ಕೆಳಭಾಗದಲ್ಲಿರುವ **"Print"** button click ಮಾಡಿದರೇ ಸ್ವೀಕೃತಿ ಪತ್ರ ಮುದ್ರಣವಾಗುತ್ತದೆ. ನಂತರ **"Print challan"** button ಒತ್ತಿದರೆ ಶುಲ್ಕ ಪಾವತಿಸಲು ಬ್ಯಾಂಕ್ ಚಲನ್ ಪ್ರಿಂಟಾಗುತ್ತದೆ.

ಈ ಚಲನ್ ಅನ್ನು ತೆಗೆದುಕೊಂಡು ಅಭ್ಯರ್ಥಿಗಳು ಶುಲ್ಕ ಪಾವತಿಸಿದ ನಂತರ ಬ್ಯಾಂಕ್‌ನವರು ನೀಡಿದ ಚಲನ್ ಪ್ರತಿಯಲ್ಲಿ, ಬ್ಯಾಂಕಿಗೆ ಹಣ ಪಾವತಿಸಿರುವ ಬಗ್ಗೆ **ಬ್ಯಾಂಕ್ Scroll ನಂಬರ್ ದಾಖಲಿಸಿರುವುದನ್ನು ಖಾತರಿಪಡಿಸಿಕೊಳ್ಳುವುದು** ನಂತರ ಅಧಿಕೃತ ವೆಬ್‌ಸೈಟ್ (http://sslr.kar.nic.in) ತೆರೆದು ಅಭ್ಯರ್ಥಿಯು Application number ಬಳಸಿ login ಆಗುವುದು. (ಬ್ಯಾಂಕಿನ ಚಲನ್‌ನಲ್ಲಿ Application number ಮುದ್ರಿತವಾಗಿರುತ್ತದೆ). login ಆದ ನಂತರ upload challan ಮೇಲೆ click ಮಾಡಿದ ಕೂಡಲೇ ಶುಲ್ಕ ಪಾವತಿಸಿದ ವಿವರಗಳನ್ನು ಭರ್ತಿ ಮಾಡಲು ನಮೂನೆಯು (Format) ಪರದೆಯ ಮೇಲೆ ಮೂಡುತ್ತದೆ.

ಅಭ್ಯರ್ಥಿಯು ತನ್ನ ಅರ್ಜಿಯ Application Number ಅನ್ನು, ಚಲನ್‌ನಲ್ಲಿ ನಮೂದಿಸಿರುವ ಬ್ಯಾಂಕ್ ಜರ್ನಲ್ ನಂಬರನ್ನು ನಮೂದಿಸತಕ್ಕದ್ದು. ಈ ಬ್ಯಾಂಕ್ **Scroll** ನಂಬರ್ ನಮೂದಿಸಿದಲ್ಲಿ ಮಾತ್ರ ಅರ್ಜಿಯು ಪರಿಗಣಿಸಲ್ಪಡುತ್ತದೆ, ಅದರ ಹೊರತು ಅರ್ಜಿಯು ಪರಿಗಣಿಸಲ್ಪಡುವುದಿಲ್ಲ. ಆದ್ದರಿಂದ, ಅಭ್ಯರ್ಥಿಗಳು ಶುಲ್ಕ ಪಾವತಿಸಿದ ನಂತರ ಈ **Scroll** ನಂಬರ್ ನಮೂದಿಸುವುದು ಕಡ್ಡಾಯವಾಗಿರುತ್ತದೆ. ಆನಂತರ ಹಣ ಪಾವತಿಸಿದ ಬಗ್ಗೆ ಬ್ಯಾಂಕ್‌ನಿಂದ ಪಡೆದ **"ಅಭ್ಯರ್ಥಿಯ ಚಲನ್ ಪ್ರತಿಯನ್ನು"** ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಬೇಕು. ಆನಂತರ submit button ಮೇಲೆ click ಮಾಡಿದ ಕೂಡಲೇ **"Challan Uploaded Suceesfully"** ಎಂಬ ಸೂಚನೆಯು ಮೂಡುತ್ತದೆ. ಈ ಸೂಚನೆಯು **Challan Upload** ಆಗಿರುವುದನ್ನು ಖಾತರಿಪಡಿಸುತ್ತದೆ.

ಅಭ್ಯರ್ಥಿಗಳು Challan Upload ಮಾಡಿದ 5 ದಿನಗಳ ನಂತರ ಇಲಾಖೆಯ ವೈಬ್‌ಸೈಟ್ http://sslr.kar.nic.in ತೆರೆದು Application Number ಅನ್ನು ದಾಖಲಿಸಿ **login** ಆಗಿ **"View status"** button click ಮಾಡಿ ಅರ್ಜಿ ಮತ್ತು **Upload** ಮಾಡಿರುವ **Challan ಸ್ಥಿತಿಯನ್ನು** ಪರಿಶೀಲಿಸಿಕೊಳ್ಳಬಹುದು.

ಸೂಚನೆ:

1. ಒಂದು ವೇಳೆ ಶುಲ್ಕ ಪಾವತಿಸಲು ಡೌನ್‌ಲೋಡ್ ಮಾಡಿದ ಬ್ಯಾಂಕ್ ಚಲನ್ ಪ್ರತಿ ಕಳೆದುಕೊಂಡರೇ ಅಥವಾ ಉಪಯೋಗಿಸಲು ಬಾರದಂತಾದ್ದಲ್ಲಿ ಅಭ್ಯರ್ಥಿಗಳು Application Number ದಾಖಲಿಸಿ ಇಲಾಖಾ ವೈಬ್ ಸೈಟ್ http://sslr.kar.nic.in ಲಾಗಿನ್ ಆಗಿ **"Download challan" option ಬಳಸಿಕೊಂಡು ಮತ್ತೊಮ್ಮೆ ಬ್ಯಾಂಕ್ ಚಲನ್ ಮುದ್ರಿಸಿಕೊಳ್ಳಬಹುದು.**
2. ಅಭ್ಯರ್ಥಿಗಳು ಅನುಭವದ/ಕಾರ್ಯ ನಿರ್ವಹಿಸಿದ ವಿವರಗಳನ್ನು ದಾಖಲಿಸಲು ನೀಡಿರುವ ಸೂಚನೆಗಳನ್ವಯ online ಅರ್ಜಿಯಲ್ಲಿ ದಾಖಲಿಸುವುದು. ಹೀಗೆ ದಾಖಲಿಸಿದ ಅನುಭವದ/ಕಾರ್ಯ ನಿರ್ವಹಿಸಿದ ವಿವರಗಳು ತಪ್ಪಾಗಿದ್ದಲ್ಲಿ ಅರ್ಜಿಯನ್ನು submit ಮಾಡುವ ಮೊದಲು "edit" ಮಾಡಬೇಕಾದ ಸಾಲಿನ ಎದುರಿನಲ್ಲಿರುವ ☐ ಬಾಕ್ಸ್‌ನಲ್ಲಿ ✓ tick ಮಾಡಿ "delete" button click ಮಾಡಿದರೆ,

tick ಮಾಡಿರುವ ಸಾಲು delete ಆಗುತ್ತದೆ. ಈ ರೀತಿಯಾಗಿ "edit" option ಬಳಸಿಕೊಂಡು ಸರಿಯಾದ ಅನುಭವದ / ಕಾರ್ಯ ನಿರ್ವಹಿಸಿದ ವಿವರಗಳನ್ನು ದಾಖಲಿಸುವುದು.

ಅಭ್ಯರ್ಥಿಯು ಅರ್ಜಿ ದಾಖಲಿಸಿ ಶುಲ್ಕ ಪಾವತಿಸದೇ ಇದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಭ್ಯರ್ಥಿಗಳು ಸ್ವೀಕೃತಿ ಪತ್ರ ಮತ್ತು ಶುಲ್ಕ ಪಾವತಿಸಲು ಚಲನ್‌ಗಳ ಮುದ್ರಿತ ಪ್ರತಿಗಳನ್ನು ತೆಗೆದುಕೊಳ್ಳತಕ್ಕದ್ದು.

ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

ಒಮ್ಮೆ ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ. ಅಥವಾ ಅದನ್ನು ಇತರೆ ಯಾವುದೇ ಪರೀಕ್ಷಾ ಅಥವಾ ಇಲಾಖೆಯಲ್ಲಿ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಅಭ್ಯರ್ಥಿಯು ಪರೀಕ್ಷಾ ಶುಲ್ಕವನ್ನು ಪಾವತಿಸಿದ ಬಗ್ಗೆ ಬ್ಯಾಂಕಿನ ಹೆಸರು, ಬ್ರಾಂಚಿನ ಹೆಸರು ಮತ್ತು Scroll ನಂಬರನ್ನು ಬರೆದಿಟ್ಟುಕೊಳ್ಳತಕ್ಕದ್ದು.

5. ಅರ್ಜಿ ಸಲ್ಲಿಸಲು ಮತ್ತು ಅರ್ಜಿ ಶುಲ್ಕ ಪಾವತಿಸಲು ಕಾಲಾವಧಿ :

ಕ್ರಸಂ	ವಿಷಯ	ದಿನಾಂಕ
1	ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ:	1-07-2011 10-00 A.M.IST
2	ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: (ಬ್ಯಾಂಕ್ ಚಲನ್ ಮುದ್ರಿಸಿಕೊಳ್ಳಲು ಕೊನೆಯ ದಿನಾಂಕ)	30-7-2011
3	ಪರೀಕ್ಷಾ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ: (Last date to pay the fees)	1-8-2011
4	ಶುಲ್ಕ ಪಾವತಿಸಲಾದ ಜರ್ನಲ್ ನಂಬರ್ ನಮೂದಿಸಲು ಕೊನೆಯ ದಿನಾಂಕ: (Scan and upload the challan)	5-8-2011

ವಿಶೇಷ ಸೂಚನೆ : On-line ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ (Toll free Helpline) **18004255444** ಅನ್ನು ಸರ್ಕಾರಿ ರಜಾ ದಿನ ಹೊರತುಪಡಿಸಿ ಕಛೇರಿಯ ವೇಳೆಯಲ್ಲಿ ಬೆಳಿಗ್ಗೆ 10–00 ರಿಂದ ಸಂಜೆ 5–30 ರವರೆಗೆ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆಯಬಹುದಾಗಿದೆ.

6. ಶೈಕ್ಷಣಿಕ ವಿದ್ಯಾರ್ಹತೆ:

(ಎ) ಭಾರತದಲ್ಲಿ ಕಾನೂನು ರೀತ್ಯ ಸ್ಥಾಪಿತವಾದ ಯಾವುದೇ ವಿಶ್ವವಿದ್ಯಾಲಯದಲ್ಲಿ ಬಿ.ಇ. (ಸಿವಿಲ್)/ ಅಥವಾ / ಬಿ.ಟೆಕ್ (ಸಿವಿಲ್)/ ಅಥವಾ ಸಿವಿಲ್ ಇಂಜಿನಿಯರಿಂಗ್ ಡಿಪ್ಲೋಮೊದಲ್ಲಿ ಉತ್ತೀರ್ಣರಾಗಿರಬೇಕು.

ಅಥವಾ

(ಬಿ) ಪದವಿ ಪೂರ್ವ ಶಿಕ್ಷಣ (ಪಿ.ಯು.ಸಿ.) ಅಥವಾ ಕೇಂದ್ರ ಪ್ರೌಢ ಶಿಕ್ಷಣ ಮಂಡಳಿ ಜರುಗಿಸುವ 12ನೇ ತರಗತಿ (ಸಿಬಿಎಸ್‌ಇ) ಅಥವಾ ಐ.ಸಿ.ಎಸ್.ಇ. ಯಲ್ಲಿ ವಿಜ್ಞಾನ ವಿಷಯವನ್ನು ಪಡೆದು ಗಣಿತ ವಿಷಯದಲ್ಲಿ ಶೇಕಡಾ 60ಕ್ಕಿಂತ ಕಡಿಮೆ ಇಲ್ಲದಂತೆ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.

ಅಥವಾ

(ಸಿ) ಕರ್ನಾಟಕ ರಾಜ್ಯ ಸರ್ಕಾರದ ವೃತ್ತಿ ಶಿಕ್ಷಣ ಇಲಾಖೆ ನಡೆಸುವ "ಲ್ಯಾಂಡ್ ಅಂಡ್ ಸಿಟಿ ಸರ್ವೆ" ಯಲ್ಲಿ ಪದವಿ ಪೂರ್ವ ಡಿಪ್ಲೊಮೊದಲ್ಲಿ ಉತ್ತೀರ್ಣರಾಗಿರಬೇಕು.

ಅಥವಾ

(ಡಿ) ಕರ್ನಾಟಕ ಸರ್ಕಾರದ ಉದ್ಯೋಗ ಹಾಗೂ ತರಬೇತಿ ಇಲಾಖೆ ನಡೆಸುವ "ಐ.ಟಿ.ಐ. ಇನ್ ಸರ್ವೆ ಟ್ರೇಡ್" ನಲ್ಲಿ ಉತ್ತೀರ್ಣರಾಗಿರಬೇಕು.

ಮತ್ತು

(ಸಿ) ಮತ್ತು (ಡಿ) ನಲ್ಲಿ ತಿಳಿಸಿರುವ ಜೆ.ಓ.ಸಿ.ಅಥವಾ ಐ.ಟಿ.ಐ. ವಿದ್ಯಾರ್ಹತೆ ಆಧಾರದ ಮೇಲೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು

(1) ಕಂಪನಿ ಕಾಯ್ದೆ ಅಡಿಯಲ್ಲಿ ನೋಂದಾಯಿತಗೊಂಡಿರುವ ಹಾಗೂ ಭೂಮಾಪನ ವಿಷಯಕ್ಕೆ ಸಂಬಂಧಿಸಿದ ಕ್ಷೇತ್ರದಲ್ಲಿ ತೊಡಗಿಕೊಂಡಿರುವ ಯಾವುದೇ ಪ್ರತಿಷ್ಠಿತ ಖಾಸಗಿ ಕಂಪನಿಗಳಲ್ಲಿ ಭೂಮಾಪನ ಕಾರ್ಯಕ್ಕೆ ಸಂಬಂಧಿಸಿದ ಯೋಜನೆಗಳಲ್ಲಿ ಕನಿಷ್ಠ 2 ವರ್ಷ ಕಾರ್ಯ ನಿರ್ವಹಿಸಿದ ಅನುಭವವನ್ನು, ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಹೊಂದಿರತಕ್ಕದ್ದು.

ಅಥವಾ

(2) ಅಭ್ಯರ್ಥಿಗಳು ಪರವಾನಗಿ ಭೂಮಾಪಕರಾಗಿ ಕನಿಷ್ಠ 2 ವರ್ಷಗಳ ಕಾಲ ಭೂಮಾಪನ ಇಲಾಖೆಯಲ್ಲಿ ಕಾರ್ಯ ನಿರ್ವಹಿಸಿರಬೇಕು.

7. **ಹುದ್ದೆಗಳ ವರ್ಗೀಕರಣ:**

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ.08.ಸೇಹಿಮ.95 ದಿನಾಂಕ: 20.6.1995.

ಮೀಸಲಾತಿ	ಸಾಮಾನ್ಯ	ಮಹಿಳೆ	ಗ್ರಾ	ಮಾ.ಸೈ.	ಅಂ.ವಿ	ಯೋಅ.	ಕ.ಮಾ.	ಒಟ್ಟು
ಪ.ಜಾ.	55	83	68	27	14	14	14	275
ಪ.ಪಂ.	10	17	13	05	04	03	03	55
ಪ್ರ.ವ–1	14	22	18	07	05	04	04	74
ಪ್ರ.ವ.2 ಎ	55	83	68	27	14	14	14	275
ಪ್ರವ. 2 ಬಿ	14	22	18	07	05	04	04	74
ಪ್ರ.ವ.3 ಎ	13	22	18	07	05	04	04	73
ಪ್ರ.ವ.3 ಬಿ	18	27	22	09	06	05	04	91
ಸಾ.ಅ.	184	275	229	92	45	46	46	917
ಒಟ್ಟು	[illegible]	**551**	**454**	**181**	**98**	**94**	**93**	**1834**

8. **ಭೂಮಾಪಕರ ಹುದ್ದೆಗೆ ಆಯ್ಕೆ ವಿಧಾನ :–**

(1) ಲ್ಯಾಂಡ್ ಸರ್ವೆಯರ್ (ಭೂಮಾಪಕರು) ಹುದ್ದೆಗೆ ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಆಯ್ಕೆ ಮಾಡಲಾಗುವುದು.

ಈ ಹುದ್ದೆಗೆ 2 ವಿಷಯಗಳಲ್ಲಿ ತಲಾ 200 ಅಂಕಗಳಿಗೆ ವಸ್ತುನಿಷ್ಠ ಬಹು ಆಯ್ಕೆಯ (**Objective Multiple Choice**) ಪ್ರತ್ಯೇಕ ಪರೀಕ್ಷೆಯನ್ನು ನಡೆಸಲಾಗುವುದು, ಉತ್ತರವನ್ನು OMR ಶೀಟಿನಲ್ಲಿ ಗುರುತಿಸಬೇಕಾಗಿರುತ್ತದೆ. ಅಭ್ಯರ್ಥಿಗಳು ಈ ಪರೀಕ್ಷೆಯಲ್ಲಿ ಪಡೆಯುವ ಅಂಕಗಳ ಆಧಾರದ ಮೇಲೆ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಆಯ್ಕೆ ಮಾಡಲಾಗುವುದು. ಈ ಹುದ್ದೆಗೆ ಯಾವುದೇ ಸಂದರ್ಶನ ಇರುವುದಿಲ್ಲ.

(2) ಸ್ಪರ್ಧಾತ್ಮಕ ಪರೀಕ್ಷೆ ವಿವರ:–

ಪತ್ರಿಕೆ–1 (ಸಾಮಾನ್ಯ ಪತ್ರಿಕೆ) – 200 ಅಂಕಗಳು

(General Paper) – ಪರೀಕ್ಷಾ ಕಾಲಾವಧಿ – 2 ಗಂಟೆ

ಈ ಪತ್ರಿಕೆಯು ಕರ್ನಾಟಕದ ಹಾಗೂ ಭಾರತದ ಇತಿಹಾಸ, ರಾಜ್ಯ ಶಾಸ್ತ್ರ, ಸಾಮಾನ್ಯ ಜ್ಞಾನ ಹಾಗೂ ಇತ್ತೀಚಿನ ವಿದ್ಯಾಮಾನಗಳ ಅರಿವು, ಸಾಮಾನ್ಯ ವಿಜ್ಞಾನ ಹಾಗೂ ದಿನನಿತ್ಯದ ಆಗು–ಹೋಗುಗಳು ಮತ್ತು ಪ್ರಾಯೋಗಿಕ ಜ್ಞಾನದ ಕುರಿತಂತೆ ಪರೀಕ್ಷಾ ಪತ್ರಿಕೆಯಾಗಿರುತ್ತದೆ.

ಪತ್ರಿಕೆ–2 (ನಿರ್ದಿಷ್ಟ ಪತ್ರಿಕೆ) – 200 ಅಂಕಗಳು

(Specific Paper) – ಪರೀಕ್ಷಾ ಕಾಲಾವಧಿ – 2 ಗಂಟೆ

ಈ ಪತ್ರಿಕೆಯ ಪಠ್ಯಕ್ರಮವನ್ನು **ಅನುಬಂಧ–2** ರಲ್ಲಿ ನೀಡಲಾಗಿದೆ.

(3) ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ : ಈ ಹುದ್ದೆಗೆ ಆಯ್ಕೆ ಬಯಸುವ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ./ತತ್ಸಮಾನ ಪರೀಕ್ಷೆಯಲ್ಲಿ ಕನ್ನಡ ಭಾಷೆಯನ್ನು ಪ್ರಥಮ/ ದ್ವಿತೀಯ ಭಾಷೆಯಾಗಿ ಪಡೆದು ತೇರ್ಗಡೆ ಹೊಂದದೆ ಇದ್ದಲ್ಲಿ ಅಂತಹ ಎಲ್ಲಾ ಅಭ್ಯರ್ಥಿಗಳಿಗೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯನ್ನು ಎಸ್.ಎಸ್.ಎಲ್.ಸಿ. ಜ್ಞಾನಮಟ್ಟಕ್ಕೆ ಅನುಗುಣವಾಗಿ ಲಿಖಿತ ಪರೀಕ್ಷೆಯನ್ನು ನಡೆಸಲಾಗುವುದು. ಸರ್ಕಾರದ ಅಧಿಸೂಚನೆ ಸಂ.ಡಿಪಿಎಆರ್.19 ಎಸ್.ಸಿ.ಆರ್.2006 ದಿ: 5–5–2007 ರನ್ವಯ **"ಕಡ್ಡಾಯ ಕನ್ನಡ ಭಾಷಾ"** ಪರೀಕ್ಷೆಗೆ ಹಾಜರಾಗಿ ಗರಿಷ್ಠ 150 ಅಂಕಗಳಿಗೆ ಕನಿಷ್ಠ 50 ಅಂಕಗಳನ್ನು ಪಡೆದು ತೇರ್ಗಡೆ ಹೊಂದತಕ್ಕದ್ದು. ಈ ಪರೀಕ್ಷೆಯನ್ನು **ಬೆಂಗಳೂರು ಕೇಂದ್ರ ಸ್ಥಾನದಲ್ಲಿ ಮಾತ್ರ ನಡೆಸಲಾಗುವುದು.** ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯ ವಿಷಯವನ್ನು **ಅನುಬಂಧ–3** ರಲ್ಲಿ ನಮೂದಿಸಿದೆ.

ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳನ್ನು ಮಾತ್ರ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಲಾಗುವುದು. ಆದರೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ನೇಮಕಾತಿ ಮೆರಿಟ್‌ಗೆ ಪರಿಗಣಿಸಲಾಗುವುದಿಲ್ಲ.

ಸೂಚನೆ : ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯನ್ನು ಬರೆಯಬೇಕಾಗುವ ಅಭ್ಯರ್ಥಿಗಳು ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಸಹ ಬೆಂಗಳೂರು ಕೇಂದ್ರ ಸ್ಥಾನದಲ್ಲಿಯೇ ಬರೆಯತಕ್ಕದ್ದು.

9. **ತರಬೇತಿ :**

ನೇಮಕಾತಿಯಾದ ಅಭ್ಯರ್ಥಿಗಳು 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಹೀಗೆ ನೇಮಕವಾದ ಎಲ್ಲರೂ ಇಲಾಖೆಯು ನಡೆಸುವ 06 ತಿಂಗಳ ಭೂಮಾಪಕರ ವೃತ್ತಿ ಬುನಾದಿ ತರಬೇತಿಯನ್ನು ಇಲಾಖಾ ತರಬೇತಿ ಸಂಸ್ಥೆಯಲ್ಲಿ ಯಶಸ್ವಿಯಾಗಿ ಪೂರೈಸತಕ್ಕದ್ದು. ಆದರೆ, ಪದವಿ ಪೂರ್ವ ಶಿಕ್ಷಣ (ಪಿ.ಯು.ಸಿ.) ಅಥವಾ ಕೇಂದ್ರ ಪ್ರೌಢ ಶಿಕ್ಷಣ ಮಂಡಳಿ ಜರುಗಿಸುವ 12ನೇ ತರಗತಿ (ಸಿಬಿಎಸ್‌ಇ) ಅಥವಾ ಐ.ಸಿ.ಎಸ್.ಇ.ಯ ವಿದ್ಯಾರ್ಹತೆಯ ಮೇಲೆ ನೇಮಕಾತಿ ಹೊಂದಿದ ಅಭ್ಯರ್ಥಿಗಳು 09 ತಿಂಗಳ ಕಾಲ ತರಬೇತಿಯನ್ನು ಪಡೆಯಬೇಕಾಗಿರುತ್ತದೆ.

ಭೂಮಾಪಕರ ವೃತ್ತಿ ಬುನಾದಿ ತರಬೇತಿಯ ನಂತರ ಅಭ್ಯರ್ಥಿಗಳು ಭೂಮಾಪಕರ ವೃತ್ತಿ ಬುನಾದಿ ಪರೀಕ್ಷೆಯಲ್ಲಿ ಕಡ್ಡಾಯವಾಗಿ ಉತ್ತೀರ್ಣರಾಗತಕ್ಕದ್ದು. ಒಂದು ವೇಳೆ ಪ್ರಥಮ ಪ್ರಯತ್ನದಲ್ಲಿ ಉತ್ತೀರ್ಣರಾಗದೇ ಇದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ಮತ್ತೊಂದು ಅವಕಾಶವನ್ನು ನೀಡಲಾಗುತ್ತದೆ. ಆದಾಗ್ಯೂ ತೇರ್ಗಡೆ ಹೊಂದದೇ ಇದ್ದಲ್ಲಿ ಅಂತಹ ಅಭ್ಯರ್ಥಿಗಳನ್ನು ಸೇವೆಯಿಂದ ತೆಗೆದುಹಾಕಲಾಗುವುದು.

10. ಅರ್ಹತಾ ಷರತ್ತುಗಳು:

(ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

(ಆ) ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಅಥವಾ ಈಗಾಗಲೇ ಇನ್ನೊಬ್ಬ ಹೆಂಡತಿ ಇರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿ ಯನ್ನು ಪಡೆಯದೇ ಇದ್ದಲ್ಲಿ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

(ಇ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತನಾಗಿರಬೇಕು /ಳಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

11. ವಯೋಮಿತಿ:– ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

(i) ಕನಿಷ್ಠ 18 ವರ್ಷ ವಯಸ್ಸು ಪೂರೈಸಿರತಕ್ಕದ್ದು.

(ii) ಗರಿಷ್ಠ ವಯೋಮಿತಿ

ಸಾಮಾನ್ಯ ವರ್ಗ	35 ವರ್ಷ
ಪ್ರ.ವ–2ಎ, 2ಬಿ, 3ಎ, 3ಬಿ	38 ವರ್ಷ
ಪ.ಜಾ./ಪ.ಪಂ./ಪ್ರ.ವ.–1	40 ವರ್ಷ

ಟಿಪ್ಪಣಿ:– ಅಭ್ಯರ್ಥಿಗಳ ಜನ್ಮ ದಿನಾಂಕವನ್ನು ಅವರ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯ ಪ್ರಮಾಣ ಪತ್ರ/ ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ.)/ ಕ್ಯುಮುಲೇಟಿವ್ ರೆಕಾರ್ಡ್‌ನಲ್ಲಿ ನಮೂದಿಸಿರುವಂತೆ ಪರಿಗಣಿಸಲಾಗುವುದು. ಇವುಗಳನ್ನು ಹೊರತುಪಡಿಸಿ ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

12. ಕಾಲಂ 11 (ii) ರಲ್ಲಿ ತಿಳಿಸಿರುವ ಗರಿಷ್ಠ ವಯೋಮಿತಿಯನ್ನು ಈ ಕೆಳಗಿನ ಸಂದರ್ಭಗಳಲ್ಲಿ ತಿಳಿಸಿರುವ ಮಟ್ಟಿಗೆ ಸಡಿಲಿಸಲಾಗುವುದು.

1) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ, ಗರಿಷ್ಠ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು. (ಈ ಬಗ್ಗೆ ಪ್ರಮಾಣ ಪತ್ರವನ್ನು ಪಡೆದಿರಬೇಕು)

2) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅವನು/ಅವಳು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

3) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಅಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

ವಿವರಣೆ:– (ಎ) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯುದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧರಲ್ಲದ ಹುದ್ದೆಗಳಲ್ಲಿ) ಸೇವೆ ಸಲ್ಲಿಸಿದ ವ್ಯಕ್ತಿ. ಆದರೆ ಡಿಫೆನ್ಸ್ ಸೆಕ್ಯುರಿಟಿಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ.

(ಬಿ) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ಏಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ.

4) ಈ ಕೆಳಕಂಡ ವರ್ಗದ ಅಭ್ಯರ್ಥಿಗಳು ಮಾಜಿ ಸೈನಿಕ ಮೀಸಲಾತಿಗೆ ಅರ್ಹರಿರುತ್ತಾರೆ.

I. ಮೇಲ್ಕಂಡ ಪ್ಯಾರಾದಲ್ಲಿ ಹೇಳಿರುವಂತೆ ದಳದ ಸೇನೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವವರು

ಅಥವಾ

II. ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಮರ್ಥ್ಯದ ಪಿಂಚಣಿ ಪಡೆದು ಸೇವೆಯಿಂದ ಬಿಡುಗಡೆಯಾದವರು.

ಅಥವಾ

III. ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

ಅಥವಾ

IV. ನಿರ್ಧಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು

(1) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.

(2) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.

(3) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

V. **ಸ್ವಂತ ಕೋರಿಕೆ ಮೇಲೆ ಬಿಡುಗಡೆ ಹೊಂದಿದವರು ಅಥವಾ ದುರ್ನಡತೆಯ ಅಥವಾ ಅಸಮರ್ಥ್ಯದ ಕಾರಣದಿಂದ ತೆಗೆದುಹಾಕಿರುವ, ಕರ್ತವ್ಯದಿಂದ ವಜಾ ಮಾಡಿರುವ ವ್ಯಕ್ತಿಗಳು ಮೀಸಲಾತಿಗೆ ಅರ್ಹರಿರುವುದಿಲ್ಲ.**

ವಿವರಣೆ:– ಕೇಂದ್ರ ಸಶಸ್ತ್ರ ದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. **ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವಾ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ.**

5) ಅಭ್ಯರ್ಥಿಗಳು ನ್ಯಾಷನಲ್ ಕ್ಯಾಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕ್ಯಾಡೆಟ್ ಪರಿವೀಕ್ಷಕನಾಗಿ ಅವನು ಸೇವೆ ಸಲ್ಲಿಸಿದಷ್ಟು ವರ್ಷಗಳು.

6) ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡ ಗ್ರಾಮ ಸಮೂಹ ಪರಿಶೀಲಿಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಕಾರ್ಯನಿರ್ವಹಿಸಿದ್ದಲ್ಲಿ ಅವನು / ಅವಳು ಅಂತಹ ಗ್ರಾಮ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

7) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು

8) ಅಭ್ಯರ್ಥಿಯು ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ 10 ವರ್ಷಗಳು

ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯು ವಯೋಮಿತಿ ಸಡಿಲಿಕೆ ಪಡೆಯಲು ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದಿಟ್ಟುಕೊಂಡಿರತಕ್ಕದ್ದು.

9) ಅಂಗವಿಕಲ ಅಭ್ಯರ್ಥಿಗಳಿಗೆ 10 ವರ್ಷಗಳು

ಮೇಲೆ ತಿಳಿಸಲಾದಂತಹ ವಯೋಮಿತಿ ಸಡಿಲಿಕೆ ಬಯಸುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಿಗಳಿಂದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

13. ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು:–

ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು:–

1) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ನಮೂನೆ **"ಡಿ"** ರಲ್ಲಿ

2) ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳು ನಮೂನೆ **"ಇ"** ರಲ್ಲಿ

3) ಪ್ರವರ್ಗ–2ಎ, 2ಬಿ, 3ಎ ಮತ್ತು 3ಬಿ ಅಭ್ಯರ್ಥಿಗಳು ನಮೂನೆ–ಎಫ್ ರಲ್ಲಿ

ಸಂಬಂಧಿತ ತಹಸೀಲ್ದಾರ್ ರವರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರವು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿದ್ದು, ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು.

ವಿವಿಧ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿದ್ದ ಮೀಸಲಾತಿ / ವಿನಾಯಿತಿ ಪ್ರಮಾಣ ಪತ್ರಗಳನ್ನೇ ದಾಖಲೆಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು. ಹಾಜರುಪಡಿಸದಿದ್ದಲ್ಲಿ ಮೀಸಲಾತಿ / ವಿನಾಯಿತಿಯನ್ನು ರದ್ದುಪಡಿಸಿ ಸಾಮಾನ್ಯ ಅಭ್ಯರ್ಥಿಯಂತೆ ಪರಿಗಣಿಸಲಾಗುವುದು.

(ಈ ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿದೆ)

14. ಗ್ರಾಮೀಣ ಅಭ್ಯರ್ಥಿ:–

ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10ನೇ ತರಗತಿವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಈ ಪ್ರಮಾಣ ಪತ್ರಗಳು ಅರ್ಜಿ ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು, ಮತ್ತು ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

1) ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ–2 ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು.

2) ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ–2 ರ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ–1 ರಲ್ಲಿ ಅವರು ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಸೀಲ್ದಾರ್ ರವರಿಂದ ಪಡೆದಿರತಕ್ಕದ್ದು.

3) ಗ್ರಾಮೀಣ ಮೀಸಲಾತಿ ಕೋರಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗಿರುತ್ತಾರೆ.

ಸೂಚನೆ:–

ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ–2 ರ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಅದಕ್ಕೆ ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು.

15. **ಕನ್ನಡ ಮಾಧ್ಯಮ ಅಭ್ಯರ್ಥಿ:–**

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1 ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದಿರಬೇಕು.

16. **ಅಂಗವಿಕಲ ಅಭ್ಯರ್ಥಿ:–**

ಸರ್ಕಾರಿ ಅಧಿಸೂಚನೆ ಸಂ.ಡಿಪಿಎಆರ್. 50 ಎಸ್.ಆರ್.ಆರ್. 2000 ದಿ: 3–9–2005 ರಲ್ಲಿ ಅಂಗವಿಕಲರಿಗೆ ನೇಮಕಾತಿಯಲ್ಲಿ ಮೀಸಲಾತಿ ಕಲ್ಪಿಸಿದೆ. ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್. 52 ಎಸ್‌ಆರ್‌ಆರ್.99 ದಿ: 29–11–2002 ರ ಪ್ರಕಾರ ಈ ಇಲಾಖೆಯಲ್ಲಿನ ಈ ಹುದ್ದೆಗೆ ಮುಂದೆ ನಮೂದಿಸಿದ ಅಂಗವಿಕಲರಿಗೆ ಮಾತ್ರ ಮೀಸಲಾತಿ ಕಲ್ಪಿಸಲಾಗಿರುತ್ತದೆ. ಅಂದರೆ **ವಾಸಿ ಆಗಿರುವ ಕುಷ್ಟರೋಗಿ (Leprosy cured), ದುರ್ಬಲ ಶ್ರವಣ ಶಕ್ತಿ (Hearing impairment), ಮಾನಸಿಕ ಅಸ್ವಸ್ಥ (Mental illness) ನ್ಯೂನ್ಯತೆಯಲ್ಲಿ ಶೇ.40 ಕ್ಕೆ ಕಡಿಮೆ ಇಲ್ಲದಂತೆ ಬಳಲುತ್ತಿರುವ ವ್ಯಕ್ತಿಗಳು.**

ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿ: 19–11–2005 ರ ಸರ್ಕಾರದ ಅಧಿಕೃತ ಜ್ಞಾಪನ ಸಂ.ಸಿಆಸುಇ 115 ಸೇ.ನೆನಿ.2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸುವುದಿಲ್ಲ.

ಈ ಅಂಗವಿಕಲ ಮೀಸಲಾತಿಯಡಿ ಆಯ್ಕೆ ಹೊಂದುವ ಅಭ್ಯರ್ಥಿಗಳು ಈ ನ್ಯೂನ್ಯತೆಯನ್ನು ಹೊಂದಿದ್ದರೂ ಸದರಿ ಹುದ್ದೆಯ ಕರ್ತವ್ಯ ನಿರ್ವಹಣೆಗೆ ಅಡ್ಡಿಯುಂಟಾಗದೆಂದು ತಿಳಿಸುವ ದೈಹಿಕ ಅರ್ಹತೆಯ ಪ್ರಮಾಣ ಪತ್ರವನ್ನು ದಾಖಲೆಗಳನ್ನು ಪರಿಶೀಲಿಸುವ ಸಮಯದಲ್ಲಿ ಹಾಜರುಪಡಿಸಬೇಕು.

(ಅಂಧತ್ವ, ದೃಷ್ಟಿ ಮಾಂದ್ಯತೆ, ಬುದ್ಧಿ ಮಾಂದ್ಯತೆ ಹೊಂದಿರುವ ಕಾರಣದ ಮೇರೆಗೆ ಅಂಗವಿಕಲರ ಮೀಸಲಾತಿ ಕೋರುವ ಅಭ್ಯರ್ಥಿಗಳು ಈ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಲ್ಲ)

17. **ಯೋಜನೆಗಳಿಂದ ನಿರಾಶ್ರಿತ ಕುಟುಂಬದ ಅಭ್ಯರ್ಥಿ:–**

ಸರ್ಕಾರಿ ಆದೇಶ ಸಂ.ಸಿಆಸುಇ 23 ಸೆನೆನಿ 99 ದಿನಾಂಕ: 23–11–2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ (ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳು ಈ ಮೀಸಲಾತಿಗೆ ಅರ್ಹರಾಗುವುದಿಲ್ಲ) ಈ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಸೀಲ್ದಾರ್ ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದಿರಬೇಕು.

ಸೂಚನೆ:– ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಹಾಗೂ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು. ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಈ ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.

18. ಅಭ್ಯರ್ಥಿಗಳು On-line ಅರ್ಜಿ ಸಲ್ಲಿಸಿರುವುದರಿಂದ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶ ಇರುವುದಿಲ್ಲ. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು / ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ, **ದಿನಾಂಕ: 30–07–2011** ರ ಒಳಗೆ ಪಡೆದಿರಬೇಕು ಇಲ್ಲವೇ ಸಿಂಧುವಾಗಿರಬೇಕು. ಹಾಗೂ ಇಲಾಖೆಯು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುವುದು.

- ಅಭ್ಯರ್ಥಿಯು ಹುದ್ದೆಗೆ ನಿಗಧಿಪಡಿಸಿರುವ ವಿದ್ಯಾರ್ಹತೆ ಹೊಂದಿರುವ ಬಗ್ಗೆ ಪ್ರಮಾಣ ಪತ್ರಗಳು ಮತ್ತು ಜನ್ಮ ದಿನಾಂಕವನ್ನು ದೃಢೀಕರಿಸುವ ದಾಖಲೆಗಳನ್ನು ಪರಿಶೀಲನಾ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ಹಾಜರುಪಡಿಸದಿದ್ದಲ್ಲಿ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
- ವಿವಿಧ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿದ್ದ ಮೀಸಲಾತಿ / ವಿನಾಯಿತಿ ಪ್ರಮಾಣ ಪತ್ರಗಳನ್ನೇ ದಾಖಲೆಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು. ಹಾಜರುಪಡಿಸದಿದ್ದಲ್ಲಿ ಮೀಸಲಾತಿ / ವಿನಾಯಿತಿಯನ್ನು ರದ್ದುಪಡಿಸಿ ಸಾಮಾನ್ಯ ಅಭ್ಯರ್ಥಿಯಂತೆ ಪರಿಗಣಿಸಲಾಗುವುದು.

19. ಪರಿಶೀಲನಾ ಸಮಯದಲ್ಲಿ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು:–

- ಭೂಮಾಪಕರ ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯಂತೆ ಅರ್ಜಿಯಲ್ಲಿ ನಮೂದಿಸಿದ ಮೂಲ ಅಂಕಪಟ್ಟಿಗಳು.
- ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ.) / ಸಂಚಿತ ದಾಖಲೆ (Cumulative Record) ಗಳ ಮೂಲ ಪತ್ರಗಳು.
- ವಿವಿಧ ಮೀಸಲಾತಿಗಳನ್ನು ಕೋರಿದಲ್ಲಿ ಮೀಸಲಾತಿಯ ಮೂಲ ಪ್ರಮಾಣ ಪತ್ರಗಳು.
- ಜಾಬ್ ಓರಿಯೆಂಟೆಡ್ ಪ್ರಿ ಯೂನಿವರ್ಸಿಟಿ "ಡಿಪ್ಲೊಮೋ ಇನ್ ಲ್ಯಾಂಡ್ ಅಂಡ್ ಸಿಟಿ ಸರ್ವೆ ಅಥವಾ ಐ.ಟಿ.ಐ. ಇನ್ ಸರ್ವೆ ಟ್ರೇಡ್" ವಿದ್ಯಾರ್ಹತೆ ಆಧಾರದ ಮೇರೆಗೆ ಭೂಮಾಪಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ದಿನಾಂಕಕ್ಕೆ, ಕನಿಷ್ಠ 2 ವರ್ಷಗಳ ಕಾಲ ಪರವಾನಗಿ ಭೂಮಾಪಕರಾಗಿ ಅಥವಾ ಪ್ರತಿಷ್ಠಿತ ಖಾಸಗಿ ಸಂಸ್ಥೆಯಲ್ಲಿ ಭೂಮಾಪನ ವಿಷಯದಲ್ಲಿ 2 ವರ್ಷಗಳ ಕಾಲ ಕೆಲಸ ಮಾಡಿರುವ ಬಗ್ಗೆ ಅವಶ್ಯ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು. (ಪ್ರಮಾಣ ಪತ್ರದ ನಮೂನೆಯನ್ನು ಈ ಅಧಿಸೂಚನೆಯೊಂದಿಗೆ ನೀಡಲಾಗಿದೆ)
  - ಭೂಮಾಪನ ಇಲಾಖೆಯಲ್ಲಿ ಪರವಾನಗಿ ಭೂಮಾಪಕರಾಗಿ ಕನಿಷ್ಠ 2 ವರ್ಷ ಕಾರ್ಯ ನಿರ್ವಹಿಸಿರುವ ಬಗ್ಗೆ, ಪರವಾನಗಿ ಲೈಸೆನ್ಸ್ ನಂಬರ್‌ನೊಂದಿಗೆ ಕಾರ್ಯ ನಿರ್ವಹಿಸಿದ ತಾಲ್ಲೂಕುಗಳ ವಿವರ ಮತ್ತು ಕಾಯನಿರ್ವಹಿಸಿರುವ ಅವಧಿಯನ್ನು ಆನ್–ಲೈನ್ ಅರ್ಜಿಯಲ್ಲಿ ಭರ್ತಿ ಮಾಡತಕ್ಕದ್ದು.
  - ಈ ಸಂಬಂಧವಾಗಿ ದಾಖಲಿಸಿರುವ ಕಾರ್ಯ ಅವಧಿಗೆ ಚಾಲ್ತಿಯಲ್ಲಿದ್ದ ಪರವಾನಗಿಯನ್ನು ಮೂಲ ದಾಖಲೆಗಳ ಪರಿಶೀಲನಾ ಅವಧಿಯಲ್ಲಿ ಹಾಜರುಪಡಿಸತಕ್ಕದ್ದು. ಇಲ್ಲವಾದಲ್ಲಿ ನಿಮ್ಮ ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದಿಲ್ಲ.

20. ಮೀಸಲಾತಿ ಹಾಗೂ ವಯೋಮಿತಿ ಸಡಿಲಿಕೆ ಕೋರಿದ್ದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು :

1. ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ.
   ಟಿಪ್ಪಣಿ: ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಯಮಾನುಸಾರ ಆ ಮೀಸಲಾತಿಗೆ ಅರ್ಹರೆ? ಎಂಬುದನ್ನು ಹತ್ತಿರದ ಜಿಲ್ಲಾ ಸೈನಿಕ ಬೋರ್ಡ್‌ನಿಂದ ತಿಳಿದುಕೊಂಡು ಮೀಸಲಾತಿಯನ್ನು ಕೋರುವುದು ಸೂಕ್ತ.
2. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–3ಎ, ಪ್ರವರ್ಗ–3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರವರಿಂದ ಪಡೆದಿರುವ ಪ್ರಮಾಣ ಪತ್ರ.
3. ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಅಂಕಣವನ್ನು (select) ಆಯ್ಕೆಮಾಡತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (No objection certificate) ಸಂಬಂಧಿತ ನೇಮಕಾತಿ ಪ್ರಾಧಿಕಾರದಿಂದ ದಿನಾಂಕ: **30–07–2011** ರ ಒಳಗೆ ಪಡೆದಿಟ್ಟುಕೊಂಡಿರಬೇಕು.
4. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ
5. ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ
6. ಅಂಗವಿಕಲ ಅಭ್ಯರ್ಥಿಗಳು ನಿಗದಿಪಡಿಸಿದ ನಮೂನೆಯಲ್ಲಿ ಪಡೆದ ವೈದ್ಯಕೀಯ ಪ್ರಮಾಣ ಪತ್ರ
7. ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ವಿಧವೆಯರು, ಜೀತ ಕಾರ್ಮಿಕರು, ಗ್ರಾಮ ಸಮೂಹ ಪರಿಶೀಲಕರು ಮತ್ತು ಕ್ಯಾಡೆಟ್ ಪರಿವೀಕ್ಷಕರು ಇವರುಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

ಈ ಮೇಲಿನ ಅರ್ಹತೆ, ಮೀಸಲಾತಿ ಇತ್ಯಾದಿಗಳನ್ನು ಕೂಲಂಕುಷವಾಗಿ ಪರಿಶೀಲಿಸಿದ ನಂತರವೇ ಅಭ್ಯರ್ಥಿಗಳನ್ನು ಜೇಷ್ಠತೆ ಮತ್ತು ಮೀಸಲಾತಿ ಆಧಾರದ ಮೇಲೆ ನೇಮಕಾತಿ ಪ್ರಕ್ರಿಯೆಗೆ ಪರಿಗಣಿಸಲಾಗುವುದು.

21. ಪ್ರಮುಖ ಸೂಚನೆಗಳು:–

(i) ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಲು ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಲಿಖಿತ ಪರೀಕ್ಷೆಗೆ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಲು ಅವಕಾಶ ನೀಡಲಾಗುವುದು. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.

(ii) ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ ಜನ್ಮದಿನಾಂಕ, ವಿದ್ಯಾರ್ಹತೆ, ಪರೀಕ್ಷಾ ಕೇಂದ್ರ, ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿ ವಿವರಗಳನ್ನು ಅಂತಿಮವೆಂದು ಭಾವಿಸಿ ಅದರಂತೆ ಪರಿಗಣಿಸಲಾಗುವುದು. ಆ ನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

(iii) ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ ಅಭ್ಯರ್ಥಿಗಳು ಲಿಖಿತದ ಮೂಲಕ ಇಲಾಖಾ ಮುಖ್ಯಸ್ಥರ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಪ್ರಯತ್ನಿಸಲಾಗುವುದು. ಆದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಸಮಿತಿ ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

(iv) ಈಗಾಗಲೇ ಸೇವೆಯಲ್ಲಿರುವ / ಸೇವೆ ಸಲ್ಲಿಸಿದ ಅಭ್ಯರ್ಥಿಗಳು ಪ್ರಚುರಪಡಿಸಲಾದ ಹುದ್ದೆಗಳಿಗೆ ಅರ್ಜಿಗಳನ್ನು ಹಾಕಲು ಅವರುಗಳ ನೇಮಕಾತಿ ಪ್ರಾಧಿಕಾರಿಗಳಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಕೊನೆಯ ದಿನಾಂಕದೊಳಗೆ ಅರ್ಜಿ ಸಲ್ಲಿಸಲು **"ನಿರಾಕ್ಷೇಪಣ ಪ್ರಮಾಣ ಪತ್ರ"** ವನ್ನು ನಿಗಧಿತ ನಮೂನೆಯಲ್ಲಿ ಪಡೆದುಕೊಂಡಿರತಕ್ಕದ್ದು ಹಾಗೂ ಪರಿಶೀಲನಾ ಸಮಯದಲ್ಲಿ ಮೂಲ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

(v) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

(vi) ಎಸ್.ಎಸ್.ಎಲ್.ಸಿ./ತತ್ಸಮಾನ ಪರೀಕ್ಷೆಯಲ್ಲಿ ಕನ್ನಡ ಭಾಷೆಯನ್ನು ಪ್ರಥಮ/ದ್ವಿತೀಯ ಭಾಷೆಯಾಗಿ ಪಡೆದು ತೇರ್ಗಡೆ ಹೊಂದದೆ ಇದ್ದಲ್ಲಿ ಅಂತಹ ಅಭ್ಯರ್ಥಿಗಳು (ಸರ್ಕಾರದ ಅಧಿಸೂಚನೆ ಸಂ.ಡಿಪಿಎಆರ್.19 ಎಸ್.ಸಿ.ಆರ್.2006 ದಿ:5–5–2007) ಇಲಾಖಾ ನೇಮಕಾತಿ ಸಮಿತಿಯು ಎಸ್.ಎಸ್.ಎಲ್.ಸಿ. ಜ್ಞಾನಮಟ್ಟಕ್ಕೆ ನಡೆಸುವ **"ಕನ್ನಡ ಕಡ್ಡಾಯ ಭಾಷಾ"** ಪರೀಕ್ಷೆಗೆ ಹಾಜರಾಗಿ ಗರಿಷ್ಠ 150 ಅಂಕಗಳಿಗೆ ಕನಿಷ್ಟ 50 ಅಂಕಗಳನ್ನು ಪಡೆಯತಕ್ಕದ್ದು. ಈ ಪರೀಕ್ಷೆಯನ್ನು ಬೆಂಗಳೂರು ಕೇಂದ್ರ ಸ್ಥಾನದಲ್ಲಿ ಮಾತ್ರ ನಡೆಸಲಾಗುವುದು. ಇಂತಹ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಾದ ಸಾಮಾನ್ಯ ಜ್ಞಾನ (ಪತ್ರಿಕೆ–1) ಮತ್ತು ನಿರ್ದಿಷ್ಟ ಪತ್ರಿಕೆ (ಪತ್ರಿಕೆ–2) ಇವುಗಳನ್ನು ಕಡ್ಡಾಯವಾಗಿ ಬೆಂಗಳೂರು ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆ ಬರೆಯತಕ್ಕದ್ದು.

22. **ಅಧಿಸೂಚನೆಯಲ್ಲಿ/ಅರ್ಜಿಯಲ್ಲಿ/ಅಭ್ಯರ್ಥಿಗಳಿಗೆ ನೀಡಲಾದ ಸೂಚನೆಯಲ್ಲಿ ಉಪಯೋಗಿಸ ಲಾಗಿರುನ ಸಂಕ್ಷಿಪ್ತ ಪದಗಳ ಅರ್ಥವನ್ನು ಈ ಕೆಳಕಂಡಂತೆ ಓದಿಕೊಳ್ಳುವುದು.**

ಸಾ.ಅ.	ಸಾಮಾನ್ಯ ಅರ್ಹತೆ	GM	General Merit
ಪ.ಜಾ.	ಪರಿಶಿಷ್ಟ ಜಾತಿ	SC	Scheduled Caste
ಪ.ಪಂ.	ಪರಿಶಿಷ್ಟ ಪಂಗಡ	ST	Scheduled Tribe
ಪ್ರ.ವ–1	ಪ್ರವರ್ಗ–1	Cat-1	Category-1
ಪ್ರ.ವ. 2ಎ	ಪ್ರವರ್ಗ–2ಎ	2A	Category-2A
ಪ್ರ.ವ. 2ಬಿ	ಪ್ರವರ್ಗ–2ಬಿ	2B	Category-2B
ಪ್ರ.ವ. 3ಎ	ಪ್ರವರ್ಗ–3ಎ	3A	Category-3A
ಪ್ರ.ವ. 3ಬಿ	ಪ್ರವರ್ಗ–3ಬಿ	3B	Category-3B
ಮಾ.ಸೈ.	ಮಾಜಿ ಸೈನಿಕ	Ex-MP	Ex-Military Person
ಗ್ರಾ.ಅ.	ಗ್ರಾಮೀಣ ಅಭ್ಯರ್ಥಿ	Rural	Rural Candidate
ಕ.ಮಾ.ಅ.	ಕನ್ನಡ ಮಾಧ್ಯಮ ಅಭ್ಯರ್ಥಿ	KMS	Kannada Medium Student
ಯೋ.ನಿ.ಅ.	ಯೋಜನಾ ನಿರಾಶ್ರಿತ ಅಭ್ಯರ್ಥಿ	PDP	Project Displaced Person
ಅಂ.ವಿ.	ಅಂಗವಿಕಲ	PH	Physically Handicapped Person

23. **ಪ್ರವೇಶ ಪತ್ರ :**

ಇಲಾಖೆಯಿಂದ ಅಭ್ಯರ್ಥಿಗಳಿಗೆ ಪ್ರವೇಶ ಪತ್ರವನ್ನು ಕಳುಹಿಸುವುದಿಲ್ಲ. ಅಭ್ಯರ್ಥಿಗಳು ಸ್ವತಃ ಅಧಿಕೃತ ವೆಬ್‌ಸೈಟ್‌ನಿಂದ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಪರೀಕ್ಷೆಗೆ ಹಾಜರಾಗತಕ್ಕದ್ದು. ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳುವ ಅಂಶವನ್ನು ದಿನಾಂಕ: 15.08.2011ರ ಮುಂಚಿತವಾಗಿ ಅಧಿಕೃತ ಇಲಾಖಾ ವೈಬ್. ಸೈಟ್ http://sslr.kar.nic.in ನಲ್ಲಿ ಪ್ರಕಟಿಸಲಾಗುವುದು.

24. **ಪರೀಕ್ಷಾ ಕೇಂದ್ರಗಳ ಆಯ್ಕೆ :**

ಸ್ಪರ್ಧಾತ್ಮಕ ಪರೀಕ್ಷೆಯನ್ನು ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಮತ್ತು ಇಲಾಖೆಯು ನಿಗದಿಪಡಿಸಿದ ಇತರೆ ಯಾವುದೇ ಕೇಂದ್ರದಲ್ಲಿ ನಡೆಸಲಾಗುವುದು. ಅಭ್ಯರ್ಥಿಗಳು ಅರ್ಜಿಯಲ್ಲಿ ಅವರು ಸ್ಪರ್ಧಾತ್ಮಕ ಪರೀಕ್ಷೆಯನ್ನು ತೆಗೆದುಕೊಳ್ಳಲು ಇಚ್ಛಿಸುವ ಕೇಂದ್ರವನ್ನು ನಮೂದಿಸತಕ್ಕದ್ದು. ಪರೀಕ್ಷಾ ಕೇಂದ್ರವನ್ನು ನಿಗದಿಪಡಿಸುವುದು ಇಲಾಖೆಯ ಅಂತಿಮ ತೀರ್ಮಾನವಾಗಿರುತ್ತದೆ. ಪರೀಕ್ಷೆಗಳ ದಿನಾಂಕವನ್ನು ಮುಂದೆ ಜಾಹೀರಾತು ಪ್ರಕಟಿಸಲಾಗುವುದು. ಹಾಗೂ ಅಧಿಕೃತ ವೆಬ್‌ಸೈಟ್ http://sslr.kar.nic.in ನಲ್ಲಿ ಬಿತ್ತರಿಸಲಾಗುವುದು. ಪರೀಕ್ಷೆಗಳ ದಿನಾಂಕಗಳನ್ನು ಅಧಿಸೂಚಿಸಿದ ನಂತರ ಪ್ರವೇಶ ಪತ್ರಗಳನ್ನು ಅಧಿಕೃತ website ನಿಂದ ಅಭ್ಯರ್ಥಿಗಳು ಡೌನ್‌ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಪವೇಶ ಪತಗಳನ್ನು [illegible]

ರವಾನಿಸಲಾಗುವುದಿಲ್ಲ. ಭೂಮಾಪಕರ ಹುದ್ದೆಗೆ ಆಯ್ಕೆ ಬಯಸುವ ಅಭ್ಯರ್ಥಿಗಳು ಅರ್ಜಿಯಲ್ಲಿ ನಿಗದಿಪಡಿಸಿದ ಕಾಲಂ ರಲ್ಲಿ ಲಿಖಿತ ಪರೀಕ್ಷೆಯನ್ನು ಬರೆಯಲು ಇಚ್ಛಿಸುವ ಪರೀಕ್ಷಾ ಕೇಂದ್ರವನ್ನು ಆಯ್ಕೆ ಮಾಡತಕ್ಕದ್ದು.

ಕಂಡಿಕೆ 8 (3) ರಂತೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯನ್ನು ಬರೆಯುವ ಅಭ್ಯರ್ಥಿಗಳು ಇತರೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ಸಹ ಬೆಂಗಳೂರು ಪರೀಕ್ಷಾ ಕೇಂದ್ರದಲ್ಲಿಯೇ ಬರೆಯತಕ್ಕದ್ದು.

25. ಇಲಾಖೆಯೊಡನೆ ಪತ್ರ ವ್ಯವಹಾರ :

ಇಲಾಖೆಯು ಅಭ್ಯರ್ಥಿತ್ವದ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಆದಾಗ್ಯೂ ಪರೀಕ್ಷೆಗಾಗಿ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳುವಲ್ಲಿ ಸಮಸ್ಯೆ ಉಂಟಾದಲ್ಲಿ, ಸಹಾಯವಾಣಿ (Toll free Helpline) **18004255444** ಸಂಪರ್ಕಿಸತಕ್ಕದ್ದು.

26. ಅನರ್ಹತೆ:–

ನೇಮಕಾತಿಗಾಗಿ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆ ಅವಧಿಯಲ್ಲಿ ಈ ಕೆಳಕಂಡ ಯಾವುದೇ ರೀತಿಯ ದುರ್ನಡತೆ/ ಅಕ್ರಮ/ ಅನುಚಿತ ವರ್ತನೆ/ ಹಾಗೂ ಸರ್ಕಾರಿ ಸೇವೆಯಿಂದ ವಜಾಗೊಂಡಿದ್ದಲ್ಲಿ ಅಂತಹವರ ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು ಹಾಗೂ ಕ್ರಿಮಿನಲ್ ವ್ಯವಹರಣೆಗಳಿಗೆ ಒಳಪಡಿಸಲಾಗುವುದು.

(1) ಯಾವುದೇ ಅಭ್ಯರ್ಥಿಯು ನಕಲು ವ್ಯಕ್ತಿಯಾಗಿದ್ದಲ್ಲಿ (2) ಖೋಟಾ ದಸ್ತಾವೇಜು / ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿದ್ದಲ್ಲಿ (3)ತಪ್ಪು ಅಥವಾ ಸುಳ್ಳು ಹೇಳಿಕೆ/ಮಾಹಿತಿ ನೀಡಿದಲ್ಲಿ (4) ವಾಸ್ತವಿಕ ಮಾಹಿತಿಯನ್ನು ಮರೆಮಾಚಿದಲ್ಲಿ (5) ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸಿರುವನೆಂದು ಕಂಡುಬಂದಲ್ಲಿ ; ಅಂತಹವರ ಅಭ್ಯರ್ಥಿತ್ವವನ್ನು ಅನರ್ಹಗೊಳಿಸಲಾಗುವುದು.

27. "ಭೂಮಾಪಕರ"ಹುದ್ದೆಗಳಿಗೆ ಅಭ್ಯರ್ಥಿಗಳ ಆಯ್ಕೆ ಪಟ್ಟಿ :–

(1) ಭೂಮಾಪಕರ ಹುದ್ದೆಗೆ ನಿಗದಿಪಡಿಸಿದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಅನ್ವಯ ಆಯ್ಕೆಯನ್ನು ನಿರ್ಧರಿಸಲಾಗುವುದು.

(2) ಒಬ್ಬರಿಗಿಂತ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು ಪಡೆದಲ್ಲಿ ಅಂತಹ ಅಭ್ಯರ್ಥಿಗಳ ಅರ್ಹತೆ ಜೇಷ್ಠತೆಯನ್ನು ಜನ್ಮದಿನಾಂಕದ ಆಧಾರದ ಮೇಲೆ ನಿರ್ಧರಿಸಲಾಗುವುದು. ಅಂದರೆ, ವಯಸ್ಸಿನಲ್ಲಿ ಹಿರಿಯರಾದವರನ್ನು ಜೇಷ್ಠತೆಯ ಉನ್ನತ ಸ್ಥಾನದಲ್ಲಿ ಇಡಲಾಗುವುದು.

(3) ಮೇಲಿನ ಕಂಡಿಕೆ ಉಪನಿಯಮ (1) ಹಾಗೂ (2) ರಲ್ಲಿರುವಂತೆ ತಯಾರಿಸಲಾದ ಆಯ್ಕೆ ಪಟ್ಟಿಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಹಾಗೂ ಇತರೆ ಮಾಧ್ಯಮಗಳಲ್ಲಿ ಪ್ರಕಟಿಸಲಾಗುವುದು.

28. ಆಯ್ಕೆಗೊಂಡ ಭೂಮಾಪಕರ ಸ್ಥಳ ನಿಯುಕ್ತಿ ಬಗ್ಗೆ:

ಭೂಮಾಪಕರ ಹುದ್ದೆಗೆ ಆಯ್ಕೆ ಹೊಂದಿದ ಅಭ್ಯರ್ಥಿಗಳಿಗೆ ಸ್ಥಳನಿಯುಕ್ತಿಯನ್ನು Counselling ಆಧಾರದ ಮೇಲೆ ಮಾಡಲಾಗುವುದು. ಸ್ಥಳನಿಯುಕ್ತಿಗೊಂಡ ಭೂಮಾಪಕರು ಕನಿಷ್ಟ 5 ವರ್ಷಗಳ ಕಾಲ ಸ್ಥಳ ಬದಲಾವಣೆ ಕೋರುವಂತಿಲ್ಲ.

ಸ್ಪರ್ಧಾತ್ಮಕ ಪರೀಕ್ಷೆ, ಆಯ್ಕೆ ಪ್ರಕ್ರಿಯೆ ಮತ್ತು ಸ್ಥಳನಿಯುಕ್ತಿಗೆ ಸಂಬಂಧಿಸಿದಂತೆ ಯಾವುದೇ ಮಧ್ಯವರ್ತಿಗಳನ್ನು ಸಂಪರ್ಕಿಸತಕ್ಕದ್ದಲ್ಲ. ಇಲಾಖೆಯು ಮಧ್ಯವರ್ತಿಗಳಿಗೆ ಉತ್ತೇಜಿಸುವುದಿಲ್ಲ.

ಸದರಿ ಅಧಿಸೂಚನೆಯಲ್ಲಿ ನಮೂದಿಸಿದ ಸರ್ಕಾರದ ಸುತ್ತೋಲೆಗಳನ್ವಯ ಅಭ್ಯರ್ಥಿಗಳು ಸಲ್ಲಿಸಬೇಕಾದ ಪ್ರಮಾಣಪತ್ರಗಳನ್ನು ಅನುಬಂಧಗಳಲ್ಲಿ ನಮೂದಿಸಲಾಗಿದೆ.

ಅಧ್ಯಕ್ಷರು ನೇಮಕಾತಿ ಸಮಿತಿ,
ಹಾಗೂ ಆಯುಕ್ತರು,
ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳು, ಬೆಂಗಳೂರು.

ಅನುಬಂಧ–1

ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಯ ಕಿರು ಪರಿಚಯ

1. ಭೂಮಾಪನ ಇಲಾಖೆಯು ಪುರಾತನ ಇಲಾಖೆಯಾಗಿದ್ದು, ಏಕೀಕರಣವಾದ ನಂತರ, ಹಳೇ ಮುಂಬೈ, ಹಳೇ ಮದರಾಸು, ಕೊಡಗು – ಹೈದರಾಬಾದ್ ಪ್ರಾಂತ್ಯದ ಕೆಲವು ಭಾಗಗಳು ಸೇರಿ ವಿಶಾಲ ಕರ್ನಾಟಕ ರಾಜ್ಯವಾಗಿರುತ್ತದೆ. ಆಯಾಯ ಪ್ರಾಂತ್ಯಗಳ ಭೌಗೋಳಿಕ ಸ್ಥಿತಿಗನುಗುಣವಾಗಿ ಭೂಮಾಪನ ಕೆಲಸವನ್ನು ಆಯಾಯ ಪ್ರಾಂತ್ಯಗಳಲ್ಲಿ ಚಾಲನೆಯಲ್ಲಿದ್ದ ವಿವಿಧ ಭೂಮಾಪನ ಉಪಕರಣಗಳನ್ನು ಉಪಯೋಗಿಸಿ ಮಾಡಿಸಲಾಗಿರುತ್ತದೆ.
2. ಕರ್ನಾಟಕ ರಾಜ್ಯದಲ್ಲಿ ಮೂಲ ಭೂಮಾಪನವು 1840 ನೇ ಇಸವಿಯಿಂದ 1904 ನೇ ಇಸವಿಯ ತನಕ ನಡೆದಿರುತ್ತದೆ. 1930 ನೇ ಇಸವಿಯಿಂದ 1964 ನೇ ಇಸವಿಯತನಕ ಹಿಸ್ಸಾ ಸರ್ವೆ ಮತ್ತು ರಿವಿಜನ್ ಸೆಟ್ಲ್‌ಮೆಂಟ್ ಕೆಲಸ ನಡೆದಿರುತ್ತವೆ.
3. ಕರ್ನಾಟಕ ರಾಜ್ಯವು 1.92 ಲಕ್ಷ ಚದರ ಕಿಲೋ ಮೀಟರ್ ಭೌಗೋಳಿಕ ಮೇಲ್ಮೈ ಹೊಂದಿರುತ್ತದೆ ಹಾಗೂ 30 ಜಿಲ್ಲೆಗಳು 176 ತಾಲ್ಲೂಕು ಮತ್ತು 30,500 ಗ್ರಾಮಗಳಿಂದ ಕೂಡಿದ್ದಾಗಿರುತ್ತದೆ.
4. | | |
|---|---|
| ಹಳೇ ಮೈಸೂರು ಪ್ರಾಂತ್ಯ | 1863–1898 |
| ಮುಂಬೈ ಪ್ರಾಂತ್ಯ | 1840–1863 |
| ಮದರಾಸು ಪ್ರಾಂತ್ಯ | 1863–1904 |
| ಹೈದರಾಬಾದು ಪ್ರಾಂತ್ಯ | 1875–1988 |
| ಕೊಡಗು ಪ್ರಾಂತ್ಯ | 1806–1816 |

ಭೂಮಾಪನದ ಉದ್ದೇಶ:

ಅಭಿವೃದ್ಧಿಯಿಂದ ಕಾಲಕ್ಕನುಗುಣವಾಗಿ ಭೂಮಿಯ ಮೇಲೆ ಆಗುವ ಪ್ರತಿ ಬದಲಾವಣೆಗಳನ್ನು ದಾಖಲೆಗಳಲ್ಲಿ ಇಂಡೀಕರಣಗೊಳಿಸುವುದು ಕರ್ತವ್ಯವಾಗಿರುತ್ತದೆ ಮತ್ತು ಭೂಮಿಯ ಅವಲಂಬನೆಯಿಂದ ರೈತರ ಬದುಕಿನ ವಾಸ್ತವ ಬದಲಾವಣೆ ಮಾರ್ಗವಾಗಿ ಭೂಮಿಯ ಮೌಲ್ಯವನ್ನು ಸರಿಯಾಗಿ ನಿರ್ಧರಿಸಬಹುದು. ರೈತರ ಸರ್ವತೋಮುಖ ಬೆಳವಣಿಗೆಗೆ ಸಹಕಾರಿಯಾಗುವಂತೆ ಕ್ರಮ ಕೈಗೊಳ್ಳಲಾಗುವುದು. ಜಮೀನು ಸ್ಥಿತಿಗನುಗುಣವಾಗಿ ಬದಲಾದ ಭೂಮಿಯ ತರಹೆ ಮತ್ತು ಹೊಸದಾದ ದಾರಿ-ಹಳ್ಳ ಇತ್ಯಾದಿಗಳನ್ನು ಗುರುತಿಸುವುದು, ಒಂದು ಸರ್ವೆ ನಂಬರಿನಲ್ಲಿನ ಎಲ್ಲಾ ಅಲಾಯಿದಾ ಹಿಡುವಳಿದಾರರ ಪ್ರತ್ಯೇಕ ಭೂಮಾಪನ ಕೆಲಸ, ನಂಬರಿನಲ್ಲಿನ ಬೆಳೆ ಮತ್ತು ನೀರಿನ ಮೂಲದ ಅನುಗುಣವಾಗಿ ತರಹೆ ಬದಲಾವಣೆ ಗುರ್ತಿಸುವುದು.

ಮೇಲ್ಕಂಡಂತೆ ತಯಾರಿಸಲ್ಪಟ್ಟ ವಿವಿಧ ಸ್ವರೂಪದ ಗ್ರಾಮವಾರು ಭೂದಾಖಲೆಗಳನ್ನು ಸಂರಕ್ಷಿಸುವ ಗುರಿಯನ್ನು ಇಲಾಖೆಯು ಇಟ್ಟುಕೊಂಡು, ದಿನನಿತ್ಯದ ರೈತರ ಹಕ್ಕು ದಾಖಲೆಗಳ ಕಾಲೋಚಿತ ಕೆಲಸ ಕಾರ್ಯಗಳನ್ನು ಈ ಮೇಲಿನ ಅವಧಿಗಳಲ್ಲಿ ತಯಾರಿಸಿದ ದಾಖಲೆಗಳನ್ನು ಆಧುನಿಕ ತಂತ್ರಜ್ಞಾನದ ಮೂಲಕ ಸಂರಕ್ಷಿಸಲು ಸ್ಕ್ಯಾನಿಂಗ್ ಕಾರ್ಯ ಪ್ರಗತಿಯಲ್ಲಿರುತ್ತದೆ. ಹೀಗೆ ಇಲಾಖೆಯ ವ್ಯವಸ್ಥಾಯದ ಭೂಮಿಗೆ ಸಂಬಂಧಿಸಿದಂತೆ ದಾಖಲೆಗಳನ್ನು ತಯಾರಿಸುವ ಜೊತೆಗೆ ಭೂ ಕಂದಾಯದ ಅಧಿನಿಯಮದ ಪ್ರಕಾರ ಪ್ರತಿ 500 ಕ್ಕೂ ಹೆಚ್ಚು ಜನ ಸಂಖ್ಯೆಯುಳ್ಳ ಹೆಚ್ಚಿರುವ ಗ್ರಾಮ, ಪಟ್ಟಣ, ನಗರಗಳಲ್ಲಿನ ಆಸ್ತಿಗಳ ಹಕ್ಕು ಮತ್ತು ಎಲ್ಲೆಗಳನ್ನು ಗುರುತಿಸಿ ಸಂರಕ್ಷಿಸುವ ಜವಾಬ್ದಾರಿಯನ್ನು ಹೊಂದಿರುತ್ತದೆ. ಇದರಿಂದ ಸರ್ಕಾರಕ್ಕೆ ಮತ್ತು ಜನತೆಗೆ ಆಡಳಿತಾತ್ಮಕವಾಗಿ, ಆರ್ಥಿಕವಾಗಿ ಹಾಗೂ ನ್ಯಾಯಿಕವಾಗಿ ಉಪಯುಕ್ತವಾಗಿದ್ದು, ಇದರ ಪ್ರಯೋಜನವನ್ನು ಈಗಾಗಲೇ ಬೆಳಗಾವಿ ವಿಭಾಗದ 45 ಗ್ರಾಮ ಪಟ್ಟಣಗಳನ್ನು ಒಳಗೊಂಡು ರಾಜ್ಯ ಸುಮಾರು 58 ನಗರ ಮತ್ತು ಪಟ್ಟಣಗಳಲ್ಲಿ ನಗರ ಮಾಪನ ನಿರ್ವಹಣೆ ಕೆಲಸವನ್ನು ಜಾರಿಗೊಳಿಸಲಾಗಿದೆ.

ದಿನಾಂಕ: 1.4.2005 ರ ಸಾಲಿನಲ್ಲಿ ಇಲಾಖೆಯು ಕಂದಾಯ ಇಲಾಖೆಯೊಂದಿಗೆ ಕಾರ್ಯ ವಿಲೀನವಾದ ನಂತರ ದಿನನಿತ್ಯ ನಿರ್ವಹಿಸುವ ವಿವಿಧ ಪೋಡಿ ಪ್ರಕರಣಗಳ ಕೆಲಸವನ್ನು ಜಿಲ್ಲಾಡಳಿತಕ್ಕೆ ನೀಡಲಾಗಿದೆ. ಇಲಾಖೆಯು ಕೇವಲ ಈ ಕೆಳಗಿನ ಯೋಜನಾ ಸ್ವರೂಪದ ಕೆಲಸಗಳನ್ನು ನಿರ್ವಹಿಸುತ್ತಿದೆ.

1. ನಗರ ಮಾಪನ 2. ಭೂದಾಖಲೆಗಳ ಗಣಕೀಕರಣ (ಸ್ಕ್ಯಾನಿಂಗ್ ಡಿಜಿಟೈಸೇಷನ್) 3. ತರಬೇತಿ ಸಂಸ್ಥೆಗಳ ನಿರ್ವಹಣೆ 4. ಅಂತರರಾಜ್ಯ ಗಡಿ ಅಳತೆ ಕಾರ್ಯ 5 ಮೋಜಣಿ ತಂತ್ರಾಂಶದ ಅಭಿವೃದ್ಧಿಪಡಿಸುವಿಕೆ 6. ಅಧಿಕಾರಿ ನೌಕರರ ಸೇವಾ ನಿರ್ವಹಣೆ – ಈ ಕೆಲಸಗಳ ಜೊತೆಗೆ ಕಂದಾಯ ಇಲಾಖೆ ಮತ್ತು ಜಿಲ್ಲಾಡಳಿತ ಮತ್ತು ಸರ್ಕಾರದ ನಡುವಿನ ತಾಂತ್ರಿಕ ಕೊಂಡಿಯಾಗಿ ಭೂದಾಖಲೆಗಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಸಮನ್ವಯ ಹೊಂದಿರುತ್ತದೆ.

ತತ್ಕಾಲ್ ಪೋಡಿ ಯೋಜನೆ:

ರೈತರಿಗೆ ತ್ವರಿತ ಭೂಮಾಪನ ಸೇವೆಯನ್ನು ಒದಗಿಸುವ ನಿಟ್ಟಿನಲ್ಲಿ ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಕಂ.ಇ. 142 ಭೂದಾಸ 2008 ದಿನಾಂಕ: 12.8.2008 ರಂತೆ ರಾಜ್ಯದ ಎಲ್ಲಾ ತಾಲ್ಲೂಕುಗಳಲ್ಲಿ ಜಾರಿಗೆ ತರಲಾಗಿದೆ. ಈ ಯೋಜನೆಯಲ್ಲಿ ಈಗಾಗಲೇ ಮ್ಯುಟೇಷನ್ ಆಗಿದ್ದು ಪೋಡಿ ಆಗಿಲ್ಲದಿದ್ದಂತೆ ಅರ್ಜಿಗಳನ್ನು ಸ್ವೀಕರಿಸಿದ ಒಂದು ತಿಂಗಳ ಒಳಗಾಗಿ ಪೋಡಿ ಪೂರ್ಣಗೊಳಿಸಿ ಕಾಲೋಚಿತ ಪಹಣಿಯನ್ನು ಪಡೆಯಬಹುದಾಗಿದೆ. ಈ ಬಗ್ಗೆ ಅರ್ಜಿದಾರರಿಂದ ರೂ.500-00 ಗಳನ್ನು ಪಾವತಿಸಿಕೊಳ್ಳಲಾಗುವುದು. ಇದರಲ್ಲಿ ರೂ.300-00 ಗಳನ್ನು ಪರವಾನಗಿ ಭೂಮಾಪಕರ ಕಾರ್ಯಕ್ಕಾಗಿ ಪಾವತಿಸಲಾಗುವುದು. ಉಳಿದ ರೂ.200-00 ಗಳನ್ನು ಬ್ಯಾಕ್‌ಲಾಗ್ ಪೋಡಿ ಕಡತಗಳ ವಿಲೇವಾರಿಗೆ ಉಪಯೋಗಿಸಿಕೊಳ್ಳಲಾಗುವುದು.

ಬ್ಯಾಕ್‌ಲಾಗ್ ಮ್ಯುಟೇಷನ್ ಪ್ರಕರಣಗಳು:

ರಾಜ್ಯಾದ್ಯಂತ ಹಕ್ಕು ದಾಖಲೆಗಳು ಕಾರ್ಯಗತವಾಗಿ ಮ್ಯುಟೇಷನ್ ಆದಂತೆ ಪಹಣಿಗಳಾಗಿರುವಂತೆ ಸರಿ ಸುಮಾರು 25 ಲಕ್ಷ ಪ್ರಕರಣಗಳ ಪೋಡಿ ಕೆಲಸವಾಗುವುದು ಬಾಕಿ ಉಳಿದಿರುತ್ತದೆ. ಇವುಗಳಲ್ಲಿ ತತ್ಕಾಲ್ ಯೋಜನೆಯಡಿಯಲ್ಲಿ ರೈತರು ತ್ವರಿತವಾಗಿ ಅಳತೆಯಾಗಬೇಕಾದಂತೆ ಪ್ರಕರಣಗಳನ್ನು ರೂ.500 ಪಾವತಿಸಿ 30 ದಿನಗಳಲ್ಲಿ ಅಳತೆ ಮಾಡಿಸಿಕೊಂಡು ಪಹಣಿ ಮಾಡಿಸಿಕೊಳ್ಳಲು ಅವಕಾಶ ಕಲ್ಪಿಸಲಾದಂತೆ, ಈ ಹಣದಲ್ಲಿ ಪರವಾನಗಿ ಭೂಮಾಪಕರಿಗೆ ರೂ.300 ಪಾವತಿಸಿ ಉಳಿದಂತೆ ರೂ.200 ಹಣದಿಂದ ರೈತರು ಈಗಾಗಲೇ ಮ್ಯುಟೇಷನ್ ಪೋಡಿಗಾಗಿ ತಾಲ್ಲೂಕು ಕಚೇರಿಯ ಭೂಮಾಪನ ಶಾಖೆಗಳಲ್ಲಿ ದಿನಾಂಕ: 19.6.2008 ರವರೆಗೆ ಅಳತೆಗಾಗಿ ಅರ್ಜಿ ಮಾಡಿಕೊಂಡಿದ್ದಂತೆ ಪ್ರಕರಣಗಳನ್ನು ಮೊದಲ ಹಂತದಲ್ಲಿ ಪ್ರಪ್ರಥಮವಾಗಿ ಜೇಷ್ಠತಾ ರೂಪದಲ್ಲಿ ಇತ್ಯರ್ಥಗೊಳಿಸುವುದು ಸರಿಯೆಂದು ಪರಿಗಣಿಸಿ ಈ ಯೋಜನೆಯನ್ನು 17.8.2009 ರಿಂದ ಜಾರಿಗೊಳಿಸಲಾಗಿದೆ.

ಗ್ರಾಮ ನಕಾಶೆಗಳನ್ನು ಡಿಜಿಟೈಸ್ ಮಾಡುವ ಯೋಜನೆ:

ರಾಜ್ಯದ ಎಲ್ಲಾ ಗ್ರಾಮ ನಕಾಶೆಗಳನ್ನು ಡಿಜಿಟೈಸ್ ಮಾಡಲು ಕರ್ನಾಟಕ ರಾಜ್ಯ ದೂರ ಸಂವೇದಿ ಸಂಸ್ಥೆಯೊಂದಿಗೆ ಇಲಾಖೆಯು ಒಂದು ಒಡಂಬಡಿಕೆಯನ್ನು ದಿನಾಂಕ: 12.1.2006 ರಲ್ಲಿ ಮಾಡಿಕೊಂಡಿದ್ದು, ಒಟ್ಟು 33381 ಗ್ರಾಮನಕಾಶೆಗಳ ಪೈಕಿ 32285 ಗ್ರಾಮ ನಕಾಶೆಗಳ ಡಿಜಿಟೈಸ್ ಆಗಿದ್ದರೂ ಅಂತಿಮವಾಗಿ ಪೂರ್ಣವಾದ 600 ನಕಾಶೆಗಳ ಸಾಫ್ಟ್ ಕಾಪಿ ಇಲಾಖೆಯಲ್ಲಿ ಸ್ವೀಕೃತಿಯಾಗಿದ್ದು, ಉಳಿದವು ತಾಂತ್ರಿಕ ನ್ಯೂನತೆ ಸರಿಪಡಿಸುವ ಸಲುವಾಗಿ ಸಂಸ್ಥೆಗೆ ಹಿಂತಿರುಗಿಸಲ್ಪಟ್ಟಿರುತ್ತವೆ. ಸಾರ್ವಜನಿಕರಿಗೆ ಭೂದಾಖಲೆಗಳ ದೃಢೀಕೃತ ನಕಲು, ನಗರ ಮಾಪನ

ನಕಾಶೆಗಳ ಮಾರಾಟ, ಪೋಡಿ ಫೀಸು ಮತ್ತು ಹದ್ದುಬಸ್ತು ಫೀಸು ಇತ್ಯಾದಿಯಿಂದ ಒಟ್ಟು ರೂ.4767837/– ವಸೂಲು ಮಾಡಲಾಗಿದೆ. ಉಳಿದ 160 ಪಟ್ಟಣ ಮತ್ತು ನಗರಗಳಲ್ಲಿ ನಗರ ಮಾಪನ ವಿಸ್ತರಿಸುವ ಬಗ್ಗೆ ಪ್ರಸ್ತಾಪಿಸಲಾಗಿದೆ.

ಬೆಳಗಾವಿ, ಸಂಕೇಶ್ವರ, ಸವದತ್ತಿ, ಉಪ್ಪಿನ ಬೆಟೇರಿ, ಮೊರಬ, ರೋಣ – ಇತ್ಯಾದಿ ನಗರ / ಪಟ್ಟಣಗಳಲ್ಲಿ 12 ನೇ ಹಣಕಾಸು ಆಯೋಗದ ಧನ ವಿನಿಯೋಗದ ಮೇರೆಗೆ ವಿಸ್ತೃತ ಆಸ್ತಿಗಳ ನಗರ ಮಾಪನ ಕೆಲಸ ಪೂರೈಸಿ 2008–09, 2009–10 ಮತ್ತು 2010–11 ರ ಸಾಲುಗಳಲ್ಲಿ ಪೂರ್ಣಗೊಳಿಸಿ ನಿರ್ವಹಣೆಗೆ ಜಾರಿಗೆ ನೀಡಲಾಗಿರುತ್ತದೆ ಮತ್ತು ನಲ್ಲೆ ಕಾಮನಹಳ್ಳಿ, ಯಲ್ಲೂರು, ಶನಿವಾರ ಸಂಗೆ, ಚಿಕ್ಕಜೋಗಿಹಳ್ಳಿ, ಕಾಡ್ಲೆ, ಯಳಂದೂರು, ನಿಡಗುಂಟಿ, ದಾಂಡೇಲಿ, ಚಿಕ್ಕಸೊಗೂರು, ನಗರ – ಪಟ್ಟಣಗಳಲ್ಲಿ 12ನೇ ಹಣಕಾಸು ಆಯೋಗದ ಧನ ವಿನಿಯೋಗದ ಮೇರೆಗೆ ನಗರ ಮಾಪನ ಕೆಲಸವನ್ನು 2008–09, 2009–10 ಮತ್ತು 2010–11 ನೇ ಸಾಲುಗಳಲ್ಲಿ ಪೂರ್ಣಗೊಳಿಸಿ ನಿರ್ವಹಣೆ ಜಾರಿಯಲ್ಲಿರುತ್ತದೆ.

ಬೆಂಗಳೂರು ಅಕ್ಕಪಕ್ಕದ 5 ಪಟ್ಟಣಗಳಾದ ಆನೇಕಲ್, ಮಾಗಡಿ, ಹೊಸಕೋಟೆ, ಕನಕಪುರ ಮತ್ತು ನೆಲಮಂಗಲ ಪಟ್ಟಣಗಳ ಆಸ್ತಿಗಳ ನಗರ ಮಾಪನ ಕೆಲಸ, ವಿಚಾರಣೆ ಕೆಲಸ, 12ನೇ ಆಯೋಗದಡಿಯಲ್ಲಿ ಪೂರ್ಣಗೊಂಡಿದ್ದು, ನಿರ್ವಹಣೆಗೆ ಜಾರಿಗೆ ನೀಡಲು ಬಾಕಿಯಿರುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

ಕರ್ನಾಟಕ ಮತ್ತು ನೆರೆ ರಾಜ್ಯಗಳ ನಡುವಿನ ಅಂತರರಾಜ್ಯ ಗಡಿ ಪರಿಶೀಲನಾ ಕಾರ್ಯ:

ಅ) ಕರ್ನಾಟಕ ಮತ್ತು ಕೇರಳ ರಾಜ್ಯಗಳ ನಡುವಿನ ಗಡಿ ಪರಿಶೀಲನೆ:

ಆ) ಕರ್ನಾಟಕ ಮತ್ತು ತಮಿಳುನಾಡು ರಾಜ್ಯಗಳ ಅಂತರರಾಜ್ಯ ಗಡಿ ಪರಿಶೀಲನೆ

ಇ) ಕರ್ನಾಟಕ ಮತ್ತು ಆಂದ್ರ ರಾಜ್ಯಗಳ ನಡುವಿನ ಗಡಿ ಪರಿಶೀಲನೆ

ಭೂದಾಖಲೆಗಳು:

ಭೂದಾಖಲೆಗಳು ಸರ್ಕಾರದಿಂದ ತಯಾರಿಸಲ್ಪಟ್ಟ ಮಹತ್ವದ ದಾಖಲೆಗಳಾಗಿದ್ದು, ಇವುಗಳು ಸಾರ್ವಜನಿಕರ ದೈನಂದಿನ ಜೀವನದಲ್ಲಿ ಬಹುಪಾಲಿನ ಉಪಯುಕ್ತವಾದ ದಾಖಲೆಗಳಾಗಿರುತ್ತವೆ. ಈ ದಾಖಲೆಗಳು 3 ವಿಶಿಷ್ಟವಾದ ಅಂದರೆ ಆಡಳಿತಾತ್ಮಕವಾಗಿ, ರಾಜ್ಯದಾಯದವಾಗಿ ಮತ್ತು ನ್ಯಾಯ ಸಮ್ಮತವಾದ ಉದ್ದೇಶಗಳನ್ನು ಹೊಂದಿರುತ್ತವೆ.

ಆಡಳಿತಾತ್ಮಕವಾಗಿ ಈ ದಾಖಲೆಗಳು ಎಲ್ಲಾ ಅಭಿವೃದ್ಧಿ ಯೋಜನೆಗಳಿಗೆ ಭೂದಾಖಲೆಗಳು ಅತ್ಯಂತ ಅವಶ್ಯಕವಾಗಿರುತ್ತವೆ ಮತ್ತು ಆಡಳಿತಾತ್ಮಕ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಈ ದಾಖಲೆಗಳು ಸಹಕಾರಿಯಾಗಿರುತ್ತವೆ.

ರಾಜ್ಯಾದಾಯದವಾಗಿ ಈ ದಾಖಲೆಗಳ ನಿರ್ವಹಣೆಯಿಂದ ಸಾರ್ವಜನಿಕರಿಗೆ ಪ್ರಮಾಣೀಕರಿಸಿದ ದಾಖಲೆಗಳನ್ನು ಪೂರೈಸುವಲ್ಲಿ ಮತ್ತು ನಕಾಶೆಗಳ ಮಾರಾಟದೊಂದಿಗೆ ಆದಾಯ ಪ್ರಾಪ್ತವಾಗಿ ಸರ್ಕಾರಕ್ಕೆ ಆದಾಯವನ್ನು ತಂದುಕೊಡುತ್ತದೆ.

ನ್ಯಾಯ ಸಮ್ಮತವಾದ ದಾಖಲೆಗಳಾದ್ದರಿಂದ ನ್ಯಾಯಾಲಯದಲ್ಲಿ ಇತ್ಯರ್ಥ ಗೊಳ್ಳಬೇಕಾದ ವ್ಯಾಜ್ಯಗಳಲ್ಲಿ ದಾಖಲೆ ಪುರಾವೆಗಳೆಂದು ಪರಿಗಣಿಸಲಾಗುತ್ತದೆ. ಈ ರೀತಿಯ ಅಮೂಲ್ಯವಾದ ಉದ್ದೇಶವನ್ನು ಹೊಂದಿರುವ ಭೂದಾಖಲೆಗಳ ಸಂರಕ್ಷಣೆ ಮತ್ತು ಕಾಲೋಚಿತ ಕಾರ್ಯ ನಿರ್ವಹಣೆಯು ಈ ಇಲಾಖೆಯ ಪ್ರಮುಖ ಕರ್ತವ್ಯವಾಗಿದೆ.

ಇಲಾಖೆಯಲ್ಲಿ ಭೂಮಾಪಕರಿಗೆ ಬಡ್ತಿ ಅವಕಾಶಗಳು:

ಇಲಾಖೆಯಲ್ಲಿ ನೇಮಕಾತಿ ಹೊಂದಿರುವ ಭೂಮಾಪಕರುಗಳು ಹುದ್ದೆಗೆ ಹಾಗೂ ಮುಂಬಡ್ತಿಗೆ ನಿಗದಿಪಡಿಸಿದ ಇಲಾಖಾ ಪರೀಕ್ಷೆ ಪಾಸು ಮಾಡಿ ಮತ್ತು ಹುದ್ದೆಗೆ ಗೊತ್ತುಪಡಿಸಿದ ಕರ್ತವ್ಯ ಮತ್ತು ಜವಾಬ್ದಾರಿಯನ್ನು ತೃಪ್ತಿದಾಯಕವಾಗಿ ಸಲ್ಲಿಸಿದ್ದಲ್ಲಿ ತಪಾಸಕರು / ಅಧೀಕ್ಷಕರು(ಕಾನಿ) ಮತ್ತು ಭೂದಾಖಲೆಗಳ ಸಹಾಯಕ ನಿರ್ದೇಶಕರು ಹುದ್ದೆಗೆ ಮುಂಬಡ್ತಿ ಹೊಂದಲು ಅವಕಾಶವಿರುತ್ತದೆ. ಈ ಹುದ್ದೆಗೆ ನೇಮಕಾತಿ ಹೊಂದುವ ಅಭ್ಯರ್ಥಿಗಳು ಪದವೀಧರರಾಗಿದ್ದಲ್ಲಿ ಭೂದಾಖಲೆಗಳ ಉಪ ನಿರ್ದೇಶಕರು ಮತ್ತು ಭೂದಾಖಲೆಗಳ ಜಂಟಿ ನಿರ್ದೇಶಕರು ಹುದ್ದೆಗಳಿಗೂ ಸಹ ಮುಂಬಡ್ತಿ ಹೊಂದಲು ನಿಯಮಗಳಲ್ಲಿ ಅವಕಾಶವಿರುತ್ತದೆ.

ಭೂಮಾಪಕರ ಕರ್ತವ್ಯಗಳು:

(1) ಕರ್ನಾಟಕ ಭೂಕಂದಾಯ ಅಧಿನಿಯಮ–1964 ರ ಕಲಂ–18 ರಲ್ಲಿ ವಿಶದಪಡಿಸಿರುವಂತೆ ಭೂಮಾಪಕರು ಇಲಾಖೆಯ ಭೂಮಾಪನ ಅಧಿಕಾರಿಯೆಂದು ತಿಳಿಯತಕ್ಕದ್ದು. ಸರ್ವೆ ನಂಬರ್ ಗಡಿಯನ್ನು ಗುರುತಿಸಿ ನಿಗದಿಪಡಿಸುವ ಅಧಿಕಾರವು ಶಾಸನಬದ್ಧ ಅಧಿಕಾರವಾಗಿದ್ದು, ಇದು ಅತ್ಯಂತ ಮಹತ್ವದ್ದಾಗಿರುತ್ತದೆ. ಆದ ಕಾರಣ ಭೂಮಾಪಕರು ತನ್ನ ಕರ್ತವ್ಯವನ್ನು ಅತ್ಯಂತ ಜವಾಬ್ದಾರಿಯಿಂದ ನಿರ್ವಹಿಸಬೇಕು.

(2) ಭೂಮಾಪಕರು ಮೂಲ ಸರ್ವೆಗೆ ಸಂಬಂಧಿಸಿದ ಕೆಲಸ ಕೆಡಸ್ಟ್ರಿಯಲ್ ಸರ್ವೆ ಆಗದ ಗ್ರಾಮದ ಸರ್ವೆ ಹಾಗೂ ನಗರಮಾಪನ ಸರ್ವೆ ಇತ್ಯಾದಿ ಕೆಲಸಗಳನ್ನು ನಿರ್ವಹಿಸಬೇಕು. ಭೂಸ್ವಾಧೀನ ಅಂತರ ರಾಜ್ಯ ಗಡಿ ಪರಿಶೀಲನೆಗೆ ಸಂಬಂಧಪಟ್ಟ ಕೆಲಸವನ್ನು ನಿರ್ವಹಿಸಬೇಕು.

(3) ಭೂಮಾಪಕರು, ಭೂಮಾಪನ ಇಲಾಖೆಯ ನಿರ್ವಹಣಾ ಕೆಲಸವನ್ನು ನಿರ್ವಹಿಸಬೇಕು. ಅಲ್ಲದೇ ಹೆಚ್ಚು ಪರಿಣತಿ ಹೊಂದಿದ ಭೂಮಾಪಕರು ಅವರು ಗಳಿಸಿದ ಅನುಭವದ ಅನುಸಾರ ಕೆಡಸ್ಟ್ರಿಯಲ್ ಸರ್ವೆ ಕೆಲಸವನ್ನು ಸಹ ನಿರ್ವಹಿಸಬಹುದಾಗಿರುತ್ತದೆ. ಭೂದಾಖಲೆಗಳ ಸಹಾಯಕ ನಿರ್ದೇಶಕರವರು ಅನುಮೋದಿಸಲ್ಪಟ್ಟ ಕಾರ್ಯಕ್ರಮದ ಪಟ್ಟಿ ಅನುಸಾರ ಭೂಮಾಪಕರು ಕೆಲಸವನ್ನು ನಿರ್ವಹಿಸಬೇಕು.

(4) ಕೇಂದ್ರ ಕಛೇರಿಯು ನಿಗದಿಪಡಿಸಿರುವ ಕೆಲಸದ ಅನುಪಾತವನ್ನು ಅನುಸರಿಸಿ ಕಾರ್ಯ ನಿರ್ವಹಿಸಬೇಕು. ಕಾರಣ ಹಳೆಯ ಕಡತಗಳನ್ನು ವ್ಯವಸ್ಥಿತವಾದ ರೀತಿಯಲ್ಲಿ ವಿಲೇಗೊಳಿಸಲು ಅನುಕೂಲವಾಗುವ ದೃಷ್ಟಿಯಿಂದ ಕೆಲಸದ ಪ್ರಮಾಣವನ್ನು ನಿಗದಿಪಡಿಸಲಾಗುತ್ತದೆ.

ಭೂಮಾಪಕರುಗಳು ನಿಗದಿಪಡಿಸಿದ ನಮೂನೆಯಲ್ಲಿ ಎಲ್ಲಾ ವಹಿಗಳನ್ನು ತೆರೆದು ನಿರ್ವಹಿಸಬೇಕು ಮತ್ತು ಪರ್ಯಾವೇಕ್ಷಕರು ಅಥವಾ ಇತರೆ ಅಧಿಕಾರಿಗಳ ತನಿಖಾ ಸಮಯದಲ್ಲಿ ಹಾಜರುಪಡಿಸಬೇಕು.

ಅನುಬಂಧ–2

MATHEMATICS (70%)

ARITHEMATIC

NUMBER SYSTEM

1. SQUARES AND SQUARE ROOTS, CUBES AND CUBE ROOTS

a. geometrical pattern of square numbers, squares of decimals and fractions square roots

b. determination of square root of perfect square root

c. estimation of sq. root of a non perfect sq.

d. cubes and cube roots

e. to find cube root by factor method

f. Identification of sq. numbers

g. to find sq. root of perfect sq. no's by factor method

h. to find sq. of perfect sq. no., decimals and no's which are not perfect

i. to find the smallest number that has to be added or subtractedfrom a given no. to make it a perfect sq. No.

j. Process of finding the square root by division method

2. SET THEORY

a. Representation of a set

b. types of sets

c. definition of union ,intersection, Compliment and difference of sets,

d. Venn diagrams

e. operation of sets

f. union ,intersection, Compliment and difference of sets, representation using Venn diagrams

g. properties of union and intersection of sets

h. Demorgan's laws of sets

i. relation b/w no of elements of sets

3. SEQUENCE

a. definition of sequence and series

b. meaning and specified terms of AP, GP, and HP

c. Sum of terms in AP and GP

d. Relation b/w AM, GM and HM

4. MATRICES

a. definition, a. Route maps

b. tabular information

c. order of matrix

d. types of matrices

e. equality of matrices

f. classification based on their elements and order

g. matrices and transpose of a matrix.

h. conditions necessary for addition, subtraction and multiplication of matrices.

5. PERMUTATIONS AND COMBINATIONS

Concept of permutations and combinations

a. Distinguish b/w permutations and combinations

b. Factorial notation

c. Meanings of $_np^r$ and $_nc^r$.

6. STATISTICS

a. Frequency distribution table

b. Graphical representation table ,tabular representation, Pie chart

c. mean Measures of central tendency

d. Arithmetic of ungrouped data, median

e. Mean, Median and mode for grouped data

f. Range , quartile, deviation and mean deviation

g. Statistical measures

h. Histogram and frequency polygons

i. Collection of data

